ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜುಲೈ 20 ಶನಿವಾರ 2024

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

45

ಸಂಪುಟ: 45 | ಸಂಚಿಕೆ: 95 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, *website: www.mysurumithra.com*



ಮೈಸೂರು ಮಿತ್ರ
ಶನಿವಾರ 20 ಜುಲೈ 2024

ಕಾವೇರಿ ಜಲಾಯನ ಪ್ರದೇಶದ ಬಹುತೇಕ ಜಲಾಶಯ, ಕೆರೆ–ಕಟ್ಟೆ ಭರ್ತಿ

● ಮೈಸೂರು ಜಿಲ್ಲೆ ಪ್ರತಿ ರೈತನಿಗೆ ಕೃಷಿ ಇಲಾಖೆಯಿಂದ 2 ಬ್ಯಾಗ್ ಬಿತ್ತನೆ ಭತ್ತ ವಿತರಣೆ
● 93 ಸಾವಿರ ಹೆಕ್ಟೇರ್ ಭತ್ತ ಬೆಳೆಯುವ ಭೂಮಿ; ಉದ್ದು, ಅಸಲಂದೆ, ಹೆಸರು ಕಟಾವಿಗೆ



ಮೈಸೂರು, ಜು.19(ಬಿಎಲ್‌ಎಯು)– ಮುಂಗಾರಿನ ಪುನರ್ವಸು ಮಳೆ ವಾಡಿಕೆಗಿಂತ ಹೆಚ್ಚಾಗಿ ಸುರಿಯುತ್ತಿದ್ದು, ಮೈಸೂರು ಜಿಲ್ಲೆಯ ಬಹುತೇಕ ಕೆರೆ–ಕಟ್ಟೆಗಳು ತುಂಬಿವೆ. ಮಂಡ್ಯದ ಕೃಷ್ಣರಾಜ ಸಾಗರ ಹಾಗೂ ಮೈಸೂರಿನ ಕಬಿನಿ ಅಣೆಕಟ್ಟು ಜಲಾಶಯ ಕೂಡ ತುಂಬಿರುವ ಕಾರಣ ಒಟ್ಟಾಕಲು ಇಂದಿನಿಂದ ಕೃಷಿ ಇಲಾಖೆ ರೈತರಿಗೆ ಬಿತ್ತನೆ ಭತ್ತ ವಿತರಣೆ ಕಾರ್ಯ ಆರಂಭಿಸಿದೆ.

ಕಳೆದ ವರ್ಷ ಬರದಿಂದ ರೈತರು ಕಂಗೆಟ್ಟಿದ್ದರು. ಆದರೆ ಈ ಬಾರಿ ವಾಡಿಕೆಗಿಂತ ಅಧಿಕ ಮಳೆಯಾಗಿದೆ. ಕಾವೇರಿ ಜಲಾಯನ ಪ್ರದೇಶದ ಅಣೆಕಟ್ಟುಗಳು ಮಾತ್ರವಲ್ಲದೆ ಬಹುತೇಕ ಕೆರೆ–ಕಟ್ಟೆಗಳು ತುಂಬಿ ತುಳುಕುತ್ತಿವೆ. ಇದರಿಂದ ಕೃಷಿ ಇಲಾಖೆ ರೈತರಿಗೆ ಬಿತ್ತನೆ ಭತ್ತ ವಿತರಣೆ ಕಾರ್ಯ ಆರಂಭಿಸಿದೆ. ಮೈಸೂರು ಜಿಲ್ಲೆಯಲ್ಲಿ 93 ಸಾವಿರ ಹೆಕ್ಟೇರ್ ಜಮೀನಿನಲ್ಲಿ ಭತ್ತ ಬೆಳೆಯಲಾಗುತ್ತದೆ. ಈಗ ಪ್ರತಿ ರೈತನಿಗೆ ಆರ್‌ಟಿಸಿ ಆಧಾರದ ಮೇಲೆ ಎರಡು ಬ್ಯಾಗ್ ಬಿತ್ತನೆ ಭತ್ತ ವಿತರಣೆ ಮಾಡಲಾಗುತ್ತಿದೆ. ಈಗಿರುವ ಬೇಡಿಕೆಗೆ 14 ಸಾವಿರ ಕ್ವಿಂಟಾಲ್ ಬಿತ್ತನೆ ಭತ್ತದ ಅವಶ್ಯವಿದೆ. ಆದರೆ ಈಗ ಕೃಷಿ ಇಲಾಖೆಯಲ್ಲಿ 16 ಸಾವಿರ ಕ್ವಿಂಟಾಲ್ ಭತ್ತ ದಾಸ್ತಾನಿದೆ. ಅಂದರೆ ಹೆಚ್ಚುವರಿ 2 ಸಾವಿರ ಕ್ವಿಂಟಾಲ್ ಭತ್ತ ಲಭ್ಯವಿದೆ. ಇದರಿಂದ ಬಿತ್ತನೆ ಭತ್ತಕ್ಕೆ ಯಾವುದೇ ರೀತಿ ಕೊರತೆ ಇಲ್ಲ ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಚಂದ್ರಶೇಖರ್ ಮಾಹಿತಿ ನೀಡಿದ್ದಾರೆ.

ಇನ್ನು ಪೂರ್ವ ಮುಂಗಾರಿನಲ್ಲಿ ಉತ್ತಮ ಮಳೆಯಾಗಿರುವ ಕಾರಣ ಉದ್ದು, ಅಲಸಂದೆ, ಹೆಸರು ಬೆಳೆ ಕೂಡ ಉತ್ತಮ ಇಳುವರಿ ಬಂದಿದೆ. ಈ ಬೆಳೆಗಳು ಸದ್ಯ ಶೇಕಡ 30ರಷ್ಟು ಕಟಾವಿಗೆ ಬಂದಿದೆ. ಉಳಿದ ಶೇಕಡ 70 ರಷ್ಟು ಬೆಳೆ ಇನ್ನು ಹತ್ತು ಹದಿನೈದು ದಿನದಲ್ಲಿ ಕಟಾವಿಗೆ ಬರಲಿದೆ ಎಂದು ತಿಳಿಸಿದರು. ಆದರೆ ಈಗ ಹೆಚ್ಚು ಮಳೆಯಾಗಿರುವ ಕಾರಣ ಕಟಾವಿಗೆ ಬಂದಿರುವ ಹೆಸರು, ಉದ್ದು ಹಾಗೂ ಅಲಸಂದೆಯಲ್ಲಿ ಮುಗ್ಗಲು ಬರುವ ಸಾಧ್ಯತೆ ಇದೆ. ಈ ಕಾರಣದಿಂದ ರೈತರು ಈಗ ಕಟಾವು ಮಾಡಿದ ಬೆಳೆಯನ್ನು ನೆರಳಿನಲ್ಲಿ ಒಣ ಹಾಕಬೇಕಾಗಿದೆ. ಒಟ್ಟಾರೆ ಈ ಬಾರಿಯ ವರ್ಷಧಾರೆಯಿಂದ ರೈತಾಪಿ ವರ್ಗ ಸಂತಸಗೊಂಡಿದೆ. ಉತ್ತಮ ಮಳೆಯಿಂದಾಗಿ ರೈತರು ಈ ಬಾರಿ ಬಂಪರ್ ಬೆಳೆಯ ನಿರೀಕ್ಷೆಯಲ್ಲಿದ್ದಾರೆ.

ವಿಶ್ವಾದ್ಯಂತ ಮೈಕ್ರೋಸಾಫ್ಟ್ ತಾಂತ್ರಿಕ ಸಮಸ್ಯೆ: ಏರ್‌ಲೈನ್ಸ್, ಬ್ಯಾಂಕ್, ಉದ್ಯಮ ಕ್ಷೇತ್ರ ಕೆಲಕಾಲ ತಲ್ಲಣ!

ಮಧ್ಯಾಹ್ನದ ವೇಳೆಗೆ ಸಮಸ್ಯೆ ನಿವಾರಣೆ; ನಿಟ್ಟುಸಿರುಬಿಟ್ಟ ಬಳಕೆದಾರರು



ನವದೆಹಲಿ, ಜು.19– ಮೈಕ್ರೋಸಾಫ್ಟ್‌ನ ವಿಂಡೋಸ್‌ನಲ್ಲಿ ಇಂದು ತಾಂತ್ರಿಕ ಸಮಸ್ಯೆ ಕಂಡು ಬಂದ ಹಿನ್ನೆಲೆಯಲ್ಲಿ ವಿಶ್ವಾದ್ಯಂತ ಕೋಟ್ಯಾಂತರ ಬಳಕೆದಾರರು ಪರದಾಡುವಂತಾಯಿತು. ಸದ್ಯ ಮಧ್ಯಾಹ್ನದ ವೇಳೆಗೆ ಸಮಸ್ಯೆ ನಿವಾರಣೆಯಾಗಿ ವಿಶ್ವಾದ್ಯಂತ ಬಳಕೆದಾರರು ನಿಟ್ಟುಸಿರು ಬಿಟ್ಟಿದ್ದಾರೆ.

ಇಂದು ಬೆಳಗ್ಗೆ ಕಂಪ್ಯೂಟರ್, ಲ್ಯಾಪ್‌ಟಾಪ್ ರಿಸ್ಟಾರ್ಟ್ ಆಗಿದ್ದು, ಬಳಿಕ ಬ್ಲೂ ಸ್ಕ್ರೀನ್ ತೆರೆದುಕೊಂಡು ತಾಂತ್ರಿಕ ಸಮಸ್ಯೆ ತಲೆದೋರಿತ್ತು. ಆಪರೇಟಿಂಗ್ ಸಿಸ್ಟಮ್ (OS) ಸಮಸ್ಯೆಯಲ್ಲಿ ಸಿಲುಕಿದೆ ಎಂಬ ನೀಲಿ ಬಣ್ಣದ ಸಂದೇಶ ಡಿಸ್‌ಪ್ಲೇಯಲ್ಲಿ ಮೂಡಿತ್ತು ಎಂದು ಅನೇಕ ಬಳಕೆದಾರರು ತಿಳಿಸಿದ್ದಾರೆ. ಈ ಚಿತ್ರಗಳನ್ನು ಸೋಷಿಯಲ್ ಮೀಡಿಯಾಗಳಲ್ಲಿ ಪೋಸ್ಟ್ ಮಾಡಿ ಮೈಕ್ರೋಸಾಫ್ಟ್ ಮತ್ತು ಸಿಇಒ ಅವರನ್ನು ಟ್ಯಾಗ್ ಮಾಡಿದ್ದರು.

'ವಿಂಡೋಸ್ ಕಂಪ್ಯೂಟರ್‌ನ ಸ್ಕ್ರೀನ್ ಸಡನ್ ಆಫ್ ಆಯ್ತು', 'ಕಂಪ್ಯೂಟರ್ ಆಗಾಗ ರಿಸ್ಟಾರ್ಟ್ ಆಗುತ್ತಿದೆ' ಎಂದೆಲ್ಲ ಕೆಲವರು ಪೋಸ್ಟ್ ಮಾಡಿದರು. ನಿಮ್ಮ ಡಿವೈಸ್‌ನಲ್ಲಿ ಸಮಸ್ಯೆ ಇದೆ. ರಿಸ್ಟಾರ್ಟ್ ಮಾಡಬೇಕು. ಎರರ್ ಬಗ್ಗೆ ಮಾಹಿತಿ ಸಂಗ್ರಹಿಸುತ್ತಿದ್ದೇವೆ ಮುಂತಾದ ಸಂದೇಶ ಪರದೆ ಮೇಲೆ ಮೂಡಿತ್ತು ಎಂದು ಹಲವರು ತಿಳಿಸಿದ್ದಾರೆ. ಈ ಬಗ್ಗೆ ಸ್ಪಷ್ಟನೆ ನೀಡಿದ ಮೈಕ್ರೋಸಾಫ್ಟ್ ಕಂಪನಿ, ಕ್ಲೌಡ್ ಸ್ಟ್ರೈಕ್ ಅಪ್‌ಡೇಟ್ ಪರಿಣಾಮವಾಗಿ ಈ ಸಮಸ್ಯೆ ಕಂಡು ಬಂದಿದೆ. ಆತಂಕಗೊಳ್ಳಬೇಡಿ, ಇದು ಶೀಘ್ರ ಸರಿಯಾಗಲಿದೆ ಎಂದು ತಿಳಿಸಿತ್ತು.

ಮೈಕ್ರೋಸಾಫ್ಟ್ ಸೇವೆಗಳಲ್ಲಿನ ಈ ತಾಂತ್ರಿಕ ಸಮಸ್ಯೆ ವಿಮಾನಯಾನ, ಬ್ಯಾಂಕುಗಳು ಸೇರಿ ವಿಶ್ವದಾದ್ಯಂತ ಹಲವು ಉದ್ಯಮಗಳ ಮೇಲೆ ಪರಿಣಾಮ ಬೀರಿತ್ತು. ಭಾರತದಲ್ಲಿ ಸ್ಪೈಸ್ ಜೆಟ್, ಅಕಾಸಾ ಏರ್‌ಲೈನ್ಸ್ ಮತ್ತು ಏರ್ ಇಂಡಿಯಾ ಎಕ್ಸ್‌ಪ್ರೆಸ್ ಸೇರಿದಂತೆ ಭಾರತೀಯ ವಿಮಾನಯಾನ ಸಂಸ್ಥೆಗಳೂ ತೊಂದರೆಗೆ ಒಳಗಾಗಿದ್ದವು. ಇದು ವಿಮಾನ ರದ್ದತಿ ಮತ್ತು ವಿಳಂಬಕ್ಕೆ ಕಾರಣವಾಗಿತ್ತು. ಈ ಬಗ್ಗೆ ಪ್ರತಿಕ್ರಿಯಿಸಿದ್ದ ಸ್ಪೈಸ್ ಜೆಟ್ ಸಂಸ್ಥೆ, 'ನಾವು ಪ್ರಸ್ತುತ ತಾಂತ್ರಿಕ ಸಮಸ್ಯೆಯನ್ನು ಎದುರಿಸುತ್ತಿದ್ದೇವೆ. ಈ ಸಮಸ್ಯೆಯನ್ನು ಪರಿಹರಿಸಲು ನಮ್ಮ ತಂಡವು ಸಕ್ರಿಯವಾಗಿ ಕೆಲಸ ಮಾಡುತ್ತಿದೆ. ಅನಾನು ಕೂಲತೆಗೆ ನಾವು ವಿಷಾದಿಸುತ್ತೇವೆ ಮತ್ತು ಸಮಸ್ಯೆಯನ್ನು ಪರಿಹರಿಸಿದ ನಂತರ ನಿಮಗೆ ಮಾಹಿತಿ ನೀಡುತ್ತೇವೆ. ನಿಮ್ಮ ಸಹಕಾರಕ್ಕೆ ಧನ್ಯವಾದಗಳು ಎಂದು ಟ್ವೀಟ್ ಮಾಡಿತ್ತು. ಅಲ್ಲದೆ 2023 ರಲ್ಲಿಯೂ ಇದೇ ರೀತಿಯ ಸಮಸ್ಯೆ ಕಾಣಿಸಿಕೊಂಡಿತ್ತು.

ಕೇಂದ್ರ ಬಜೆಟ್‌ನಲ್ಲಿ ಕೃಷಿಗೆ ವಿಶೇಷ ಆದ್ಯತೆ ನೀಡಿ

ರಾಜ್ಯ ರೈತ ಸಂಘದ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ ಆಗ್ರಹ



ನಾಗೇಂದ್ರ

ಮೈಸೂರು, ಜು.19(ಜಿಎ)– ಈ ಬಾರಿಯ ಬಜೆಟ್ ಮಂಡನೆ ವೇಳೆ ಕೇಂದ್ರ ಸರ್ಕಾರ ಕೃಷಿಗೆ ವಿಶೇಷ ಆದ್ಯತೆ ನೀಡಬೇಕು. ಅಲ್ಲದೆ, ಈ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಪ್ರತ್ಯೇಕ ಬಜೆಟ್ ಮಂಡಿಸಬೇಕೆಂದು ರಾಜ್ಯ ರೈತ ಸಂಘದ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ ಆಗ್ರಹಿಸಿದರು. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೃಷಿ ಕ್ಷೇತ್ರದ ಕುರಿತು ಪ್ರಧಾನಿ ಮೋದಿ ಹಾಗೂ ಹಣಕಾಸು ಸಚಿವರಾದ ನಿರ್ಮಲಾ ಸೀತಾರಾಮನ್ ಗಮನ ಹರಿಸಬೇಕು ಎಂದರು.

ತೀವ್ರ ಕೃಷಿ ಬಿಕ್ಕಟ್ಟಿನಿಂದಾಗಿ ದೇಶದಲ್ಲಿ ನಿತ್ಯ ಸರಾಸರಿ 31 ಮಂದಿ ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಇದನ್ನು ತಡೆಗಟ್ಟಲು ಕೇಂದ್ರ ಸರ್ಕಾರ ರೈತ ಪ್ರತಿನಿಧಿಗಳನ್ನೊಳಗೊಂಡ ಪರಿಣಿತರ ಸಮಿತಿ ರಚಿಸಿ, ಸಮಸ್ಯೆಗೆ ಪರಿಹಾರ ಕಂಡು ಹಿಡಿಯಬೇಕು. ರೈತರ ಸಂಪೂರ್ಣ ಸಾಲ ಮನ್ನಾ ಮಾಡಬೇಕು. ರೈತ ಕುಟುಂಬಕ್ಕೆ ಕನಿಷ್ಠ ಆದಾಯ ಖಾತ್ರಿ ಯೋಜನೆಗೆ ಒತ್ತು ನೀಡಬೇಕು. ಈ ಸಂಬಂಧ ರೈತ ಪರ ಕೃಷಿ ನೀತಿ ರೂಪಿಸಬೇಕೆಂದು ಒತ್ತಾಯಿಸಿದರು.

ಕೇಂದ್ರ ಸರ್ಕಾರ 2021ರ ಡಿಸೆಂಬರ್‌ನಲ್ಲಿ ರೈತರ ಜೊತೆ ಮಾಡಿಕೊಂಡ ಒಡಂಬಡಿಕೆ ಅನ್ವಯ ಎಲ್ಲ ಅಂಶಗಳನ್ನು ಬಜೆಟ್‌ನಲ್ಲಿ ಅನುಷ್ಠಾನಕ್ಕೆ ತರಬೇಕು. ಡಾ. ಸ್ವಾಮಿನಾಥನ್ ವರದಿಯನ್ವಯ ಕೃಷಿ ಉತ್ಪನ್ನಗಳಿಗೆ ಕಾಯ್ದೆ ಬದ್ಧ ಕನಿಷ್ಠ ಬೆಂಬಲ ಬೆಲೆ ಮತ್ತು ಸಂಪೂರ್ಣ ಉತ್ಪನ್ನದ ಸಂಗ್ರಹಣೆಯ ಖಾತರಿ ನೀಡಬೇಕು. ವಿದ್ಯುತ್ ಕಾಯ್ದೆಗೆ ತಿದ್ದುಪಡಿ ತರಲು ಹೊರಟಿರುವುದನ್ನು ಕೈಬಿಡಬೇಕು ಎಂದು ಆಗ್ರಹಿಸಿದರು.

ಯಾವುದೇ ಕಾರಣಕ್ಕೂ ಕೃಷಿ ಪಂಪ್‌ಸೆಟ್‌ಗಳಿಗೆ ಸ್ಮಾರ್ಟ್ ಮೀಟರ್ ಅಳವಡಿಸಬಾರದು. ಕೃಷಿ ಬಳಕೆಯ ರಸಗೊಬ್ಬರ, ಬೀಜ, ಕೀಟನಾಶಕ, ಯಂತ್ರೋಪಕರಣಗಳು ಹಾಗೂ ಟ್ರ್ಯಾಕ್ಟರ್‌ಗಳ ಮೇಲೆ ಜಿಎಸ್‌ಟಿ ಹಾಕಬಾರದು. ಕೃಷಿ ಕ್ಷೇತ್ರವನ್ನು ಉತ್ತೇಜಿಸಲು ಸಬ್ಸಿಡಿ ನೀತಿ ಪುನಃ ಜಾರಿಗೆ ತರಬೇಕು ಎಂದರು.

ಜು.21ಕ್ಕೆ ನರಗುಂದ ನವಲಗುಂದ ಐತಿಹಾಸಿಕ ಬಂಡಾಯ ನಡೆದು 45 ವರ್ಷಗಳಾಗಲಿವೆ. ಹೀಗಾಗಿ ಈ ಹೋರಾಟದಲ್ಲಿ ಮಡಿದ ರೈತ ಹುತಾತ್ಮರ ದಿನವನ್ನು ಈ ಬಾರಿ ಬೆಳಗಾವಿ ಜಿಲ್ಲೆಯ ಯರಗಟ್ಟಿಯಲ್ಲಿ ಆಯೋಜಿಸಲಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಇನ್ನಿತರ ಪದಾಧಿಕಾರಿಗಳಾದ ರವಿ ಕಿರಣ್ ಪುಣಚ, ಹೊಸೂರು ಕುಮಾರ್, ಹೊಸಕೋಟೆ ಬಸವರಾಜು, ಮಂಡಕಳ್ಳಿ ಮಹೇಶ್, ಪಿ.ಮರಂಕಯ್ಯ ಉಪಸ್ಥಿತರಿದ್ದರು.

ವೀರಶೈವ ಲಿಂಗಾಯತರ ಅಭಿವೃದ್ಧಿಗಾಗಿ ನನ್ನ ಬೆಂಬಲಿಸಿ; ವರುಣಾ ಮಹೇಶ್



ಮೈಸೂರು, ಜು.19– ಮೈಸೂರು ಜಿಲ್ಲೆಯಲ್ಲಿ ವೀರಶೈವ ಲಿಂಗಾಯತ ಸಮುದಾಯದ ಅಭಿವೃದ್ಧಿ ದೃಷ್ಟಿಯಿಂದ ತಮ್ಮ ತಂಡವನ್ನು ಬೆಂಬಲಿಸುವಂತೆ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಮೈಸೂರು ಜಿಲ್ಲಾಧ್ಯಕ್ಷ ಸ್ಥಾನದ ಅಭ್ಯರ್ಥಿ ವರುಣಾ ಮಹೇಶ್ ಮನವಿ ಮಾಡಿದ್ದಾರೆ.

ಜಿಲ್ಲೆಯಲ್ಲಿ ಸಂಘಟನೆ, ಭವನ ನಿರ್ಮಾಣ ಸೇರಿದಂತೆ ಸಮುದಾಯದ ಅಭಿವೃದ್ಧಿ ನಮ್ಮ ಧ್ಯೇಯವಾಗಿದೆ. ಇಷ್ಟು ವರ್ಷಗಳ ಕಾಲ ಸಾಧ್ಯವಾಗದಿರುವ ಕೆಲಸವನ್ನು ನಾನು ಮಾಡಿ ತೋರಿಸುತ್ತೇನೆ. ಈಗಾಗಲೇ ಜಿಲ್ಲೆಯಾದ್ಯಂತ ಪ್ರವಾಸ ಮಾಡಿದ್ದು, ಸಮುದಾಯದ ಮತದಾರರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಹೊಸ ತಂಡವನ್ನು ಆಯ್ಕೆ ಮಾಡಬೇಕೆಂಬ ಇಂಗಿತ ಹೊಂದಿದ್ದಾರೆ. ಹಾಗಾಗಿ ನಮ್ಮ ತಂಡದ ಗೆಲುವಿನ ವಿಶ್ವಾಸ ಹೆಚ್ಚಿದೆ.

ನಮ್ಮ ತಂಡದಿಂದ ನಿರ್ದೇಶಕ ಸ್ಥಾನಕ್ಕೆ ಸ್ಪರ್ಧಿಸಿರುವ ಹುಣಸೂರಿನ ಆನಂದ್, ಪಿರಿಯಾಪಟ್ಟಣದ ಕುಮಾರ್, ಮಲ್ಲಿಕಾರ್ಜುನ್, ಮಂಜುನಾಥ್ ಸ್ವಾಮಿ, ಮುಕೇಶ್, ಡಾ.ಶಿವಯೋಗ್, ಹೆಚ್.ಡಿ.ಕೋಟೆ ನಂದೀಶ್, ಯೋಗೇಶ್, ಗುರುಸ್ವಾಮಿ, ಕೆ.ಆರ್.ನಗರದ ಕೆಂಪರಾಜು ಮತ್ತು ಮೈಸೂರು ತಾಲೂಕಿನ ಪ್ರಕಾಶ್, ರಾಜಶೇಖರ್, ನಂಜುಂಡ, ಷಡಕ್ಷರಿ, ಮೈಸೂರು ನಗರದ ಸಿದ್ದೇಶ್, ಪುಟ್ಟಣ್ಣಿ, ಮಂಜುನಾಥ್ ಸ್ವಾಮಿ, ಕೊಟ್ರೇಶ್ ಬಾಬು ಮತ್ತು ಮಹಿಳಾ ಮೀಸಲು ಕ್ಷೇತ್ರದಿಂದ ನಾಗರತ್ನಮ್ಮ, ಭಾಗ್ಯವತಿ, ಲಿಖಿತ, ಶೈಲ ನಾಗರಾಜ್ ಅವರನ್ನು ಬೆಂಬಲಿಸುವಂತೆ ವರುಣಾ ಮಹೇಶ್ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

ಶನಿ ಮಹಾ ಶಾಂತಿ

ಮೈಸೂರು, ಜು.19– ದೇವರಾಜ ಮೊಹಲ್ಲಾದಲ್ಲಿರುವ ಶ್ರೀ ಅಮೃತೇಶ್ವರ ದೇವಸ್ಥಾನದಲ್ಲಿ ಗುರು ಪೂರ್ಣಿಮಾ ಪ್ರಯುಕ್ತ ಜು.21ರ ಭಾನುವಾರದಂದು ಕರ್ಕಾಟಕ, ತುಲಾ, ಮಕರ, ಕುಂಭ ಮತ್ತು ಮೀನ ರಾಶಿಯವರಿಗೆ ಶನಿಮಹಾಶಾಂತಿ ಮತ್ತು ಬಾದಾನಿವಾರಕ ಸುದರ್ಶನ ಹೋಮ, ಮಹಾ ಮೃತ್ಯುಂಜಯ ಹೋಮ, ಕುಜದೋಷ ನಿವೃತ್ತಿ ಶಾಂತಿ ಮಾಡಲಾಗುವುದು. ಬೆಳಗ್ಗೆ 9.30ರಿಂದ 12.30ವರೆಗೆ ಪೂರ್ಣಾಹುತಿ ನಡೆಯಲಿದೆ. ಹೆಚ್ಚಿನ ವಿವರಗಳಿಗೆ ಮೈಕುಮಾರ್, ಜಾತಕ ವಿಮರ್ಷಕರು ಇವರನ್ನು ಮೊ. ಸಂಖ್ಯೆ: 9845183392, 9845183399 ಮೂಲಕ ಸಂಪರ್ಕಿಸಬಹುದು.

ಕಾರ್ಮಿಕ ಅಧಿಕಾರಿ ಮೈಸೂರು ಕಚೇರಿ, ಮನೆ ಮೇಲೆ ಲೋಕಾಯುಕ್ತ ದಾಳಿ

ಅಪಾರ ಪ್ರಮಾಣದ ಆಭರಣ, ಆಸ್ತಿ ದಾಖಲೆ ಪತ್ತೆ

ಮೈಸೂರು, ಜು. 19(ಆರ್‌ಕೆ)– ರಾಜ್ಯದಾದ್ಯಂತ 22 ಅಧಿಕಾರಿಗಳ ಕಚೇರಿ, ಮನೆಗಳ ಮೇಲೆ 55 ಸ್ಥಳಗಳಲ್ಲಿ ಏಕ ಕಾಲಕ್ಕೆ ದಾಳಿ ನಡೆಸಿರುವ ಕರ್ನಾಟಕ ಲೋಕಾಯುಕ್ತ ಅಧಿಕಾರಿಗಳು, ಅಪಾರ ಪ್ರಮಾಣದ ಆಭರಣ, ನಗದು ಹಾಗೂ ಸ್ಥಿರ–ಚರಾಸ್ತಿಗಳನ್ನು ಪತ್ತೆ ಮಾಡಿದ್ದಾರೆ.

ಆದಾಯಕ್ಕಿಂತ ಹೆಚ್ಚು ಆಸ್ತಿ ಗಳಿಸಿದ್ದಾರೆಂಬ ದೂರುಗಳ ಹಿನ್ನೆಲೆಯಲ್ಲಿ ಭ್ರಷ್ಟಾಚಾರ ನಿರ್ಮೂಲನಾ ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಂಡಿದ್ದ ಲೋಕಾಯುಕ್ತ ಪೊಲೀಸರು, ಬೆಳ್ಳಂಬೆಳಗ್ಗೆ ದಾಳಿ ನಡೆಸಿದ್ದಾರೆ. ಮೈಸೂರಿಗೆ ವರ್ಗಾವಣೆಗೊಂಡು ಜುಲೈ 10ರಂದಷ್ಟೇ ಜಿಲ್ಲಾ ಕಾರ್ಮಿಕ ಅಧಿಕಾರಿಯಾಗಿ ಅಧಿಕಾರ ವಹಿಸಿಕೊಂಡಿದ್ದ ಚೇತನ್‌ಕುಮಾರ್ ಮನೆ ಮೇಲೂ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿ ಪರಿಶೀಲಿಸಿದರು. ಈ ಹಿಂದೆ ಬೆಂಗಳೂರಿನ ಕಾರ್ಮಿಕ ಕಲ್ಯಾಣ ಇಲಾಖೆಯ ಕೇಂದ್ರ ಕಚೇರಿಯಲ್ಲಿ ಮಂಡ್ಯ ವಿಭಾಗದ ಕಾರ್ಮಿಕ ಅಧಿಕಾರಿಯಾಗಿದ್ದ ಅವರು ಮೈಸೂರು ಜಿಲ್ಲಾ ಕಾರ್ಮಿಕ ಅಧಿಕಾರಿಯಾಗಿ ವರ್ಗಾವಣೆಯಾಗಿದ್ದರು.

ಬೆಂಗಳೂರು ಕಚೇರಿಯಲ್ಲಿದ್ದಾಗಲೇ ಚೇತನ್‌ಕುಮಾರ್ ವಿರುದ್ಧ ಆದಾಯಕ್ಕಿಂತ ಅಧಿಕ ಆದಾಯ ಗಳಿಕೆ ವಿರುದ್ಧ ಪ್ರಕರಣ ದಾಖಲು ಮಾಡಲಾಗಿತ್ತು. ಅದರಂತೆ ಬೆಂಗಳೂರು ಲೋಕಾಯುಕ್ತ ಪೊಲೀಸರ ತಂಡವು ಇಂದು ಮೈಸೂರಿನ ಶಾರದಾದೇವಿನಗರದ ಮನೆ, ದಟ್ಟಗಳ್ಳಿಯಲ್ಲಿ ಬಾಡಿಗೆಗೆ ನೀಡಿರುವ ಮನೆ, ಕುವೆಂಪುನಗರದ ಅಕ್ಷಯ ಭಂಡಾರ್‌ದ ಬಳಿ ಇರುವ ಕಾರ್ಮಿಕ ಇಲಾಖೆ ಕಚೇರಿ ಮೇಲೆ ದಾಳಿ ನಡೆಸಿ ದಾಖಲೆಗಳನ್ನು ಪರಿಶೀಲಿಸಿದರು.

ಚಿನ್ನಾಭರಣ, ಬೆಳ್ಳಿ ಪದಾರ್ಥ, ವಾಹನಗಳು, ಸ್ಥಿರ ಮತ್ತು ಚರಾಸ್ತಿಗಳು ಪತ್ತೆಯಾಗಿದ್ದು, ತಮ್ಮ ವಶಕ್ಕೆ ಪಡೆದಿದ್ದಾರೆ. ಬಾಡಿಗೆಗೆ ನೀಡಿರುವ ಮನೆಗಳಿಗೆ ಭೇಟಿ ನೀಡಿದಾಗ ಬಾಡಿಗೆದಾರರು ಪರಿಶೀಲನೆಗೆ ಅವಕಾಶ ನೀಡದ ಕಾರಣ, ಕಟ್ಟಡದ ಫೋಟೋ, ವಿಡಿಯೋ ಮಾಡಿಕೊಂಡು ಮಾಹಿತಿ ಕಲೆ ಹಾಕಿದರೇ ಹೊರತು, ಅಲ್ಲಿ ಯಾವುದೇ ಆಸ್ತಿಗೆ ಸಂಬಂಧಿಸಿದ ದಾಖಲೆಗಳು ಲಭ್ಯವಾಗಲಿಲ್ಲ ಎಂದು ಹೇಳಲಾಗಿದೆ.

ಸಂಸದ ಯದುವೀರ್‌ಗೆ ಅಭಿನಂದನೆ



ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರನ್ನು ಅಗಸ್ತ್ಯ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ವತಿಯಿಂದ ಅಭಿನಂದಿಸಲಾಯಿತು. ಶಾಸಕ ಟಿ.ಎಸ್.ಶ್ರೀವತ್ಸ, ಮೈಸೂರು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ.ಪ್ರಕಾಶ್, ಅಗಸ್ತ್ಯ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿಯ ಅಧ್ಯಕ್ಷ ಎಂ.ಡಿ.ಗೋಪಿನಾಥ್, ಉಪಾಧ್ಯಕ್ಷೆ ಎಂ.ಎನ್.ಸೌಮ್ಯ, ಖಜಾಂಚಿ ಕೆ.ನಾಗರಾಜ, ನಿರ್ದೇಶಕ ಮಂಡಲಿ ಸದಸ್ಯರಾದ ಸಿ.ವಿ.ಪಾರ್ಥಸಾರಥಿ, ಪ್ರಶಾಂತ್ ತಾತಾಚಾರ್, ಹೆಚ್.ಎಸ್.ಬಾಲಕೃಷ್ಣ, ಎಂ.ಆರ್.ಚೇತನ್, ಹೆಚ್.ಪಿ.ಪಣಿರಾಜ್, ವಿಕ್ರಂ ಅಯ್ಯಂಗಾರ್, ಎನ್.ಮಹಿಮ, ಪಿ.ನಾಗಶ್ರೀ, ಕೆ.ಎನ್.ಅರುಣ್, ಶಿವರುದ್ರಪ್ಪ, ರಾಜಮ್ಮ ಎಸ್.ಶಾಶ್ವತಿ ನಾಯಕ ಎಂ.ಪಿ. ಹಾಗೂ ಪ್ರಭಾರ ಕಾರ್ಯದರ್ಶಿ ಎನ್.ವೀಣಾ ಹಾಜರಿದ್ದರು.


ನಿಧನ



ವಾಸು

ಶ್ರೀರಂಗಪಟ್ಟಣ, ಜು.19– ತಾಲೂಕಿನ ಬಾಬುರಾಯನಕೊಪ್ಪಲು ಗ್ರಾಮದ ನಿವಾಸಿ ವಾಸು(65) ಅವರು ಶುಕ್ರವಾರ ಮೈಸೂರಿನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು. ಇವರು ಪತ್ನಿ, ಪುತ್ರ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಸ್ವಗ್ರಾಮದಲ್ಲಿ ಶನಿವಾರ ಮಧ್ಯಾಹ್ನ 12ಕ್ಕೆ ಅಂತ್ಯಕ್ರಿಯೆ ನಡೆಯಲಿದೆ ಎಂದು ಮೃತರ ಕುಟುಂಬಸ್ಥರು ತಿಳಿಸಿದ್ದಾರೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

20.07.2024 ಶನಿವಾರ, ಮಳೆ ನಕ್ಷತ್ರ: ಪುಷ್ಯ, 20.07.2024 ರಿಂದ 02.08.2024 ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ಗ್ರೀಷ್ಮ ಋತು, ಆಷಾಢ ಮಾಸ, ಶುಕ್ಲ ಪಕ್ಷ, ತಿಥಿ: ಚತುರ್ದಶಿ, ನಕ್ಷತ್ರ: ಪೂಷಾ, ರಾಹುಕಾಲ: ಬೆಳಗ್ಗೆ 9 ರಿಂದ 10.30 ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆಯ ಶಾಲಾಕ್ಯತಂತ್ರ ವಿಭಾಗ :** ಆರೋಗ್ಯ ತಪಾಸಣಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9 ರಿಂದ.

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಆಲ್ಕೋಹಾಲ್‌ನಿಂದ ಉಂಟಾಗುವ ಯಕೃತ್ತಿನ ಸಮಸ್ಯೆಗಳಿಗೆ ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9 ಗಂಟೆಯಿಂದ.

■ **ಭಾರತೀಯ ವಿದ್ಯಾ ಭವನ, ಮೈಸೂರು ಕೇಂದ್ರ :** ಅಂತರ ಶಾಲಾ ಸಂಸ್ಕೃತೋತ್ಸವ ಸ್ಪರ್ಧೆ 2024–25, ಮುಖ್ಯ ಅತಿಥಿಗಳು : ಮೈಸೂರು ಮಹಾಜನ ಪ್ರೌಢಶಾಲೆಯ ಸಂಸ್ಕೃತ ವಿಭಾಗದ ಮುಖ್ಯಸ್ಥರಾದ ಶ್ರೀಮತಿ ಸುಕನ್ಯ ರಾಮಶೇಷಯ್ಯ, ಅಧ್ಯಕ್ಷತೆ : ಮೈಸೂರು ಬಿವಿಬಿ ಛೇರ್ಮನ್ ಡಾ.ಕೆ.ಬಿ. ಗಣಪತಿ, ಉಪಸ್ಥಿತರು : ಉಪಾಧ್ಯಕ್ಷ ಡಾ. ಸಿ. ನಾಗಣ್ಣ, ಕಾರ್ಯದರ್ಶಿ ಪಿ.ಎಸ್. ಗಣಪತಿ, ಖಜಾಂಚಿ ಡಾ. ಎ.ಟಿ. ಭಾಷ್ಯಂ, ಪ್ರಿನ್ಸಿಪಾಲ್ ಶ್ರೀಮತಿ ಎಸ್. ಲೇಖಾ ನಾಯರ್, ಸ್ಥಳ: ಭಾರತೀಯ ವಿದ್ಯಾಭವನ, ವಿಜಯನಗರ 1ನೇ ಹಂತ, ಬೆಳಗ್ಗೆ 9.30ಕ್ಕೆ.

■ **ಕಸ್ತೂರಿ ಸಿರಿಗನ್ನಡ ವೇದಿಕೆ, ಕೀರ್ತಿ ಯುವತಿ ಮಹಿಳಾ ಮಂಡಳಿ :** ಪರಿಸರ ಕುರಿತು ಪ್ರಬಂಧ ಸ್ಪರ್ಧೆ, ಸಾನ್ನಿಧ್ಯ : ಡಾ. ರುದ್ರೇಶ್ ಪ್ರಸಾದ್, ಉದ್ಘಾಟನೆ : ಸಮಾಜ ಸೇವಕ ಕೆ. ರಘುರಾಂ ವಾಜಪೇಯಿ, ಅಧ್ಯಕ್ಷತೆ : ಎಸ್‌ಡಿಎಂಸಿ ಅಧ್ಯಕ್ಷ ಫಯಾಜ್ ಷರೀಫ್, ಪ್ರಸ್ತಾವನೆ : ಮಂಡಳಿ ಅಧ್ಯಕ್ಷೆ ಶ್ರೀಮತಿ ಕೆ. ಮಂಜುಳ ರಮೇಶ್, ಆಶಯ ನುಡಿ : ವೇದಿಕೆ ರಾಜ್ಯಾಧ್ಯಕ್ಷ ಮೋತೇರ ಮಹದೇವು, ಬಹುಮಾನ ವಿತರಣೆ : ಪರಿಸರ ಪ್ರೇಮಿ ಸಾಲುಮರ ನಾಗರಾಜು, ಸ್ಥಳ: ಬಾಲಕಿಯರ ಸರ್ಕಾರಿ ಪದವಿಪೂರ್ವ ಕಾಲೇಜು, ನಜರ್‌ಬಾದ್, ಬೆಳಗ್ಗೆ 9.30ಕ್ಕೆ.

■ **ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜು:** ಸ್ನಾತಕೋತ್ತರ ವಿದ್ಯಾರ್ಥಿ ವೇದಿಕೆ ಸಮಾರೋಪ ಸಮಾರಂಭ, ಮುಖ್ಯ ಅತಿಥಿಗಳು : ವಿನ್ಯಾಸ್ ಇನ್ನೋವೇಟಿವ್ ಟೆಕ್ನಾಲಜೀಸ್ ಲಿಮಿಟೆಡ್ ಸಂಸ್ಥಾಪಕ ವ್ಯವಸ್ಥಾಪಕ ನಿರ್ದೇಶಕ ನರೇಂದ್ರ ನಾರಾಯಣ್, ಅಧ್ಯಕ್ಷತೆ : ವಿದ್ಯಾವರ್ಧಕ ಸಂಘದ ಅಧ್ಯಕ್ಷ ಗುಂಡಪ್ಪಗೌಡ, ಗೌರವ ಅತಿಥಿಗಳು : ಸಂಘದ ಕಾರ್ಯದರ್ಶಿ ಪಿ. ವಿಶ್ವನಾಥ್, ಕಾಲೇಜು ಅಧ್ಯಕ್ಷ ಟಿ. ನಾಗರಾಜು, ಸ್ಥಳ: ಪಿ.ಎಂ. ಚಿಕ್ಕಬೋರಯ್ಯ ಸಭಾಂಗಣ, ಬೆಳಗ್ಗೆ 10ಕ್ಕೆ

■ **ಕುಮಾರ್ ಪ್ರದರ್ಶಕ ಕಲೆಗಳ ಕೇಂದ್ರ :** ಅಂತರರಾಷ್ಟ್ರೀಯ ನಿರಂತರ ಕಲೆಮನೆ ಉತ್ಸವ, ಉದ್ಘಾಟನೆ : ಭರತನಾಟ್ಯ ನೃತ್ಯ ಕಲಾವಿದೆ ಹಾಗೂ ಚಂಪಕ ಅಕಾಡೆಮಿ ಕಲಾ ನಿರ್ದೇಶಕಿ ವಿದುಷಿ ಶ್ರೀಮತಿ ಡಾ.ಪಿ.ಕೆ. ನಾಗಲಕ್ಷ್ಮಿ ನಾಗರಾಜನ್, ನಾದವಿದ್ಯಾಲಯ ಕಲಾ ನಿರ್ದೇಶಕಿ ಹಾಗೂ ಭರತನಾಟ್ಯ ನೃತ್ಯ ಕಲಾವಿದೆ ವಿದುಷಿ ಶ್ರೀಮತಿ ಮಿತ್ರಾ ನವೀನ್, ರಾಷ್ಟ್ರೀಯ ಕಲೆಮನೆ ಪ್ರಶಸ್ತಿ ಪ್ರದಾನ: ಗಣಿತ ಶಿಕ್ಷಕಿ ಶ್ರೀಮತಿ ಪಿ.ಎಸ್.ನಂದಿನಿ, ನಿವೃತ್ತ ತಹಸೀಲ್ದಾರ್ ಹಾಗೂ ಸಾಹಿತಿ ಡಾ.ವಿ. ರಂಗನಾಥ್, ಮುಖ್ಯ ಅತಿಥಿಗಳು : ವಿಸ್ಮಯ ಶಾಲಾ ಕಲಾತ್ಮಕ ನಿರ್ದೇಶಕ ಸ್ಮೃತಿ ರಮೇಶ್ ಕೌಶಿಕ್, ಮಂಡ್ಯ ಶ್ರೀ ನಂದಿಕೇಶ್ವರ ಭರತನಾಟ್ಯ ಕಲಾಶಾಲೆಯ ಕಲಾತ್ಮಕ ನಿರ್ದೇಶಕಿ ವಿದುಷಿ ಗುರು ಶ್ರೀಮತಿ ಶೈಲಾ ಕೆ.ಎಸ್; ಬೆಂಗಳೂರಿನ ವಿದುಷಿ ಗುರು ಶ್ರೀಮತಿ ಬೈಜಾ ರಾಣಿ ಲಿಜಿನ್, ವಿದುಷಿ ಗುರು ಶ್ರೀಮತಿ ರಕ್ಷಿತಾ ರಘುನಾಥನ್ ಅವರಿಂದ ಭರತನಾಟ್ಯ ನೃತ್ಯ ಪ್ರದರ್ಶನ, ವಿದ್ವಾನ್ ದಿವ್ಯ ಜ್ಯೋತಿ ಚಕ್ರವರ್ತಿ, ಅವರಿಂದ ಕಥಕ್ ನೃತ್ಯ ಪ್ರದರ್ಶನ, ವಿದುಷಿ ಶ್ರೀಮತಿ ಗುರು ಸ್ನಿಗ್ಧಾ ಡಿ.ಎಸ್, ಅವರಿಂದ ಕಥಕ್ ನೃತ್ಯ ಪ್ರದರ್ಶನ, ಸ್ಥಳ : ಕಲೆಮನೆ ಸಭಾಂಗಣ, ಬೆಳಗ್ಗೆ 10 ರಿಂದ.

■ **ಸಮತಾ ಅಧ್ಯಯನ ಕೇಂದ್ರ :** ಕಾವ್ಯ ಮತ್ತು ಪ್ರಬಂಧ ಕಮ್ಮಟ (ಡಾ. ವಿಜಯಾದಬ್ಬೆ ಸ್ಮರಣಾರ್ಥ ನಡೆಸಿದ ಕಾವ್ಯ ಮತ್ತು ಪ್ರಬಂಧ ಸ್ಪರ್ಧೆಗಳ ಬಹುಮಾನ ವಿಜೇತರಿಗಾಗಿ), ಅತಿಥಿಗಳು : ಶ್ರೀಮತಿ ಎಚ್.ಆರ್. ಸುಜಾತ, ಕು. ಮೌಲ್ಯಸ್ವಾಮಿ, ಡಾ. ರಾಜಪ್ಪ ದಳವಾಯಿ, ಡಾ. ಶಶಿಕಲಾ ಗುರುಪುರ, ಸ್ಥಳ: ಯೂತ್ ಹಾಸ್ಟೆಲ್ ಮೈಸೂರು, ಗಂಗೋತ್ರಿ ಬಡಾವಣೆ, ಮಾರುತಿ ದೇವಸ್ಥಾನದ ಎದುರು, ಸರಸ್ವತಿಪುರಂ, ಬೆಳಗ್ಗೆ 10ಕ್ಕೆ

■ **ಕಲಾಸೌರಭ :** ಕರ್ನಾಟಕ ಶಾಸ್ತ್ರೀಯ ಸಂಗೀತ ಅಧ್ಯಯನ ಶಿಬಿರ, ಗಾನಕಲಾಶ್ರೀ ವಿದ್ವಾನ್ ಆನೂರು ಅನಂತಕೃಷ್ಣ ಶರ್ಮ ಅವರಿಂದ ಮನೋಧರ್ಮ ಸಂಗೀತ ಪ್ರಕಾರಗಳಾದ ಕಲ್ಪನಾಸ್ವರ ಮತ್ತು ನೆರವಲ್ ಬಗ್ಗೆ ವಿಶೇಷ ಅಧ್ಯಯನ ಶಿಬಿರ, ಸ್ಥಳ: ಶ್ರೀ ಶಂಕರ ಪ್ರಾರ್ಥನಾ ಮಂದಿರ, ಚಂದ್ರಮೌಳೇಶ್ವರ ದೇವಸ್ಥಾನ, ವಿ.ವಿ. ಮೊಹಲ್ಲಾ, ಬೆಳಗ್ಗೆ 10.30 ರಿಂದ.

■ **ಜೆಎಸ್‌ಎಸ್ ಪದವಿಪೂರ್ವ ಕಾಲೇಜು :** ಸಾಂಸ್ಕೃತಿಕ ಹಾಗೂ ಕ್ರೀಡಾ ಚಟುವಟಿಕೆಗಳ ಉದ್ಘಾಟನೆ, ಪ್ರತಿಭಾ ಪುರಸ್ಕಾರ, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಅಧ್ಯಕ್ಷತೆ : ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ) ಉಪನಿರ್ದೇಶಕ ಎಂ. ಮರಿಸ್ವಾಮಿ, ಸಾಂಸ್ಕೃತಿಕ ವೇದಿಕೆ ಉದ್ಘಾಟನೆ: ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್. ಮಲ್ಲಿಕಾರ್ಜುನಸ್ವಾಮಿ, ಕ್ರೀಡಾ ಚಟುವಟಿಕೆಗಳ ಉದ್ಘಾಟನೆ : ಹಿಮಾಲಯ ಪರ್ವತಾರೋಹಿ ಡಾ. ಉಷಾ ಹೆಗ್ಡೆ, ಪ್ರತಿಭಾ ಪುರಸ್ಕಾರ: ಪ್ರೊ. ಬಿ.ವಿ. ಸಾಂಬಶಿವಯ್ಯ, ಸ್ಥಳ: ಸುವರ್ಣ ಮಹೋತ್ಸವ ಭವನ, ಬೆಳಗ್ಗೆ 10.30ಕ್ಕೆ.

■ **ಎಸ್‌ಬಿಆರ್‌ಆರ್ ಮಹಾಜನ ಪ್ರಥಮ ದರ್ಜೆ ಕಾಲೇಜು :** ಪದವಿ ಪ್ರಧಾನ ಸಮಾರಂಭ, ಪದವಿ ಪ್ರದಾನ ಭಾಷಣ : ಬೆಂಗಳೂರಿನ ವಿವಿ ವಿಶ್ರಾಂತ ಕುಲಪತಿ ಪ್ರೊ.ಬಿ.ತಿಮ್ಮೇಗೌಡ, ಮುಖ್ಯ ಅತಿಥಿಗಳು : ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್, ಅಧ್ಯಕ್ಷತೆ : ಸಂಸ್ಥೆಯ ಮುಖ್ಯಸ್ಥ ಟಿ.ಮುರಳೀಧರ್ ಭಾಗವತ್, ಉಪಸ್ಥಿತರು : ಗೌರವ ಕಾರ್ಯದರ್ಶಿ ಡಾ.ಟಿ. ವಿಜಯ ಲಕ್ಷ್ಮಿ ಮುರಳೀಧರ್, ಡಾ.ಸಿ.ಕೆ. ರೇಣುಕಾರ್ಯ, ಸ್ಥಳ: ಕಾಲೇಜಿನ ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ಸಭಾಂಗಣ, ಬೆಳಗ್ಗೆ 11.30ಕ್ಕೆ.

■ **ಸಂವಹನ : ಪ್ರಕಾಶಕರು, ಆಕಾಶವಾಣಿ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ :** ಲಾಕ್‌ಡೌನ್ ಕಥೆಗಳು – ಕಥಾ ಸಂಕಲನದ ಬಿಡುಗಡೆ ಸಮಾರಂಭ, ಪ್ರಸ್ತಾವನೆ : ಆಕಾಶವಾಣಿ ಹಿರಿಯ ಉದ್ಘೋಷಕ ಪ್ರಭುಸ್ವಾಮಿ ಮಳಿಮಠ್, ಕಥಾ ಸಂಕಲನ ಬಿಡುಗಡೆ : ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಶುಭ ನುಡಿ : ಆಕಾಶವಾಣಿ ಸಹಾಯಕ ನಿರ್ದೇಶಕ ಅಬ್ದುಲ್ ರಶೀದ್, ಪ್ರಕಾಶಕರ ನುಡಿ : ಸಂವಹನ ಪ್ರಕಾಶನದ ಡಿ.ಎನ್. ಲೋಕಪ್ಪ, ಕಥೆಗಾರರ ಅನಿಸಿಕೆ : ಕಥೆಗಾರ್ತಿ ಶ್ರೀಮತಿ ಶೀಲಾ ಸತ್ಯೇಂದ್ರಸ್ವಾಮಿ, ಕಥೆಗಾರ ಕೊತ್ತಲವಾಡಿ ಶಿವಕುಮಾರ್, ಅಧ್ಯಕ್ಷರ ನುಡಿ : ಆಕಾಶವಾಣಿ ಉಪ ನಿರ್ದೇಶಕ ಎಸ್.ಎಸ್. ಉಮೇಶ್, ಸ್ಥಳ: ಜಿಲ್ಲಾ ಕನ್ನಡ ಸಾಹಿತ್ಯ ಭವನ, ವಿಜಯನಗರ 1ನೇ ಹಂತ, ಸಂಜೆ 4.30ಕ್ಕೆ.

■ **ಸುರುಚಿ ರಂಗಮನೆ :** ಕಥೆ ಕೇಳೋಣ ಬನ್ನಿ ಕಾರ್ಯಕ್ರಮ – 837, ಕಥೆ ಹೇಳುವವರು: ಶ್ರೀಮತಿ ಸುಮಾ ವಿ ಎನ್, ಆಂಗ್ಲ ಭಾಷಾ ಅಧ್ಯಾಪಕರು, ಸರ್ಕಾರಿ ಹೆಣ್ಣುಮಕ್ಕಳ ಪ್ರೌಢಶಾಲೆ, ನಂಜನಗೂಡು. ಸ್ಥಳ: ಸುರುಚಿ ರಂಗಮನೆ, 476, ಚಿತ್ರಭಾನು ರಸ್ತೆ, ಕುವೆಂಪುನಗರ, ಸಂಜೆ 4.30 ರಿಂದ

■ **ಶ್ರೀ ಕೃಷ್ಣ ಟ್ರಸ್ಟ್ ಮತ್ತು ಶ್ರೀ ಕೃಷ್ಣ ಮಿತ್ರ ಮಂಡಳಿ :** ಉಡುಪಿ ಶ್ರೀ ಪೇಜಾವರ ಅಧೋಕ್ಷಜ ಮಠದ ಸಂಸ್ಥಾನಾಧೀಶರಾದ ಶ್ರೀ ಶ್ರೀ ವಿಶ್ವಪ್ರಸನ್ನತೀರ್ಥ ಶ್ರೀಪಾದಂಗಳವರಿಗೆ ಮತ್ತು ಉಡುಪಿ ಶ್ರೀ ಪಲಿಮಾರು ಮಠದ ಸಂಸ್ಥಾನಾಧೀಶರಾದ ಶ್ರೀ ಶ್ರೀ ವಿದ್ಯಾಧೀಶತೀರ್ಥ ಶ್ರೀಪಾದಂಗಳವರಿಗೆ ಗುರುವಂದನಾ ಸಮಾರಂಭ, ಶ್ರೀಮತಿ ದಿವ್ಯಾ ಗಿರಿಧರ್ ಮತ್ತು ಅನಂತರಾಜ್ ಮಿಸ್ತ್ರಿ ತಂಡದವರಿಂದ ದಾಸವೈಭವ ಸಾಂಸ್ಕೃತಿಕ ಕಾರ್ಯಕ್ರಮ, ಸ್ಥಳ: ಶ್ರೀ ಕೃಷ್ಣಧಾಮ, ಸಾಹುಕಾರ್ ಚೆನ್ನಯ್ಯ ರಸ್ತೆ, ಸರಸ್ವತಿಪುರಂ, ಸಂಜೆ 5ಕ್ಕೆ.

■ **ಶ್ರೀ ನಿಮಿಶಾಂಬ ನೃತ್ಯಶಾಲೆ :** ವಿದ್ವಾನ್ ಶ್ರೀಧರ್ ಜೈನ್ ಅವರ ಶಿಷ್ಯೆ ಡಾ. ಅಗ್ನಿಕಾ ಅಜಯ್‌ಕುಮಾರ್ ಅವರಿಂದ ನೃತ್ಯ ಸಮರ್ಪಣೆ, ಉದ್ಘಾಟನೆ : ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಮುಖ್ಯ ಅತಿಥಿಗಳು : ಅಂತರರಾಷ್ಟ್ರೀಯ ಪಿಟೀಲು ವಾದಕ ಡಾ. ಮೈಸೂರು ನಾಗರಾಜ್, ಭರತನಾಟ್ಯ ಕಲಾವಿದೆ ವಿದುಷಿ ಅನುರಾಧ ಶ್ರೀಧರ್, ಸ್ಥಳ: ಜಗನ್ಮೋಹನ ಅರಮನೆ, ಸಂಜೆ 5.30ಕ್ಕೆ.

■ **ವಾಸನ್ ಕಣ್ಣಿನ ಆಸ್ಪತ್ರೆ, ಮೈಸೂರು ಶಾಖೆ :** ಗಂಗಾವತಿ ಪ್ರಾಣೇಶ್, ಬಸವರಾಜ್ ಮಹಾಮನಿ, ನರಸಿಂಹ ಜೋಶಿ ಅವರಿಂದ ನಗೆಹಬ್ಬ, ಸ್ಥಳ: ಕಲಾಮಂದಿರ, ವಿನೋಬಾ ರಸ್ತೆ, ಸಂಜೆ 5 ರಿಂದ.

■ **ಶ್ರೀ ಉತ್ತರಾದಿ ಮಠ :** ಶ್ರೀ 1008 ಶ್ರೀ ಸತ್ಯಸಂಕಲ್ಪತೀರ್ಥ ಶ್ರೀಪಾದಂಗಳವರ 185ನೇ ಆರಾಧನಾ ಮಹೋತ್ಸವದ ಪ್ರಯುಕ್ತ ಪ್ರಸಿದ್ಧ ಪ್ರವಚನಕಾರರಾದ ಪಂ.ಶ್ರೀ.ವಿದ್ಯಾದೀಶಾಚಾರ್ಯ ಗುತ್ತಲ್ ಅವರಿಂದ ಶ್ರೀ ರಾಘವೇಂದ್ರಸ್ವಾಮಿಗಳು ರಚಿಸಿರುವ 'ಪ್ರಾತಃಸಂಕಲ್ಪಗದ್ಯ' ಕುರಿತು ವಿಶೇಷ ಪ್ರವಚನ, ಸ್ಥಳ: ಶ್ರೀ ಉತ್ತರಾದಿ ಮಠ, ಅಗ್ರಹಾರ, ಸಂಜೆ 6 ರಿಂದ.

■ **ಶ್ರೀ ತ್ಯಾಗರಾಜ ಸಂಗೀತ ಸಭಾ ಚಾರಿಟಬಲ್ ಟ್ರಸ್ಟ್ :** ವಿದುಷಿ ಅನಘಾ ಯೋಗಾನಂದ್ ಅವರಿಂದ ಗಾಯನ, ವಿದುಷಿ ಕೃತಿಕ್ ಕೌಶಿಕ್–ಪಿಟೀಲು, ವಿದ್ವಾನ್ ರಘುನಂದನ್ ವಿ. ಭಾರ್ಗವ–ಮೃದಂಗ, ವಿದ್ವಾನ್ ಎಸ್.ಮಂಜುನಾಥ್–ಘಟಂ, ಸ್ಥಳ: ಶ್ರೀರಾಮಮಂದಿರ, ಜಯನಗರ, ಸಂಜೆ 6ಕ್ಕೆ

■ **ಬೆಂಗಳೂರಿನ ಇನ್ಫೋಸಿಸ್ ಪ್ರತಿಷ್ಠಾನ, ಭಾರತೀಯ ವಿದ್ಯಾಭವನ, ಬೆಂಗಳೂರು–ಮೈಸೂರು :** 131ನೇ ಸಾಂಸ್ಕೃತಿಕ ಕಾರ್ಯಕ್ರಮದ ಅಂಗವಾಗಿ ವಿದ್ವಾನ್ ಕೀರ್ತನ್ ಹೊಳ್ಳ ಅವರಿಂದ ಭಕ್ತಿ ಸುಧಾ ಗಾಯನ ಕಾರ್ಯಕ್ರಮ, ವಿದ್ವಾನ್ ಕೌಶಿಕ್ ಭಟ್–ತಬಲ, ವಿದ್ವಾನ್ ತೇಜಸ್ ಕಾಟೋಟಿ–ಹಾರ್ಮೋನಿಯಂ, ವಿದ್ವಾನ್ ಸಾತ್ವಿಕ್ ಹೆಗ್ಡೆ–ತಾಳ, ಸ್ಥಳ: ಭಾರತೀಯ ವಿದ್ಯಾಭವನ, ವಿಜಯನಗರ 1ನೇ ಹಂತ, ಸಂಜೆ 6 ಗಂಟೆಗೆ

■ **ದಿ ಇನ್‌ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್ :** ಎಂಟ್ರಿಪ್ರಿನರ್‌ಶಿಪ್ ಆಪರ್‌ಚುನಿಟೀಸ್ ಫಾರ್ ಇಂಜಿನಿಯರ್ಸ್ ಕುರಿತು ವಿಜಯಾನಂದ ಗುರುದೇವ್ ಅವರಿಂದ ಉಪನ್ಯಾಸ, ಅಧ್ಯಕ್ಷತೆ : ಇನ್‌ಸ್ಟಿಟ್ಯೂಟ್ ಆಫ್ ಇಂಜಿನಿಯರ್ಸ್ ಅಧ್ಯಕ್ಷ ಡಾ. ಆರ್. ದೀಪು, ಸ್ಥಳ: ಎಸ್.ಪಿ. ಭಟ್ ಹಾಲ್, ಸಂಜೆ 6.15ಕ್ಕೆ.

■ **ಶ್ರೀ ಕೃಷ್ಣ ಟ್ರಸ್ಟ್ ಮತ್ತು ಶ್ರೀ ಕೃಷ್ಣ ಮಿತ್ರ ಮಂಡಳಿ :** ಉಡುಪಿ ಶ್ರೀ ಪಲಿಮಾರು ಮಠದ ಸಂಸ್ಥಾನಾಧೀಶರಾದ ಶ್ರೀ ವಿದ್ಯಾದೀಶತೀರ್ಥ ಶ್ರೀಪಾದಂಗಳವರಿಂದ ಶ್ರೀ ಮನ್ಮಹಾಭಾರತ ಪ್ರವಚನ ಕಾರ್ಯಕ್ರಮ, ಸ್ಥಳ: ಶ್ರೀಕೃಷ್ಣಧಾಮ, ಸರಸ್ವತಿಪುರಂ, ಸಂಜೆ 6.30 ರಿಂದ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 CFTRI ಶೋಧ – ಅನುಶೋಧ– ಪ್ರಾಯೋಜಿತ ಬಾನುಲಿ ಸರಣಿ, ಪ್ರಾಯೋಜಕರು :CSIR, CFTRI, Mysuru, 6.40 ಅರಿವಿನ ಶಿಖರ : ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ : ಕೆ. ಶ್ರೇಯಾ, ವ್ಯಾಖ್ಯಾನ : ಡಾ. ಪ್ರದೀಪ್ ಕುಮಾರ್ ಹೆಬ್ರಿ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು– ದ. ರಾ. ಬೇಂದ್ರೆ ಅವರ ರಚನೆಗಳು, 8.30 ಹಾದಿಯಲ್ಲಿ ಕಂಡ ಮುಖ–ಬಾನುಲಿ ಸರಣಿ, ಪ್ರಸ್ತುತಿ : ಅಬ್ದುಲ್ ರಶೀದ್, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಕರ್ನಾಟಕ ಪೋಲಿಸ್ ಬ್ಯಾಂಡ್–ವಿ. ಸುಬ್ಬಣ್ಣ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ "ನಿಮ್ಮೂರ್ ಹೆಸರು", ಪ್ರಸ್ತುತಿ : ಡಾ. ಮೈಸೂರು ಉಮೇಶ್

ಮಧ್ಯಾಹ್ನ: 12.30 ದೇವರನಾಮ–ಡಾ. ಸುಷ್ಮಾ ಆನಂದ್, 12.45 ಜನಪದ ಸಂಗೀತ, 1.20 ಭಾವಗೀತೆಗಳು–ಎಂ. ಎಸ್. ಶೀಲಾ, 3.00 ಹಳ್ಳಿ ಹಾಡು, 3.30 ಮಕ್ಕಳ ಮಂಟಪ–ಟಿ. ನರಸೀಪುರ ತಾಲೂಕು ಕೇತುಪುರದ ಸರ್ಕಾರಿ ಪ್ರೌಢಶಾಲೆ ಮಕ್ಕಳಿಂದ ಕಾರ್ಯಕ್ರಮ ವೈವಿಧ್ಯ, 4.00 ನಾಟಕ–"ತ್ಯಾಗ", ಮೂಲ ಕಥೆ– ರವೀಂದ್ರನಾಥ್ ಟ್ಯಾಗೋರ್, ಬಾನುಲಿ ರೂಪ–ಅಹೋಬಲ ಶಂಕರ್, ನಿರ್ದೇಶನ: ಯಮುನಾ ಮೂರ್ತಿ, 4.30 ನೆನಪಿನಂಗಳ (ಧ್ವನಿ ಭಂಡಾರದಿಂದ), ರೂಪಕ : ಸಂಸ, ರಚನೆ : ಜೀ. ಶಂ. ಪರಮಶಿವಯ್ಯ, ನಿರ್ಮಾಣ : ಹೆಚ್. ಎಸ್. ಪಾರ್ವತಿ, 6.50 ಕೃಷಿರಂಗ : ಕಿಸಾನ್ ವಾಣಿ, ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಪ್ರಾಯೋಜಿತ ಕಾರ್ಯಕ್ರಮ ಕೃಷಿ ಹಾಗೂ ಮೌಲ್ಯವರ್ಧನೆ ಕುರಿತು ಸಂವಾದ. ಭಾಗವಹಿಸುತ್ತಾರೆ : ಶ್ರೀರಂಗಪಟ್ಟಣ ತಾಲೂಕು ಎಂ. ಶೆಟ್ಟಹಳ್ಳಿಯ ಕೃಷಿಕ ದಂಪತಿ ಎಂ. ಎಲ್. ನವೀನ್ ಮತ್ತು ಎನ್. ಗಿರಿಜಾ, ಪ್ರಸ್ತುತಿ : ಎನ್. ಕೇಶವಮೂರ್ತಿ, 8.00 ಯುವವಾಣಿ, 9.30 ಸವಿನೆನಪು–ಹಳೆಯ ಕನ್ನಡ ಚಿತಗೀತೆಗಳು, 10.00 ರಾಷ್ಟ್ರೀಯ ಸಂಗೀತ ಕಾರ್ಯಕ್ರಮ : ಪಂಡಿತ್. ಸುರೇಶ್ ಬಾಪಟ್ – ಗಾಯನ

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | ಜುಲೈ 20 ಶನಿವಾರ 2024

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

45

ಸಂಪುಟ: 45 | ಸಂಚಿಕೆ: 95 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಹಾಸನದಲ್ಲಿ ಡೆಂಗ್ಯೂ ಜ್ವರಕ್ಕೆ ವೈದ್ಯಕೀಯ ವಿದ್ಯಾರ್ಥಿ ಬಲಿ

ಹಾಸನ, ಜು.19–ಹಾಸನ ವೈದ್ಯಕೀಯ ವಿಜ್ಞಾನ ಸಂಸ್ಥೆಯ (ಎಚ್‌ಐಎಂಎಸ್) ಅಂತಿಮ ವರ್ಷದ ಎಂಬಿಬಿಎಸ್ ವಿದ್ಯಾರ್ಥಿ ಡೆಂಗ್ಯೂ ಜ್ವರಕ್ಕೆ ಶುಕ್ರವಾರ ಬಲಿಯಾಗಿದ್ದಾರೆ.


ಕುಶಾಲ್

ಹೊಳೆನರಸೀಪುರ ತಾಲೂಕಿನ ಗೋಹಳ್ಳಿ ಮೂಲದ ಕುಶಾಲ್ (22) ಹೆಚ್‌ಐಎಂಎಸ್‌ನಲ್ಲಿ ಮೂರನೇ ವರ್ಷದ ಎಂಬಿಬಿಎಸ್ ವಿದ್ಯಾಭ್ಯಾಸ ಮಾಡುತ್ತಿದ್ದರು. ಗುರುವಾರ ಅವರ ಆರೋಗ್ಯ ಸ್ಥಿತಿ ಗಂಭೀರವಾದ ಹಿನ್ನೆಲೆಯಲ್ಲಿ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ, ಚಿಕಿತ್ಸೆ ಫಲಕಾರಿಯಾಗದೆ ಇಂದು ಮೃತಪಟ್ಟಿದ್ದಾರೆ.

ಕುಶಾಲ್‌ನ ಪೋಷಕರು ಕೂಡ ಡೆಂಗ್ಯೂ ಸೋಂಕಿನಿಂದ ಬಳಲುತ್ತಿದ್ದು, ಹಿಮ್ಸ್ ನಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಕುಶಾಲ್ ತಂದೆ ಮಂಜುನಾಥ್ ಸೋಂಕಿನಿಂದ ಚೇತರಿಸಿಕೊಂಡಿದ್ದು, ಇತ್ತೀಚೆಗಷ್ಟೇ ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿದ್ದರು. ಅವರ ತಾಯಿ ರೇಖಾಗೆ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಮುಂದುವರೆದಿದೆ. ಹಾಸನ ಜಿಲ್ಲೆಯಲ್ಲಿ ಈವರೆಗೂ ಡೆಂಗ್ಯೂ ಜ್ವರಕ್ಕೆ ಮೂವರು ಮಕ್ಕಳು ಸೇರಿ ನಾಲ್ವರು ಮೃತಪಟ್ಟಿದ್ದಾರೆ.

ವಾಲ್ಮೀಕಿ ನಿಗಮದ ಹಣ ಅಕ್ರಮ ವರ್ಗಾವಣೆ ಹಗರಣ ಕೆದಕಿದ ವಿಪಕ್ಷ ಬಿಜೆಪಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಎದಿರೇಟು!

ಯಡಿಯೂರಪ್ಪ, ಬೊಮ್ಮಾಯಿ ಅವಧಿಯ ಹಗರಣಗಳ ತನಿಖೆ

● ಈ ಅವಧಿಯಲ್ಲಿ ಹಲವು ಸಚಿವರಿಂದಲೂ ಭಾರಿ ಹಗರಣ ● ಖದೀಮರ ಬೆಳೆಸಿದವರೇ ನೀವು; ಕಳ್ಳರಿಗೆ ಇಮ್ಯೂನಿಟಿ ದೊರೆತಿದ್ದೇ ನಿಮ್ಮಿಂದ ● ಬಿಎಸ್‌ವೈ, ಬೊಮ್ಮಾಯಿ ಕಾಲದಲ್ಲೇ ಅಸಂಖ್ಯಾತ ಹಗರಣಗಳಾಗಿವೆ ● ಲೂಟಿಕೋರರ ರಕ್ಷಿಸಿದ್ದೇ ಬಿಜೆಪಿಯವರು: ಸದನದಲ್ಲಿ ವಾಗ್ದಾಳಿ



ಬೆಂಗಳೂರು, ಜು. 19(ಕೆಎಂಶಿ)– ಬಿ.ಎಸ್.ಯಡಿಯೂರಪ್ಪ ಹಾಗೂ ಬಸವರಾಜ ಬೊಮ್ಮಾಯಿ ನೇತೃತ್ವದ ಬಿಜೆಪಿ ಆಡಳಿತದ ಸಂದರ್ಭದಲ್ಲಿ ನಡೆದಿರುವ ಎಲ್ಲಾ ಹಗರಣಗಳನ್ನು ತನಿಖೆಗೆ ಒಪ್ಪಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನಸಭೆಯಲ್ಲಿಂದು ಪ್ರಕಟಿಸಿದರಲ್ಲದೆ, ಈಗ ನಡೆದಿರುವ ಹಗರಣಗಳಲ್ಲಿ ಭಾಗಿಯಾಗಿರುವವರನ್ನು ಬೆಳೆಸಿದವರೇ ನೀವು ಎಂದು ಹಿಂದೆ ಅಂಬೇಡ್ಕರ್ ನಿಗಮದ ಹಗರಣದಲ್ಲಿ ಭಾಗಿಯಾಗಿದ್ದ ಹಾಲಿ ವಾಲ್ಮೀಕಿ ನಿಗಮದ ಎಂಡಿ ಪದ್ಮನಾಭನನ್ನು ಹೆಸರಿಸಿ ವಾಗ್ದಾಳಿ ನಡೆಸಿದರು. ಇದರೊಂದಿಗೆ ಏಟಿಗೆ ಎದಿರೇಟು ನೀಡುವ ತೀರ್ಮಾನಕ್ಕೆ ಮುಖ್ಯಮಂತ್ರಿ ಬಂದಂತಿದೆ.

ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತದ ಹಗರಣ ಕುರಿತು ಮುಂದುವರೆದು ಉತ್ತರ ನೀಡಿದ ಮುಖ್ಯಮಂತ್ರಿಗಳು, ಬಿಜೆಪಿ ಆಡಳಿತದಲ್ಲಿ ನಡೆದಿರುವ ಹಗರಣಗಳ ಪಟ್ಟಿಯನ್ನೇ ಸದನದ ಮುಂದಿಟ್ಟು ಇದರಲ್ಲಿ ಯಡಿಯೂರಪ್ಪ, ಬೊಮ್ಮಾಯಿ ಅಷ್ಟೇ ಅಲ್ಲದೆ, ಹಲವು ಸಚಿವರುಗಳು ಭಾಗಿಯಾಗಿದ್ದಾರೆ ಎಂದರು. ಇವರಿಬ್ಬರ ಆಡಳಿತದಲ್ಲಿ ಅಸಂಖ್ಯಾತ ಹಗರಣಗಳು ನಡೆದಿವೆ. ಅದರಲ್ಲಿ ಕೆಲವನ್ನು ಮಾತ್ರ ನಾನು ಇಲ್ಲಿ ಹೇಳಬಯಸುತ್ತೇನೆ ಮತ್ತು ತನಿಖೆಗೂ ಒಪ್ಪಿಸುತ್ತೇನೆ ಎಂದು ಪಟ್ಟಿಯನ್ನೇ ಸದನದ ಮುಂದಿಟ್ಟರು. ಧರಣಿ ನಿರತ ಬಿಜೆಪಿ ಸದಸ್ಯರ ■ 9ನೇ ಪುಟಕ್ಕೆ

ಬಿಜೆಪಿ ಆಡಳಿತ ಅವಧಿಯ ಹಗರಣಗಳು...

ಯಡಿಯೂರಪ್ಪ, ಬೊಮ್ಮಾಯಿ ಆಡಳಿತವಿದ್ದಾಗ ಎಪಿಎಂಸಿಯಲ್ಲಿ 47.16 **ಕೋಟಿ ರೂ., ಭೋವಿ ಅಭಿವೃದ್ಧಿ ನಿಗಮದಲ್ಲಿ 87 ಕೋಟಿ ರೂ.ಗೂ ಹೆಚ್ಚು, ದೇವರಾಜ ಅರಸು ಟ್ರಕ್ ಟರ್ಮಿನಲ್ 50 ಕೋಟಿ ರೂ.ಗೂ ಹೆಚ್ಚು, ಗಂಗಾ ಕಲ್ಯಾಣ ಯೋಜನೆಯಡಿ 430 ಕೋಟಿ ರೂ., ಪ್ರವಾಸೋದ್ಯಮ ಇಲಾಖೆಯಲ್ಲಿ 247 ಕೋಟಿ ರೂ., ಕಿಯೋನಿಕ್ಸ್ ಹಗರಣದಲ್ಲಿ 500 ಕೋಟಿ ರೂ., ಕೋವಿಡ್ ಹಗರಣ, ಪಿಎಸ್‌ಐ ಮತ್ತು ಇತರ ನೇಮಕಾತಿ, ಪರುಶುರಾಮ್ ಥೀಮ್ ಪಾರ್ಕ್, ಬಿಟ್ ಕಾಯಿನ್** ಹಗರಣಗಳ ಬಗ್ಗೆಯೂ ತನಿಖೆ ನಡೆಸಲಾಗುವುದು.

ಯಡಿಯೂರಪ್ಪ ಆಪ್ತ ಉಮೇಶ್ ಹಾಗೂ ಇತರರ ಮನೆಯಲ್ಲಿ 750 ಕೋಟಿ ರೂ.ಗೂ ಹೆಚ್ಚು ಹಣ ದೊರೆತಿದೆ. ಅಲ್ಲದೆ, ಯಡಿಯೂರಪ್ಪ ಮತ್ತು ವಿಜಯೇಂದ್ರ ಕುಟುಂಬದ ಆದಾಯ ಮೀರಿದ ಆಸ್ತಿ ನೂರಾರು ಕೋಟಿ ರೂ. ಕೆಕೆಆರ್‌ಡಿಬಿ, ಕಂದಾಯ, ಕೃಷಿ, ಅಂಗನವಾಡಿ, ಗಣಿ, ಬಿಡಿಎ ಮತ್ತು ಕೆಐಎಡಿಬಿ ಡಿ–ನೋಟಿಫಿಕೇಷನ್ ಹಗರಣಗಳು ಇವರ ಆಡಳಿತದಲ್ಲೇ ನಡೆದಿದೆ.

ಇವರ ಆಡಳಿತದಲ್ಲಿ ಸಚಿವರಾಗಿದ್ದ ವಿ.ಸುನೀಲ್‌ಕುಮಾರ್, ಎಚ್.ನಾಗೇಶ್, ಆರ್. ಅಶೋಕ್, ಪಿ.ಮುನಿರತ್ನ, ಬಿ.ಸಿ.ಪಾಟೀಲ್, ಶಶಿಕಲಾ ಜೊಲ್ಲೆ, ಕೆ.ಸುಧಾಕರ್, ಶ್ರೀರಾಮುಲು, ಡಾ.ಅಶ್ವತ್ಥನಾರಾಯಣ, ಸಿ.ಪಿ.ಯೋಗೇಶ್ವರ್, ಕೋಟ ಶ್ರೀನಿವಾಸ ಪೂಜಾರಿ ಈ ಹಗರಣದಲ್ಲಿ ಪ್ರಮುಖ ಪಾಲುದಾರರು ಮತ್ತು ಇವರ ಮೂಗಿನಡಿಯಲ್ಲಿಯೇ ಹಗರಣಗಳು ನಡೆದಿವೆ ಎಂದು ಬಿಡಿಸಿಟ್ಟರು.

ಬಿಜೆಪಿಗರು ಭ್ರಷ್ಟಾಚಾರದ ಪಿತಾಮಹರು

● ಡಿಸಿಎಂ ಡಿ.ಕೆ. ಶಿವಕುಮಾರ್ ವಾಗ್ದಾಳಿ ● ಯಡಿಯೂರಪ್ಪ, ಬೊಮ್ಮಾಯಿ ಕಾಲದಲ್ಲಿ 300 ಕೋಟಿಗೂ ಅಧಿಕ ಅಕ್ರಮ ಮಾಡಿದ್ದಾರೆ

ಬೆಂಗಳೂರು, ಜು. 19(ಕೆಎಂಶಿ)– ಬಿಜೆಪಿಗರು ಭ್ರಷ್ಟಾಚಾರದ ಪಿತಾಮಹರು. ಬಿ.ಎಸ್.ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ ಆಡಳಿತದಲ್ಲಿ ಹಲವಾರು ನಿಗಮಗಳ ಸುಮಾರು 300 ಕೋಟಿ ರೂ.ಗಳಿಗೂ ಹೆಚ್ಚು ಅಕ್ರಮ ನಡೆದಿದ್ದು, ಸದನದ ಮೂಲಕ ಜನರಿಗೆ ತಿಳಿಸುತ್ತೇವೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇಂದಿಲ್ಲಿ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ಸರ್ಕಾರದ ಅವಧಿಯಲ್ಲಿ ಭೋವಿ ನಿಗಮದ 87 ಕೋಟಿ ರೂ., ಎಪಿಎಂಸಿಯ 47 ಕೋಟಿ ರೂ., 2019ರಲ್ಲಿ ಅಂಗವಿಕಲ ಕಲ್ಯಾಣ ಇಲಾಖೆಯ 22 ಕೋಟಿ ರೂ., ಅಂಬೇಡ್ಕರ್ ನಿಗಮದ ಕೆನರಾ ಬ್ಯಾಂಕ್‌ನಲ್ಲಿನ ಹಣ ಜೂನ್ 2018ರಲ್ಲಿ 5 ಕೋಟಿ ರೂ., ದೇವರಾಜ ಅರಸು ನಿಗಮದ 47 ಕೋಟಿ ರೂ., ಮಾಲಿನ್ಯ ನಿಯಂತ್ರಣ ಮಂಡಲಿಯ



10 ಕೋಟಿ ರೂ., ಕೆಐಎಡಿಬಿಯ ಹಣ ಸೇಲಂಗೆ ಅಕ್ರಮವಾಗಿ ವರ್ಗಾವಣೆಯಾಗಿದೆ ಎಂದರು.

ಬಿಜೆಪಿಯ ಅಕ್ರಮಗಳ ಕುರಿತು ಖಂಡಿತ ತನಿಖೆ ನಡೆಸಲಾಗುವುದು. ಸದನದಲ್ಲಿ ಎಲ್ಲಾ ದಾಖಲೆಗಳನ್ನು ಬಯಲು ಮಾಡುತ್ತೇವೆ. ಅಕ್ರಮಗಳ ಹಿಂದೆ ಯಾವ ಮಂತ್ರಿ, ಅಧ್ಯಕ್ಷರು, ಮುಖ್ಯಮಂತ್ರಿಗಳು ಇದ್ದರು ಎಂದು ಜನರಿಗೆ ತಿಳಿಸುತ್ತೇವೆ.

ಮುಖ್ಯಮಂತ್ರಿ ಹುದ್ದೆಗೆ 2,500 ಕೋಟಿ ರೂ., ಮಂತ್ರಿ ಸ್ಥಾನಕ್ಕೆ 100 ಕೋಟಿ ರೂ. ನೀಡಬೇಕು ಎಂಬ ಬಸನಗೌಡ ಪಾಟೀಲ್ ಯತ್ನಾಳ್ ಆರೋಪ ಹಾಗೂ ಭೋವಿ ■ 9ನೇ ಪುಟಕ್ಕೆ

ಮುಡಾ ಹಗರಣ ಬಯಲಿಗೆಳೆದ ಆರ್‌ಟಿಐ ಕಾರ್ಯಕರ್ತರಿಗೆ ಸರಕಾರದಿಂದ ಕಿರುಕುಳ

ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಆರೋಪ



ಬೆಂಗಳೂರು, ಜು.19– ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕುಟುಂಬ ಮೈಸೂರಿನ ಮುಡಾದಲ್ಲಿ ನಡೆಸಿರುವ ಬದಲಿ ನಿವೇಶನ ಹಗರಣವನ್ನು ಬಯಲಿಗೆಳೆದ ಆರ್‌ಟಿಐ ಕಾರ್ಯಕರ್ತರಿಗೆ ರಾಜ್ಯ ಸರ್ಕಾರ ಕಿರುಕುಳ ನೀಡುತ್ತಿದೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಆರೋಪಿಸಿದ್ದಾರೆ. ಈ ಕುರಿತು ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಹಗರಣಗಳನ್ನು ಪ್ರಶ್ನಿಸಿದ ಪ್ರತಿಪಕ್ಷಗಳನ್ನು ವಿಧಾನಮಂಡಲದಲ್ಲಿ ಹತ್ತಿಕ್ಕಲಾಯಿತು. ಸತ್ಯಶೋಧನೆಯಲ್ಲಿ ನಿರತರಾದ ಆರ್‌ಟಿಐ ಕಾರ್ಯಕರ್ತರನ್ನು ಅಧಿಕಾರ ದುರ್ಬಳಕೆ ಮಾಡಿಕೊಂಡು ದಮನ ಮಾಡಲಾಗುತ್ತಿದೆ ಎಂದು ಹರಿಹಾಯ್ದಿದ್ದಾರೆ. ಮುಖ್ಯಮಂತ್ರಿಗಳ ಕುಟುಂಬ ಮೈಸೂರಿನ ಮುಡಾದಲ್ಲಿ ನಡೆಸಿರುವ ಬದಲಿ ನಿವೇಶನ ಹಗರಣವನ್ನು ಬಯಲಿಗೆಳೆದ ಆರ್‌ಟಿಐ ಕಾರ್ಯಕರ್ತರನ್ನು ಕಾಂಗ್ರೆಸ್ ಗುರಿ ಮಾಡಿಕೊಂಡಿದೆ. ಆರೋಪಿತ ಸ್ಥಾನದಲ್ಲಿರುವ ಸಿಎಂ ಪರಿವಾರವನ್ನು ರಕ್ಷಿಸುವ ಏಕೈಕ ■ 9ನೇ ಪುಟಕ್ಕೆ

ವಾಲ್ಮೀಕಿ ನಿಗಮದಲ್ಲಿ ಅಕ್ರಮ ಆಗಿದೆ

ಕೊನೆಗೂ ಒಪ್ಪಿಕೊಂಡ ಮುಖ್ಯಮಂತ್ರಿ ಸಿದ್ದರಾಮಯ್ಯ

ಅವರ ಕಾಲದಲ್ಲಾದ ಹಗರಣಗಳಿಗೆ ಯಡಿಯೂರಪ್ಪ, ಬೊಮ್ಮಾಯಿ ರಾಜೀನಾಮೆ ನೀಡಿದ್ದರೆ?

ಬೆಂಗಳೂರು, ಜು.19– ವಾಲ್ಮೀಕಿ ನಿಗಮದಲ್ಲಿ ನಡೆದಿರುವ ಹಣಕಾಸಿನ ಅವ್ಯವಹಾರದ ಬಗ್ಗೆ ಈಗಾಗಲೇ ಎಸ್‌ಐಟಿ ತನಿಖೆ ನಡೆಸುತ್ತಿದ್ದು, ತನಿಖೆಯಲ್ಲಿ ಸರ್ಕಾರಕ್ಕೆ ಸಂಪೂರ್ಣ ಭರವಸೆಯಿದೆ. ರಾಜ್ಯ ಸರ್ಕಾರಕ್ಕೆ ಹಾಗೂ ತಮಗೆ ಮಸಿ ಬಳಿಯುವ ಪ್ರಯತ್ನವನ್ನು ವಿರೋಧ ಪಕ್ಷಗಳು ಮಾಡುತ್ತಿವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಅವರು ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ವಾಲ್ಮೀಕಿ ಅಭಿವೃದ್ಧಿ ನಿಗಮದ ಅಕೌಂಟ್ ಸೂಪರಿಂಟೆಂಡೆಂಟ್ ಚಂದ್ರಶೇಖರ್ ಆತ್ಮಹತ್ಯೆ ಮಾಡಿಕೊಂಡ ದಿನವೇ ಅವರ ಪತ್ನಿ ನೀಡಿದ ದೂರಿನ ಮೇಲೆ ಪ್ರಕರಣ ದಾಖಲಿಸಿ ತನಿಖೆ ಆರಂಭಿಸಲಾಗಿದೆ. ಮೇ 31ರಂದು ಪ್ರಕರಣದ ತನಿಖೆಗೆ ವಿಶೇಷ ತನಿಖಾ ತಂಡ (ಎಸ್‌ಐಟಿ) ರಚಿಸಲಾಗಿದ್ದು, ಇದರಲ್ಲಿ ನಾಲ್ವರು ಹಿರಿಯ ಐಪಿಎಸ್ ಅಧಿಕಾರಿಗಳು ಇದ್ದಾರೆ. ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾದ ಅಧಿಕಾರಿ ಮಹೇಶ್ ಎಂಬುವರ ದೂರಿನ ಮೇರೆಗೆ ಸಿಬಿಐ ತನಿಖೆಯನ್ನು ಕೈಗೊಂಡಿದ್ದು, ಇಡಿ ಸ್ವಯಂ ಪ್ರೇರಿತವಾಗಿ ತನಿಖೆಯನ್ನು ನಡೆಸುತ್ತಿದೆ. ಎಸ್‌ಐಟಿ ಈಗಾಗಲೇ ಪ್ರಕರಣಕ್ಕೆ ಸಂಬಂಧಿಸಿದಂತೆ 12 ಮಂದಿಯನ್ನು ಬಂಧಿಸಿದ್ದು, 34 ಕೋಟಿ ರೂ. ನಗದು ವಶಪಡಿಸಿಕೊಂಡಿದೆ. ವಿವಿಧ ಬ್ಯಾಂಕ್ ಖಾತೆಗಳಿಗೆ ವರ್ಗಾಯಿಸಲಾಗಿದ್ದ ಸುಮಾರು ರೂ. 46 ಕೋಟಿ ಸ್ಥಗಿತಗೊಳಿಸಲಾಗಿದೆ.

ಪ್ರಕರಣದಲ್ಲಿ ಯಾವುದೇ ಅಕ್ರಮ ಆಗಿಲ್ಲ ಎಂದು ನಾವು ಹೇಳುತ್ತಿಲ್ಲ. ಅಕ್ರಮ ಎಸಗಿದವರ ವಿರುದ್ಧ ಸೂಕ್ತ ಕ್ರಮ ಜರುಗಿಸಲು ಸರ್ಕಾರ ಬದ್ಧವಾಗಿದೆ. ವಿಧಾನ ಮಂಡಲ ಅಧಿವೇಶನದಲ್ಲಿ ವಿರೊಧ ಪಕ್ಷಗಳ ಸದಸ್ಯರು ನಿಯಮ 69ರ ಅಡಿಯಲ್ಲಿ 7ತಾಸಿಗೂ ಅಧಿಕ ಕಾಲ ಈ ವಿಚಾರದ ಬಗ್ಗೆ ತಮ್ಮ ಅಭಿಪ್ರಾಯಗಳನ್ನು ಮಂಡಿಸಿದ್ದಾರೆ. ಸಂಸದೀಯ ವ್ಯವಸ್ಥೆಯಲ್ಲಿ ವಿರೋಧ ಪಕ್ಷಗಳಿಗೆ ಅಭಿಪ್ರಾಯ ವ್ಯಕ್ತಪಡಿಸಲು ಇರುವ ಅವಕಾಶದಷ್ಟೇ, ಸರ್ಕಾರಕ್ಕೂ ತನ್ನ ನಿಲುವು ವ್ಯಕ್ತಪಡಿಸಲು ಹಕ್ಕಿದೆ ಎಂದು ಹೇಳಿದರು. ವಾಲ್ಮೀಕಿ ಅಭಿವೃದ್ಧಿ ನಿಗಮದ 89.63 ಕೋಟಿ ರೂ.ಗಳನ್ನು ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾದ ಎಂಜಿ ರಸ್ತೆ ಖಾತೆಗೆ ವರ್ಗಾಯಿಸಿ ಅಲ್ಲಿಂದ ವಿವಿಧ ಖಾತೆಗಳಿಗೆ ವರ್ಗಾಯಿಸಲಾಗಿದೆ. ■ 9ನೇ ಪುಟಕ್ಕೆ

ಮುಖ್ಯಮಂತ್ರಿ ರಾಜೀನಾಮೆ ಕೊಡುವ ದಿನ ಹತ್ತಿರ ಬಂದಿದೆ

ಪರಿಶಿಷ್ಟ ಜಾತಿ, ಪಂಗಡಗಳ ಶಾಪ ನಿಮಗೆ ತಟ್ಟದೇ ಬಿಡುವುದಿಲ್ಲ


ವಿಜಯೇಂದ್ರ

ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯನವರು ರಾಜೀನಾಮೆ ಕೊಡುವ ದಿನ ಹತ್ತಿರ ಬಂದಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಭವಿಷ್ಯ ನುಡಿದಿದ್ದಾರೆ.

ವಿಧಾನಸೌಧದಲ್ಲಿ ಸುದ್ದಿಗಾರರ ಬಳಿ ಮಾತನಾಡಿದ ಅವರು, ರಾಜ್ಯದಲ್ಲಿ ಬೇಲಿಯೇ ಎದ್ದು ಹೊಲ ಮೇಯ್ದ ಪರಿಸ್ಥಿತಿ ನಿರ್ಮಾಣವಾಗಿದೆ. ವಾಲ್ಮೀಕಿ ಅಭಿವೃದ್ಧಿ ನಿಗಮದಿಂದ ಹಣಕಾಸು ಸಚಿವರೂ ಆದ ಸಿಎಂ ಸಮ್ಮತಿ ಇಲ್ಲದೇ, ಅವರ ಗಮನಕ್ಕೆ ಬಾರದೆ ಹಣ ವರ್ಗಾವಣೆ ಆಗಲು ಸಾಧ್ಯವೇ ಇಲ್ಲ ಎಂದು ಆರೋಪಿಸಿದ್ದಾರೆ.

ಕೇವಲ ಮಾಜಿ ಸಚಿವ ನಾಗೇಂದ್ರ, ದದ್ದಲ್ ಅವರಷ್ಟೇ ಅಲ್ಲ, ಇನ್ನೂ ದೊಡ್ಡ ದೊಡ್ಡವರ ಹೆಸರು ಮುಂದೆ ಬರಲಿದೆ. ಹಾಗಾಗಿ ಆತಂಕದಿಂದಲೇ ರಾಜ್ಯದ ಐವರು ಸಚಿವರು ಇಡಿ ಮೇಲೆ ಆಪಾದನೆ ಮಾಡುವ ಪ್ರಯತ್ನ ಮಾಡಿದ್ದಾರೆ. ಈ ಬಗ್ಗೆ ಸದನದಲ್ಲಿ ಸಿಎಂ ಉತ್ತರ ಕೊಡುವ ಪ್ರಯತ್ನ ಮಾಡಿದ್ದು, ಸತ್ಯಸಂಗತಿಗಳನ್ನು ಮರೆಮಾಚಿ, ಸದನಕ್ಕೆ ಮತ್ತು ರಾಜ್ಯದ ಜನತೆಗೆ ತಪ್ಪು ಸಂದೇಶ ಕೊಡುವ ಪ್ರಯತ್ನ ಮಾಡಿದ್ದಾರೆ ಎಂದು ಅವರು ಕಿಡಿಕಾರಿದ್ದಾರೆ.

ಮುಖ್ಯಮಂತ್ರಿಗಳು ಈ ಹಗರಣದಿಂದ ತಪ್ಪಿಸಿಕೊಂಡು ಹೋಗಲು ಸಾಧ್ಯ ಇಲ್ಲ ಎಂಬುದಂತೂ ಸತ್ಯ. ಸಿದ್ದರಾಮಯ್ಯನವರೇ, ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದಿರುವ ಹಗರಣದಿಂದ ಪರಿಶಿಷ್ಟ ಜಾತಿ, ಪಂಗಡಗಳ ಶಾಪ ನಿಮಗೆ ತಟ್ಟದೇ ಬಿಡುವುದಿಲ್ಲ. ಇ.ಡಿ, ಸಿಬಿಐ ತನಿಖೆ ನಡೆಯುತ್ತಿದ್ದು, ತಾವು ಉತ್ತರ ಕೊಡಲೇಬೇಕಾಗುತ್ತದೆ ಎಂದು ಅವರು ಹೇಳಿದ್ದಾರೆ.

ರಾಷ್ಟ್ರೀಯ ಹೆದ್ದಾರಿ ಜಲಾವೃತ; ನಂಜನಗೂಡು ಬಳಿ

ಮೈಸೂರು–ಊಟಿ ಹೆದ್ದಾರಿ ಬಂದ್

● ಬದಲಿ ಮಾರ್ಗ ವ್ಯವಸ್ಥೆ
● ನಂಜನಗೂಡು ಬಳಿ ಮಲ್ಲನಮೂಲೆ ಮಠದ ಜಂಕ್ಷನ್ ಬಳಿ ಹೈವೇ ಜಲಾವೃತ


ಮೈಸೂರು–ನಂಜನಗೂಡು ನಡುವೆ ಮಲ್ಲನಮೂಲೆ ಮಠ ಜಂಕ್ಷನ್ ಬಳಿ ರಾಷ್ಟ್ರೀಯ ಹೆದ್ದಾರಿ ಜಲಾವೃತಗೊಂಡಿರುವುದು.

ಮೈಸೂರು, ಜು. 19(ಆರ್‌ಕೆ)–ಭಾರೀ ಮಳೆಯಿಂದಾಗಿ ಕಪಿಲಾ ನದಿ ತುಂಬಿ ಹರಿಯುತ್ತಿದ್ದು, ನಂಜನಗೂಡು ಬಳಿ ಮಲ್ಲನಮೂಲೆ ಮಠದ ಜಂಕ್ಷನ್ ಬಳಿ ರಾಷ್ಟ್ರೀಯ ಹೆದ್ದಾರಿ ಜಲಾವೃತವಾಗಿದೆ.

ಪರಿಣಾಮ ಮೈಸೂರು–ಊಟಿ ರಾಷ್ಟ್ರೀಯ ಹೆದ್ದಾರಿ–766ರಲ್ಲಿ ಸುರಕ್ಷತಾ ದೃಷ್ಟಿಯಿಂದ ವಾಹನ ಸಂಚಾರವನ್ನು ಸ್ಥಗಿತಗೊಳಿಸಲಾಗಿದ್ದು, ಬದಲಿ ಮಾರ್ಗ ವ್ಯವಸ್ಥೆ ಮಾಡಲಾಗಿದೆ. ಕಬಿನಿ ಜಲಾಶಯದಿಂದ ಅಧಿಕ ಪ್ರಮಾಣದ ನೀರನ್ನು ಹೊರಕ್ಕೆ ಬಿಡುತ್ತಿರುವುದರಿಂದ ಕಪಿಲಾ ನದಿ ಅಪಾಯದ ಮಟ್ಟ ಮೀರಿ ಹರಿಯುತ್ತಿದೆ.

ಮೈಸೂರು–ನಂಜನಗೂಡು ನಡುವೆ ರಾಷ್ಟ್ರೀಯ ಹೆದ್ದಾರಿಯಲ್ಲಿ ವಾಹನ ಸಂಚಾರ ನಿಷೇಧಿಸಿರುವುದರಿಂದ ಬದಲಿಯಾಗಿ ಕಡಕೊಳ, ತಾಂಡವಪುರ, ಕೆಂಪಿಸಿದ್ದನಹುಂಡಿ, ಹೆಜ್ಜಿಗೆ ಸೇತುವೆ ಮಾರ್ಗ ನಂಜನಗೂಡು ತಲುಪಲು ವ್ಯವಸ್ಥೆ ಕಲ್ಪಿಸಿರುವ ಪೊಲೀಸರು, ಮಲ್ಲನಮೂಲೆ ಮಠದ ಎರಡೂ ಕಡೆ ಬ್ಯಾರಿಕೇಡ್ ಅಳವಡಿಸಿ ವಾಹನ ಸಂಚರಿಸದಂತೆ ಎಚ್ಚರ ವಹಿಸಿದ್ದಾರೆ. ಕಪಿಲಾ ನದಿ ಉಕ್ಕಿ ಹರಿಯುತ್ತಿರುವ ಕಾರಣ, ನಂಜನಗೂಡಿನ ಶ್ರೀ ನಂಜುಂಡೇಶ್ವರ ದೇವಸ್ಥಾನದ ಆವರಣ, ದಾಸೋಹ ಭವನ, ದೇವಸ್ಥಾನದ ಕಚೇರಿ, ಭಕ್ತಿ ಮಾರ್ಗ, ಶ್ರೀ ಪರಶುರಾಮ ದೇವಸ್ಥಾನ, ಶ್ರೀ ಚಾಮುಂಡೇಶ್ವರಿ ದೇವಸ್ಥಾನ, ಶ್ರೀ ಸತ್ಯನಾರಾಯಣ ಸ್ವಾಮಿ ದೇವಸ್ಥಾನ, ಕಾಶಿ ವಿಶ್ವನಾಥ (ಲಿಂಗಭಟ್ಟರ ಗುಡಿ) ದೇವಾಲಯ ಸೇರಿದಂತೆ ಹಲವು ದೇವಸ್ಥಾನಗಳು ಜಲಾವೃತಗೊಂಡಿವೆ. ಜೊತೆಗೆ ನಂಜನಗೂಡಿನ ■ 9ನೇ ಪುಟಕ್ಕೆ


ನಂಜನಗೂಡು ಶ್ರೀಕಂಠೇಶ್ವರ ಸ್ವಾಮಿಯ ಸನ್ನಿಧಿಯವರೆಗೂ ಜಲಾವೃತಗೊಂಡಿರುವುದು.

ಕೊಡಗು ಜಿಲ್ಲೆಯಲ್ಲಿ ಧಾರಾಕಾರ ಮಳೆ ಹಿನ್ನೆಲೆ

ಕೆಆರ್‌ಎಸ್ ಶೀಘ್ರ ಭರ್ತಿ; ಯಾವುದೇ ಕ್ಷಣದಲ್ಲಿ 10ರಿಂದ 25 ಸಾವಿರ ಕ್ಯುಸೆಕ್ ನೀರು ಬಿಡುಗಡೆ

● ಒಳ ಹರಿವು ಹೆಚ್ಚಾದರೆ ಪ್ರಮಾಣ ಏರಿಕೆ
● ತಗ್ಗು ಪ್ರದೇಶದ ಜನರಿಗೆ ಎಚ್ಚರಿಕೆ
● ಸುರಕ್ಷಿತ ಪ್ರದೇಶಕ್ಕೆ ತೆರಳಲು ಸಲಹೆ



ಮೈಸೂರು, ಜು.19(ಬಿಎಲ್‌ಯು)– ಕೊಡಗು ಜಿಲ್ಲೆಯಲ್ಲಿ ಧಾರಾಕಾರ ಮಳೆ ಸುರಿಯುತ್ತಿರುವ ಹಿನ್ನೆಲೆಯಲ್ಲಿ ಮಂಡ್ಯದ ಕೃಷ್ಣರಾಜ ಸಾಗರ ಜಲಾಶಯದಿಂದ ಯಾವುದೇ ಕ್ಷಣದಲ್ಲಿ ಸುಮಾರು 10ರಿಂದ 25 ಸಾವಿರ ಕ್ಯುಸೆಕ್ ನೀರು ಬಿಡಲಾಗುವುದು ಎಂದು ಕಾವೇರಿ ನೀರಾವರಿ ನಿಗಮದ ಕೃಷ್ಣರಾಜ ಸಾಗರ ವಿಭಾಗದ ಕಾರ್ಯಪಾಲಕ ಇಂಜಿನಿಯರ್ ತಿಳಿಸಿದ್ದಾರೆ.

ಕೃಷ್ಣರಾಜ ಸಾಗರದ ಜಲಾನಯನ ಪ್ರದೇಶದಲ್ಲಿ ಭಾರೀ ಮಳೆ ಬೀಳುತ್ತಿರುವ ಕಾರಣ ಕೆಆರ್‌ಎಸ್‌ಗೆ ಹೆಚ್ಚಿನ ನೀರು ಹರಿದು ಬರುತ್ತಿದೆ. ಇದರಿಂದ ಜಲಾಶಯದಿಂದ 10ರಿಂದ 25 ಸಾವಿರ ಕ್ಯುಸೆಕ್ ನೀರನ್ನು ಕಾವೇರಿ ■ 9ನೇ ಪುಟಕ್ಕೆ

19 ದಿನದಲ್ಲಿ 512 ಮಿಲಿ ಮೀಟರ್ ಮಳೆ

ಮೈಸೂರು ಜಿಲ್ಲೆಯಲ್ಲಿ ಈ ಬಾರಿ ವಾಡಿಕೆಗಿಂತ ಅಧಿಕ ಮಳೆ ಬಿದ್ದಿದ್ದು, ಜುಲೈ 1ರಿಂದ 19ರವರೆಗೆ 512 ಮಿಲಿ ಮೀಟರ್ ಮಳೆಯಾಗಿದೆ ಎಂದು ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ನಿಗಾ ಕೇಂದ್ರ ಮಾಹಿತಿ ನೀಡಿದೆ.

ಜುಲೈ 1ರಿಂದ 19ರವರೆಗೆ 376.2 ಮಿಲಿ ಮೀಟರ್ ಮಳೆ ನಿರೀಕ್ಷೆ ಇತ್ತು. ಆದರೆ ಈಗ 19 ದಿನದ ಅವಧಿಯಲ್ಲಿ 512.2 ಮಿಲಿ ಮೀಟರ್ ಮಳೆಯಾಗಿದೆ. ಈ ಮೂಲಕ ವಾಡಿಕೆಗಿಂತ ಶೇಕಡ 36 ರಷ್ಟು ಹೆಚ್ಚು ಮಳೆಯಾಗಿದೆ ಎಂದು ಕೇಂದ್ರ ವಿವರ ನೀಡಿದೆ.

ಕಳೆದ ಒಂದು ವಾರದಿಂದ ಈಚೆಗೆ ಪ್ರತಿ ದಿನ ಜಿಟಿ ಜಿಟಿ ಮಳೆ ಸುರಿಯುತ್ತಿದೆ. ಹವಾಮಾನ ಇಲಾಖೆ ನೀಡಿರುವ ಮಾಹಿತಿ ಪ್ರಕಾರ ಜುಲೈ 23 ರವರೆಗೆ ಇದೇ ಪರಿಸ್ಥಿತಿ ಇರುತ್ತದೆ. ಜುಲೈ 23ರ ನಂತರ ವಾತಾವರಣ ಸಾಮಾನ್ಯ ಸ್ಥಿತಿಗೆ ಮರಳಲಿದೆ.

ರಂಗನತಿಟ್ಟು ಪಕ್ಷಿಧಾಮದ ದೋಣಿ ವಿಹಾರ ತಾತ್ಕಾಲಿಕ ಸ್ಥಗಿತ



ಕೆಆರ್‌ಎಸ್ ಜಲಾಶಯದಿಂದ ಕಾವೇರಿ ನದಿಗೆ ಯಾವುದೇ ಕ್ಷಣದಲ್ಲಿ 10 ರಿಂದ 25 ಸಾವಿರ ಕ್ಯೂಸೆಕ್ ನೀರು ಬಿಡುವ ಹಿನ್ನೆಲೆ ಇಂದಿನಿಂದ ಅಂದರೆ ಜುಲೈ 19ರಿಂದ ಶ್ರೀರಂಗಪಟ್ಟಣದ ರಂಗನತಿಟ್ಟು ಪಕ್ಷಿಧಾಮದ ದೋಣಿ ವಿಹಾರವನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ ಎಂದು ಮೈಸೂರು ವನ್ಯಜೀವಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ತಿಳಿಸಿದ್ದಾರೆ.

ಕಾವೇರಿ ಜಲಾನಯನ ಪ್ರದೇಶದಲ್ಲಿ ಹೆಚ್ಚು ಮಳೆಯಾಗುತ್ತಿರುವ ಕಾರಣ ಕೆಆರ್‌ಎಸ್‌ನಿಂದ ಹೆಚ್ಚುವರಿ ನೀರನ್ನು ನದಿಗೆ ಬಿಡಲಾಗುತ್ತಿದೆ. ಇದರಿಂದ ಕಾವೇರಿ ನದಿ ಉಕ್ಕಿ ಹರಿಯಲಿದೆ.

ನಕ್ಕರೆ ಅದೇ ಸ್ವರ್ಗ

ಪ್ಲಂಬರ್ : ನನ್ನ ಹೊಟ್ಟೆಯ ಆಪರೇಷನ್ ಸರಿಯಾಗಿ ಆಯ್ತಾ ಡಾಕ್ಟರ್
ಡಾಕ್ಟರ್ : ಡೋಂಟ್ ವರಿ ಪರ್ಫೆಕ್ಟ್ ಆಗಿ ಮಾಡಿದ್ದೀನಿ.
ಪ್ಲಂಬರ್ : ತುಂಬಾ ಥ್ಯಾಂಕ್ಸ್... ಒಂದು ಲೀಟರ್ ನೀರು ಕುಡಿಯೋಕೆ ಕೊಡಿ ಡಾಕ್ಟರ್!
ಡಾಕ್ಟರ್ : ಯಾಕಪ್ಪ ನೀರು ನಿಂಗೆ?
ಪ್ಲಂಬರ್ : ಹೊಟ್ಟೆ ಲೀಕೇಜ್ ಆಗುತ್ತಾ ಇಲ್ವಾ ಅಂತ ಚೆಕ್ ಮಾಡಬೇಕು.

ಮೈಸೂರು ಮಿತ್ರ
ಶನಿವಾರ, 20 ಜುಲೈ 2024
ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ..........

ಜೀವನದಲ್ಲಿ ಎದುರಾಗುವ ಕಷ್ಟಗಳನ್ನು ಸವಾಲಾಗಿ ಸ್ವೀಕರಿಸು. ಗೆದ್ದರೆ ಮುಂದೆ ಸಾಗುವೆ. ಸೋತರೆ ಒಳ್ಳೆಯ ಪಾಠ ಕಲಿಯುವೆ.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ತತ್ವದಲ್ಲಿ ಸತ್ವ ಹುಡುಕು, ವ್ಯಥೆಯಲ್ಲಿ ಕಥೆ ಹುಡುಕು.

ನಿಮ್ಮ ಪತ್ರಗಳು

■ ಪರಿಸರ ಸಮತೋಲನ ಕಾಪಾಡುವುದು ಅಗತ್ಯ



ಮಾನ್ಯರೇ,

ಮನುಷ್ಯ, ಬೆಟ್ಟದ ತುದಿಗಳನ್ನು ಸವರಿ, ಭೂತಾಯಿಯ ಒಡಲನ್ನು ಅಗೆದು, ಬಗೆದು ಕೆರೆ–ಕಟ್ಟೆ ರಾಜಕಾಲುವೆಗಳನ್ನು ಸಮಾಧಿ ಮಾಡಿ ಅವುಗಳ ಮೇಲೆ ಮನೆಗಳು, ವಾಣಿಜ್ಯ ಕಟ್ಟಡಗಳು, ಐಷಾರಾಮಿ ಹೋಟೆಲ್‌ಗಳನ್ನು ಕಟ್ಟಿಕೊಂಡರೆ ಮಳೆ ನೀರು ಇನ್ನೆಲ್ಲಿ ಹೋಗುತ್ತದೆ?. ಆದ್ದರಿಂದಲೇ, ಕರ್ನಾಟಕದ ಹಲವಾರು ಜಿಲ್ಲೆಗಳಲ್ಲಿ ನೆರೆ ಬಂದು ಜನರ ಬದುಕು ನೀರು ಪಾಲಾಗುತ್ತಿರುವುದು ಹಾಗೂ ಈ ರೀತಿಯ ಪ್ರವಾಹ, ಭೂಕುಸಿತ ಇನ್ನಿತರ ಪ್ರಾಕೃತಿಕ ವಿಕೋಪದ ಸಮಸ್ಯೆಗಳು ಆಗಾಗ ನಮ್ಮನ್ನು ಕಾಡುತ್ತಲೇ ಇರುವುದು. ಮಹಾಮಳೆ, ಮಳೆಯ ರೌದ್ರ ನರ್ತನ ಹಾಗೆ ಹೀಗೆ ಎಂದು ಬಡಬಡಿಸುವ ನಾವು, ಬೇಸಿಗೆಯಲ್ಲಿ ಹನಿ ನೀರಿಗೂ ಪರದಾಡುವುದನ್ನು ಮರೆತಿದ್ದೇವೆ. ಮಳೆ ಬಂದರೆ ಅದು ಭೂಮಿಯಲ್ಲಿ ಇಂಗುವಂತೆ ಮಾಡಿ, ಕೆರೆ ಕಟ್ಟೆಗಳಲ್ಲಿ ಕಾಲಕಾಲಕ್ಕೆ ಹೂಳೆತ್ತಿಸಿ ಮಳೆ ನೀರನ್ನು ಶೇಖರಣೆ ಮಾಡುವ, ಪರಿಸರವನ್ನು ಸಮತೋಲನದಲ್ಲಿಡುವ ಕಾರ್ಯಕ್ರಮಗಳನ್ನು ರೂಪಿಸಿದರೆ ಈ ರೀತಿಯ ಅವಘಡಗಳು ತಪ್ಪುತ್ತವೆ. ಸಾವು ನೋವುಗಳು ಘಟಿಸಿದ ಮೇಲೆ ಸಾವಿರಾರು ಕೋಟಿ ಪರಿಹಾರ ಬಿಡುಗಡೆ ಮಾಡುವ ಬದಲು, ಅದೇ ಹಣದಲ್ಲಿ ಹೆಚ್ಚು ಹಾನಿಯಾಗುವ ಪ್ರದೇಶಗಳನ್ನು, ಕಟ್ಟಡಗಳನ್ನು ಮೊದಲೇ ಗುರುತಿಸಿ ಅಲ್ಲಿರುವವರನ್ನು ಸೂಕ್ತ ಸ್ಥಳಕ್ಕೆ ಸ್ಥಳಾಂತರಿಸಿ ಆ ಪ್ರದೇಶಗಳಲ್ಲಿ ಕೆರೆ–ಕಟ್ಟೆ ನಿರ್ಮಿಸುವತ್ತ ಸರ್ಕಾರ ಯೋಜನೆ ರೂಪಿಸಬೇಕು. ಇದಕ್ಕೆ ಸಾರ್ವಜನಿಕರು ಸಹ ಕೈ ಜೋಡಿಸಬೇಕಿದೆ.

–ಬಿ.ಗಣೇಶ, ಕೆ.ಜಿ.ಕೊಪ್ಪಲು, ಮೈಸೂರು.

■ ನೋಂದಣಿಯಲ್ಲಿ ಆಧಾರ್ ದೃಢೀಕರಣ ರದ್ದುಪಡಿಸುವಂತೆ ಮನವಿ

ಮಾನ್ಯರೆ,

ಕರ್ನಾಟಕ ರಾಜ್ಯ ಮುದ್ರಾಂಕ ಮತ್ತು ನೋಂದಣಿ ಇಲಾಖೆಯ ದಸ್ತಾವೇಜುಗಳ ನೋಂದಣಿಗೆ ಸಂಬಂಧಪಟ್ಟಂತೆ ಇತ್ತೀಚೆಗೆ ಹಲವಾರು ಬಾರಿ ಸುಧಾರಣೆಗಳನ್ನು ಜಾರಿಗೊಳಿಸಿರುವುದು ಸರಿಯಷ್ಟೆ, ಇತ್ತೀಚಿನ ಸುಧಾರಣೆಗಳ ಅನ್ವಯ ನೋಂದಣಿ ದಸ್ತಾವೇಜುಗಳಿಗೆ ಆಧಾರ್ ದೃಢೀಕರಣ ಶೀಘ್ರದಲ್ಲೇ ಜಾರಿಯಾಗುವುದೆಂದು ತಿಳಿಸಲಾಗಿದ್ದು, ಅದರಂತೆ ಪಕ್ಷಕಾರರ ಹೆಸರನ್ನು ಆಧಾರ್‌ನಲ್ಲಿರುವಂತೆಯೇ ನಮೂದು ಮಾಡಬೇಕೆಂದು ಹಾಗೂ ನಮೂದಾದ ನಂತರದಲ್ಲಿ ಆಧಾರ್‌ನಿಂದ ಬರುವ ಓಟಿಪಿಯನ್ನು ನಮೂದಿಸುವ ಮೂಲಕ ನೋಂದಣಿ ಪ್ರಕ್ರಿಯೆಯನ್ನು ಮುಂದುವರೆಸಬೇಕೆಂದು ಇಲಾಖೆಯು ಮಾರ್ಗಸೂಚಿಯನ್ನು ಹೊರಡಿಸಿರುವುದು ಸರಿಯಷ್ಟೆ. ಮಾನ್ಯ ಸಚಿವರಲ್ಲಿ ನಿವೇದನೆ ಮಾಡಿಕೊಳ್ಳುವುದೇನೆಂದರೆ, ರಾಜ್ಯದ ಹಲವಾರು ಗ್ರಾಮೀಣ ಪ್ರದೇಶದ ಹಾಗೂ ನಗರ ಪ್ರದೇಶದ ಸಾಕಷ್ಟು ಅಕ್ಷರಸ್ಥರು ಹಾಗೂ ಅನಕ್ಷರಸ್ಥರು ತಮ್ಮ ಮೊಬೈಲ್ ಸಂಖ್ಯೆಯನ್ನು ಆಧಾರ್‌ನೊಂದಿಗೆ ಇದುವರೆಗೂ ನೋಂದಣಿ ಮಾಡಿಕೊಂಡಿರುವುದಿಲ್ಲ ಹಾಗೂ ಗ್ರಾಮೀಣ ಪ್ರದೇಶದ ಸಾಕಷ್ಟು ಜನರ ಹೆಸರುಗಳು ಆಧಾರ್‌ನ ಹೆಸರಿನೊಂದಿಗೆ ತಾಳೆ ಇರುವುದಿಲ್ಲ. ಈ ಎಲ್ಲಾ ಕಾರಣಗಳು ದಸ್ತಾವೇಜು ನೋಂದಣಿಗೆ ತೊಡಕನ್ನು ಉಂಟು ಮಾಡುವ ಸಂಭವ ಇರುವ ಕಾರಣ ಮಾನ್ಯ ಸಚಿವರು ನೋಂದಣಿಯಲ್ಲಿ ಆಧಾರ್ ದೃಢೀಕರಣವನ್ನು ಈ ಕೂಡಲೇ ರದ್ದುಪಡಿಸಬೇಕೆಂದು ಈ ಮೂಲಕ ಮನವಿ.

– ನಾಗಭೂಷಣ ಆರಾಧ್ಯ, ವಿದ್ಯಾರಣ್ಯಪುರಂ, ಮೈಸೂರು.


■ ಅಪಾಯಕ್ಕೆ ಆಹ್ವಾನ ನೀಡುತ್ತಿರುವ ಗುಂಡಿಗಳು



ಮಾನ್ಯರೆ,

ಮೈಸೂರಿನ ಪರಸಯ್ಯನಹುಂಡಿ ವರ್ತುಲ ರಸ್ತೆಯಿಂದ ಎಚ್.ಡಿ.ಕೋಟೆಯ ಕಡೆಗೆ ಚಲಿಸುವ ಮಾರ್ಗದ ಪೊಲೀಸ್ ಚೆಕ್ ಪೋಸ್ಟಿನಿಂದ ತುಸು ಅಂತರದಲ್ಲೇ ಇರುವ ತಿರುವಿನಲ್ಲಿ ಹದಗೆಟ್ಟಿರುವ ರಸ್ತೆಯ ಚಿತ್ರವಿದು. ಇಲ್ಲಿರುವ ಗುಂಡಿ ಸುಮಾರು ಒಂದು ಅಡಿ ಆಳವಿದ್ದು ಅಪಘಾತಗಳಿಗೆ ಆಹ್ವಾನಿಸುವಂತಿದೆ. ಮಳೆಯ ನೀರು ತುಂಬಿರುವ ಕಾರಣ ವಾಹನ ಸವಾರರಿಗೆ ಈ ಗುಂಡಿಯ ಆಳವು ತಿಳಿಯುವುದಿಲ್ಲ. ದಿನ ನಿತ್ಯ ನೂರಾರು ವಾಹನಗಳು ಈ ಮಾರ್ಗದಲ್ಲಿ ಸಂಚರಿಸುತ್ತವೆ. ಈ ಸಮಸ್ಯೆ ಅಲ್ಲಿನ ಸ್ಥಳೀಯ ಸಂಬಂಧಪಟ್ಟ ಜನಪ್ರತಿನಿಧಿಗಳಿಗೂ ಹಾಗೂ ಅಧಿಕಾರಿಗಳಿಗೂ ಇನ್ನೂ ಕಣ್ಣಿಗೆ ಕಾಣದಿರುವುದು ದುರಂತವೇ ಸರಿ. ದಯಮಾಡಿ ವಾಹನ ಸವಾರರ ಸುರಕ್ಷತೆ ದೃಷ್ಟಿಯಿಂದ ರಸ್ತೆಯನ್ನು ಆದಷ್ಟು ತುರ್ತಾಗಿ ಸರಿಪಡಿಸಬೇಕೆಂದು ಮನವಿ.

–ಮಂಜೇಶ್ ದೇವಗಳ್ಳಿ, ಮೈಸೂರು



ಕಾರ್ಕಳ ಆನಂದ ಭಟ್
ಮೊ: 7676554198
ಫ್ಲಾಟ್ ನಂ. 204, ಮೂರನೇ ಮಹಡಿ, ಏಕದಂತ ಅಪಾರ್ಟ್‌ಮೆಂಟ್ಸ್, OPP
H.P. ಗ್ಯಾಸ್ ಪೆರ್ವಾಜೆ ರಸ್ತೆ, ಕಾರ್ಕಳ– 574 104, ಉಡುಪಿ ಜಿಲೆ

ದಿಕ್ಕುದೆಸೆ

ಭಾರತೀಯ ಸೇನೆಗೆ ಹೊಸ ಶಕ್ತಿ ನಾಗಾಸ್ತ್ರ–1

ಜಗತ್ತಿನ ಬಹುತೇಕ ದೇಶಗಳು ಅತ್ಯಾಧುನಿಕ ಶಸ್ತ್ರಾಸ್ತ್ರಗಳ ಸಂಶೋಧನೆಯಲ್ಲಿ ತೊಡಗಿವೆ. ಈ ರೀತಿ ಸಂಶೋಧಿಸುವ ಶಸ್ತ್ರಗಳು ದೇಶವನ್ನು ಸುರಕ್ಷಿತಗೊಳಿಸುವುದರೊಂದಿಗೆ ಇವುಗಳ ಮಾರಾಟದಿಂದ ಭಾರೀ ಮೊತ್ತದ ವಿದೇಶಿ ವಿನಿಮಯ ದೊರೆಯುವುದು. ಇದರೊಂದಿಗೆ ಜನಸಾಮಾನ್ಯರ ಬದುಕನ್ನು ಸುಲಭಗೊಳಿಸುವಂತಹ ವಿನ್ಯಾಸದಲ್ಲಿ ಸಂಶೋಧಿಸಲಾಗುತ್ತಿದೆ. ಇತ್ತೀಚಿನ ದಿನಗಳಲ್ಲಿ ವಿಶೇಷ ಸಾಮರ್ಥ್ಯವಿರುವ ಡ್ರೋನ್ ಎಂಬ ಸಾಧನ ವನ್ನು ಜಗತ್ತಿನ ಅನೇಕ ದೇಶಗಳು ಅಭಿವೃದ್ಧಿ ಪಡಿಸುತ್ತಿವೆ. ಭಾರತವು ಅತ್ಯಾಧುನಿಕ ಡ್ರೋನ್‌ಗಳ ಸಂಶೋಧನೆಯಲ್ಲಿ ಹಿಂದೆ ಬಿದ್ದಿಲ್ಲ. ಈಗಾಗಲೇ ಸೇನೆಗೆ ವಿಭಿನ್ನ ಉದ್ದೇಶಗಳಿಗಾಗಿ ನಾನಾ ರೀತಿಯ ಡ್ರೋನ್‌ಗಳನ್ನು ಬಿಡಲಾಗಿದೆ. ಕೆಲವೇ ದಿನಗಳ ಹಿಂದೆ ದೇಶೀಯವಾಗಿ ರೂಪಿಸಲಾಗಿರುವ ನಾಗಾಸ್ತ್ರ–1 ಹೆಸರಿನ ಡ್ರೋನ್ ಅನ್ನು ಭಾರತೀಯ ಸೇನೆಗೆ ಸೇರ್ಪಡೆಗೊಳಿಸಲಾಗಿದೆ. ಇಂತಹ ಬಹುಪಯೋಗಿ ಡ್ರೋನ್‌ಗಳ ಬಗ್ಗೆ ಒಂದಿಷ್ಟು ಮಾಹಿತಿ ಮತ್ತು ಭಾರತವು ಡ್ರೋನ್‌ಗಳ ಅಭಿವೃದ್ಧಿಯಲ್ಲಿ ಮಾಡಿರುವ ಪ್ರಗತಿಯ ಅವಲೋಕನ ಅವಶ್ಯವಿದೆ.



ಡ್ರೋನ್‌ಗಳ ಆರಂಭಿಕ ಹಂತ : ಮಾನವ ತನ್ನ ಸುಖಮಯ ಜೀವನಕ್ಕಾಗಿರುವ ನಾನಾ ಸಾಧನಗಳತ್ತ ಸಹಜವಾಗಿ ಆಕರ್ಷಿತನಾಗುತ್ತಾನೆ. ಆರಂಭದಲ್ಲಿ ನಡೆದಾಡುತ್ತಿದ್ದ ಮಾನವ ಚಕ್ರಗಳಿರುವ ವಾಹನಗಳತ್ತ ಆಕರ್ಷಿತನಾದ. ಮುಂದುವರಿದಂತೆ ವಿಭಿನ್ನ ಇಂಧನಗಳಿಂದ ಚಲಿಸುತ್ತಿದ್ದ ವಾಹನಗಳು ಬರುತ್ತಿದ್ದಂತೆ ಅವುಗಳಿಗೆ ಬೇಡಿಕೆ ನೀಡಿದ. ಇದೇ ರೀತಿ ತೆಪ್ಪಗಳಿಂದ–ದೋಣಿ–ಹಡಗುಗಳನ್ನು ಬಳಸತೊಡಗಿದ. ಈ ಎಲ್ಲವೂ ಚಲಿಸಲು ಅದರಲ್ಲಿ ಮಾನವನಿರಬೇಕಾಗಿದೆ. ಮುಂದಿನ ಹಂತದಲ್ಲಿ ಮನುಷ್ಯ ತಾನಿಲ್ಲದೇ ತನ್ನ ಆದೇಶದಂತೆ ಕಾರ್ಯಾಚರಿಸುವಂತೆ ಆವಿಷ್ಕರಿಸಿದ ಸಾಧನವೇ ಈ ಡ್ರೋನ್. ಡ್ರೋನ್ ಎಂದರೆ ದೂರ ನಿಯಂತ್ರಣದ (ರಿಮೋಟ್ ಕಂಟ್ರೋಲ್) ಮೂಲಕ ಮಾನವನಿಲ್ಲದೆ ಕಾರ್ಯನಿರ್ವಹಿಸುವ ರೊಬೋಟ್. ಈ ಸಾಧನದಲ್ಲಿ ಮನುಷ್ಯನಿರಬೇಕಾಗಿಲ್ಲ. ಆತ ಯಾವುದೋ ಒಂದು ಸ್ಥಾನದಲ್ಲಿದ್ದು ಇದನ್ನು ನಿಯಂತ್ರಿಸಬಹುದು.

ಡ್ರೋನ್‌ಗಳ ಇತಿಹಾಸವನ್ನು, ಉತ್ಪತ್ತಿಯ ಮೊದಲ ಹಂತವನ್ನು ತಿಳಿಯಲು ಸುಮಾರು 175 ವರ್ಷಗಳಷ್ಟು ಹಿಂದಕ್ಕೆ ಹೋಗಬೇಕಾಗಿದೆ. 1849 ರಲ್ಲಿ ಆಸ್ಟ್ರೀಯ ದೇಶವು ವೆನಿಸ್ ನಗರದ ಮೇಲೆ ಮಾನವರಹಿತ ಸುಮಾರು ಮೂವತ್ತು ಕೆಜಿಯಷ್ಟು ಸ್ಫೋಟಕ ತುಂಬಿದ 200ಕ್ಕೂ ಹೆಚ್ಚು ಬೃಹತ್ ಗಾತ್ರದ ಬಲೂನ್‌ಗಳ ದಾಳಿ ನಡೆಸಿತು. ಕೇವಲ ಒಂದೇ ಒಂದು ದಾಳಿ ಯಶಸ್ವಿಯಾಯಿತು. ಉಳಿದೆಲ್ಲ ಬಲೂನ್‌ಗಳು ಗಾಳಿ ಬಂದತ್ತ ಹಾರಾಡಿ ನಿಗದಿತ ಗುರಿಗಳ ಮೇಲೆ ಸ್ಫೋಟಗೊಳ್ಳದೆ ವಿಫಲವಾದವು. ಆದರೆ ಈ ಬಲೂನ್‌ಗಳೇ ಕರಾರುವಕ್ಕಾಗಿ ದಾಳಿ ನಡೆಸುವ ಡ್ರೋನ್ ಸಂಶೋಧನೆಗೆ ಚಾಲನೆ ನೀಡಿತು.

1900ರ ಆರಂಭದಲ್ಲಿ ಆಧುನಿಕ ಎನ್ನಬಹುದಾದ ಕಮರ್ಶಿಯಲ್ ಡ್ರೋನ್‌ಗಳಲ್ಲಿದ್ದ ಕ್ವಾಡ್‌ಕಾಪ್ಟರ್‌ಗಳ ತಂತ್ರಜ್ಞಾನ ಬಳಸಿ 1907ರಲ್ಲಿ ಬ್ರೆಗ್ವೈಟ್ ಸಹೋದರರು ಪ್ರೊ. ಚಾರ್ಲ್ಸ್ ರಿಶೆಟ್ ಜತೆಗೂಡಿ ನಾಲ್ಕು ರನ್ನರ್ ಇರುವ ಹೆಲಿಕಾಪ್ಟರ್ ಮಾದರಿಯ ಡ್ರೋನ್ ಅಭಿವೃದ್ಧಿಪಡಿಸಿದರು. ಇದು ಕೇವಲ 600 ಮೀಟರ್‌ನಷ್ಟು ಎತ್ತರಕ್ಕೆ ಹಾರಾಟ ನಡೆಸಿತು. ಈ ಸಾಧನದ ಅಂಶಿಕ ಯಶಸ್ಸಿನಿಂದ ಅತ್ಯಾಧುನಿಕವಾದ ಡ್ರೋನ್‌ಗಳನ್ನು ಆವಿಷ್ಕರಿಸಬಹುದೆಂಬ ವಿಶ್ವಾಸ ವಿಜ್ಞಾನಿಗಳಲ್ಲಿ ಮೂಡಿತು. 1915–20ರ ಅವಧಿಯಲ್ಲಿ 1916ರಲ್ಲಿ ಆರಂಭವಾದ ಒಂದನೇ ಮಹಾಯುದ್ಧವು ವೈಮಾನಿಕ ಯುದ್ಧ ತಂತ್ರಜ್ಞಾನದಲ್ಲಿ ಭಾರೀ ಪ್ರಮಾಣದ ಆವಿಷ್ಕಾರಕ್ಕೆ ಅವಕಾಶ ನೀಡಿತು. 1916ರಲ್ಲಿ ಬ್ರಿಟನ್ ಮೂಲದ ಆರ್ಕಿಬಾಲ್ಡ್‌ಲ್ಲೊ ಎಂಬ ತಂತ್ರಜ್ಞ ರೇಡಿಯೋ ನಿರ್ದೇಶನದ ಮೂಲಕ ಕಾರ್ಯನಿರ್ವಹಿಸುವ ಪೈಲಟ್‌ರಹಿತ ವಿಮಾನವನ್ನು ಅಭಿವೃದ್ಧಿಪಡಿಸಿದರು. ಇದೇ ಕಾಲಘಟ್ಟದಲ್ಲಿ ಅಮೆರಿಕವು 82 ಕೆ.ಜಿ. ಸ್ಫೋಟಕ ಹೊತ್ತೊಯ್ಯುವ ಸಾಮರ್ಥ್ಯದ ಟ್ರಕ್ ಮೂಲಕ ಸಾಗಾಟ ನಡೆಸಬಹುದಾದ ಏರಿಯಲ್ ಟೋರ್ಪೆಡೊ ಎಂಬ ಹೆಸರಿನ ಡ್ರೋನ್ ನಿರ್ಮಿಸಿತು. 1935–45ರ ಅವಧಿಯಲ್ಲಿ ಡ್ರೋನ್ ಸಂಶೋಧನೆಯಲ್ಲಿ ಭಾರೀ ಬೆಳವಣಿಗೆಗಳಾದವು. 1936ರಲ್ಲಿ ಬ್ರಿಟನ್ ನಿಯಂತ್ರಿತ ಕ್ವೀನ್–ಬಿ–ಟಾರ್ಗೆಟ್ ಡ್ರೋನ್ ಅಭಿವೃದ್ಧಿಪಡಿಸಿತು. ನಿಖರ ಕಾರ್ಯಕ್ಷಮತೆ, ಉತ್ತಮ ನಿರ್ವಹಣೆ ತೋರಿದ ಈ ಡ್ರೋನ್‌ಗಳಿಗೆ ಅಮೆರಿಕ ಸೇನೆ ದೊಡ್ಡ ಪ್ರಮಾಣದಲ್ಲಿ ಬೇಡಿಕೆ ಸಲ್ಲಿಸಿತು. 2ನೇ ಮಹಾಯುದ್ಧದ ಕೊನೆ ಹಂತದಲ್ಲಿ ಜರ್ಮನ್ ಸೇನೆ ವಿ–1, ವಿ–2 ಎಂಬ ಮಾನವರಹಿತ ಏರ್‌ಕ್ರಾಫ್ಟ್‌ಗಳನ್ನು ಕ್ಷಿಪಣಿಯಂತೆ ಬಳಸಿ ಮಿತ್ರ ಸೇನೆಗೆ ಭಾರೀ ನಷ್ಟ ಉಂಟು ಮಾಡಿದವು. ಈ ಏರ್‌ಕ್ರಾಫ್ಟ್‌ಗಳು ಯುದ್ಧಾರಂಭದಲ್ಲಿ ಜರ್ಮನಿಗೆ ಲಭಿಸಿದ್ದರೆ ಪ್ರಾಯಶಃ ಯುದ್ಧದ ಫಲಿತಾಂಶ ಬದಲಾಗುವ ಸಾಧ್ಯತೆ ಇತ್ತು. ಅಮೆರಿಕವು ವಿಯೆಟ್ನಾಂ ಯುದ್ಧದಲ್ಲಿ ಕ್ಯಾಮರಾ ಇರುವ ಡ್ರೋನ್‌ಗಳನ್ನು ನಿಗದಿತ ಗುರಿಗಳ ಮೇಲೆ ಕ್ಷಿಪಣಿ ದಾಳಿಗೆ ಬಳಸಿತು. 1982ರಲ್ಲಿ ಇಸ್ರೇಲ್ ನಿರ್ಮಿತ ಡ್ರೋನ್ ಸಿರಿಯಾ ವಾಯುಪಡೆಯನ್ನು ಹಿಮ್ಮೆಟ್ಟಿಸಿದ ನಂತರ ಜಗತ್ತಿನ ಮಿಲಿಟರಿ ಅಧಿಕಾರಿಗಳು ಡ್ರೋನ್‌ನತ್ತ ಲಕ್ಷ್ಯ ಹರಿಸಿದರು. 1986ರಲ್ಲಿ ಇಸ್ರೇಲ್–ಅಮೆರಿಕ ಜಂಟಿಯಾಗಿ ಪಯೋನೀರ್ ಹೆಸರಿನ ಪತ್ತೆದಾರಿ ಏರ್‌ಕ್ರಾಫ್ಟ್ ಅಭಿವೃದ್ಧಿಪಡಿಸಿದರು. 2000ರಲ್ಲಿ ಅಮೆರಿಕವು ಅಫ್ಘಾನಿಸ್ತಾನದಲ್ಲಿ ಉಗ್ರಗಾಮಿಗಳನ್ನು ಹಿಡಿಯಲು ಕ್ಷಿಪಣಿಗಳನ್ನು ಉಡಾಯಿಸಲು ಮಾನವರಹಿತ ಪ್ರಿಡೇಟರ್ ಡ್ರೋನ್‌ಗಳನ್ನು ಬಳಸಿತು.

2020ರಲ್ಲಿ ನಾಗೊರ್ನಾ–ಕಾರಾಬ್ಲಾಕ್ ಪ್ರದೇಶಕ್ಕಾಗಿ ಅರ್ಮೇನಿಯಾ–ಅಜರ್‌ಬೈಜಾನ್ ಮಧ್ಯೆ ನಡೆದ ಯುದ್ಧದಲ್ಲಿ ಡ್ರೋನ್‌ಗಳು ಮಹತ್ವದ ಪಾತ್ರ ವಹಿಸಿದವು. ಮುನ್ನಡೆ ಸಾಧಿಸಿದ್ದ ಅರ್ಮೇನಿಯಾ ಸೇನೆ ಕೊನೆ ಹಂತದಲ್ಲಿ ಅಜರ್‌ಬೈಜಾನ್ ಸೇನೆಗೆ ದೊರೆತ ಟರ್ಕಿಯ ಡ್ರೋನ್‌ಗಳಿಂದಾಗಿ ಸೋಲನ್ನನುಭವಿಸಿತು. ರಷ್ಯಾ–ಯುಕ್ರೇನ್ ಯುದ್ಧದಲ್ಲಿ ಟರ್ಕಿ ನಿರ್ಮಿತ ಬ್ಯಾರೆಕ್ಟರ್ ಡ್ರೋನ್‌ಗಳನ್ನು ಯುಕ್ರೇನ್ ಸೇನೆ ಬಳಸಿ ರಷ್ಯಾದ ನೂರಾರು ಅತ್ಯಾಧುನಿಕ ಟ್ಯಾಂಕ್‌ಗಳನ್ನು ನಾಶಪಡಿಸಿದೆ. ಯುದ್ಧಗಳಲ್ಲಿ ಡ್ರೋನ್‌ಗಳು ಮಾಡುತ್ತಿರುವ ಮ್ಯಾಜಿಕ್ ಅನ್ನು ಗಮನಿಸಿ ಜಗತ್ತಿನ ಅನೇಕ ದೇಶಗಳು ಅತ್ಯಾಧುನಿಕ ಡ್ರೋನ್‌ಗಳ ಸಂಶೋಧನೆಯಲ್ಲಿ ತೊಡಗಿವೆ. ಈ ವಿಚಾರದಲ್ಲಿ ಭಾರತವು ಸಾಕಷ್ಟು ಮುಂದುವರಿದಿದೆ.

ಜೂನ್ 7ರ ರಾತ್ರಿ ಅಮೃತಸರ ನಗರದ ಹೊರವಲಯದ ಬಾನಿನಲ್ಲಿ ಹಾರಾಡುತ್ತಿದ್ದ ಒಂದು ಅಪರಿಚಿತ ಸಾಧನವನ್ನು ಗಡಿ ಭದ್ರತಾ ಪಡೆಯವರು (ಬಿಎಸ್‌ಎಫ್) ಗಮನಿಸಿ ಕಾರ್ಯಾಚರಣೆ ಆರಂಭಿಸಿದರು. ಗೋಘಾ ಗ್ರಾಮದ ಬಳಿ ಪತನಗೊಂಡ ಈ ಸಾಧನದ ಅವಶೇಷ ಪತ್ತೆ ಹಚ್ಚಿದರು. ಬೇಹುಗಾರಿಕೆ, ಮಾದಕ ದ್ರವ್ಯ ಸಾಗಣೆ ಅಥವಾ ಭಾರತದಲ್ಲಿ ವಿಧ್ವಂಸಕ ಕೃತ್ಯ ನಡೆಸಲು ಶಸ್ತ್ರಾಸ್ತ್ರಗಳ ಪೂರೈಕೆಗಾಗಿ ಅಥವಾ ಇನ್ನಾವ ದುರುದ್ದೇಶದಿಂದ ಇದನ್ನು ಬಿಡಲಾಗಿದೆ ಎಂಬುದು ಇನ್ನಷ್ಟೆ ತನಿಖೆಯಿಂದ ತಿಳಿಯಬೇಕಾಗಿದೆ. ಪ್ರಥಮ ಮಾಹಿತಿಯಂತೆ ಇದು ಪಾಕಿಸ್ತಾನದಿಂದ ಹಾರಿಸಲ್ಪಟ್ಟ ಡ್ರೋನ್ ಆಗಿತ್ತು.

ಕಳೆದ ಹತ್ತು ವರ್ಷಗಳಲ್ಲಿ ಭಾರತವು ತನ್ನ ವಿಭಿನ್ನ ಭೌಗೋಳಿಕ ವಲಯಗಳಲ್ಲಿರುವ ಗಡಿಗಳ ಸುರಕ್ಷೆಗಾಗಿ ವಿಭಿನ್ನ ಮಾದರಿಯ ಉದ್ದೇಶಗಳಿಗಾಗಿ ಡ್ರೋನ್‌ಗಳ ಸಂಶೋಧನೆಯಲ್ಲಿ ಕಾರ್ಯನಿರತವಾಗಿದೆ. ಪೂರ್ವೋತ್ತರ ಗಡಿಯಲ್ಲಿ ಚೀನಿ ಸೇನೆಯ ಚಲನ–ವಲನಗಳನ್ನು ಗಮನಿಸಲು ಗಡಿ ಅತಿಕ್ರಮಣಗಳನ್ನು ಪತ್ತೆ ಹಚ್ಚಲು ಕಾಶ್ಮೀರ ಪ್ರದೇಶದಲ್ಲಿ ಪಾಕಿಸ್ತಾನ ಪ್ರದೇಶದಿಂದ ಭಯೋತ್ಪಾದಕರ ನುಸುಳುವಿಕೆ, ಚಲನವಲನಗಳನ್ನು ಗಮನಿಸಲು 7500 ಕಿ.ಮೀನಷ್ಟು ಸಾಗರ ತಟದಲ್ಲಿ ಅಕ್ರಮವಾಗಿ ಬರುವ ಶಸ್ತ್ರಾಸ್ತ್ರಗಳನ್ನು, ಮಾದಕ ದ್ರವ್ಯಗಳನ್ನು ತಡೆಯಲು ದೇಶದ ಸೇನೆಯ ಮೂರು ವಿಭಾಗಗಳಿಗೆ ವಿಭಿನ್ನ ರೀತಿಯ ಡ್ರೋನ್‌ಗಳ ಅವಶ್ಯಕತೆ ಇದೆ. ಭಾರತೀಯ ಸೇನೆ ಅಭ್ಯಾಸ್, ಘಾತಕ್, ಆರ್ಚರ್, ತ್ರಿನೇತ್ರ, ರುಸ್ತಂ, ಲಕ್ಷ್ಯ ಮೊದಲಾದ ನಾಮ ವಿಶೇಷಗಳಿಗನುಗುಣವಾಗಿ ವಿಭಿನ್ನ ರೀತಿ ಕಾರ್ಯ ನಿರ್ವಹಿಸುವ ಡ್ರೋನ್‌ಗಳನ್ನು ಸಾಲು ಸಾಲಾಗಿ ಮೂರು ಸೇನಾ ವಿಭಾಗಗಳಿಗೆ ನೀಡಲಾಗಿದೆ. ಭಾರತೀಯ ಸೇನೆ ತನಗೆ ಅವಶ್ಯವಿರುವ ಶಸ್ತ್ರಾಸ್ತ್ರಗಳನ್ನು ದೇಶದಲ್ಲೇ ತಯಾರಿಸುವ ಉದ್ದೇಶದಿಂದ ಪ್ರಯತ್ನಶೀಲವಾಗಿದೆ. ಈ ಉದ್ದೇಶಕ್ಕನುಗುಣವಾಗಿ ಕಳೆದ ತಿಂಗಳು ದೇಶೀಯವಾಗಿ ನಿರ್ಮಿಸಲಾಗಿರುವ ಅತ್ಯಾಧುನಿಕ ನಾಗಾಸ್ತ್ರ–1 ಹೆಸರಿನ ಆತ್ಮಹತ್ಯಾ ಡ್ರೋನ್ ಸೇನೆಗೆ ಸೇರ್ಪಡೆಯಾಗಿದೆ.

ಸೇನೆಗೆ ಸೇರ್ಪಡೆಗೊಂಡ ನಾಗಾಸ್ತ್ರ–1: ಗಡಿಯಲ್ಲಿ ಹೆಚ್ಚುತ್ತಿರುವ ಚೀನಾ ಹಾಗೂ ಪಾಕಿಸ್ತಾನಗಳ ಉಪದ್ರವವನ್ನು ತಡೆಗಟ್ಟಲು ಭಾರತೀಯ ಸೇನೆಗೆ ಆಧುನಿಕ ಕಿಲ್ಲರ್ ಶಸ್ತ್ರ ಸೇರ್ಪಡೆಯಾಗಿದೆ. ಪ್ರಥಮ ಬಾರಿಗೆ ನಾಗಪುರದ ಸೋಲಾರ್ ಇಂಡಸ್ಟ್ರೀಸ್‌ನಿಂದ ದೇಶೀಯವಾಗಿಯೇ ಅಭಿವೃದ್ಧಿಪಡಿಸಿದ ನಾಗಾಸ್ತ್ರ–1 ಆತ್ಮಹತ್ಯಾ ಡ್ರೋನ್ ಅನ್ನು ಸೇನೆಗೆ ಪೂರೈಸಲಾಗಿದೆ. ಭಾರತೀಯ ಸೇನೆಯು 300 ಕೋಟಿ ರೂ. ಮೌಲ್ಯದ 480 ಡ್ರೋನ್‌ಗಳನ್ನು ಪೂರೈಸಲು ಈ ಸಂಸ್ಥೆಗೆ ಬೇಡಿಕೆ ಸಲ್ಲಿಸಿದೆ. ಈಗಾಗಲೇ ಸೋಲಾರ್ ಇಂಡಸ್ಟ್ರೀಸ್ ಮೊದಲ ಕಂತಿನಲ್ಲಿ 120 ನಾಗಾಸ್ತ್ರ–1 ಡ್ರೋನ್‌ಗಳನ್ನು ಸೇನೆಗೆ ಪಹಲ್‌ಗಾಂವ್‌ನಲ್ಲಿ ಹಸ್ತಾಂತರಿಸಿದೆ ಎಂದು ಹೇಳಲಾಗುತ್ತಿದೆ. ಇನ್ನುಳಿದ ಡ್ರೋನ್‌ಗಳನ್ನು ಇದರ ಸಹ ಸಂಸ್ಥೆ ಎಕಾನಾಮಿಕ್ ಎಕ್ಸ್‌ಪ್ಲೋಸಿವ್ಸ್ ಪೂರೈಸಲಿದೆ. ಬೆಂಗಳೂರಿನ ಝಡ್–ಲೋಷನ್ ಅಟಾನೊಮಸ್ ಸಿಸ್ಟಮ್ಸ್ ಪ್ರೈವೇಟ್ ಲಿಮಿಟೆಡ್ ಕಂಪನಿಯು ನಾಗಾಸ್ತ್ರ–1 ತಯಾರಿಸುವಲ್ಲಿ ಸಹಯೋಗ ನೀಡಿರುವುದು ಕನ್ನಡಿಗರಿಗೆ ಗೌರವದ ಸಂಗತಿಯಾಗಿದೆ.

ನಾಗಾಸ್ತ್ರದ ವಿಶೇಷತೆ–ಕ್ಷಮತೆ: ನಾಗಾಸ್ತ್ರ–1ರಲ್ಲಿ ಶೇ.75ರಷ್ಟು ದೇಶೀಯ ಉಪಕರಣ, ಬಿಡಿ ಭಾಗಗಳನ್ನು ಬಳಸಲಾಗಿದೆ. ಈ ಮೂಲಕ ರಕ್ಷಣಾ ಕ್ಷೇತ್ರದಲ್ಲಿ ಮೇಕ್–ಇನ್–ಇಂಡಿಯಾ, ಆತ್ಮನಿರ್ಭರ ಭಾರತ ಯೋಜನೆಗಳಿಗೆ ಬಲ ನೀಡಿದಂತಾಗಿದೆ ಎಂದು ರಕ್ಷಣಾ ತಜ್ಞರು ವಿಶ್ಲೇಷಣೆ ಮಾಡಿದ್ದಾರೆ. ಜಿಪಿಎಸ್ ಆಧಾರಿತ ನಿಖರ ದಾಳಿ ಸಾಮರ್ಥ್ಯವಿರುವ ಅತ್ಯಾಧುನಿಕ ತಂತ್ರಜ್ಞಾನವನ್ನು ಬಳಸಿ ನಾಗಾಸ್ತ್ರ–1 ಡ್ರೋನ್‌ಗಳನ್ನು ಅಭಿವೃದ್ಧಿಪಡಿಸಲಾಗಿದೆ. 9 ಕೆಜಿ ಭಾರವಿದ್ದು ಒಂದು ಕೆಜಿಗಿಂತ ಹೆಚ್ಚಿನ ಸ್ಫೋಟಕ ಸಿಡಿತಲೆ ಹೊತ್ತೊಯ್ಯುವ ಸಾಮರ್ಥ್ಯವಿರುವ ಈ ಡ್ರೋನ್‌ಗಳನ್ನು ಸೈನಿಕರು ಹೊತ್ತೊಯ್ಯಬಹುದು. ಇದರ ನಿಯಂತ್ರಕ, ಲಾಂಚರ್ ಎಲ್ಲವೂ ಸೇರಿ ಮೂವತ್ತು ಕೆ.ಜಿಯಷ್ಟು ತೂಕವಿದೆ. ಈ ಡ್ರೋನ್‌ಗಳನ್ನು ಪ್ಯಾರಾಚೂಟ್ ಬಳಸಿ ನಿಗದಿತ ಪ್ರದೇಶದಲ್ಲಿ ಇಳಿಸಬಹುದು. ಹಗಲು–ರಾತ್ರಿ ಬಳಸಬಹುದಾದ ಕಣ್ಗಾವಲು ಕ್ಯಾಮರಾ ಹೊಂದಿದ್ದು, ರಾತ್ರಿ ಕೂಡ ಶತ್ರುಗಳ ಚಲನವಲನಗಳ ಮೇಲೆ ನಿಗಾ ಇರಿಸುವ, ಶತ್ರು ಸೇನಾ ನೆಲೆಗಳ, ಉಗ್ರರ ಲಾಂಚ್ ಪ್ಯಾಡ್‌ಗಳನ್ನು ಹೊಡೆದುರುಳಿಸುವ ಸಾಮರ್ಥ್ಯ ಹೊಂದಿವೆ. ಶತ್ರುಗಳ ರಹಸ್ಯ ನೆಲೆಗಳನ್ನು ಪತ್ತೆ ಹಚ್ಚಿ ಉಡಾಯಿಸುವ ಸಾಮರ್ಥ್ಯ ಈ ನಾಗಾಸ್ತ್ರ–1 ಡ್ರೋನ್‌ಗಿದೆ. ಜಿಪಿಎಸ್ ಆಧಾರಿತ ಡ್ರೋನ್‌ಗಳಾಗಿರುವ ಈ ನಾಗಾಸ್ತ್ರವು ತನ್ನ ಕ್ಯಾಮರಾಗಳನ್ನು ಬಳಸಿ ಶತ್ರುಗಳ ಗುಪ್ತ ನೆಲೆಗಳ ಮೇಲೆ ನಿಖರವಾಗಿ ಎರಡು ಮೀಟರ್ ದೂರದಿಂದ ಅಪ್ಪಳಿಸಿ ಸ್ಫೋಟಗೊಂಡು ನಾಶಪಡಿಸುತ್ತದೆ. ಸುಮಾರು ಒಂದು ಗಂಟೆ ಕಾಲ 4500 ಮೀ ಎತ್ತರದಿಂದ ಹಾರಾಟ ನಡೆಸುವ ಸಾಮರ್ಥ್ಯ ಹೊಂದಿವೆ. ದೂರ ನಿಯಂತ್ರಣ ಮಾದರಿಯಲ್ಲಿ (Remote control mode) 15 ಕಿ.ಮೀ. ಹಾಗೂ ಸ್ವಯಂಚಾಲಿತ ಹಾರಾಟ ಸ್ಥಿತಿಯಲ್ಲಿ (autonomous mode) ಮೂವತ್ತು ಕಿ.ಮೀ. ವರೆಗೆ ಹಾರಾಟ ನಡೆಸಲಿವೆ. ಕನಿಷ್ಠ ಶಬ್ದದಿಂದಾಗಿ ಇನ್ನೂರು ಮೀ. ನಷ್ಟು ಎತ್ತರದಲ್ಲಿ ಹಾರಾಟ ನಡೆಸುವ ಈ ಡ್ರೋನ್‌ಗಳನ್ನು ನೆಲದಿಂದ ಪತ್ತೆ ಹಚ್ಚಲು ಸಾಧ್ಯವಿಲ್ಲ. ಅತ್ಯಾಧುನಿಕವಾಗಿರುವ ಈ ನಾಗಾಸ್ತ್ರ–1 ಡ್ರೋನ್ ದೊರೆತಿರುವುದರಿಂದ ಭಾರತೀಯ ಸೇನೆಗೆ ಭೀಮ ಬಲ ಬಂದಂತಾಗಿದೆ. ಈ ಡ್ರೋನ್‌ಗಳ ಅಳವಡಿಕೆಯಿಂದ ಚೀನಾ–ಪಾಕಿಸ್ತಾನಗಳು ಗಡಿಯಲ್ಲಿ ಉಪಟಳ ಕೊಡುವ ಬಗ್ಗೆ ಮರುಚಿಂತನೆ ನಡೆಸಬೇಕಾದ ಸ್ಥಿತಿ ನಿರ್ಮಾಣವಾಗಿದೆ. ಆಧುನಿಕ ಜಗತ್ತಿನಲ್ಲಿ ಯುದ್ಧಗಳನ್ನು ಗೆಲ್ಲಲು ಸೇನೆಗಳಿಗೆ ಶಿಸ್ತು, ಶೌರ್ಯ ಮತ್ತು ತಂತ್ರಗಾರಿಕೆಯೊಂದಿಗೆ ಅತ್ಯಾಧುನಿಕ ಶಸ್ತ್ರಾಸ್ತ್ರಗಳ ಅವಶ್ಯಕತೆಯೂ ಇದೆ. ಈ ಹಿನ್ನೆಲೆಯಲ್ಲಿ ನಾಗಾಸ್ತ್ರ–1 ಡ್ರೋನ್‌ಗಳು ಭಾರತೀಯ ಸೇನೆಗೆ ಮಹತ್ವದ ಕೊಡುಗೆಯಾಗಿದೆ. ಈ ಮಾದರಿಯ ಅತ್ಯಾಧುನಿಕ ಡ್ರೋನ್‌ಗಳು ಟರ್ಕಿ, ಸಿರಿಯಾ, ರಷ್ಯಾ, ಉಕ್ರೇನ್, ಸೌದಿ ಅರೇಬಿಯಾ, ಆರ್ಮೇನಿಯಾ, ಅಜರ್‌ಬೈಜಾನ್ ಮೊದಲಾದ ಕೆಲವೇ ದೇಶಗಳ ಸೇನೆಗಳಲ್ಲಿವೆ.

> “ ಕಳೆದ ಹತ್ತು ವರ್ಷಗಳಲ್ಲಿ ಭಾರತವು ತನ್ನ ವಿಭಿನ್ನ ಭೌಗೋಳಿಕ ವಲಯಗಳಲ್ಲಿರುವ ಗಡಿಗಳ ಸುರಕ್ಷೆಗಾಗಿ ವಿಭಿನ್ನ ಮಾದರಿಯ ಉದ್ದೇಶಗಳಿಗಾಗಿ ಡ್ರೋನ್‌ಗಳ ಸಂಶೋಧನೆಯಲ್ಲಿ ಕಾರ್ಯನಿರತವಾಗಿದೆ. ಪೂರ್ವೋತ್ತರ ಗಡಿಯಲ್ಲಿ ಚೀನಿ ಸೇನೆಯ ಚಲವ–ವಲನಗಳನ್ನು ಗಮನಿಸಲು ಗಡಿ ಅತಿಕ್ರಮಣಗಳನ್ನು ಪತ್ತೆ ಹಚ್ಚಲು ಕಾಶ್ಮೀರ ಪ್ರದೇಶದಲ್ಲಿ ಪಾಕಿಸ್ತಾನ ಪ್ರದೇಶದಿಂದ ಭಯೋತ್ಪಾದಕರ ನುಸುಳುವಿಕೆ, ಚಲನವಲನಗಳನ್ನು ಗಮನಿಸಲು 7500 ಕಿ.ಮೀನಷ್ಟು ಸಾಗರ ತಟದಲ್ಲಿ ಅಕ್ರಮವಾಗಿ ಬರುವ ಶಸ್ತ್ರಾಸ್ತ್ರಗಳನ್ನು, ಮಾದಕ ದ್ರವ್ಯಗಳನ್ನು ತಡೆಯಲು ದೇಶದ ಸೇನೆಯ ಮೂರು ವಿಭಾಗಗಳಿಗೆ ವಿಭಿನ್ನ ರೀತಿಯ ಡ್ರೋನ್‌ಗಳ ಅವಶ್ಯಕತೆ ಇದೆ. ಭಾರತೀಯ ಸೇನೆ ಅಭ್ಯಾಸ್, ಘಾತಕ್, ಆರ್ಚರ್, ತ್ರಿನೇತ್ರ, ರುಸ್ತಂ, ಲಕ್ಷ್ಯ ಮೊದಲಾದ ನಾಮವಿಶೇಷಗಳಿಗನುಗುಣವಾಗಿ ವಿಭಿನ್ನ ಕಾರ್ಯನಿರ್ವಹಿಸುವ ಡ್ರೋನ್‌ಗಳನ್ನು ಸಾಲು ಸಾಲಾಗಿ ಮೂರು ಸೇನಾ ವಿಭಾಗಗಳಿಗೆ ನೀಡಲಾಗಿದೆ.

ಪೇಜಾವರ ಶ್ರೀ ವಿಶ್ವ ಪ್ರಸನ್ನ ತೀರ್ಥರು, ಪಲಿಮಾರು ಶ್ರೀ ವಿದ್ಯಾಧೀಶ ತೀರ್ಥರ ಅರವತ್ತು ಸಂವತ್ಸರ ಸಂದರ್ಭದಲ್ಲಿ

ಮೈಸೂರು ವಿಭಾಗದಲ್ಲಿ ಗೋಶಾಲೆ ಸ್ಥಾಪನೆ; 12.5 ಎಕರೆ ಜಾಗದ ದಾನಪತ್ರ ಅರ್ಪಿಸಿದ ಭಕ್ತರು

ಮೈಸೂರು, ಜು.19(ಎಸ್‌ಪಿಎನ್)– ಅರವತ್ತು ಸಂವತ್ಸರ ಪೂರೈಸಿದ ಉಡುಪಿಯ ಶ್ರೀ ಪೇಜಾವರ ಅಧೋಕ್ಷಜ ಮಠದ ಶ್ರೀ ವಿಶ್ವ ಪ್ರಸನ್ನತೀರ್ಥ ಶ್ರೀಪಾದಂಗಳು ಹಾಗೂ ಪಲಿಮಾರು ಮಠದ ಶ್ರೀ ವಿದ್ಯಾಧೀಶತೀರ್ಥ ಶ್ರೀಪಾದಂಗಳವರಿಗೆ ಮೈಸೂರಿನ ಭಕ್ತವೃಂದ ಪುಷ್ಪಾರ್ಚನೆ ಮಾಡಿ, ತಮ್ಮ ಭಕ್ತಿಯ ಪರಕಾಷ್ಠೆ ಮೆರೆದರು.

ಮೈಸೂರು ಸಾಹುಕಾರ್ ಚನ್ನಯ್ಯ ರಸ್ತೆಯಲ್ಲಿರುವ ಶ್ರೀ ಕೃಷ್ಣಧಾಮ ಆವರಣದಲ್ಲಿ ಶ್ರೀ ಕೃಷ್ಣ ಟ್ರಸ್ಟ್ ಹಾಗೂ ಶ್ರೀ ಕೃಷ್ಣಮಿತ್ರ ಮಂಡಳಿ ಸಹಯೋಗದೊಂದಿಗೆ ಶುಕ್ರವಾರ ಆಯೋಜಿಸಿದ್ದ ಗುರುವಂದನಾ ಕಾರ್ಯಕ್ರಮದಲ್ಲಿ ಗುರು ವಂದನೆ ಸಲ್ಲಿಸಿದರು.



ಶ್ರೀ ಕೃಷ್ಣಧಾಮ ಆವರಣದಲ್ಲಿ ಶ್ರೀ ಕೃಷ್ಣ ಟ್ರಸ್ಟ್ ಹಾಗೂ ಶ್ರೀ ಕೃಷ್ಣಮಿತ್ರ ಮಂಡಳಿ ಸಹಯೋಗದೊಂದಿಗೆ ಶುಕ್ರವಾರ ಆಯೋಜಿಸಿದ್ದ ಗುರುವಂದನಾ ಕಾರ್ಯಕ್ರಮದಲ್ಲಿ ಅರವತ್ತು ಸಂವತ್ಸರ ಪೂರೈಸಿದ ಉಡುಪಿಯ ಶ್ರೀ ಪೇಜಾವರ ಅಧೋಕ್ಷಜ ಮಠದ ಶ್ರೀ ವಿಶ್ವ ಪ್ರಸನ್ನತೀರ್ಥ ಶ್ರೀಪಾದಂಗಳು ಹಾಗೂ ಪಲಿಮಾರು ಮಠದ ಶ್ರೀ ವಿದ್ಯಾಧೀಶತೀರ್ಥ ಶ್ರೀಪಾದಂಗಳವರಿಗೆ ಮೈಸೂರಿನ ಭಕ್ತವೃಂದ ಪುಷ್ಪಾರ್ಚನೆ ಮಾಡಿ, ಗುರುವಂದನೆ ಸಲ್ಲಿಸಿದರು.

ತುಳು ಶಿವಳ್ಳಿ ಮಾಧ್ವ ಮಹಾಮಂಡಲದ ಎಂ.ಕೆಪುರಾಣಿಕ್, ಮೈಸೂರು ಜಿಲ್ಲಾ ಹೋಟೆಲ್ ಅಸೋಸಿಯೇಷನ್ ಅಧ್ಯಕ್ಷ ಸಿ.ನಾರಾಯಣ ಗೌಡ, ಹೋಟೆಲ್ ಉದ್ಯಮಿ ರವಿಶಾಸ್ತ್ರಿ, ರೋಟರಿ ಮೈಸೂರು ಸೆಂಟ್ರಲ್‌ನ ಸುಬ್ರಹ್ಮಣ್ಯ ಹೆಗ್ಗಡೆ, ದಕ್ಷಿಣ ಕನ್ನಡ ಜಿಲ್ಲಾ ಸಂಘ, ಚಿತ್ರವನ ಬ್ರಾಹ್ಮಣ ಸಂಘದ ರವೀಂದ್ರ, ಅಡುಗೆ ಕೆಲಸಗಾರರ ಸಂಘದ ರಾಘವೇಂದ್ರ ಹೆಬ್ಬಾರ್, ಅಖಿಲ ಕರ್ನಾಟಕ ಬ್ರಾಹ್ಮಣ ಮಾಧ್ವ ಮಹಾಸಭಾದ ಪಿ.ವಿ.ನಾಗರಾಜು, ಶ್ರೀರಾಮಧಾಮದ ಸಿ.ಪಿ.ಜಯರಾಂ ಭಟ್, ತುಳು ಶಿವಳ್ಳಿ ಸೌಹಾರ್ದ ಸಂಘದ ವಾಸುದೇವ್ ರಾವ್, ವಿಪ್ರ ಜಾಗೃತಿ ವೇದಿಕೆಯ ಪದಾಧಿಕಾರಿಗಳು, ಭಾರತೀಯ ಸ್ಟೇಟ್ ಬ್ಯಾಂಕ್(ಎಸ್‌ಬಿಐ) ಪ್ರಾದೇಶಿಕ ವಿಭಾಗದ ಪರವಾಗಿ ಹಿರಿಯ ಅಧಿಕಾರಿ ಶರತ್ ಮತ್ತು ಸೌಮ್ಯ ದಂಪತಿ, ದಕ್ಷಿಣ ಕನ್ನಡ ಮತ್ತು ಕರಾವಳಿ ಜಿಲ್ಲಾ ಸಂಘಗಳ ಒಕ್ಕೂಟ, ಹವ್ಯಕ ಸಂಘ, ಉತ್ತರ ಕನ್ನಡ ಜಿಲ್ಲಾ ಸಾಂಸ್ಕೃತಿಕ ಸಂಘ, ಮೈಸೂರು ಹೋಟೆಲ್ ಮಾಲೀಕರ ಕೋ–ಆಪರೇಟಿವ್ ಸೊಸೈಟಿಯ ಪದಾಧಿಕಾರಿಗಳು, ಶಾರದಾದೇವಿ ನಗರದ ಮುರಳೀಧರ್ ಹಾಗೂ ಭಾಗ್ಯಮ್ಮ ದಂಪತಿ ಸೇರಿದಂತೆ ಅನೇಕ ಭಕ್ತವೃಂದ ಯತಿವರೇಣ್ಯರಿಗೆ ತಮ್ಮ ಭಕ್ತಿ ಸಮರ್ಪಿಸಿದರು.

ಈ ವೇಳೆ ಉಡುಪಿಯ ಶ್ರೀ ಪೇಜಾವರ ಅಧೋಕ್ಷಜ ಮಠದ ಶ್ರೀ ವಿಶ್ವ ಪ್ರಸನ್ನತೀರ್ಥ ಶ್ರೀಪಾದಂಗಳು ಹಾಗೂ ಪಲಿಮಾರು ಮಠದ ಶ್ರೀ ವಿದ್ಯಾಧೀಶತೀರ್ಥ ಶ್ರೀಪಾದಂಗಳಂವರ ಅರವತ್ತನೇ ಸಂವತ್ಸರ ಪೂರೈಸಿದ ಹಿನ್ನೆಲೆಯಲ್ಲಿ ಮೈಸೂರು ವಿಭಾಗದಲ್ಲಿ 12.5 ಎಕರೆ ಪ್ರದೇಶದಲ್ಲಿ ಸುಸಜ್ಜಿತ ಗೋಶಾಲೆ ನಿರ್ಮಿಸಲು ಶಕುಂತಲಾ ರತ್ನ ಕುಮಾರ್ ದಂಪತಿ ಜಾಗದ ದಾನಪತ್ರ ಹಸ್ತಾಂತರಿಸಿದರು.

ಭಕ್ತವೃಂದದ ಅಭಿನಂದನೆ ಸ್ವೀಕರಿಸಿ ಮಾತನಾಡಿದ ಉಡುಪಿ ಪೇಜಾವರ ಮಠದ ಶ್ರೀ ವಿಶ್ವ ಪ್ರಸನ್ನತೀರ್ಥ ಶ್ರೀಪಾದಂಗಳು, ಮೈಸೂರಿನಲ್ಲಿ ಎರಡು ಬಾರಿ ಚಾತುರ್ಮಾಸ್ಯವನ್ನು ಹಮ್ಮಿಕೊಂಡಿದ್ದೆ. ಆ ಸಂದರ್ಭದಲ್ಲಿ ಮೈಸೂರಿನ ಭಕ್ತಾದಿಗಳು ಅಪೂರ್ವ ಬೆಂಬಲ ನೀಡಿ, ಭಗವಾನ್ ಶ್ರೀ ಕೃಷ್ಣ ಪರಮಾತ್ಮ ಸೇವೆಗೆ ಅನುವು ಮಾಡಿಕೊಟ್ಟರಲ್ಲದೆ, ಚಾತುರ್ಮಾಸ್ಯಕ್ಕೆ ಬೇಕಾದ ಎಲ್ಲಾ ಅನುಕೂಲ ಮಾಡಿಕೊಟ್ಟಿರುವುದನ್ನು ನಾನೆಂದಿಗೂ ಮರೆಯುವುದಿಲ್ಲ. ಬೇರೆ ಜಿಲ್ಲೆಗಳಲ್ಲಿ ಚಾತುರ್ಮಾಸ್ಯ ಹಮ್ಮಿಕೊಂಡಾಗ ಸ್ವಲ್ಪ ಅಡೆತಡೆಗಳು ಬರುತ್ತಿದ್ದವು. ಆದರೆ, ಮೈಸೂರಿನಲ್ಲಿ ಶ್ರೀಕೃಷ್ಣನ ಸೇವೆಗೆ ಬಂದಾಗ ಯಾವುದೇ ಅಡೆತಡೆಗೆ ಅವಕಾಶ ಇಲ್ಲದಂತೆ ಇಲ್ಲಿನ ಭಕ್ತರು ನೋಡಿಕೊಂಡಿದ್ದಾರೆ ಎಂದು ಪ್ರಶಂಸಿಸಿದರು.

ನನ್ನ ಗುರುಗಳಾದ ಶ್ರೀ ವಿಶ್ವೇಶ ತೀರ್ಥ ಶ್ರೀಪಾದಂಗಳವರ ಜೀವಿತಾವಧಿಯಲ್ಲಿ ಮೈಸೂರಿನಲ್ಲಿ ಚಾತುರ್ಮಾಸ್ಯ ಹಮ್ಮಿಕೊಂಡಾಗ ನಾನು ಆ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗಿಯಾಗಿದ್ದೆ. ಆ ನೆನಪುಗಳು ಇನ್ನು ನನ್ನ ಕಣ್ಮುಂದೆ ಇವೆ ಎಂದ ಶ್ರೀಪಾದಂಗಳವರು, ದಕ್ಷಿಣ ಕನ್ನಡ ಜಿಲ್ಲೆಯಿಂದ ಮೈಸೂರಿಗೆ ಬಂದು ನೆಲೆಸಿರುವ ಅನೇಕ ಉಡುಪಿ ಮಠದ ಭಕ್ತರು ಹಾಗೂ ಕರಾವಳಿಯ ಜಿಲ್ಲೆಅನೇಕ ಕುಟುಂಬಗಳು, ಅವರೆಲ್ಲಿದ್ದೂ ಆಗಾಗ ಉಡುಪಿ ಶ್ರೀಕೃಷ್ಣನ ಸೇವೆಗೆ ಬರುತ್ತಾರೆ. ಅವರ ಸೇವೆ ಶ್ರೀಕೃಷ್ಣ ಪರಮಾತ್ಮನಿಗೆ ತಲುಪುತ್ತದೆ ಎಂದು ಆಶೀರ್ವದಿಸಿದರು.

ಇದಕ್ಕೂ ಮುನ್ನ ವಿದ್ವಾನ್ ವಿಜಯೇಂದ್ರಾಚಾರ್ಯ ಅಭಿನಂದನಾ ನುಡಿಗಳಾಡುತ್ತ, ಉಡುಪಿಯ ಶ್ರೀ ಪೇಜಾವರ ಅಧೋಕ್ಷಜ ಮಠದ ಶ್ರೀ ವಿಶ್ವ ಪ್ರಸನ್ನತೀರ್ಥ ಶ್ರೀಪಾದಂಗಳು ಹಾಗೂ ಪಲಿಮಾರು ಮಠದ ಶ್ರೀ ವಿದ್ಯಾಧೀಶತೀರ್ಥ ಶ್ರೀಪಾದಂಗಳಂವರ 60ನೇ ಸಂವತ್ಸರ ಕಾರ್ಯಕ್ರಮವನ್ನು ಮೈಸೂರಿನ ಶ್ರೀ ಕೃಷ್ಣಧಾಮದಲ್ಲಿ ಹಮ್ಮಿಕೊಂಡಿರುವುದು ಸಂತೋಷದ ಸಂಗತಿ ಎಂದರು.

ಈ ವೇಳೆ ಶ್ರೀ ಕೃಷ್ಣ ಟ್ರಸ್ಟ್ ಉಪಾಧ್ಯಕ್ಷ ಪಿ.ಎಸ್.ಚಂದ್ರಶೇಖರ್, ಗೌರವ ಕಾರ್ಯದರ್ಶಿ ಕೆ.ವಿ.ಶ್ರೀಧರ್, ಸಹ ಕಾರ್ಯದರ್ಶಿ ಕಿರಣ್ ತಂತ್ರಿ ಉಪಸ್ಥಿತರಿದ್ದರು. ಈ ವೇಳೆ ವಿದುಷಿ ದಿವ್ಯಾ ಗಿರಿಧರ್, ವಿದ್ವಾನ್ ಅನಂತ್ ರಾಜ್ ಮಿಸ್ತ್ರಿ ತಂಡದವರಿಂದ 'ದಾಸ ವೈಭವ' ಗಾನಸುಧೆ ಭಕ್ತರ ಮನಸೆಳೆಯಿತು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ಆಷಾಡ ಮಾಸದ ಎರಡನೇ ಶುಕ್ರವಾರ

ನಾಡದೇವಿ ಚಾಮುಂಡೇಶ್ವರಿ ದರ್ಶನ ಪಡೆದ ಸಹಸ್ರಾರು ಭಕ್ತರು

●ದೇವಿಗೆ ಶಾಖಾಂಬರಿ ಅಲಂಕಾರ ●ದೇವಾಲಯ ವಿದೇಶಿ ಫಲ-ಪುಷ್ಪದಿಂದ ಅಲಂಕಾರ



ಆಷಾಡ ಮಾಸದ ಎರಡನೇ ಶುಕ್ರವಾರ ಚಾಮುಂಡಿಬೆಟ್ಟದಲ್ಲಿ ನಡೆದ ವಿಶೇಷ ಪೂಜಾ ಮಹೋತ್ಸವಕ್ಕೆ ಸಾಕ್ಷಿಯಾದ ಭಕ್ತ ಸಮೂಹ.

ಮೈಸೂರು,ಜು.19(ಎಂಟಿವೈ)- ಆಷಾಡ ಮಾಸದ ಎರಡನೇ ಶುಕ್ರವಾರ ನಾಡದೇವಿ ಚಾಮುಂಡೇಶ್ವರಿಗೆ ಶಾಖಾಂಬರಿ ಅಲಂಕಾರದೊಂದಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು. ಮಳೆ ಹಾಗೂ ಕೊರೆಯುವ ಚಳಿಯಲ್ಲೂ ಸಹಸ್ರಾರು ಭಕ್ತರು ತಾಯಿಯ ದರ್ಶನ ಪಡೆದು ಪುನೀತರಾದರು.

ಮೂರ್ನಾಲ್ಕು ದಿನಗಳಿಂದ ಮೈಸೂರಿನಲ್ಲೂ ಎಡೆಬಿಡದೆ ಮಳೆ ಸುರಿಯುತ್ತಿದೆ. ಆದರೂ ಶುಕ್ರವಾರ ಮುಂಜಾನೆ 3 ಗಂಟೆಯಿಂದಲೇ ಚಾಮುಂಡಿಬೆಟ್ಟಕ್ಕೆ ಭಕ್ತರ ದಂಡು ಹರಿದು ಬಂದಿತ್ತು. ಮಳೆ-ಚಳಿ ಲೆಕ್ಕಿಸದೆ ಸಾವಿರಾರು ಮಂದಿ ಮೆಟ್ಟಿಲುಗಳ ಮೂಲಕ ಬೆಟ್ಟವೇರಿ, ಸರತಿಯಲ್ಲಿ ನಿಂತಿದ್ದರು. ಸ್ಥಳೀಯರ ಜೊತೆಗೆ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ಭಕ್ತರು, ಲಲಿತಮಹಲ್ ಹೋಟೆಲ್ ಬಳಿಯ ಮೈದಾನದಲ್ಲಿ ತಮ್ಮ ವಾಹನ ನಿಲ್ಲಿಸಿ, ಅಲ್ಲಿಂದ ಉಚಿತ ಸಾರಿಗೆ ಮೂಲಕ ಬೆಟ್ಟಕ್ಕೆ ತೆರಳಿದರು. ಭಕ್ತರ ಸಂಖ್ಯೆಗನುಗುಣವಾಗಿ ಬಸ್ ಸಂಚಾರ ವ್ಯವಸ್ಥೆ ಮಾಡಲಾಗಿತ್ತು.

ಕಂಗೊಳಿಸಿದ ದೇವಾಲಯ: ಆಷಾಡ ಮಾಸದ ಎರಡನೇ ಶುಕ್ರವಾರದ ವಿಶೇಷ ಪೂಜಾ ಮಹೋತ್ಸಕ್ಕೆ ದೇವಾಲಯವನ್ನು ವಿವಿಧ ಬಗೆಯ ಬಣ್ಣ ಬಣ್ಣದ ಹೂವುಗಳು, ಹಲವು ರೀತಿಯ ಹಣ್ಣು ಹಾಗೂ ತರಕಾರಿಗಳಿಂದ ವಿಶೇಷವಾಗಿ ಅಲಂಕರಿಸಲಾಗಿತ್ತು. ಮೈಸೂರು ಬನ್ನಿಮಂಟಪದ ನಿವಾಸಿ ರಾಜಣ್ಣ ನೇತೃತ್ವದಲ್ಲಿ ದೇವಾಲಯವನ್ನು ಸಿಂಗರಿಸಲಾಗಿತ್ತು. ಇವರು ಕಳೆದ 40 ವರ್ಷಗಳಿಂದಲೂ ಆಷಾಡ ಮಾಸದ ಎರಡನೇ ಶುಕ್ರವಾರ ದೇವಾಲಯವನ್ನು ಅಲಂಕರಿಸುವ ಸೇವೆ ಮಾಡಿಕೊಂಡು ಬಂದಿದ್ದಾರೆ. ಈ ಬಾರಿ ಥೈಲ್ಯಾಂಡ್‌ನಿಂದ ತರಿಸಿದ್ದ ಆಕರ್ಷಕ ನಿಂಬೆಹಣ್ಣುಗಳ ಜೊತೆಗೆ ಡ್ರಾಗನ್ ಫ್ರೂಟ್, ದಾಳಿಂಬೆ, ಕರ್ಜೂರ, ಸೇಬು ಇನ್ನಿತರ ಹಣ್ಣುಗಳು, ಸೌತೆಕಾಯಿ, ತೆಂಗಿನಕಾಯಿ ಇನ್ನಿತರ ತರಕಾರಿಗಳಿಂದ ಅಲಂಕಾರ ಮಾಡಿದ್ದರು. ಹೂವಿನ ಬಣ್ಣಕ್ಕೆ ಹೊಂದುವಂತೆ ಹಣ್ಣು ತರಕಾರಿಯಿಂದ ಸಿಂಗರಿಸಲಾಗಿತ್ತು. ವಿಶೇಷವಾಗಿ ಕಂಗೊಳಿಸುತ್ತಿದ್ದ ದೇವಾಲಯ ಪ್ರವೇಶಿಸುತ್ತಿದ್ದಂತೆ ಭಕ್ತರು ಪುಳಕಿತರಾಗಿ, ಸರತಿಯಲ್ಲಿ ಸಾಗಿ ತಾಯಿಯ ದರ್ಶನ ಪಡೆದರು.

ವಿಶೇಷ ಪೂಜೆ: ಪ್ರಧಾನ ಆಗಮಿಕ ಡಾ.ಎನ್.ಶಶಿಶೇಖರ ದೀಕ್ಷಿತ್ ನೇತೃತ್ವದಲ್ಲಿ ಅರ್ಚಕರು ಶಕ್ತಿದೇವತೆ ತಾಯಿ ಚಾಮುಂಡೇಶ್ವರಿಗೆ ವಿವಿಧ ಪೂಜಾ ಕೈಂಕರ್ಯ ನೆರವೇರಿಸಿದರು. ಮುಂಜಾನೆ 3 ಗಂಟೆಗೆ ದೇವಿ ಕೆರೆಯಿಂದ ಪವಿತ್ರ ಜಲ ತಂದು ಚಾಮುಂಡೇಶ್ವರಿ ದೇವಿಗೆ ಮಹನ್ಯಾಸಪೂರ್ವಕ ರುದ್ರಾಭಿಷೇಕ, ಪಂಚಾಮೃತ ಅಭಿಷೇಕ, ಕುಂಕುಮಾರ್ಚನೆ, ಸಹಸ್ರನಾಮಾರ್ಚನೆಯೊಂದಿಗೆ ನೇರಳೆ ಬಣ್ಣದ ಸೀರೆ ಹಾಗೂ ಆಭರಣಗಳಿಂದ ದೇವಿಗೆ ಅಲಂಕಾರ ನೆರವೇರಿಸಲಾಯಿತು. ಬಳಿಕ ಷೋಡಶೋಪಚಾರ ಪೂಜೆ ಹಾಗೂ ಮಂಗಳಾರತಿ ಜರುಗಿತು. ಬೆಳಗ್ಗೆ 6 ಗಂಟೆಗೆ ದೇವಾಲಯದ ಬಾಗಿಲು ತೆರೆದು ಭಕ್ತರ ದರ್ಶನಕ್ಕೆ ಮುಕ್ತಗೊಳಿಸಲಾಯಿತು. ಬೆಳಗ್ಗೆ 9.30ಕ್ಕೆ ದೇವಿಗೆ ಮಹಾ ಮಂಗಳಾರತಿ ಮತ್ತು ಸಂಜೆ 6 ರಿಂದ 7.30ರವರೆಗೆ ಅಭಿಷೇಕ ನೆರವೇರಿಸಲಾಯಿತು. ಬೆಳಗ್ಗೆ 6ರಿಂದ ರಾತ್ರಿ 10ರವರೆಗೂ ಸಹಸ್ರಾರು ಭಕ್ತರು ತಾಯಿಯ ದರ್ಶನ ಪಡೆದು ಧನ್ಯರಾದರು.

ಮೆಟ್ಟಿಲು ಪೂಜೆ: ಆಷಾಡ ಮಾಸದಲ್ಲಿ ತಾಯಿ ಚಾಮುಂಡೇಶ್ವರಿ ದರ್ಶನ ಪಡೆಯಲು ರಾಜ್ಯದ ವಿವಿಧ ಮೂಲೆಗಳಿಂದಲ್ಲದೆ ಹೊರ ರಾಜ್ಯಗಳಿಂದಲೂ ಭಕ್ತರು ಆಗಮಿಸಿದ್ದರು. ಅವರಲ್ಲಿ ಸಂಕಲ್ಪ ಮಾಡಿಕೊಂಡಿದ್ದವರು ಬೆಟ್ಟದ ಮೆಟ್ಟಿಲುಗಳಿಗೆ ಹರಿಶಿನ-ಕುಂಕುಮ ಹಚ್ಚಿ, ಆರತಿ ಬೆಳಗುವ ಮೂಲಕ ದರ್ಶನಕ್ಕೆ ತೆರಳಿದರು. ಬೆಳಗ್ಗೆ 6 ಗಂಟೆ ನಂತರ ಮೆಟ್ಟಿಲು ಮಾರ್ಗದಲ್ಲಿ ಜನಸಂದಣಿ ಹೆಚ್ಚಾಗಿತ್ತು. ಉಚಿತ ಧರ್ಮ ದರ್ಶನ, 50 ರೂ. ಹಾಗೂ 300 ರೂ. ವಿಶೇಷ ಪ್ರವೇಶದ ಮೂಲಕ ಭಕ್ತರು ದರ್ಶನ ಪಡೆದರು.

ಈ ಬಾರಿಯೂ ದೇವಾಲಯದ ವರೆಗೆ ವಾಹನಗಳ ಪ್ರವೇಶ ನಿರ್ಬಂಧಿಸಿದ್ದರಿಂದ ಭಕ್ತರ ಸಂಚಾರಕ್ಕೆ ತೊಂದರೆ ಯಾಗಲಿಲ್ಲ. ಮಾಜಿ ಸಚಿವರಾದ ಎಸ್.ಟಿ.ಸೋಮಶೇಖರ್, ಕೆ.ಎಸ್. ಈಶ್ವರಪ್ಪ, ಮಾಜಿ ಶಾಸಕಿ ಅನಿತಾ ಕುಮಾರಸ್ವಾಮಿ ಸೇರಿದಂತೆ ಹಲವು ಗಣ್ಯರು ಇಂದು ತಾಯಿಯ ದರ್ಶನ ಪಡೆದರು.

ಗೌರವಾನ್ವಿತ ಹಿರಿಯ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಪಿರಿಯಾಪಟ್ಟಣ
ಓ.ಎಸ್.ಸಂಖ್ಯೆ: 35 /2020

ವಾದಿಗಳು : ಶ್ರೀಮತಿ ಪ್ರೇಮ ಮತ್ತು ಇತರರು **ವಿರುದ್ಧ**
ಪ್ರತಿವಾದಿಗಳು : ಶ್ರೀಮತಿ ಪ್ರೇಮ ಮತ್ತು ಇತರರು
ಪ್ರತಿವಾದಿ : ಡಿ.14 ಶ್ರೀ ಸೀನಾ, ವಯಸ್ಸು ಸುಮಾರು 45 ವರ್ಷ, ವಾಸ: ಅಂಕನಹಳ್ಳಿ ಗ್ರಾಮ, ಕಸಬಾ ಹೋಬಳಿ, ಪಿರಿಯಾಪಟ್ಟಣ ತಾಲ್ಲೂಕು

ಕೋರ್ಟ್ ನೋಟೀಸ್

ಏನೆಂದರೆ, ಮೇಲ್ಕಂಡ ವಾದಿ ಶ್ರೀಮತಿ ಪ್ರೇಮ ಮತ್ತು ಇತರರು ಅವರು ಪ್ರತಿವಾದಿಗಳಾದ ಶ್ರೀಮತಿ ಪ್ರೇಮ ಮತ್ತು ಇತರರ ವಿರುದ್ಧ ಈ ದಾವೆಯನ್ನು ಸದರಿ ದಾವೆಯಲ್ಲಿ ತೋರಿಸಿರುವ ಷೆಡ್ಯೂಲ್ ಸ್ವತ್ತಿಗೆ ಸಂಬಂಧಪಟ್ಟ ಹಾಗೆ ದಾವೆ ಹೂಡಿದ್ದು, ತಾವು ಈ ದಾವೆಯಲ್ಲಿ ಪ್ರತಿವಾದಿ ಡಿ -14 ಆಗಿದ್ದು ತಮಗೆ ಈ ದಾವೆಯಲ್ಲಿ ಹಲವಾರು ಬಾರಿ ಕೋರ್ಟ್ ನೋಟೀಸ್, ಸಮನ್ಸ್ ಹೊರಡಿಸಿದ್ದು, ಸದರಿ ಸಮನ್ಸನ್ನು ತೆಗೆದುಕೊಳ್ಳದೆ ವಾಪಸ್ ಬಂದಿದ್ದು, ಆ ಪ್ರಕಾರವಾಗಿ ಈ ಪತ್ರಿಕಾ ಪ್ರಕಟಣೆಯ ಮೂಲಕ ತಮಗೆ ನೋಟೀಸ್ ಅನ್ನು ನೀಡುತ್ತಿದ್ದು, ಅಂತಿಮವಾಗಿ ಸದರಿ ದಾವೆಯು ದಿನಾಂಕ: 24/8/2024 ರ ಬೆಳಗ್ಗೆ 11 ಗಂಟೆಗೆ ತಮ್ಮ ಹಾಜರಾತಿಗಾಗಿ ಇದ್ದು, ಸದರಿ ದಿನ ಮತ್ತು ಸಮಯದಂದು ತಾವು ಖುದ್ದು ಅಥವಾ ತಮ್ಮ ವಕೀಲರ ಮೂಲಕ ಮೇಲ್ಕಂಡ ದಾವೆಯಲ್ಲಿ ಹಾಜರಾಗಬೇಕಾಗಿದ್ದು ತಪ್ಪಿದಲ್ಲಿ ಮೇಲ್ಕಂಡ ದಾವೆಯಲ್ಲಿ ನಿಮ್ಮ ಗೈರು ಹಾಜರಿಯಲ್ಲಿ ಏಕ ಪಕ್ಷೀಯವಾಗಿ ಅಂತಿಮ ವಾಗಿ ಆದೇಶವಾಗುವುದೆಂದು ಈ ಮೂಲಕ ತಿಳಿಯಪಡಿಸಿದೆ.

ಷೆಡ್ಯೂಲ್ ಸ್ವತ್ತು : ಪಿರಿಯಾಪಟ್ಟಣ ತಾಲ್ಲೂಕು, ಕಸಬಾ ಹೋಬಳಿ, ಅಂಕನಹಳ್ಳಿ ಗ್ರಾಮದ ಸರ್ವೆ.ನಂ. 2/2ಬಿ1 ರಲ್ಲಿ ಒಟ್ಟು ವಿಸ್ತೀರ್ಣ 1 ಎಕರೆ 9 ಗುಂಟೆ ಈಗ ಹೊಸದಾಗಿ ಪೋಡಾಗಿರುವ ಸರ್ವೆ ನಂ 2/2ಬಿ1 ರಲ್ಲಿ 25 ಗುಂಟೆ, ಸರ್ವೆ ನಂ. 2/2ಬಿ2 ರಲ್ಲಿ 5 ಗುಂಟೆ, ಸರ್ವೆ ನಂ. 2/2ಬಿ5 ರಲ್ಲಿ 3 ಗುಂಟೆ, ಸರ್ವೆ ನಂ2/2ಬಿ6 ರಲ್ಲಿ 5 ಗುಂಟೆ, ಸರ್ವೆನಂ 2/2ಬಿ7 ರಲ್ಲಿ 6 ಗುಂಟೆ, ಸರ್ವೆ ನಂ. 2/2ಬಿ10 ರಲ್ಲಿ 5 ಗುಂಟೆ ಜಮೀನಿಗೆ ಚೆಕ್ ಬಂದಿ: ಪೂರ್ವಕ್ಕೆ : ಬ್ಲಾಕ್ ನಂ -1, ಪಶ್ಚಿಮಕ್ಕೆ : ಬ್ಲಾಕ್ ನಂ -1, ಉತ್ತರಕ್ಕೆ : ಆ ಹಿ., ದಕ್ಷಿಣಕ್ಕೆ : ಬ್ಲಾಕ್ ನಂ -1

ನ್ಯಾಯಾಲಯದ ಮುದ್ರೆ ಮತ್ತು ನನ್ನ ಸಹಿಯೊಂದಿಗೆ ದಿನಾಂಕ: 19/07/24ರಂದು ಕೊಡಲ್ಪಟ್ಟಿದೆ.

2024ನೇ ವರ್ಷದ 07 ತಿಂಗಳ 19ನೇ ದಿವಸದಂದು ಇದನ್ನು ನನ್ನ ಸಹಿಯೊಡನೆ ಮತ್ತು ನ್ಯಾಯಾಲಯದ ಮೊಹರಿನೊಂದಿಗೆ ನೀಡಲಾಗಿದೆ.

ವಾದಿಗಳು
ವಾದಿಗಳ ಪರ ವಕೀಲರು

ನ್ಯಾಯಾಲಯದ ಆದೇಶದ ಮೇರೆಗೆ
ಸಹಿ/-ಮುಖ್ಯ ಆಡಳಿತಾಧಿಕಾರಿಗಳು ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ನ್ಯಾಯಾಲಯ, ಪಿರಿಯಾಪಟ್ಟಣ

ಸಹಿ/- ಶ್ರೀ ಕಾಮಾಕ್ಷಿ, ವಕೀಲರು
#840, ನಾರಾಯಣ ಶಾಸ್ತ್ರಿ ರಸ್ತೆ, ಮೈಸೂರು

ದಿ. ಮೈಸೂರು ಕಾಫಿ ಸಂಸ್ಕರಣ ಸಹಕಾರ ಸಂಘ ನಿ., ಮೈಸೂರು
ಕೆ.ಆರ್.ಎಸ್.ರಸ್ತೆ, ಯಾದವಗಿರಿ, ಮೈಸೂರು
ನಂ: ಕ್ರಸಂ.ಎಂಸಿಪಿಸಿಎಸ್‌ನಿ/ಟೆಂಡರ್/2/2024-25

ಸಂಘದಲ್ಲಿ ಖಾಲಿ ಇರುವ ಗೋದಾಮುಗಳನ್ನು ಬಾಡಿಗೆ ಆಧಾರದ ಮೇಲೆ ಟೆಂಡರ್ ಕಂ ಬಹಿರಂಗ ಹರಾಜು ಪ್ರಕಟಣೆ

ದಿ.ಮೈಸೂರು ಕಾಫಿ ಸಂಸ್ಕರಣ ಸಹಕಾರ ಸಂಘ ನಿ.ಮೈಸೂರು, ಕೆ.ಆರ್.ಎಸ್. ರಸ್ತೆ, ಯಾದವಗಿರಿ, ಮೈಸೂರು ಇದರ ಆವರಣದಲ್ಲಿ ಖಾಲಿ ಇರುವ ವಿವಿಧ ಅಳತೆಯ 7 ಗೋದಾಮುಗಳು ಖಾಲಿ ಇದ್ದು ಬಾಡಿಗೆಗೆ ನೀಡುವ ಸಂಬಂಧ ದಿನಾಂಕ: 27-07-2024 ರಂದು ಬೆಳಿಗ್ಗೆ 11.30 ಗಂಟೆಗೆ ಟೆಂಡರ್ ಕಂ ಬಹಿರಂಗ ಹರಾಜು ಪ್ರಕಟಣೆ ಪ್ರಕ್ರಿಯೆಯನ್ನು ನಡೆಸಲಾಗುವುದು, ಆಸಕ್ತರು ದಿನಾಂಕ: 27-07-2024 ರಂದು ಬೆಳಿಗ್ಗೆ 11.00 ಗಂಟೆಯೊಳಗೆ ಮೊಹರಾದ ಟೆಂಡರ್‌ನ್ನು ಸಂಘದ ಕಛೇರಿಯಲ್ಲಿರುವ ಟೆಂಡರ್ ಪೆಟ್ಟಿಗೆಗೆ ಹಾಕುವಂತೆ ತಿಳಿಸಲಾಗಿದೆ, ನಂತರ ಬಂದಂತಹ ಟೆಂಡರ್ ಅರ್ಜಿಗಳನ್ನು ತಿರಸ್ಕರಿಸಲಾಗುವುದು, ಟೆಂಡರ್ ಅರ್ಜಿ ಮತ್ತು ಇದಕ್ಕೆ ಸಂಬಂಧಪಟ್ಟ ಸೂಚನೆಗಳನ್ನೊಳಗೊಂಡ ಮಾಹಿತಿಯನ್ನು ದಿನಾಂಕ:19- 7-2024 ರಿಂದ 27-07-2024 ರ ಬೆಳಿಗ್ಗೆ 10.30 ಗಂಟೆಯವರೆಗೆ ಸಂಘದ ಕಛೇರಿಯಲ್ಲಿ ರೂ.500.00ಗಳು ಹಾಗೂ ಜಿ.ಎಸ್.ಟಿ. ಸೇರಿಸಿ ಅರ್ಜಿ ಶುಲ್ಕ ಪಾವತಿಸಿ ಪಡೆದುಕೊಳ್ಳಬಹುದಾಗಿದೆ. ಹೆಚ್ಚಿನ ವಿವರ ಸಹಕಾರ ಸಂಘಗಳ ಉಪ ನಿಬಂಧಕರು ಹಾಗೂ ವಿಶೇಷಾಧಿಕಾರಿಗಳು ದಿ.ಮೈಸೂರು ಕಾಫಿ ಸಂಸ್ಕರಣ ಸಹಕಾರ ಸಂಘ ನಿ.ಮೈಸೂರು ಈ ಸಂಘದ ಕಛೇರಿಯ ವೇಳೆಯಲ್ಲಿ ಬೆಳಿಗ್ಗೆ 10.30 ರಿಂದ ಸಂಜೆ 5.30 ಘಂಟೆಯೊಳಗೆ ಸಂಪರ್ಕಿಸಬಹುದಾಗಿದೆ. ಮೊಬೈಲ್ ನಂ: 94482 47182, 98458 07364.

ದಿನಾಂಕ: 19-07-2024

ಸಹಿ/- ಸಹಕಾರ ಸಂಘಗಳ ಉಪನಿಬಂಧಕರು ಹಾಗೂ ವಿಶೇಷಾಧಿಕಾರಿಗಳು

ನಿವೇಶನ ಹಂಚಿಕೆ ಹಗರಣ; ಮುಡಾದತ್ತ ಮುಖ ಮಾಡದ ತನಿಖಾಧಿಕಾರಿಗಳು

ಇತ್ತ ಮುಡಾದಲ್ಲಿ ಸಾರ್ವಜನಿಕರ ಕೆಲಸ ಸ್ಥಗಿತ



ಮೈಸೂರು, ಜು. 19(ಆರ್‌ಕೆ)- ನಿಯಮ ಬಾಹಿರವಾಗಿ ಶೇ. 50:50ರ ಅನುಪಾತದಡಿ, ಪ್ರೋತ್ಸಾಹದಾಯಕ ಹಾಗೂ ಬದಲಿ ನಿವೇಶನಗಳನ್ನು ಮನಸ್ಸೋಇಚ್ಛೆ ಹಂಚಿಕೆ ಮಾಡಿ ಮುಡಾ, ಸರ್ಕಾರಕ್ಕೆ ಸಾವಿರಾರು ಕೋಟಿ ರೂ. ಆರ್ಥಿಕ ನಷ್ಟ ಉಂಟು ಮಾಡಿರುವ ಪ್ರಕರಣದ ಹಿನ್ನೆಲೆಯಲ್ಲಿ ರಚನೆಯಾಗಿರುವ ಸಮಿತಿಯು ತನಿಖೆಯನ್ನು ಸ್ಥಗಿತಗೊಳಿಸಿದ್ದು, ಮತ್ತೊಂದೆಡೆ ಪ್ರಾಧಿಕಾರದ ಕಚೇರಿಯಲ್ಲಿ ಸಾರ್ವಜನಿಕರ ಕೆಲಸವೂ ನಡೆಯುತ್ತಿಲ್ಲ.

ತನಿಖೆ ನಡೆಸುತ್ತಿದ್ದ ಹಿರಿಯ ಐಎಎಸ್ ಅಧಿಕಾರಿ ವೆಂಕಟಾಚಲಪತಿ ನೇತೃತ್ವದ ಸಮಿತಿ ಸದಸ್ಯರು ವಾರದ ಹಿಂದೆಯೇ ಮುಡಾ ಕಚೇರಿ ಸಭಾಂಗಣಕ್ಕೆ ಬೀಗ ಜಡಿದು ಹೋದವರು ಈವರೆವಿಗೂ ಇತ್ತ ಸುಳಿದಿಲ್ಲ. ಹಗರಣದ ತನಿಖೆ ಪ್ರಗತಿಯಲ್ಲಿದ್ದ ಕಾರಣ ಎಲ್ಲಾ ಕಾರ್ಯ ಸ್ಥಗಿತಗೊಳಿಸಬೇಕೆಂಬ ಸರ್ಕಾರದ ಆದೇಶದ ಹಿನ್ನೆಲೆಯಲ್ಲಿ ಸಾರ್ವಜನಿಕರು ಕಂಗಾಲಾಗಿದ್ದಾರೆ. ಕಚೇರಿಯ ಪ್ರವೇಶ ದ್ವಾರದಲ್ಲಿನ ಸ್ಪಂದನಾ ಕೌಂಟರ್‌ನಲ್ಲಿ ಆಸ್ತಿಗಳ ತೆರಿಗೆ ಪಾವತಿಸಿಕೊಳ್ಳುವುದನ್ನು ಹೊರತುಪಡಿಸಿದರೆ, ಖಾತೆ ನೋಂದಣಿ, ವರ್ಗಾವಣೆ, ಪೌತಿ ಖಾತೆ, ಇ-ಖಾತಾ, ದೃಢೀಕೃತ ನಕಲು ಪ್ರತಿ, ಲೀಸ್ ಕಂ ಸೇಲ್ ಡೀಡ್, ಕ್ರಯಪತ್ರ, ಭೂಪರಿವರ್ತನೆ ಸಂಬಂಧ ಅಭಿಪ್ರಾಯ, ಭೂ ಉಪಯೋಗ ಬದಲಾವಣೆ ಪ್ರಕ್ರಿಯೆ, ನಿರಾಕ್ಷೇಪಣಾ ಪತ್ರ, ನಕ್ಷೆ ಅನುಮೋದನೆ, ನಿವೇಶನಗಳ ಬಿಡುಗಡೆ, ಕಟ್ಟಡ ಪೂರ್ಣಗೊಂಡ ವರದಿ, ಕಂದಾಯ ನಿಗದಿ, ಅನುದಾನ ಬಿಡುಗಡೆ, ಯೋಜನೆಗಳ ಅನುಷ್ಠಾನ, ಕಾಮಗಾರಿಗಳ ಕಾರ್ಯಾದೇಶ ಸೇರಿದಂತೆ ಮುಡಾದಲ್ಲಿ ಸಾರ್ವಜನಿಕರಿಗೆ ಸಂಬಂಧಿಸಿದ ಯಾವುದೇ ಕೆಲಸಗಳಾಗುತ್ತಿಲ್ಲ.

ಕಂಗಾಲಾದ ನಾಗರಿಕರು

> ❝ ಪ್ರಾಧಿಕಾರದ ದೈನಂದಿನ ಕೆಲಸ ಕಾರ್ಯ ನಡೆಸಲು ಅವಕಾಶ ನೀಡುವಂತೆ ನಗರಾಭಿವೃದ್ಧಿ ಇಲಾಖೆ ಪ್ರಧಾನ ಕಾರ್ಯದರ್ಶಿಗಳನ್ನು ಕೋರಿಕೊಂಡಿದ್ದೇವೆ. ತನಿಖೆಗೆ ನಮ್ಮ ಕೆಲಸ ಅಡ್ಡಿಯಾಗುವುದಿಲ್ಲ. ಆದರೆ ವಿವಿಧ ಸೇವೆ ಕೋರಿ ಅರ್ಜಿ ಸಲ್ಲಿಸಿದ ಜನರು, ಕಚೇರಿಗೆ ಅಲೆಯುತ್ತಿದ್ದಾರೆ ಎಂಬುದನ್ನು ಮನವರಿಕೆ ಮಾಡಿದ್ದೇವೆ. ಅವರೂ ಪೂರಕವಾಗಿ ಸ್ಪಂದಿಸಿದ್ದು, ಸೋಮವಾರದಿಂದ ಅನುಮತಿಸಿ ಆದೇಶ ನೀಡುವರೆಂಬ ವಿಶ್ವಾಸವಿದೆ. -ರಘುನಂದನ್, ಮುಡಾ ಆಯುಕ್ತರು

ಮುಡಾ ಸಭೆ, ಕಡತಗಳಿಗೆ ಸಹಿ, ಇನ್ನಿತರೆ ಎಲ್ಲಾ ಕಾರ್ಯ ಸ್ಥಗಿತಗೊಂಡಿರುವುದರಿಂದ ಆಯುಕ್ತರು, ಕಾರ್ಯದರ್ಶಿ, ನಗರ ಯೋಜಕ ಸದಸ್ಯ, ವಿಶೇಷ ಭೂಸ್ವಾಧೀನಾಧಿಕಾರಿ, ವಿಶೇಷ ತಹಸೀಲ್ದಾರ್‌ಗಳು, ಸೂಪರಿಂಟೆಂಡಿಂಗ್ ಇಂಜಿನಿಯರ್, ಎಕ್ಸಿಕ್ಯೂಟಿವ್ ಇಂಜಿನಿಯರ್, ಮುಖ್ಯ ಲೆಕ್ಕಾಧಿಕಾರಿಗಳು, ಸಿಬ್ಬಂದಿ ಯಾವುದೇ ಕೆಲಸವಿಲ್ಲದೇ ಸುಖಾಸುಮ್ಮನೆ ಬಂದು ಕಾಲ ಕಳೆದು ಹೋಗುತ್ತಿದ್ದಾರೆ.

ಪರಿಣಾಮ ಇಡೀ ಮುಡಾ ಕಚೇರಿಯೇ ಸ್ಮಶಾನ ಮೌನವಾಗಿದ್ದು, ಸಾರ್ವಜನಿಕರು ಸೇವೆ ಕೋರಿ ಅರ್ಜಿ ಸಲ್ಲಿಸಿ ಕಾಯುವಂತಾಗಿದೆ. ಸರ್ಕಾರ ತನಿಖೆಗೆ ತಂಡ ರಚಿಸಿ ಪ್ರಕ್ರಿಯೆ ಪ್ರಗತಿಯಲ್ಲಿರುವಾಗಲೇ ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ಮತ್ತೊಂದು ವಿಚಾರಣಾ ಆಯೋಗ ರಚಿಸಿರುವುದು ಗೊಂದಲಕ್ಕೆ ಕಾರಣವಾಗಿದೆ. ಇತ್ತ ಅಧಿಕಾರಿಗಳ ತನಿಖೆಯೂ ಅರ್ಧಕ್ಕೆ ನಿಂತಿದೆ. ವಿಚಾರಣಾ ಆಯೋಗಕ್ಕೂ ಅತ್ತ ಹೊಸ ಕಮಿಟಿಯೂ ಬಂದಿಲ್ಲ. ಆದರೆ ಮುಡಾದ ಎಲ್ಲಾ ಕೆಲಸಗಳೂ ಸ್ಥಗಿತಗೊಂಡಿರುವುದರಿಂದ ಸಾರ್ವಜನಿಕರಿಗೆ ತೀವ್ರ ತೊಂದರೆ ಉಂಟಾಗಿದೆ. ತನಿಖೆಗೂ, ಮುಡಾ ಸೇವೆಗಳಿಗೂ ಸಂಬಂಧವಿಲ್ಲದಿದ್ದರೂ ಸರ್ಕಾರ ಸಾರ್ವಜನಿಕರ ಹಿತವನ್ನು ಬಲಿ ಕೊಟ್ಟಿದೆ ಎಂಬ ಆಕ್ರೋಶ ವ್ಯಕ್ತವಾಗಿದೆ.

ಶ್ರೀ ಮಹಾಲಕ್ಷ್ಮಿ ದೇವಿಗೆ ವಿಶೇಷ ಅಲಂಕಾರ



ಮೈಸೂರು ತಾಲೂಕು ಹಂಚ್ಯಾ ಗ್ರಾಮದಲ್ಲಿ ಆಷಾಢ ಮಾಸದ ಎರಡನೇ ಶುಕ್ರವಾರದ ಪ್ರಯುಕ್ತ ಶ್ರೀ ಮಹಾಲಕ್ಷ್ಮಿ ದೇವಿಯನ್ನು ವಿವಿಧ ಬಗೆಯ ಹೂ-ಹಣ್ಣುಗಳಿಂದ ಚಿಕ್ಕಹಳ್ಳಿ ಗ್ರಾಮಸ್ಥರು ಅಲಂಕರಿಸಿದ್ದರು. ಪ್ರಧಾನ ಅರ್ಚಕ ಆನಂದ್ ಮೂರ್ತಿ, ದೇವಿಗೆ ಮಹಾ ಮಂಗಳಾರತಿ ಮಾಡಿ ನೆರೆದಿದ್ದ ನೂರಾರು ಭಕ್ತರಿಗೆ ಪ್ರಸಾದ ವಿನಿಯೋಗ ಮಾಡಿದರು.

ನೇಮಕ



ಮೈಸೂರು, ಜು. 19-ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಹಿಂದುಳಿದ ವರ್ಗಗಳ ವಿಭಾಗದ ರಾಜ್ಯ ಉಪಾಧ್ಯಕ್ಷರನ್ನಾಗಿ ವಿಜಯನಗರ 2ನೇ ಹಂತದ ನಿವಾಸಿ ಆರ್. ವಿನೋದ್ ರಾಜ್ ಅವರನ್ನು ನೇಮಕ ಮಾಡಲಾಗಿದೆ.

118 ಅಡಿ ದಾಟಿದ ಕೆಆರ್‌ಎಸ್

ಯಾವುದೇ ಸಂದರ್ಭದಲ್ಲಿ ಭರ್ತಿಯಾಗುವ ಸಾಧ್ಯತೆ

- ಜಲಾಶಯದಿಂದ ಹೆಚ್ಚುವರಿ ನೀರು ಬಿಡುಗಡೆ, ಮುಂಜಾಗ್ರತಾ ಕ್ರಮ ವಹಿಸುವಂತೆ ಸೂಚನೆ
- ಶ್ರೀರಂಗಪಟ್ಟಣದ 53, ಮಳವಳ್ಳಿಯ 21, ಪಾಂಡವಪುರದ 15, ಕೆ.ಆರ್.ಪೇಟೆಯ 3 ಗ್ರಾಮಗಳಲ್ಲಿ ಹೈಅಲರ್ಟ್

ಮಂಡ್ಯ,ಜು.19(ಮೋಹನ್‌ರಾಜ್)– ಕೊಡಗಿನಲ್ಲಿ ಸುರಿಯುತ್ತಿರುವ ಭಾರೀ ಮಳೆಯಿಂದ ಮಂಡ್ಯ ಜಿಲ್ಲೆ ಶ್ರೀರಂಗಪಟ್ಟಣ ತಾಲೂಕಿನ ಕೆಆರ್‌ಎಸ್ 118 ಅಡಿ ದಾಟಿದ್ದು, ಭರ್ತಿಗೆ ಇನ್ನು ಕೇವಲ 6 ಅಡಿ ಮಾತ್ರ ಬಾಕಿ ಇದೆ.

ಈ ನಿಟ್ಟಿನಲ್ಲಿ ಯಾವ ಕ್ಷಣದಲ್ಲಾದರೂ ಅಣೆಕಟ್ಟೆ ಭರ್ತಿಯಾಗುವ ಸಾಧ್ಯತೆ ಇರುವುದರಿಂದ 25 ಸಾವಿರ ಕ್ಯೂಸೆಕ್ ನೀರನ್ನು ನದಿಗೆ ಬಿಡಲು ತೀರ್ಮಾನಿಸಲಾಗಿದ್ದು, ಅಣೆಕಟ್ಟೆ ಸುತ್ತಮುತ್ತಲು ಇರುವ ತಗ್ಗು ಪ್ರದೇಶ ಹಾಗೂ ನದಿಪಾತ್ರದ ಜನ ಮುಂಜಾಗ್ರತೆ ಕ್ರಮ ವಹಿಸುವಂತೆ ಜಿಲ್ಲಾಡಳಿತ ಮತ್ತು ನೀರಾವರಿ ಇಲಾಖೆ ಸೂಚನೆ ನೀಡಿದೆ.

ಈ ಸಂಬಂಧ ಜಿಲ್ಲಾಧಿಕಾರಿ ಡಾ.ಕುಮಾರ ಶುಕ್ರವಾರ ನಗರದ ಜಿಲ್ಲಾ ಪಂಚಾಯತ್‌ನ ಕಾವೇರಿ ಸಭಾಂಗಣದಲ್ಲಿ ಅಧಿಕಾರಿಗಳ ಸಭೆ ನಡೆಸಿ, ಕೆಆರ್‌ಎಸ್ ಜಲಾಶಯ ಭರ್ತಿಯಾಗುತ್ತಿದ್ದು, ಜಲಾಶಯದ ಮಟ್ಟ 120 ಅಡಿ ದಾಟಿದ ನಂತರ ನದಿಗೆ ನೀರು ಬಿಡುಗಡೆ ಮಾಡಲಾಗುವುದು. ಈ ಸಂದರ್ಭದಲ್ಲಿ ಯಾವುದೇ ಹಾನಿಯಾಗದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕೆಂದು ಹೇಳಿದರು.

ಕೆಆರ್‌ಎಸ್‌ನಿಂದ ಒಂದು ಲಕ್ಷಕ್ಕಿಂತ ಹೆಚ್ಚಿನ ಕ್ಯೂಸೆಕ್ಸ್ ನೀರು ಬಿಡುಗಡೆ ಮಾಡಿದ ಸಂದರ್ಭದಲ್ಲಿ ನದಿ ಪಾತ್ರದಲ್ಲಿರುವ ಶ್ರೀರಂಗಪಟ್ಟಣ ತಾಲೂಕಿನ–53, ಪಾಂಡವಪುರ–15, ಮಳವಳ್ಳಿ–21 ಹಾಗೂ ಹೇಮಾವತಿ ಜಲಾಶಯಕ್ಕೆ ಸಂಬಂಧಿಸಿದಂತೆ ಕೆಆರ್.ಪೇಟೆ –3 ಗ್ರಾಮಗಳಲ್ಲಿ ಪ್ರವಾಹ ಉಂಟಾಗಿ ತೊಂದರೆಯಾಗಬಹುದು ಎಂದು ಅಂದಾಜಿಸಲಾಗಿದೆ. ಈ ಗ್ರಾಮಗಳಿಗೆ ಖುದ್ದು ಅಧಿಕಾರಿಗಳು ಭೇಟಿ ನೀಡಿ ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ಪರಿಶೀಲಿಸಬೇಕು ಎಂದರಲ್ಲದೆ ಈ ಗ್ರಾಮಗಳಲ್ಲಿ ಹೈ ಅಲರ್ಟ್ ಘೋಷಿಸಲಾಗಿದೆ.

ಜಿಲ್ಲಾ ಮಟ್ಟದ ಜೊತೆಗೆ ತಾಲೂಕು ಹಾಗೂ ಗ್ರಾಮ ಮಟ್ಟದಲ್ಲಿ ಟಾಸ್ಕ್ ಫೋಸ್ ಸಮಿತಿ ರಚಿಸಿ ನೋಡಲ್ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ. ತಾಲೂಕು ಮಟ್ಟದಲ್ಲಿ ಗ್ರಾಮ ಪಂಚಾಯತಿಯ ಚುನಾಯಿತ ಪ್ರತಿನಿಧಿಗಳು ಹಾಗೂ ಗ್ರಾಮ ಪಂಚಾಯತ್ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಕಾಲ ಕಾಲಕ್ಕೆ ಬಿಡುಗಡೆಯಾಗುವ ನೀರು, ಕೈಗೊಳ್ಳಬೇಕಿರುವ ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ಜನರಿಗೆ ಮಾಹಿತಿ ನೀಡಿ ಎಂದರು.

ಜಿಲ್ಲೆಯಲ್ಲಿ ಯಾವುದೇ ಸ್ಥಳ ಅಥವಾ ಮನೆಗಳು ಪ್ರವಾಹಕ್ಕೆ ಸಿಲುಕಿದರೆ ರಕ್ಷಣೆಗಾಗಿ ಎಲ್ಲಾ ತಾಲೂಕು ಕಚೇರಿಯಲ್ಲಿ ಕಂಟ್ರೋಲ್ ರೂಮ್ ಅನ್ನು ಸ್ಥಾಪಿಸಬೇಕು. ಮಳೆ ಹಾಗೂ ನದಿಗಳಿಂದ ಯಾವುದೇ ಅಪಾಯ ಉಂಟಾದ ಕೂಡಲೇ ಕಂಟ್ರೋಲ್ ರೂಮ್‌ಗೆ ಮಾಹಿತಿ ಸಲ್ಲಿಸುವುದರಿಂದ ಸಾರ್ವಜನಿಕರನ್ನು ಸಮಸ್ಯೆಯಿಂದ ಪಾರು ಮಾಡಬಹುದು. ಚೆಸ್ಕಾಂ ಹಾಗೂ ಕಾವೇರಿ ನೀರಾವರಿ ನಿಗಮದಿಂದಲೂ ಸಹ ಪ್ರತ್ಯೇಕ ಕಂಟ್ರೋಲ್ ರೂಂ ಸ್ಥಾಪನೆ ಮಾಡಬೇಕು ಎಂದು ಸೂಚಿಸಿದರು.

ಪ್ರವಾಹದ ಭೀತಿ: ಕಂಟ್ರೋಲ್ ರೂಂ ಸ್ಥಾಪನೆ

ಪ್ರಸ್ತುತ ಕಾವೇರಿ ಜಲಾನಯನ ಪ್ರದೇಶದಲ್ಲಿ ಹೆಚ್ಚು ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಕೆಆರ್‌ಎಸ್ ಜಲಾಶಯ ಭರ್ತಿಯಾಗುವ ಸಂಭವವಿದ್ದು ಮುಂದಿನ ದಿನಗಳಲ್ಲಿ ಹೆಚ್ಚುವರಿ ನೀರನ್ನು ಬಿಟ್ಟಲ್ಲಿ ಹೊರ ಹರಿವು ಹೆಚ್ಚಳವಾಗಿ ನದಿಪಾತ್ರದಲ್ಲಿ ನೆರೆ ಉಂಟಾಗುವ ಪರಿಸ್ಥಿತಿ ಬಂದಲ್ಲಿ ಪ್ರವಾಹ ಪರಿಸ್ಥಿತಿ ಎದುರಿಸಲು ಕಂಟ್ರೋಲ್ ರೂಂ ಸ್ಥಾಪಿಸಲಾಗಿದೆ.

ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲೂಕಿನ–53 ಗ್ರಾಮಗಳು, ಪಾಂಡವಪುರ ತಾಲೂಕಿನ–15 ಗ್ರಾಮಗಳು ಮತ್ತು ಮಳವಳ್ಳಿ ತಾಲೂಕಿನ–21 ಗ್ರಾಮಗಳನ್ನು ಹಾಗೂ ಹೇಮಾವತಿ ಜಲಾನಯನ ಪ್ರದೇಶದ ಕೆ.ಆರ್.ಪೇಟೆ ತಾಲೂಕಿನ–3 ಗ್ರಾಮಗಳು ಸೇರಿ ಒಟ್ಟು–92 ಗ್ರಾಮಗಳನ್ನು ನೆರೆ/ಪ್ರವಾಹ ಉಂಟಾಗುವ ಗ್ರಾಮಗಳೆಂದು ಗುರುತಿಸಲಾಗಿದ್ದು, ಮುನ್ನೆಚ್ಚರಿಕೆಯಾಗಿ ಜಿಲ್ಲಾ ಮತ್ತು ತಾಲೂಕು ಕೇಂದ್ರಗಳಲ್ಲಿ ಕಂಟ್ರೋಲ್ ರೂಂ ಗಳನ್ನು ರಚಿಸಲಾಗಿದೆ.

ನೆರೆ/ ಪ್ರವಾಹದ ಬಗ್ಗೆ ದೂರು ಇದ್ದಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಸಹಾಯವಾಣಿ ಸಂಖ್ಯೆ– 08232–224655, ಮಂಡ್ಯ ತಾಲೂಕು ಕಛೇರಿ– 08232–291655, ಮದ್ದೂರು ತಾಲೂಕು ಕಛೇರಿ– 08232–291466, ಮಳವಳ್ಳಿ ತಾಲೂಕು ಕಛೇರಿ– 08231–242267, ಪಾಂಡವಪುರ ತಾಲೂಕು ಕಛೇರಿ –08236–255128, ಶ್ರೀರಂಗಪಟ್ಟಣ ತಾಲೂಕು ಕಛೇರಿ–08236–253001, ನಾಗಮಂಗಲ ತಾಲೂಕು ಕಛೇರಿ– 08234–298105, ಕೆಆರ್.ಪೇಟೆ ತಾಲೂಕು ಕಛೇರಿ– 08230–262227 ಸಹಾಯವಾಣಿ ಅನ್ನು ಸಂಪರ್ಕಿಸಬಹುದಾಗಿದೆ. ಕಾವೇರಿ ನೀರಾವರಿ/ಹೆಚ್‌ಎಲ್‌ಬಿಸಿಯಲ್ಲಿಯೂ ಕಂಟ್ರೋಲ್ ರೂಂ ಅನ್ನು ಸ್ಥಾಪಿಸಲಾಗಿದ್ದು, ಕೆಆರ್ ಸಾಗರ ಕಾರ್ಯಪಾಲಕ ಅಭಿಯಂತರರು–08236–257976, ಬನ್ನೂರು ಕಾರ್ಯಪಾಲಕ ಅಭಿಯಂತರರು–94804 42830, ಮಂಡ್ಯ ಕಾರ್ಯಪಾಲಕ ಅಭಿಯಂತರರು–9742454353, ಕೆ.ಆರ್.ಪೇಟೆ ಹೆಚ್‌ಎಲ್‌ಬಿಸಿ ಕಾರ್ಯಪಾಲಕ ಅಭಿಯಂತರರು–9242229448 ಸಹಾಯವಾಣಿಗಳಾಗಿವೆ ಚೆಸ್ಕಾಂ ಟೋಲ್ ಫ್ರೀ ನಂಬರ್ –1912, 9448994777/888 /999, ಶ್ರೀರಂಗಪಟ್ಟಣ ಮತ್ತು ಪಾಂಡವಪುರ ಕಾರ್ಯಪಾಲಕ ಅಭಿಯಂತರರು 94489 94893, ಮಳವಳ್ಳಿ ಕಾರ್ಯಪಾಲಕ ಅಭಿಯಂತರರು–9448994828, ಕೆಆರ್.ಪೇಟೆ ಕಾರ್ಯಪಾಲಕ ಅಭಿಯಂತರರು–9480844740 ಸಹಾಯವಾಣಿಗಳಾಗಿದ್ದು, ಇವುಗಳನ್ನು ಸಂಪರ್ಕಿಸಿ ಪ್ರವಾಹಗಳ ಬಗ್ಗೆ ಮಾಹಿತಿ ನೀಡಬಹುದಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷ ಡಾ.ಕುಮಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಕಾವೇರಿ ಕೊಳ್ಳದಲ್ಲಿ ಸುರಿಯುತ್ತಿರುವ ಭಾರೀ ಮಳೆಯಿಂದ ಮೈದುಂಬಿ ಕಂಗೊಳಿಸುತ್ತಿರುವ ಕೃಷ್ಣರಾಜಸಾಗರ ಜಲಾಶಯ.

ಪುಟ್ಟರಾಜು ಬಗ್ಗೆ ಹಗುರವಾಗಿ ಮಾತನಾಡುವುದನ್ನು ನಿಲ್ಲಿಸಿ

ಸಚಿವ ಚಲುವರಾಯಸ್ವಾಮಿಗೆ ಜೆಡಿಎಸ್ ಜಿಲ್ಲಾಧ್ಯಕ್ಷ ಎಚ್ಚರಿಕೆ

ಪಾಂಡವಪುರ,ಜು.19–ಸಿ.ಎಸ್. ಪುಟ್ಟರಾಜು, ಎಚ್.ಡಿ.ದೇವೇಗೌಡರ ಕುಟುಂಬದ ಮಾನಸ ಪುತ್ರರು, ರಾಜಕೀಯವಾಗಿ ನಿಮ್ಮಷ್ಟೆ ಸಮಾನವಾಗಿ ಬೆಳೆದಿರುವ ರಾಜಕಾರಣಿ. ಅಂತಹ ನಾಯಕರ ಬಗ್ಗೆ ಹಗುರವಾಗಿ ಮಾತನಾಡುವುದನ್ನು ನಿಲ್ಲಿಸಬೇಕು ಎಂದು ಸಚಿವ ಚಲುವರಾಯಸ್ವಾಮಿಗೆ ಜೆಡಿಎಸ್ ಜಿಲ್ಲಾಧ್ಯಕ್ಷ ಡಿ.ರಮೇಶ್ ಎಚ್ಚರಿಕೆ ನೀಡಿದ್ದಾರೆ.



ಪತ್ರಿಕಾಗೋಷ್ಠಿಯಲ್ಲಿ ಮಾತನಾಡುತ್ತಿರುವ ಜೆಡಿಎಸ್ ಜಿಲ್ಲಾಧ್ಯಕ್ಷ ಡಿ.ರಮೇಶ್

ಪಟ್ಟಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚಲುವರಾಯಸ್ವಾಮಿ ರಾಜಕೀಯ ಬೆಳವಣಿಗೆಗೆ ಸಿ.ಎಸ್.ಪುಟ್ಟರಾಜು ಅವರ ಸಹಕಾರವು ಸಾಕ್ಷಿದೆ. ನೀವು ಜಿಪಂ ಉಪಾಧ್ಯಕ್ಷರನ್ನಾಗಿ ಮಾಡಲು, ಸಚಿವರಾಗಿ ಮಾಡಲು ಸಿ.ಎಸ್.ಪುಟ್ಟರಾಜು ಅವರು ಎಚ್‌ಡಿಕೆ ಅವರ ಕಾಲು ಕಟ್ಟಲಿಲ್ವ? ಎಂದು ತಿರುಗೇಟು ನೀಡಿದರು.

ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಅವರು ಕಾಂಗ್ರೆಸ್ ನಾಯಕರ ಮನೆಬಾಗಿಲು ತಟ್ಟಿರುವುದನ್ನು ಸಚಿವ ಚಲುವರಾಯಸ್ವಾಮಿ ಸಾಬೀತುಪಡಿಸಿದರೆ ಪುಟ್ಟರಾಜು ಅವರು ರಾಜಕೀಯ ನಿವೃತ್ತಿ ಪಡೆದುಕೊಳ್ಳುತ್ತಾರೆ. ತಾಕತ್ತಿದ್ದರೆ ಸಾಬೀತುಪಡಿಸಿ ಎಂದು ಸವಾಲು ಹಾಕಿದರು.

ಎಚ್.ಡಿ.ಕುಮಾರಸ್ವಾಮಿ ಅವರು ಗೆದ್ದು ಕೇಂದ್ರ ಸಚಿವರಾದ ಬಳಿಕ ಚಲುವರಾಯಸ್ವಾಮಿಗೆ ಹತಾಶೆ ಉಂಟಾಗಿದೆ. ಡೆಲ್ಲಿಯಲ್ಲಿ ನಡೆದ ಸರ್ವಪಕ್ಷದ ಸಭೆಯಲ್ಲಿ ಎಚ್.ಡಿ.ಕುಮಾರಸ್ವಾಮಿ ಅವರು ಭಾಗವಹಿಸಿ ಸಿಎಂ ಸಿದ್ದರಾಮಯ್ಯ ಜತೆ ಚರ್ಚಿಸಲಿಲ್ಲವೇ? ಒಬ್ಬ ಕೇಂದ್ರದ ಸಚಿವರು ಜನತಾ ದರ್ಶನ ನಡೆಸಿದರೆ ಅಧಿಕಾರಿಗಳು ಸಭೆಗೆ ಹೋಗದಂತೆ ಸುತ್ತೋಲೆ ಹೊರಡಿಸಿ ದ್ವೇಷದ ರಾಜಕೀಯ ಮಾಡುತ್ತೀರಾ? ಜಿಲ್ಲೆಯ ಅಭಿವೃದ್ದಿಯ ಬಗ್ಗೆ ಎಚ್.ಡಿ.ಕುಮಾರಸ್ವಾಮಿ ಅವರು ನಿಮ್ಮಿಂದ ಬುದ್ದಿ ಕಲಿಯಬೇಕಾದ ಅಗತ್ಯತೆ ಇಲ್ಲ. ಕಾವೇರಿ ಸಮಸ್ಯೆ ಬಗ್ಗೆಯೂ ಕೇಂದ್ರದೊಂದಿಗೆ ಚರ್ಚಿಸಿ ಸಮಸ್ಯೆ ಕ್ರಮವಹಿಸಲಿದ್ದಾರೆ ಎಂದು ತಿಳಿಸಿದರು.

ಪ್ರಯಾಣಿಕರ ತಂಗುದಾಣಕ್ಕೆ ಆಗ್ರಹಿಸಿ ಪ್ರತಿಭಟನೆ



ಕೆ.ಆರ್.ಪೇಟೆ ತಾಲೂಕಿನ ಅಗ್ರಹಾರ ಬಾಚಹಳ್ಳಿ ಗ್ರಾಮದ ಗೇಟ್‌ನಲ್ಲಿ ಕೆಶಿಫ್ ವತಿಯಿಂದ ನಿರ್ಮಿಸಲಾಗುತ್ತಿರುವ ಜಲಸೂರು–ಬೆಂಗಳೂರು ಹೆದ್ದಾರಿ ಕಾಮಗಾರಿ ನಿರ್ಮಾಣದ ವೇಳೆ ಒಡೆದು ಹಾಕಿರುವ ಪ್ರಯಾಣಿಕರ ತಂಗುದಾಣ ಬದಲಿಗೆ ಹೊಸ ಬಸ್ ಪ್ರಯಾಣಿಕರ ತಂಗುದಾಣ ನಿರ್ಮಿಸಿಕೊಡಬೇಕು ಎಂದು ಅಗ್ರಹಾರಬಾಚಹಳ್ಳಿ ಗ್ರಾಮಸ್ಥರು ತಾಲೂಕು ಕರ್ನಾಟಕ ರಕ್ಷಣಾ ವೇದಿಕೆಯ ಆಶ್ರಯದಲ್ಲಿ ಪ್ರತಿಭಟನೆ ನಡೆಸಿದರು. ವೇದಿಕೆಯ ಅಧ್ಯಕ್ಷ ಅಗ್ರಹಾರ ಬಾಚಹಳ್ಳಿ ಶ್ರೀನಿವಾಸ್‌ಗೌಡ ಅವರ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಗ್ರಾಮದ ನೂರಾರು ಮುಖಂಡರು, ಯುವಕರು, ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಜು.23 ರಂದು ಹಡಪದ ಅಪ್ಪಣ್ಣ ಜಯಂತಿ

ಮಂಡ್ಯ,ಜು.19– ಮಂಡ್ಯ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರ ಸಭೆ ಇವರ ಸಂಯುಕ್ತಾಶ್ರಯದಲ್ಲಿ ಜುಲೈ 23 ಮಂಗಳವಾರ ಬೆಳಿಗ್ಗೆ 11 ಗಂಟೆಗೆ ಮಂಡ್ಯ ಗಾಂಧಿ ಭವನದಲ್ಲಿ ಶಿವಶರಣ ಹಡಪದ ಅಪ್ಪಣ್ಣನವರ ಜಯಂತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಉಪಸ್ಥಿತಿಯನ್ನು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ. ಕುಮಾರಸ್ವಾಮಿ ವಹಿಸಲಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವರಾದ ಎನ್.ಚಲುವರಾಯ ಸ್ವಾಮಿ ಕಾರ್ಯಕ್ರಮದ ಉದ್ಘಾಟನೆ ಮಾಡಲಿದ್ದಾರೆ. ಚಾಮುಂಡೇಶ್ವರಿ ವಿದ್ಯುತ್ ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರದ ಶಾಸಕ ಎ.ಬಿ. ರಮೇಶ್ ಬಂಡಿಸಿದ್ದೇಗೌಡ ಅವರ ಗೌರವ ಉಪಸ್ಥಿತಿಯಲ್ಲಿ ಮಂಡ್ಯ ವಿಧಾನಸಭಾ ಕ್ಷೇತ್ರ ಶಾಸಕ ಪಿ.ರವಿಕುಮಾರ್ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಶಾಸಕರುಗಳಾದ ಮಧು ಜಿ.ಮಾದೇಗೌಡ, ದಿನೇಶ್ ಗೂಳಿಗೌಡ, ಕೆ.ವಿವೇಕಾನಂದ, ವಿಧಾನಸಭಾ ಕ್ಷೇತ್ರದ ಶಾಸಕರುಗಳಾದ ಪಿ.ಎಂ.ನರೇಂದ್ರಸ್ವಾಮಿ, ದರ್ಶನ್ ಪುಟ್ಟಣ್ಣಯ್ಯ, ಹೆಚ್.ಟಿ. ಮಂಜು, ಕೆ.ಎಂ.ಉದಯ ಅವರುಗಳು ಭಾಗವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಶ್ರೀರಂಗಪಟ್ಟಣ ತರಬೇತಿ ಸಂಪನ್ಮೂಲ ವ್ಯಕ್ತಿ ಗೀತಾ ಹರೀಶ್ ಅವರು ಉಪ ನ್ಯಾಸ ನೀಡಲಿದ್ದಾರೆ ಎಂದು ಮಂಡ್ಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಯುವತಿಗೆ ಕುಮಾರಸ್ವಾಮಿ ಸಹಾಯಾಸ್ತ

ಮಂಡ್ಯ,ಜು.19– ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಅಪಘಾತದಲ್ಲಿ ಗಾಯಗೊಂಡಿದ್ದ ಯುವತಿಗೆ ತಮ್ಮ ಪಕ್ಷದ ಮುಖಂಡರ ಮೂಲಕ 50 ಸಾವಿರ ರೂ. ಧನ ಸಹಾಯ ಮಾಡಿದ್ದಾರೆ.



ಮಂಡ್ಯದ ಅಂಬೇಡ್ಕರ್ ಭವನದಲ್ಲಿ ನಡೆಸಿದ ಜನತಾದರ್ಶನ ಕಾರ್ಯಕ್ರಮದಲ್ಲಿ ಮಾಜಿ ಶಾಸಕ ರವೀಂದ್ರ ಶ್ರೀಕಂಠಯ್ಯ ಅವರ ಮೂಲಕ ಹೆಚ್.ಡಿ.ಕುಮಾರಸ್ವಾಮಿಯರಿಗೆ ಮಂಡ್ಯದ ಗುತ್ತಲು ಬಡಾವಣೆಯ ನಿಶ್ಚಿತಾ ಎಂಬ ಯುವತಿ ಅಪಘಾತದಲ್ಲಿ ಗಾಯಗೊಂಡಿದ್ದ ಬಗ್ಗೆ ಅವರ ಪೋಷಕರಾದ ರವಿಕುಮಾರ್ ಹಾಗೂ ಪವಿತ್ರ ಸಹಾಯ ಮಾಡುವಂತೆ ಮನವಿ ಮಾಡಿದ್ದರು.

ಸಹಾಯ ಮಾಡುವಂತೆ ಮನವಿ ಸಲ್ಲಿಸಿದ ಹಿನ್ನೆಲೆಯಲ್ಲಿ ಮಂಡ್ಯ ಸಂಸದರೂ ಆದ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು 50 ಸಾವಿರ ರೂಗಳನ್ನು ಧನ ಸಹಾಯ ಮಾಡಿರುವುದನ್ನು ಜಿಲ್ಲಾ ಜೆಡಿಎಸ್ ಅಧ್ಯಕ್ಷ ಡಿ. ರಮೇಶ್ ಹಾಗೂ ಮಂಡ್ಯ ವಿಧಾನಸಭಾ ಕ್ಷೇತ್ರದ ಜೆಡಿಎಸ್ ಮುಖಂಡ ಬಿ.ಆರ್. ರಾಮಚಂದ್ರ ಅವರು ಭೇಟಿ ಮಾಡಿ ಧನ ಸಹಾಯ ವಿತರಿಸಿ ಆರೋಗ್ಯ ವಿಚಾರಿಸಿದರು.

ಚೆನ್ನೈ–ಮೈಸೂರು ಹೈಸ್ಪೀಡ್ ಬುಲೆಟ್ ರೈಲು ಯೋಜನೆ: ರೈತರ ಜಮೀನಿನ ಬೆಲೆಯ ನಾಲ್ಕು ಪಟ್ಟು ಪರಿಹಾರ



ಕೋಲಾರ,ಜು.19– ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ ಚೆನ್ನೈ–ಬೆಂಗಳೂರು –ಮೈಸೂರು ಹೈಸ್ಪೀಡ್ ಬುಲೆಟ್ ರೈಲು ಯೋಜನೆಯ ಕಾರಿಡಾರ್ ನಿರ್ಮಾಣಕ್ಕೆ ಸಂಬಂಧಿಸಿದಂತೆ ಸಿದ್ಧತೆ ನಡೆಯುತ್ತಿದೆ. ಸುಮಾರು 463 ಕಿ.ಮೀ. ಉದ್ದದ ಹಳಿಯಲ್ಲಿ 70 ಕಿ.ಮೀ. ಮಾರ್ಗ ಕೋಲಾರ ಜಿಲ್ಲೆಯಲ್ಲಿ ಹಾದು ಹೋಗಲಿದೆ. ಈ ಹಿನ್ನೆಲೆ ಜಿಲ್ಲೆಯಲ್ಲಿ ಸರ್ವೆ ಕಾರ್ಯವನ್ನು ಈಗಾಗಲೇ ಮಾಡಿದ್ದು, ಕೆಲವೆಡೆ ಹೊಲ ಗದ್ದೆಗಳನ್ನು ಕಳೆದುಕೊಳ್ಳುವ ರೈತರನ್ನು ಕರೆಸಿ ಜಿಲ್ಲಾಡಳಿತ ಸಭೆ ನಡೆಸಿದೆ. ಜಮೀನು ಕಳೆದುಕೊಳ್ಳುವ ರೈತರಿಗೆ ಅವರ ಜಮೀನಿನ ಬೆಲೆಯ ನಾಲ್ಕರಷ್ಟು ಹಣ ವನ್ನು ಕೇಂದ್ರ ಸರ್ಕಾರ ನೀಡುವುದಾಗಿ ಜಿಲ್ಲಾಡಳಿತ ಭರವಸೆ ನೀಡಿದೆ.

ದಕ್ಷಿಣ ಭಾರತದಲ್ಲಿ ಮೊದಲ ಬಾರಿಗೆ ಅನುಷ್ಠಾನಗೊಳ್ಳುತ್ತಿರುವ ರೈಲ್ವೆ ಯೋಜನೆ ಇದಾಗಿದ್ದು, ಕರ್ನಾಟಕ, ಆಂಧ್ರಪ್ರದೇಶ ಹಾಗೂ ತಮಿಳುನಾಡು ಮೂರು ರಾಜ್ಯಗಳಿಗೆ ಸಂಪರ್ಕ ಕಲ್ಪಿಸುವ ಯೋಜನೆಯಾಗಿದೆ. ಬುಲೆಟ್ ರೈಲು ಚೆನ್ನೈನಿಂದ ಶುರುವಾಗಿ, ಮೈಸೂರಿನಲ್ಲಿ ಕೊನೆಗೊಳ್ಳಲಿದೆ. ಚೆನ್ನೈನಿಂದ ಬೆಂಗಳೂರು ಹಾಗೂ ಬೆಂಗಳೂರಿನಿಂದ ಮೈಸೂರಿಗೆ ಎರಡು ಹಂತದಲ್ಲಿ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗುತ್ತಿದೆ.

ಈ ಬಗ್ಗೆ ಮಾಹಿತಿ ನೀಡಿದ ಕೋಲಾರ ಜಿಲ್ಲಾಧಿಕಾರಿ ಅಕ್ರಂ ಪಾಷಾ, ಚೆನ್ನೈ–ಬೆಂಗಳೂರು–ಮೈಸೂರಿಗೆ ಎಕ್ಸ್‌ಪ್ರೆಸ್ ಬುಲೆಟ್ ಟ್ರೈನ್ ಯೋಜನೆಗೆ ಈಗಾಗಲೇ ಸಮೀಕ್ಷೆ ನಡೆಸಲಾಗಿದೆ. ಈ ಸಮೀಕ್ಷೆ ನಂತರ ಪರಿಸರದ ಮೇಲಾಗುವ ಪರಿಣಾಮ ಹಾಗೂ ಜನರ ಮೇಲಾಗುವಂತಹ ಪರಿಣಾಮಗಳ ಬಗ್ಗೆ ಪ್ರಯೋಗ ಮಾಡಿ, ಸಮೀಕ್ಷೆ ಮಾಡಲಾಗಿದೆ. ಈ ಸಮೀಕ್ಷೆಯ ಪ್ರಕಾರ, ಭೂಮಿ ಕಳೆದುಕೊಳ್ಳುವಂತಹ ರೈತರನ್ನು ಕರೆದು ಮಾತನಾಡುವಂತಹ ಕೆಲಸವನ್ನು ಜಿಲ್ಲಾಡಳಿತ ಮಾಡಿದೆ ಎಂದು ಹೇಳಿದರು.

ಇದರಲ್ಲಿ ಯಾವುದೇ ತಳಮಟ್ಟದಲ್ಲಿ ಟ್ರ್ಯಾಕ್ ಅನ್ನು ಹಾಕಲಾಗುವುದಿಲ್ಲ. ಸೇತುವೆ ಹಾಗೂ ಸುರಂಗ ಮಾರ್ಗದ ಮಾದರಿಯಲ್ಲಿ ವ್ಯವಸ್ಥೆಯನ್ನು ಮಾಡಲಾಗುತ್ತದೆ. ಈ ಬುಲೆಟ್ ಟ್ರೈನ್ 250 ರಿಂದ 300 ಕಿ.ಮೀ. ವೇಗದಲ್ಲಿ ಚಲಿಸಲಿದೆ. ಒಂದು ಬಾರಿ ಸುಮಾರು 730 ಪ್ರಯಾಣಿಕರನ್ನು ಕರೆದುಕೊಂಡು ಹೋಗುವಂತಹ ಸಾಮರ್ಥ್ಯ ಹೊಂದಿರಲಿದೆ. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಕೇಳಿಕೊಂಡಿರುವಂತೆ ಜಿಲ್ಲಾಡಳಿತದಿಂದ ಭೂಸ್ವಾಧೀನ ಮಾಡಿಕೊಡಬೇಕಾಗಿರುತ್ತದೆ. ಕಾರಿಡಾರ್ ಹಾದು ಹೋಗುವಂತಹ ಜಾಗದಲ್ಲಿ 17 ಮೀಟರ್ ಅಂದರೆ 55 ಅಡಿಯಷ್ಟು ಅಗಲ ಜಾಗವನ್ನು ಭೂಸ್ವಾಧೀನ ಮಾಡುತ್ತೇವೆ. ಹೀಗೆ 70 ಕಿ.ಮೀ. ದೂರಕ್ಕೆ ಸುಮಾರು 167 ಹೆಕ್ಟೇರ್ ಅಷ್ಟು ಭೂಮಿಯನ್ನು ಸ್ವಾಧೀನ ಮಾಡಬೇಕಾಗುತ್ತದೆ. 305 ಕಿ.ಮೀ.ಗಳಲ್ಲಿ ಒಟ್ಟು 11 ನಿಲ್ದಾಣಗಳಿದ್ದು, ಅದರಲ್ಲಿ ಬೆಂಗಳೂರು ಬಿಟ್ಟರೆ ಕೋಲಾರದ ಹುದುಕುಳದಲ್ಲಿ ಒಂದು ನಿಲ್ದಾಣ ಸಿಗಲಿದೆ ಎಂದು ತಿಳಿಸಿದರು.

ಒಂದು ಗಂಟೆಯಲ್ಲಿ ಚೆನ್ನೈಗೆ ತಲುಪುವಂತಹ ವ್ಯವಸ್ಥೆ ಇದಾಗಿದೆ. ನಾವು ಆದಷ್ಟು ಬೇಗ ಭೂಸ್ವಾಧೀನ ಮಾಡಿಕೊಟ್ಟರೆ, ಕೇಂದ್ರ ಆದಷ್ಟು ಬೇಗ ಯೋಜನೆಯನ್ನು ಜಾರಿಗೆ ತರಲಿದೆ. ಇಲ್ಲಿ ರೈಲ್ವೆ ಯೋಜನೆಯಲ್ಲಿ ರೈತರ ಭೂಮಿಗೆ, ಅದರ ಬೆಲೆಯ ನಾಲ್ಕು ಪಟ್ಟು ಹಣ ನೀಡಲು ಕೇಂದ್ರ ನಿರ್ಧರಿಸಿದೆ. ಜೊತೆಗೆ ರೈತರ ಕಟ್ಟಡ, ಅಥವಾ ಮರಗಳಿದ್ದಲ್ಲಿ, ಅದಕ್ಕೆ ಹೆಚ್ಚುವರಿ ಹಣ ಸಿಗಲಿದೆ. ಕಾರಿಡಾರ್‌ನ ಸೇತುವೆಗಳು 10–15 ಮೀಟರ್ ಎತ್ತರದಲ್ಲಿರಲಿದೆ. ಇದರಿಂದ ರೈತರು ಕೂಡ ತಮ್ಮ ಹೊಲಗಳಿಗೆ ಅಡ್ಡಾಡಲು ಯಾವುದೇ ಸಮಸ್ಯೆಗಳಾಗುವುದಿಲ್ಲ. ಜೊತೆಗೆ ಕೆಳಗಡೆ ಇರುವಂತಹ ಪ್ರದೇಶದಲ್ಲಿ 4 ಮೀಟರ್ ಅಗಲದ ಸರ್ವಿಸ್ ರಸ್ತೆಯನ್ನು ಕೂಡ ಅವರೇ ಮಾಡಿಕೊಡುತ್ತಾರೆ ಎಂದು ವಿವರಿಸಿದರು.

ನಾಳೆ ಮೈಸೂರಲ್ಲಿ ಕನ್ನಡ ಸ್ಟ್ಯಾಂಡ್ ಅಪ್ ಕಾಮಿಡಿ

ಮೈಸೂರು, ಜು.19(ಜಿಎ)–ಮೈಸೂರಿನ ಥಿಯೇಟರ್ ಫೋಕ್ಸ್ ಸಂಸ್ಥೆ ವತಿಯಿಂದ ಜು.21 ರಂದು ಸಂಜೆ 6.30ಕೆ ನಗರದ ಕಲಾಮಂದಿರದಲ್ಲಿ ಕನ್ನಡ ಸ್ಟ್ಯಾಂಡ್ ಅಪ್ ಕಾಮಿಡಿ ಕಾರ್ಯಕ್ರಮ ಆಯೋಜಿಸಲಾಗಿದೆ. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸಂಸ್ಥೆಯ ಸಂಸ್ಥಾಪಕರಾದ ಪ್ರಜ್ವಲ್ ಈ ವಿಷಯ ತಿಳಿಸಿ, ಸಂಸ್ಥೆಯು ಈಗಾಗಲೇ ಹಲವಾರು ವರ್ಷಗಳಿಂದ ನಗರದಲ್ಲಿ ಈ ರೀತಿಯ ಕಾರ್ಯಕ್ರಮ ಆಯೋಜಿಸಿದೆ. ಈಗಿನ ಕಾರ್ಯಕ್ರಮಕ್ಕೆ 150 ರೂ., ಸಹಾಯಧನ ನಿಗದಿ ಪಡಿಸಲಾಗಿದೆ. ಆಸಕ್ತರು ಹೆಚ್ಚಿನ ಮಾಹಿತಿ ಹಾಗೂ ಟಿಕೆಟ್‌ಗಾಗಿ ದೂ. 90362 00859 ನ್ನು ಸಂಪರ್ಕಿಸಿ ಎಂದರು. ಸುದ್ದಿಗೋಷ್ಠಿಯಲ್ಲಿ ರಾಕೇಶ್, ದರ್ಶನ್, ಮೋಹಿತ್ ಉಪಸ್ಥಿತರಿದ್ದರು.

ದಸರಾ ಗಜಪಡೆಗೆ 18 ಆನೆ ಗುರುತಿಸಿದ ಅರಣ್ಯ ಇಲಾಖೆ

- ಜಂಬೂಸವಾರಿಗೆ 14, ಹೆಚ್ಚುವರಿ 4 ಆನೆಗಳ ಕಾಯ್ದಿರಿಸಲು ತೀರ್ಮಾನ
- ಡಿಸಿಎಫ್ ಶರಣಬಸಪ್ಪ ನೇತೃತ್ವದಲ್ಲಿ 22 ಆನೆಗಳ ಆಯ್ಕೆ
- ಆ.9 ಇಲ್ಲವೇ 11ಕ್ಕೆ ಗಜಪಯಣಕ್ಕೆ ಚಿಂತನೆ
- ಮೊದಲ ತಂಡದಲ್ಲಿ 9, ಎರಡನೇ ತಂಡದಲ್ಲಿ 5 ಆನೆ ಆಗಮನ
- 13 ವರ್ಷದ ಅಯ್ಯಪ್ಪ ಸೇರಿ ನಾಲ್ಕು ಮೀಸಲು ಆನೆ

ಎಂ.ಟಿ.ಯೋಗೇಶ್ ಕುಮಾರ್

ಮೈಸೂರು, ಜು.19– ನಾಡಹಬ್ಬ ಮೈಸೂರು ದಸರಾ ಮಹೋತ್ಸವದ ಪ್ರಮುಖ ಆಕರ್ಷಣೆ ಜಂಬೂ ಸವಾರಿಗೆ ಗಜಪಡೆ ಸಜ್ಜುಗೊಳಿಸುವ ಕಾರ್ಯ ಸದ್ದಿಲ್ಲದೆ ನಡೆದಿದೆ.

ಈ ಬಾರಿ ಜಂಬೂಸವಾರಿ ಮೆರವಣಿಗೆಯಲ್ಲಿ ಪಾಲ್ಗೊಳ್ಳುವ 14 ಹಾಗೂ ಹೆಚ್ಚುವರಿ ನಾಲ್ಕು ಆನೆ ಸೇರಿದಂತೆ ಒಟ್ಟು 18 ಆನೆಗಳ ಪಟ್ಟಿ ಸಿದ್ದಪಡಿಸಲಾಗಿದ್ದು, ಆಗಸ್ಟ್ 9 ಅಥವಾ 11ರಂದು ಗಜಪಡೆ ಮೊದಲ ತಂಡ ಸಾಂಸ್ಕೃತಿಕ ನಗರಿ ಮೈಸೂರು ಪ್ರವೇಶಿಸುವ ಸಾಧ್ಯತೆ ಇದೆ.

ರಾಜ್ಯದೆಲ್ಲೆಡೆ ಉತ್ತಮ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಈ ಬಾರಿ ದಸರಾ ಮಹೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲು ಉದ್ದೇಶಿಸಲಾಗಿದೆ. ಈ ಹಿನ್ನೆಲೆಯಲ್ಲೇ ದಸರಾ ಗಜಪಡೆಯ ಆಯ್ಕೆ ಪ್ರಕ್ರಿಯೆಯನ್ನು ಈಗಾಗಲೇ ಪೂರ್ಣಗೊಳಿಸಲಾಗಿದೆ.

ಆನೆಗಳ ಪರಿಶೀಲನೆ: ನವರಾತ್ರಿ ಆರಂಭಕ್ಕೆ 84 ದಿನವಷ್ಟೇ ಬಾಕಿಯಿದ್ದು, ಅಕ್ಟೋಬರ್ 12ರ ವಿಜಯದಶಮಿಯಂದು ಜಂಬೂಸವಾರಿ ಉತ್ಸವ ನೆರವೇರಲಿದೆ. ತರಬೇತಿ ನೀಡುವ ಸಲುವಾಗಿ 60 ದಿನ ಮುಂಚಿತವಾಗಿ ಆನೆಗಳನ್ನು ಮೈಸೂರಿಗೆ ಕರೆತರಲು ಉದ್ದೇಶಿಸಲಾಗಿದೆ. ಈಗಾಗಲೇ ನಾಗರಹೊಳೆ ಅರಣ್ಯ ವ್ಯಾಪ್ತಿಯ ಮತ್ತಿಗೋಡು, ಭೀಮನಕಟ್ಟೆ, ದೊಡ್ಡಹರವೆ, ಕೊಡಗಿನ ದುಬಾರೆ, ಬಂಡೀಪುರದ ರಾಂಪುರ ಕ್ಯಾಂಪ್‌ಗಳಿಗೆ ಮೈಸೂರು ವನ್ಯಜೀವಿ ವಿಭಾಗದ ಡಿಸಿಎಫ್ ಐ.ಎಂ.ಶರಣಬಸಪ್ಪ ನೇತೃತ್ವದ ಅರಣ್ಯಾಧಿಕಾರಿಗಳ ತಂಡ ಭೇಟಿ ನೀಡಿ, ಪಶುವೈದ್ಯರೊಂದಿಗೆ ಒಟ್ಟು 22 ಆನೆಗಳನ್ನು ಪರಿಶೀಲಿಸಿ, 18 ಆನೆಗಳ ಪಟ್ಟಿ ಸಿದ್ದಪಡಿಸಲಾಗಿದೆ. ಅದರಲ್ಲಿ 14 ಆನೆ ಜಂಬೂಸವಾರಿ ಮೆರವಣಿಗೆಗೆ ಆಯ್ಕೆ ಮಾಡಿ, ಉಳಿದ 4 ಆನೆಗಳನ್ನು ಕಾಯ್ದಿರಿಸಲು ಉದ್ದೇಶಿಸಲಾಗಿದೆ.



ಮತ್ತಿಗೋಡು ಕ್ಯಾಂಪ್‌ನಲ್ಲಿ ಮಹೇಂದ್ರ, ಭೀಮ, ಏಕಲವ್ಯ ಆನೆಗಳನ್ನು ಡಿಸಿಎಫ್ ಶರಣಬಸಪ್ಪ ಪರಿಶೀಲಿಸುತ್ತಿರುವುದು.

ಆ.9 ಅಥವಾ 11ಕ್ಕೆ ಗಜಪಯಣ: ದಸರಾ ಮಹೋತ್ಸವದ ಗಜಪಯಣಕ್ಕೆ ಯೋಗ್ಯ ನಕ್ಷತ್ರವಿರುವ ಆ.9 ಅಥವಾ 11ರಂದು ಸೂಕ್ತ ದಿನಗಳೆಂದು ಗುರುತಿಸಲಾಗಿದೆ. ಆ.11ರಂದು ಗಜಪಯಣ ನಿಗದಿಗೊಳಿಸುವ ಸಾಧ್ಯತೆ ಹೆಚ್ಚಿದೆ.

ಎರಡು ತಂಡಗಳಲ್ಲಿ ಆಗಮನ: ಆಯ್ಕೆ ಮಾಡಿರುವ 14ರಲ್ಲಿ ಮೊದಲ ತಂಡದಲ್ಲಿ 9 ಆನೆಗಳನ್ನು ಕರೆತರಲು ಚಿಂತನೆ ನಡೆಸಲಾಗಿದೆ. ಮೊದಲ ತಂಡದಲ್ಲಿ ಮತ್ತಿಗೋಡು ಕ್ಯಾಂಪ್‌ನಿಂದ ಗಜಪಡೆಯ ನಾಯಕ, ಅಂಬಾರಿ ಆನೆ ಅಭಿಮನ್ಯು (58), ಭೀಮ, ಹೊಸ ಆನೆ ಏಕಲವ್ಯ (39), ಭೀಮನಕಟ್ಟೆ ಕ್ಯಾಂಪ್‌ನಿಂದ ವರಲಕ್ಷ್ಮೀ(68), ದುಬಾರೆ ಕ್ಯಾಂಪ್‌ನಿಂದ ಧನಂಜಯ(41), ಗೋಪಿ(42), ಕಂಜನ್ (25), ರಾಮಾಪುರ ಕ್ಯಾಂಪ್‌ನಿಂದ ರೋಹಿತ(22), ಲಕ್ಷ್ಮೀ(23) ಆನೆಗಳು ಆಗಮಿಸಲಿವೆ. ಎರಡನೇ ತಂಡದಲ್ಲಿ ದುಬಾರೆ ಕ್ಯಾಂಪ್‌ನಿಂದ ಪ್ರಶಾಂತ(51), ಸುಗ್ರೀವ(42), ಮತ್ತಿಗೋಡು ಕ್ಯಾಂಪ್‌ನಿಂದ ಮಹೇಂದ್ರ(41), ದೊಡ್ಡಹರವೆಯಿಂದ ಲಕ್ಷ್ಮೀ(53), ರಾಂಪುರ ಕ್ಯಾಂಪ್‌ನಿಂದ ಹಿರಣ್ಯ(37) ಆನೆಗಳನ್ನು ಮೈಸೂರಿಗೆ ಕರೆತರಲು ಉದ್ದೇಶಿಸಲಾಗಿದೆ.

ಕಾಯ್ದಿರಿಸಿದ ಆನೆಗಳು: ಈ ಬಾರಿ 14 ಆನೆಗಳು ಜಂಬೂಸವಾರಿ ಮೆರವಣಿಗೆಯಲ್ಲಿ ಪಾಲ್ಗೊಳ್ಳಲಿವೆಯಾದರೂ, ಹೆಚ್ಚುವರಿಯಾಗಿ 4 ಆನೆಗಳನ್ನು ಕಾಯ್ದಿರಿಸಲಾಗಿದೆ. ಯಾವುದಾದರೂ ಆನೆಗೆ ಆರೋಗ್ಯ ಸಮಸ್ಯೆಯಾದರೆ ಅದಕ್ಕೆ ಪರ್ಯಾಯವಾಗಿ ಬಳಸಿಕೊಳ್ಳಲು ಈ ಕ್ರಮ ವಹಿಸಲಾಗಿದೆ. ಅದಕ್ಕಾಗಿ ದುಬಾರೆ ಕ್ಯಾಂಪ್‌ನಿಂದ ಅನುಭವಿ ಪ್ರಶಾಂತ(49), ಅಯ್ಯಪ್ಪ(13), ರಾಮಾಪುರ ಕ್ಯಾಂಪ್‌ನಿಂದ ಪಾರ್ಥಸಾರಥಿ(19) ಹಾಗೂ ಮಾಲಾದೇವಿ(37) ಆನೆಗಳನ್ನು ಹೆಚ್ಚುವರಿಯಾಗಿ ಕಾಯ್ದಿರಿಸಲಾಗಿದೆ. ಹೊಸ ಆನೆಗಳನ್ನೂ ಮೈಸೂರಿಗೆ ಕರೆತಂದು ತಾಲೀಮು ಮಾಡಿಸಿದರೆ ಭವಿಷ್ಯದ ದಸರಾ ಗಜಪಡೆಯನ್ನು ಸಜ್ಜುಗೊಳಿಸಲು ಸುಲಭವಾಗುತ್ತದೆ ಎಂದು ಅರಣ್ಯ ಇಲಾಖೆಗೆ ಸಲಹೆ ನೀಡಿದ್ದು, ಈ ಬಗ್ಗೆ ಇನ್ನೂ ಅಂತಿಮ ತೀರ್ಮಾನ ಕೈಗೊಂಡಿಲ್ಲ. ಸದ್ಯಕ್ಕೆ ಮೊದಲ ತಂಡದಲ್ಲಿ 9, ಎರಡನೇ ತಂಡದಲ್ಲಿ 5 ಆನೆ ಮೈಸೂರಿಗೆ ಬರುವುದು ಖಚಿತವಾಗಿದೆ.

> ಈಗಾಗಲೇ ಕ್ಯಾಂಪ್‌ಗಳಿಗೆ ತೆರಳಿ ಆನೆಗಳನ್ನು ಪರಿಶೀಲಿಸಿದ್ದೇವೆ. ಒಟ್ಟು 22 ಆನೆಗಳನ್ನು ಪರಿಶೀಲಿಸಿದ್ದು, ಅವುಗಳಲ್ಲಿ 18 ಆನೆ ಪಟ್ಟಿ ಸಿದ್ಧಪಡಿಸಲಾಗಿದೆ. ಅದರಲ್ಲಿ 14 ಆನೆ ಜಂಬೂ ಸವಾರಿಯಲ್ಲಿ ಪಾಲ್ಗೊಂಡರೆ, ಉಳಿದ ನಾಲ್ಕು ಆನೆಯನ್ನು ಕಾಯ್ದಿರಿಸಲು ಚಿಂತನೆ ನಡೆಸಲಾಗಿದೆ.
>
> – ಐ.ಎಂ.ಶರಣಬಸಪ್ಪ, ಡಿಸಿಎಫ್, ಮೈಸೂರು ವನ್ಯಜೀವಿ ವಿಭಾಗ

ಸೆಂಟ್ ಫಿಲೊಮಿನಾ ಕಾಲೇಜಿನಲ್ಲಿ 'ದೀಕ್ಷಾರಂಭ'



ಮೈಸೂರಿನ ಸೆಂಟ್ ಫಿಲೊಮಿನಾ ಕಾಲೇಜಿನಲ್ಲಿ 2024–25ನೇ ಶೈಕ್ಷಣಿಕ ವರ್ಷದ ಹೊಸ ವಿದ್ಯಾರ್ಥಿಗಳು ಹಾಗೂ ಅವರ ಪೋಷಕರು, ಸಂರಕ್ಷಣಾಧಿಕಾರಿಗಳ 'ದೀಕ್ಷಾರಂಭ' ಕಾರ್ಯಕ್ರಮವನ್ನು ಕಾಲೇಜಿನ ರೆಕ್ಟರ್ ಡಾ.ಲೂರ್ಡು ಪ್ರಸಾದ್ ಜೋಸೆಫ್ ಉದ್ಘಾಟಿಸಿದರು, ಆಡಳಿತಾಧಿಕಾರಿ ಫಾ.ಜ್ಞಾನಪ್ರಕಾಸಮ್, ಪ್ರಾಂಶುಪಾಲ ಡಾ.ರವಿ ಜೆ ಡಿ ಸಲ್ಡಾನ್ಹಾ ಉಪ ಪ್ರಾಂಶುಪಾಲರಾದ ಎಂ.ನಾಗರಾಜ್ ಉರ್ಸ್, ರೊನಾಲ್ಡ್ ಪ್ರಕಾಶ್ ಕುಟಿನ್ಹಾ, ಸಂಯೋಜಕ ಎ.ಥಾಮಸ್ ಗುನಸೆಲನ್, ಪರೀಕ್ಷೆಗಳ ನಿಯಂತ್ರಕ ಡಾ.ರೀನಾ ಫ್ರಾನ್ಸಿಸ್, ಪಿಜಿ ಅಧ್ಯಯನ ಮತ್ತು ಸಂಶೋಧನಾ ಕೇಂದ್ರದ ಸಂಯೋಜಕ ಡಾ.ಸಿ.ಎ.ನೂರು ಮುಬಾಶೀರ್, ಡಾ.ಅಲ್ಫೋನ್ಸಸ್ ಡಿ ಸೋಜಾ, ಪ್ರೊ.ಎ.ಟಿ. ಸದೇಬೋಸ್, ಪ್ರೊ.ಅಗ್ರಿ ಸಿಲ್ವಿಯಾ ಡಿ ಸೋಜಾ, ಕಲಾ ಮತ್ತು ವಿದ್ಯಾರ್ಥಿ ಕಲ್ಯಾಣಾಧಿಕಾರಿ ಪ್ರೊ.ಪ್ರವೀನ್ ಸಲ್ಡಾನ್ಹಾ ಉಪಸ್ಥಿತರಿದ್ದರು.

ಗುಡ್ಡ ಕುಸಿತ: ಬಸ್ ಸಂಚಾರ ವ್ಯತ್ಯಯ; ಮಂಗಳೂರು–ಬೆಂಗಳೂರು ನಡುವೆ ಹೆಚ್ಚುವರಿ ರೈಲು

ಮಂಗಳೂರು: ಗುಡ್ಡ ಕುಸಿತದಿಂದಾಗಿ ಕರಾವಳಿಯನ್ನು ಬೆಂಗಳೂರಿನೊಂದಿಗೆ ಸಂಪರ್ಕಿಸುವ ಎರಡು ಮುಖ್ಯ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಬಸ್ ಸಂಚಾರದಲ್ಲಿ ವ್ಯತ್ಯಯ ಆಗಿರುವ ಹಿನ್ನೆಲೆಯಲ್ಲಿ ಎರಡು ಹೆಚ್ಚುವರಿ ವಿಶೇಷ ರೈಲು ಸಂಚಾರ ಆರಂಭಿಸಲು ನೈರುತ್ಯ ರೈಲ್ವೆ ಕ್ರಮ ಕೈಗೊಂಡಿದೆ. 06547 ಸಂಖ್ಯೆಯ ರೈಲು ಯಶವಂತಪುರದಿಂದ ಶುಕ್ರವಾರ ತೆರಳಿತು. 06548 ಸಂಖ್ಯೆಯ ರೈಲು ಮಂಗಳೂರು ಜಂಕ್ಷನ್‌ನಿಂದ ಶನಿವಾರ ಹೊರಡಲಿದೆ. 06549 ಸಂಖ್ಯೆಯ ರೈಲು ಇದೇ 21 ಮತ್ತು 22ರಂದು ಯಶವಂತಪುರದಿಂದ ಮಂಗಳೂರು ಜಂಕ್ಷನ್‌ಗೆ ಹೊರಡಲಿದ್ದು, 06550 ಸಂಖ್ಯೆಯ ರೈಲು 21 ಮತ್ತು 22ರಂದು ಮಂಗಳೂರು ಜಂಕ್ಷನ್‌ನಿಂದ ಯಶವಂತಪುರಕ್ಕೆ ಹೊರಡಲಿದೆ.



ತಲಾ ಎರಡು ಸ್ಲೀಪರ್ ಕೋಚ್‌ಗಳು ಸೇರಿದಂತೆ ಈ ಎಲ್ಲ ರೈಲುಗಳಲ್ಲಿ ಒಟ್ಟು 18 ಕೋಚ್‌ಗಳು ಇರುತ್ತವೆ ಎಂದು ನೈರುತ್ಯ ರೈಲ್ವೆ ತಿಳಿಸಿದೆ. ಮಂಗಳೂರು–ಬೆಂಗಳೂರು ನಡುವೆ ತುರ್ತಾಗಿ ಹೆಚ್ಚುವರಿ ರೈಲು ಸೇವೆ ಒದಗಿಸುವಂತೆ ದಕ್ಷಿಣ ಕನ್ನಡ ಸಂಸದ ಬ್ರಿಜೇಶ್ ಚೌಟ ನೈರುತ್ಯ ರೈಲ್ವೆ ಪ್ರಧಾನ ವ್ಯವಸ್ಥಾಪಕ ಮತ್ತು ಮೈಸೂರು ವಿಭಾಗದ ವ್ಯವಸ್ಥಾಪಕರಿಗೆ ಶುಕ್ರವಾರ ಬೆಳಿಗ್ಗೆ ಪತ್ರ ಬರೆದಿದ್ದರು.

ದೇಶ - ವಿದೇಶ

ಹಣದ ವಿಚಾರಕ್ಕೆ ಹೆತ್ತ ತಾಯಿಯ ತಲೆ ಕತ್ತರಿಸಿದ ಮಗ

ತ್ರಿಪುರ, ಜು.19– ಆಘಾತಕಾರಿ ಘಟನೆಯೊಂದರಲ್ಲಿ ಹಣದ ವಿವಾದದ ಹಿನ್ನೆಲೆಯಲ್ಲಿ ತ್ರಿಪುರಾದ ಖೋವೈ ಜಿಲ್ಲೆಯ ರತನ್‌ಪುರದಲ್ಲಿ 24 ವರ್ಷದ ಯುವಕನೊಬ್ಬ ತನ್ನ 55 ವರ್ಷದ ತಾಯಿಯ ತಲೆಯನ್ನು ಕತ್ತರಿಸಿದ್ದಾನೆ ಎಂದು ಪೊಲೀಸರು



ತಿಳಿಸಿದ್ದಾರೆ. ಆ ಮಹಿಳೆಯ ಕುಟುಂಬಸ್ಥರು ನೀಡಿದ ದೂರಿನ ಆಧಾರದಲ್ಲಿ ಆತನನ್ನು ಬಂಧಿಸಲಾಗಿದೆ. ಪೊಲೀಸ್ ಅಧಿಕಾರಿಯೊಬ್ಬರು ಈ ಕುರಿತು ಮಾಹಿತಿ ನೀಡಿದ್ದು, ಹರಿಚರಣ್ ಝುರಾ ತನ್ನ ತಾಯಿ ಪರ್ಬತಿ ಝುರಾ ಅವರ ಬಳಿ ಹಣ ಕೇಳಿದ್ದ, ಅದು ಇಬ್ಬರ ನಡುವೆ ಜಗಳಕ್ಕೆ ಕಾರಣವಾಯಿತು. ಅದೇ ಜಗಳದಿಂದ ಆತ ತನ್ನ ಹೆತ್ತ ತಾಯಿಯ ತಲೆಯನ್ನು ಕತ್ತರಿಸಿದ್ದಾನೆ ಎಂದಿದ್ದಾರೆ.

ಅಮೆರಿಕಾ ವಿವಿಯಿಂದ ಪ್ರಬಂಧಕ್ಕೆ 1 ಕೋಟಿ ವಿದ್ಯಾರ್ಥಿ ವೇತನ ಪಡೆದ ಬೆಂಗಳೂರು ವಿದ್ಯಾರ್ಥಿನಿ

ನ್ಯೂಯಾರ್ಕ್: ಕಾಗ್ನಿಟಿವ್ ಏಜಿಂಗ್ ಕುರಿತಂತೆ ಪ್ರಬಂಧ ಮಂಡಿಸಿದ ಬೆಂಗಳೂರಿನ ಪ್ರತಿಭಾವಂತೆ ಮೀನಾಕ್ಷಿ ಮೆನನ್ (26), ಅಮೆರಿಕ ವಿಶ್ವವಿದ್ಯಾಲಯದಿಂದ 1 ಕೋಟಿ ರೂ. ವಿದ್ಯಾರ್ಥಿ ವೇತನ ಪಡೆದಿದ್ದಾರೆ. ಆಲ್ಝೈಮರ್‌ಗೆ ಒಳಗಾದ ತಮ್ಮ ಮುತ್ತಜ್ಜಿಯಂತೆ ತನ್ನ ಅಜ್ಜಿಯಂದಿರೂ ವಯಸ್ಸಾಗುತ್ತಿದ್ದಂತೆ ಸ್ಮರಣಶಕ್ತಿ ಕಳೆದುಕೊಳ್ಳುವ ಸಮಸ್ಯೆ ವೀಕ್ಷಿಸಿದ ಅವರು, 'ನೆನಪಿನ ಶಕ್ತಿ– ವಯಸ್ಸಾಗುವಿಕೆ' ವಿಷಯದ ಬಗ್ಗೆ ವ್ಯಾಪಕ ಸಂಶೋಧನೆ ನಡೆಸಿ ಈ ವಿದ್ಯಾರ್ಥಿವೇತನಕ್ಕೆ ಭಾಜನರಾಗಿದ್ದಾರೆ.

ತಮ್ಮ 17ನೇ ವರ್ಷದಲ್ಲೇ ಅರಿವಿಗೆ ವಯಸ್ಸಾಗುವಿಕೆ (Cognitive Ageing) ಕುರಿತು ಅಧ್ಯಯನ ನಡೆಸುವ ಬಗ್ಗೆ ನಿರ್ಧರಿಸಿದ ಮೀನಾಕ್ಷಿ ಅವರು, 9 ವರ್ಷಗಳ ಬಳಿಕ ಅಮೆರಿಕದ ಜಾರ್ಜಿಯಾ ಸ್ಟೇಟ್ ಯೂನಿವರ್ಸಿಟಿಯಲ್ಲಿ ಅರಿವಿನ ವಿಜ್ಞಾನದಲ್ಲಿ (ಕಾಗ್ನಿಟಿವ್ ಸೈನ್ಸ್) ತಮ್ಮ ಪಿಎಚ್‌ಡಿ ಪ್ರಾರಂಭಿಸಲು ತಯಾರಿ ನಡೆಸಿದರು. ಬೆಂಗಳೂರಿನ ಜೆಪಿ ನಗರದಲ್ಲಿ ಕುಟುಂಬದ ಜತೆ ವಾಸವಾಗಿರುವ ಅವರು, ಐಐಎಸ್‌ಸಿಯ ಮೆದುಳಿನ ಸಂಶೋಧನಾ ಕೇಂದ್ರದಲ್ಲಿ (ಸಿಬಿಆರ್) 2023ರಲ್ಲಿ ಸಂಶೋಧಕರಾಗಿ ಮತ್ತು ಟಾಟಾ ಲಾಂಗಿಟ್ಯೂಡಿನಲ್ ಸ್ಟಡಿ ಆಫ್ ಏಜಿಂಗ್ (ಟಿಎಲ್‌ಎಸ್‌ಎ) ಭಾಗವಾಗಿಯೂ ಕಾರ್ಯನಿರ್ವಹಿಸಿದ್ದಾರೆ. ಹಾಗೆಯೇ, ನಿಮ್ಹಾನ್ಸ್‌ನಲ್ಲಿ ಆಯೋಜಿಸಿದ್ದ ಹೆಲ್ತಿ ಏಜಿಂಗ್ (ಆರೋಗ್ಯಕರ ವಯಸ್ಸು) ಆರೋಗ್ಯಕರ ವಯಸ್ಸು ವಿಷಯ ಕುರಿತ ಕಾನ್ಫರೆನ್ಸ್‌ನಲ್ಲಿ ತಮ್ಮ ಪ್ರಬಂಧ ಮಂಡಿಸಿದರು.

ಹೆಂಡತಿ ಎಂದು ಬೇರೊಬ್ಬ ಮಹಿಳೆಯನ್ನು ಚುಂಬಿಸಲು ಮುಂದಾದ ಬಿಡನ್!

ವಾಷಿಂಗ್ಟನ್, ಜು.19– ತನ್ನ ಹೆಂಡತಿ ಎಂದು ಭಾವಿಸಿ ಮತ್ತೊಬ್ಬ ಮಹಿಳೆಯನ್ನು



ಚುಂಬಿಸಲು ಅಮೆರಿಕಾ ಅಧ್ಯಕ್ಷ ಜೋ ಬಿಡನ್ ಮುಂದಾಗಿದ್ದು, ಈ ವಿಡಿಯೋ ವೈರಲ್ ಆಗಿದೆ. ಮರೆವು ಕಾಯಿಲೆಯಿಂದ ಬಳಲುತ್ತಿರುವಂತೆ ಕಾಣುವ ಬಿಡನ್ ಅವರ ನಡವಳಿಕೆಯು ಚರ್ಚೆಯ ವಿಷಯವಾಗಿದೆ. ಅವರು ಅನಗತ್ಯವಾಗಿ ನಗುವುದು, ಯಾವುದೇ ವೇದಿಕೆಯಲ್ಲಿದ್ದರೂ ತಪ್ಪು ಮಾಡುವುದು ಸಾಮಾನ್ಯ ಸಂಗತಿಯಾಗಿದೆ. ಇತ್ತೀಚೆಗೆ ಅವರು ವೇದಿಕೆಯಲ್ಲೇ ತನ್ನ ಪತ್ನಿ ಎಂದು ಭಾವಿಸಿ ಮತ್ತೊಬ್ಬ ಮಹಿಳೆಗೆ ಮುತ್ತು ಕೊಡಲು ಮುಂದಾಗಿದ್ದಾರೆ. ಆಗ ಹೌಹಾರಿ ಬಂದ ಅವರ ಪತ್ನಿ ಜಿಲ್ ಬಿಡೆನ್ ತಡೆದಿರುವುದು ವಿಡಿಯೋದಲ್ಲಿ ಕಂಡು ಬಂದಿದೆ.

ಇದು ಹಳೆಯ ವಿಡಿಯೋ ಆಗಿದ್ದರೂ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿದೆ. ಜಿಲ್ ಬಿಡೆನ್ ಸರಿಯಾದ ಸಮಯಕ್ಕೆ ಬರದಿದ್ದರೆ ಆ ಮಹಿಳೆಯ ಕಥೆ ಏನು? ಇದು ತುಂಬಾ ಕೆಟ್ಟದಾಗಿದೆ ಎಂದು ಈ ವೀಡಿಯೊವನ್ನು ನೋಡಿದ ನೆಟಿಜನ್‌ಗಳು ಅಭಿಪ್ರಾಯಪಡುತ್ತಿದ್ದಾರೆ. ಬಿಡನ್ ಒಮ್ಮೆ ವೇದಿಕೆಯಲ್ಲಿ ಮೃತ ಅಧಿಕಾರಿಯ ಹೆಸರು ಹೇಳಿ ಸ್ವಾಗತಿಸಿದ್ದರು. ಮತ್ತೊಂದು ಕಾರ್ಯಕ್ರಮದಲ್ಲಿ ಅಧ್ಯಕ್ಷರು ವೇದಿಕೆಯಿಂದ ಇಳಿದು ಹೊರಟಿದ್ದರು. ಆಗ ಭದ್ರತಾ ಸಿಬ್ಬಂದಿ ನೆನಪಿಸಿ ಮತ್ತೆ ವೇದಿಕೆ ಮೇಲೇರುವಂತೆ ಮಾಡಿದರು.

ಬಾಂಗ್ಲಾದೇಶ: ಹಿಂಸಾತ್ಮಕ ಪ್ರತಿಭಟನೆಯಲ್ಲಿ 39ಮಂದಿ ಸಾವು

ನವದೆಹಲಿ, ಜು.19– ಸರ್ಕಾರಿ ಉದ್ಯೋಗದಲ್ಲಿನ ಮೀಸಲಾತಿ ವ್ಯವಸ್ಥೆಯ ವಿರುದ್ಧ ಬಾಂಗ್ಲಾದೇಶದಲ್ಲಿ ನಡೆಯುತ್ತಿರುವ ಮುಷ್ಕರದಿಂದಾಗಿ ಜನರು ಮನೆಯೊಳಗೆ ಇರುವಂತೆ ಢಾಕಾದಲ್ಲಿರುವ ಭಾರತದ ರಾಯಭಾರಿ ಕಚೇರಿ ನೀಡಿದ ಸಲಹೆಯನ್ನು ಅನುಸರಿಸುವಂತೆ ವಿದೇಶಾಂಗ ವ್ಯವಹಾರಗಳ



ಸಚಿವಾಲಯ ಶುಕ್ರವಾರ (ಜು.19) ಬಾಂಗ್ಲಾದೇಶದಲ್ಲಿರುವ ಭಾರತೀಯರಿಗೆ ವಿನಂತಿಸಿದೆ.

ಬಾಂಗ್ಲಾದೇಶದಲ್ಲಿರುವ ಭಾರತೀಯ ಪ್ರಜೆಗಳಿಗೆ ಅಗತ್ಯವಿರುವ ಯಾವುದೇ ಸಹಾಯಕ್ಕಾಗಿ ಸಹಾಯವಾಣಿ ಸಂಖ್ಯೆಗಳಲ್ಲಿ ಹೈಕಮಿಷನ್ ಮತ್ತು ಸಹಾಯಕ ಹೈಕಮಿಷನ್‌ಗಳು ಲಭ್ಯವಿವೆ ಎಂದು ಎಂಇಎ ವಕ್ತಾರ ರಣಧೀರ್ ಜೈಸ್ವಾಲ್ ಸಾಮಾಜಿಕ ಜಾಲತಾಣದ ತಮ್ಮ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿದ್ದಾರೆ. ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಭಾರತೀಯ ಸಮುದಾಯದ ಸದಸ್ಯರು ಮತ್ತು ಬಾಂಗ್ಲಾದೇಶದಲ್ಲಿ ನೆಲೆಸಿರುವ ಭಾರತೀಯ ವಿದ್ಯಾರ್ಥಿಗಳು ಹೊರಬರದಂತೆ ಮತ್ತು ತಮ್ಮ ನಿವಾಸದ ಆವರಣದ ಹೊರಗೆ ಓಡಾಡದಂತೆ ಹೈಕಮಿಷನ್ ಸೂಚಿಸಿತ್ತು. 1971ರ ಬಾಂಗ್ಲಾದೇಶ ವಿಮೋಚನಾ ಯುದ್ಧದಲ್ಲಿ ಭಾಗಿಯಾಗಿರುವ ಕುಟುಂಬದ ಸದಸ್ಯರಿಗೆ ಬಾಂಗ್ಲಾದೇಶದಲ್ಲಿ ಸರ್ಕಾರಿ ಉದ್ಯೋಗಗಳಲ್ಲಿನ ಮೀಸಲಾತಿ ಕೊನೆಗೊಳಿಸಲು ಬೇಡಿಕೆಯಿದೆ. ಆದರೆ ಪ್ರಧಾನಿ ಶೇಖ್ ಹಸೀನಾ ಅವರು ಮೀಸಲಾತಿಯನ್ನು ಕೊನೆಗೊಳಿಸಲು ಸ್ಪಷ್ಟವಾಗಿ ನಿರಾಕರಿಸಿದ್ದಾರೆ. ಈ ಕಾರಣಕ್ಕಾಗಿ ಅಲ್ಲಿ ಪ್ರತಿಭಟನೆ ನಡೆಯುತ್ತಿದೆ.

'ಅನಿಮಲ್' ನಿರ್ಮಾಪಕ ಕ್ರಿಶನ್ ಕುಮಾರ್ ಪುತ್ರಿ ತಿಶಾ ಕ್ಯಾನ್ಸರ್‌ಗೆ ಬಲಿ

ಮುಂಬೈ, ಜು.19–ನಟ – ನಿರ್ಮಾಪಕ ಕ್ರಿಶನ್ ಕುಮಾರ್ ಪುತ್ರಿ ತಿಶಾ



ಕುಮಾರ್ ಕ್ಯಾನ್ಸರ್‌ನಿಂದ ಸಾವನ್ನಪ್ಪಿದ್ದಾರೆ. ಬಹು ಸಮಯದಿಂದ ಕ್ಯಾನ್ಸರ್ ವಿರುದ್ಧ ಹೋರಾಡುತ್ತಿದ್ದ ತಿಶಾ ನಿನ್ನೆ (ಜುಲೈ 18, ಗುರುವಾರ) ನಿಧನರಾದರು. ಕುಮಾರ್ ಕುಟುಂಬದ ಮೂಲಗಳು ಮಾಧ್ಯಮಗಳಿಗೆ ತಿಶಾ ಕುಮಾರ್ ಮರಣವನ್ನು ದೃಢಪಡಿಸಿದ್ದಾರೆ. ಕ್ಯಾನ್ಸರ್ ಹಿನ್ನೆಲೆ ತಿಶಾ ಜರ್ಮನಿಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ಆದರೆ, ಚಿಕಿತ್ಸೆ ಫಲಕಾರಿಯಾಗದೇ ಆಸ್ಪತ್ರೆಯಲ್ಲೇ ನಿಧನರಾದರು ಎಂದು ಅವರ ಕುಟುಂಬದ ಮೂಲಗಳು ಮಾಹಿತಿ ಹಂಚಿಕೊಂಡಿವೆ. ತಿಶಾ ಕುಮಾರ್, ಕ್ರಿಶನ್ ಕುಮಾರ್ ಮತ್ತು ತಾನ್ಯಾ ಸಿಂಗ್ ದಂಪತಿಯ ಪುತ್ರಿ. 2003ರ ಸೆಪ್ಟೆಂಬರ್ 6ರಂದು ಜನಿಸಿದರು. ಸ್ವಭಾವದಲ್ಲಿ ಬಹಳ ಖಾಸಗಿ ವ್ಯಕ್ತಿ. ಸಾರ್ವಜನಿಕ ವಾಗಿ ಹೆಚ್ಚು ಕಾಣಿಸಿಕೊಂಡಿರಲಿಲ್ಲ. 2023ರ ನವೆಂಬರ್‌ನಲ್ಲಿ ರಣ್‌ಬೀರ್ ಕಪೂರ್ ಮತ್ತು ರಶ್ಮಿಕಾ ಮಂದಣ್ಣ ಅನಿಮಲ್ ಚಿತ್ರದ ಪ್ರಥಮ ಪ್ರದರ್ಶನದ ಸಂದರ್ಭ ಕಾಣಿಸಿಕೊಂಡಿದ್ದರು.

ಅಮೆರಿಕಕ್ಕೆ ಭಾರತದ ಹೊಸ ರಾಯಭಾರಿ ವಿನಯ್ ಮೋಹನ್ ಕ್ವಾತ್ರಾ

ವಾಷಿಂಗ್ಟನ್ (ಅಮೆರಿಕ): ಭಾರತ ಸರ್ಕಾರದ ವಿದೇಶಾಂಗ ವ್ಯವಹಾರಗಳ



ಸಚಿವಾಲಯ ಅಮೆರಿಕ ದೇಶಕ್ಕೆ ಭಾರತದ ಹೊಸ ರಾಯಭಾರಿಯಾಗಿ ವಿನಯ್ ಮೋಹನ್ ಕ್ವಾತ್ರಾ ನೇಮಕವಾಗಿದ್ದು, ಶೀಘ್ರದಲ್ಲೇ ಅವರು ಅಧಿಕಾರ ಸ್ವೀಕಾರ ಮಾಡಲಿದ್ದಾರೆ. ಈ ಸಂಬಂಧ ಜುಲೈ 19 ಶುಕ್ರವಾರ ಭಾರತೀಯ ವಿದೇಶಾಂಗ ವ್ಯವಹಾರಗಳ ಸಚಿವಾಲಯ ಆದೇಶ ಹೊರಡಿಸಿದೆ. 1988ರ ಬ್ಯಾಚ್‌ನ ಭಾರತೀಯ ವಿದೇಶಾಂಗ ಸೇವೆ (ಐಎಫ್‌ಎಸ್) ಅಧಿಕಾರಿಯಾಗಿ ನೇಮಕಗೊಂಡ ವಿನಯ್ ಮೋಹನ್ ಕ್ವಾತ್ರಾ ಅವರು, 2022ರ ಏಪ್ರಿಲ್ ತಿಂಗಳಿನಲ್ಲಿ ಭಾರತೀಯ ವಿದೇಶಾಂಗ ಕಾರ್ಯದರ್ಶಿಯಾಗಿ ನೇಮಕವಾಗಿದ್ದರು. ಇದಕ್ಕೂ ಮುನ್ನ ನೇಪಾಳದಲ್ಲಿ ಭಾರತದ ರಾಯಭಾರಿಯಾಗಿ ಕಾರ್ಯ ನಿರ್ವಹಿಸಿದ್ದರು.

ಸಿದ್ದರಾಮಯ್ಯ ಸರ್ಕಾರದಲ್ಲಿ ಪಾರದರ್ಶಕ ಭ್ರಷ್ಟ ಆಡಳಿತ

● ಬಿಜೆಪಿ–ಜೆಡಿಎಸ್ ಸದಸ್ಯರ ಆರೋಪ ● ವಿಧಾನಸೌಧದ ಗಾಂಧಿ ಪ್ರತಿಮೆ ಬಳಿ ಪ್ರತಿಭಟನೆ ● ಕಾಂಗ್ರೆಸ್ ಸರ್ಕಾರದ 'ಮಾಮೂಲಿ' ರೇಟ್ ಕಾರ್ಡ್ ಪ್ರದರ್ಶನ

ಬೆಂಗಳೂರು, ಜು. 19(ಕೆಎಂಶಿ)– ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಪಾರದರ್ಶಕ ಭ್ರಷ್ಟ ಆಡಳಿತ ನಡೆಸುತ್ತಿದೆ ಎಂದು ವಿಧಾನ ಪರಿಷತ್‌ನಲ್ಲಿ ಬಿಜೆಪಿ–ಜೆಡಿಎಸ್ ಸದಸ್ಯರು ವಿಧಾನಸೌಧದ ಗಾಂಧಿ ಪ್ರತಿಮೆ ಬಳಿ ಇಂದು ಪ್ರತಿಭಟನೆ ನಡೆಸಿದರು.

ಭ್ರಷ್ಟ ಕಾಂಗ್ರೆಸ್ ಸರ್ಕಾರ ವರ್ಗಾವಣೆ, ನೇಮಕಾತಿ, ಭೂಪರಿವರ್ತನೆ ಸೇರಿದಂತೆ ಎಲ್ಲದಕ್ಕೂ ಒಂದೊಂದು ದರ ನಿಗದಿ ಮಾಡಿದೆ ಎಂದು ಪ್ರತಿಭಟನಾಕಾರರು ರೇಟ್ ಕಾರ್ಡ್ ಬಿಡುಗಡೆ ಮಾಡಿದರು.

ಈ ಸಂದರ್ಭದಲ್ಲಿ ಸಿ.ಟಿ.ರವಿ ಮತ್ತಿತರ ನಾಯಕರು ಮಾತನಾಡಿ, ಕಾಂಗ್ರೆಸ್ ಸರ್ಕಾರ ರೇಟ್ ಕಾರ್ಡ್ ನಿಗದಿ ಮಾಡಿದ್ದು, ಬೆಂಗಳೂರು ನಗರಾಭಿವೃದ್ಧಿ ಇಲಾಖೆಯಲ್ಲಿ ಎಫ್‌ಎಆರ್ (ಫ್ಲೋರ್



ಬಿಜೆಪಿ–ಜೆಡಿಎಸ್ ಸದಸ್ಯರು ವಿಧಾನಸೌಧದ ಗಾಂಧಿ ಪ್ರತಿಮೆ ಬಳಿ ಪ್ರತಿಭಟನೆ ನಡೆಸಿದರು.

ಏರಿಯ ರೇಷಿಯೋ) ಒಂದು ಚದರಡಿಗೆ 100 ರೂ., ಸಿಎಲ್‌ಯು (ಚೇಂಜ್ ಆಫ್ ಲ್ಯಾಂಡ್ ಯೂಸ್–ಭೂಪರಿವರ್ತನೆ) ಒಂದು ಎಕರೆಗೆ 27 ಲಕ್ಷ ರೂ. ನಿಗದಿಪಡಿಸಲಾಗಿದೆ.

ಗೃಹ ಇಲಾಖೆಯಲ್ಲಿ ಪೊಲೀಸ್ ಇನ್‌ಸ್ಪೆಕ್ಟರ್‌ಗಳ ವರ್ಗಾವಣೆಗೆ ನಿಯೋಜನೆ ಸ್ಥಳದ ಕಿಮ್ಮತ್ತು ಆಧರಿಸಿ 50 ಲಕ್ಷ ರೂ.ನಿಂದ ಒಂದು ಕೋಟಿ ರೂ., ಎಸಿಪಿ ಹುದ್ದೆಗೆ 1.5 ಕೋಟಿ ರೂ.ನಿಂದ 2 ಕೋಟಿ ರೂ.ವರೆಗೆ ನಿಗದಿಯಾಗಿದೆ.

ಎಂಜಿನಿಯರ್‌ಗಳಿಗೆ (ಎಇ) 20 ರಿಂದ 25 ಲಕ್ಷ ರೂ., ಎಇಇಗೆ 25 ರಿಂದ 50 ಲಕ್ಷ ರೂ., ಎಕ್ಸಿಕ್ಯೂಟಿವ್ ಎಂಜಿನಿಯರ್‌ಗೆ 50 ಲಕ್ಷದಿಂದ 75 ಲಕ್ಷ ರೂ., ಸಿಇಗೆ ಒಂದು ಕೋಟಿ ರೂ.ನಿಂದ 5 ಕೋಟಿ ರೂ.ವರೆಗೆ ರೇಟ್ ಫಿಕ್ಸ್ ಮಾಡಲಾಗಿದೆ ಎಂದರು.

ಕಂದಾಯ ಇಲಾಖೆಯಲ್ಲಿ ತಹಸೀಲ್ದಾರ್ ಹುದ್ದೆಗಳು 50 ಲಕ್ಷದಿಂದ ಒಂದು ಕೋಟಿ ರೂ.ಗೆ ಈಗಾಗಲೇ ಮಾರಾಟವಾಗಿದೆ. ಮತ್ತೆ ವರ್ಗಾವಣೆಗೆ ಮುಂದಿನ ವರ್ಷದವರೆಗೆ ಕಾಯುವ ಪರಿಸ್ಥಿತಿ ನಿರ್ಮಿಸಲಾಗಿದೆ.

ಎಸಿ ಹುದ್ದೆಗೆ (ಬೆಂಗಳೂರಿನಲ್ಲಿ) 5 ಕೋಟಿ ರೂ.ನಿಂದ 7 ಕೋಟಿ ರೂ., ಅಬ್ಕಾರಿ ಇಲಾಖೆಯಲ್ಲಿ ಇನ್‌ಸ್ಪೆಕ್ಟರ್‌ಗೆ 50 ಲಕ್ಷ ರೂ., ಡಿಸಿಗೆ ಒಂದು ಕೋಟಿ ರೂ.ನಿಂದ 1.5 ಕೋಟಿ ರೂ.ಗೆ ನಿಗದಿಪಡಿಸಿದ್ದು, ಸಬ್‌ರಿಜಿಸ್ಟ್ರಾರ್ ಮತ್ತು ಆರ್‌ಟಿಓ ಹುದ್ದೆಗಳನ್ನು ಹೋಲ್‌ಸೇಲ್ ಹರಾಜು ಹಾಕಲಾಗುತ್ತಿದೆ ಎಂದು ಆರೋಪಿಸಿದರು.

ಇದು ಶೇ.100ರಷ್ಟು ಕಾಂಗ್ರೆಸ್ ಸರ್ಕಾರದ ರೇಟ್ ಕಾರ್ಡ್ ಆಗಿದ್ದು, ಜಾತಿ ಬಲ ಇದ್ದರೆ ಶೇ.10ರಷ್ಟು ಕಡಿಮೆ ರೇಟ್, ಜಾತಿ ಬಲ ಇಲ್ಲದವರು ಶೇ.10ರಷ್ಟು ಹೆಚ್ಚು ಹಣ ನೀಡಬೇಕಾಗಿದೆ.

ಮಹರ್ಷಿ ವಾಲ್ಮೀಕಿ ನಿಗಮದ ಭ್ರಷ್ಟಾಚಾರ ಬಯಲಿಗೆ ತರುವ ಮೂಲಕ ವಿರೋಧ ಪಕ್ಷಗಳು ಕಾಂಗ್ರೆಸ್ ಸರ್ಕಾರದ ಭ್ರಷ್ಟ ಆಡಳಿತವನ್ನು ಎಳೆಎಳೆಯಾಗಿ ಬಿಡಿಸಿಟ್ಟಿವೆ. ಅಂಗೈ ಹುಣ್ಣಿಗೆ ಕನ್ನಡಿಯ ಅವಶ್ಯಕತೆ ಹೇಗೆ ಇಲ್ಲವೋ, ಹಾಗೇ ಕಾಂಗ್ರೆಸ್‌ನ ಭ್ರಷ್ಟಾಚಾರ ಆಡಳಿತಕ್ಕೆ ದುರ್ಬೀನು ಹಾಕುವ ಅವಶ್ಯಕತೆ ಇಲ್ಲ.

ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ 40 ವರ್ಷಗಳ ರಾಜಕೀಯ ಜೀವನದಲ್ಲಿ ಒಂದೇ ಒಂದು ಕಪ್ಪು ಚುಕ್ಕಿ ಇಲ್ಲ ಎನ್ನುತ್ತಾರೆ. ಆದರೆ, ಆಡಳಿತದಲ್ಲಿ ಪಾರದರ್ಶಕ ಭ್ರಷ್ಟಾಚಾರ ಇದೆ ಎಂದು ವ್ಯಂಗ್ಯವಾಡಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ನೂತನ ಪದಾಧಿಕಾರಿಗಳ ಪದಗ್ರಹಣ



ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ನೂತನ ಪದಾಧಿಕಾರಿಗಳ ಅಧಿಕಾರ ಹಸ್ತಾಂತರ ಕಾರ್ಯಕ್ರಮವು ಸಂಘದ ಸಭಾಂಗಣದಲ್ಲಿ ನೆರವೇರಿತು.

ಮೈಸೂರು, ಜು.19(ಜಿಎ)–ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ನೂತನ ಪದಾಧಿಕಾರಿಗಳ ಅಧಿಕಾರ ಹಸ್ತಾಂತರ ಕಾರ್ಯಕ್ರಮವು ಸಂಘದ ಸಭಾಂಗಣದಲ್ಲಿ ಶುಕ್ರವಾರ ನೆರವೇರಿತು.

ಜು.14ರಂದು ನಡೆದ ಚುನಾವಣೆಯಲ್ಲಿ ಸ್ಪರ್ಧಿಸಿ ಆಯ್ಕೆಗೊಂಡ ನೂತನ ಪದಾಧಿಕಾರಿಗಳಿಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ಪ್ರಮಾಣ ಪತ್ರ ವಿತರಿಸಿ, ನೂತನ ಅಧ್ಯಕ್ಷರಾದ ಕೆ.ದೀಪಕ್ ಅವರಿಗೆ ಸಂಘದ ದಾಖಲೆ ಪತ್ರಗಳನ್ನು ನೀಡುವ ಮೂಲಕ ಅಧಿಕಾರ ಹಸ್ತಾಂತರಿಸಿದರು.

ನಂತರ ಮಾತನಾಡಿದ ಅವರು, ಸಂಘಕ್ಕೆ ಎಲ್ಲರೂ ಮುಖ್ಯವಾಗಿದ್ದು, ಎಲ್ಲರೂ ಒಗ್ಗಟ್ಟಾಗಿ ಪತ್ರಕರ್ತರ ಶ್ರೇಯೋಭಿವೃದ್ಧಿಗಾಗಿ ಶ್ರಮಿಸೋಣ. ಮೈಸೂರು ಜಿಲ್ಲಾ ಪತ್ರಕರ್ತರ ಸಂಘವು ರಾಜ್ಯಕ್ಕೆ ಮಾದರಿ ಸಂಘವಾಗಿದ್ದು, ಅದನ್ನು ಮುಂದುವರೆಸಿಕೊಂಡು ಹೋಗೋಣ ಎಂದರು.

ಚುನಾವಣೆ ಯಶಸ್ವಿಯಾಗಿ ನಡೆಸಿದ ಚುನಾವಣಾಧಿಕಾರಿಗಳಾದ ಹಿರಿಯ ಪತ್ರಕರ್ತರಾದ ಕಾಶಿನಾಥ್, ಬನ್ನೂರು ಕೆ.ರಾಜು, ಅಡಾಕ್ ಕಮಿಟಿ ಸದಸ್ಯರಾದ ಬಾಲಕೃಷ್ಣ ಮದ್ದೂರು, ಪ್ರಭುರಾಜನ್ ಮತ್ತು ಸಂಘದ ವ್ಯವಸ್ಥಾಪಕ ನಾಗೇಶ್, ಮುರಳಿ ಅವರುಗಳನ್ನು ಅಭಿನಂದಿಸಿದರು.

ನೂತನ ಪದಾಧಿಕಾರಿಗಳು: ಪತ್ರಕರ್ತರ ಸಂಘದ ಅಧ್ಯಕ್ಷರಾಗಿ ಕೆ.ದೀಪಕ್, ಪ್ರಧಾನ ಕಾರ್ಯದರ್ಶಿಯಾಗಿ ಧರ್ಮಾಪುರ ನಾರಾಯಣ್, ನಗರ ಉಪಾಧ್ಯಕ್ಷರಾಗಿ ರವಿ ಪಾಂಡವಪುರ, ಗ್ರಾಮಾಂತರ ಉಪಾಧ್ಯಕ್ಷರಾಗಿ ಹೆಚ್.ಎಸ್. ವೆಂಕಟಪ್ಪ, ಖಜಾಂಚಿಯಾಗಿ ಸುರೇಶ್, ಗ್ರಾಮಾಂತರ ಕಾರ್ಯದರ್ಶಿಯಾಗಿ ದಾ.ರಾ. ಮಹೇಶ್ ಮತ್ತು ನಗರ ಕಾರ್ಯದರ್ಶಿಯಾಗಿ ಕೃಷ್ಣೋಜಿರಾವ್ ಮತ್ತು ಕಾರ್ಯಕಾರಿ ಸಮಿತಿಯ ಎಂ.ಟಿ. ಯೋಗೇಶ್‌ಕುಮಾರ್, ಕವಿತಾ, ಹನಗೋಡು ನಟರಾಜ್, ಡಿ.ಜಿ.ರೋಜಾ ಮಹೇಶ್, ನಾಣಿ ಹೆಬ್ಬಾಳ್, ಜೆ.ರವಿಚಂದ್ರ ಹಂಚ್ಯಾ, ಹಂಪಾ ನಾಗರಾಜು, ಸೋಮಶೇಖರ್ ಚಿಕ್ಕಮರಳಿ, ಜೆ.ಶಿವಣ್ಣ, ಸತೀಶ್ ಆರ್.ದೇಪುರ, ದೊಡ್ಡನಹುಂಡಿ ರಾಜಣ್ಣ, ಹುಲ್ಲಹಳ್ಳಿ ಮೋಹನ, ಪುನೀತ್.ಎಸ್, ರಾಜು ಕಾರ್ಯ, ಸಿ.ಎನ್.ವಿಜಯ್ ಅಧಿಕಾರ ವಹಿಸಿಕೊಂಡರು.

ಕಾರ್ಯಕ್ರಮದಲ್ಲಿ ನಿಕಟ ಪೂರ್ವ ಅಧ್ಯಕ್ಷ ಎಸ್.ಟಿ.ರವಿಕುಮಾರ್, ಮಾಜಿ ಪ್ರಧಾನ ಕಾರ್ಯದರ್ಶಿ ಸುಬ್ರಮಣ್ಯ, ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಸದಸ್ಯ ಸಮಿತಿ ರಾಘವೇಂದ್ರ, ಅಡಾಕ್ ಕಮಿಟಿ ಸದಸ್ಯರಾದ ಬಾಲಕೃಷ್ಣ ಮದ್ದೂರು, ಪ್ರಭುರಾಜನ್ ಉಪಸ್ಥಿತರಿದ್ದರು.

ಐಟಿಸಿ ಕಾರ್ಖಾನೆಯಲ್ಲಿ ಕರ್ತವ್ಯ ನಿರತ ಕಾರ್ಮಿಕ ಸಾವು

ಉಸ್ತುವಾರಿ ಅಧಿಕಾರಿ ವಿರುದ್ಧ ಕ್ರಮ; ಮೃತರ ಕುಟುಂಬಕ್ಕೆ ಸೂಕ್ತ ಪರಿಹಾರಕ್ಕೆ ಆಗ್ರಹಿಸಿ ಗ್ರಾಮಸ್ಥರು, ರೈತ ಮುಖಂಡರ ಪ್ರತಿಭಟನೆ



ಕೆ.ಆರ್.ಆಸ್ಪತ್ರೆಯ ಶವಾಗಾರದ ಎದುರು ಪ್ರತಿಭಟನೆ ನಡೆಸಲಾಯಿತು

ಮೈಸೂರು, ಜು.19(ಎಂಕೆ)– ನಂಜನಗೂಡು ತಾಂಡ್ಯ ಕೈಗಾರಿಕಾ ಪ್ರದೇಶದಲ್ಲಿರುವ ಐಟಿಸಿ ಕಾರ್ಖಾನೆಯಲ್ಲಿ ಕರ್ತವ್ಯದ ವೇಳೆ ಮೃತಪಟ್ಟ ಕಾರ್ಮಿಕನ ಸಾವಿಗೆ ನ್ಯಾಯ ದೊರಕಿಸಿಕೊಡುವಂತೆ ಹಾಗೂ ಕಾರ್ಖಾನೆ ಅಧಿಕಾರಿಗಳ ವಿರುದ್ಧ ಪ್ರಕರಣ ದಾಖಲಿಸುವಂತೆ ಒತ್ತಾಯಿಸಿ ಕೆ.ಆರ್.ಆಸ್ಪತ್ರೆಯ ಶವಾಗಾರದ ಎದುರು ಮೃತ ಕಾರ್ಮಿಕನ ಪೋಷಕರು, ಗ್ರಾಮಸ್ಥರು ಹಾಗೂ ರೈತ ಸಂಘದ ಮುಖಂಡರು ಪ್ರತಿಭಟನೆ ನಡೆಸಿದರು.

ನಂಜನಗೂಡಿನ ತಾಂಡ್ಯ ಕೈಗಾರಿಕಾ ಪ್ರದೇಶದಲ್ಲಿರುವ ಐಟಿಸಿ ಕಾರ್ಖಾನೆಯ ನಿಕೋಟಿನ್ ವಿಭಾಗದಲ್ಲಿ ಹೌಸ್ ಕೀಪಿಂಗ್ ಕೆಲಸ ಮಾಡುತ್ತಿದ್ದ ತೊರೆಮಾವು ಗ್ರಾಮದ ನಿವಾಸಿ ದೊರೆಸ್ವಾಮಿ ಪುತ್ರ ಟಿ.ಡಿ. ಅಭಿಷೇಕ್(22) ಆರೋಗ್ಯದಲ್ಲಿ ಶನಿವಾರ ರಾತ್ರಿ 10 ಗಂಟೆ ಸುಮಾರಿಗೆ ವ್ಯತ್ಯಾಸ ಉಂಟಾಗಿದೆ ಬಳಿಕ ನಂಜನಗೂಡಿನ ಖಾಸಗಿ ಆಸ್ಪತ್ರೆಗೆ ಸೇರಿಸಿ, ಅಲ್ಲಿಂದ ಮೈಸೂರಿನ ಕೆ.ಆರ್.ಆಸ್ಪತ್ರೆಗೆ ಕರೆದುಕೊಂಡು ಬರುವಾಗ ಮಧ್ಯರಾತ್ರಿ 1.30ರಲ್ಲಿ ಮತಪಟ್ಟಿದ್ದಾರೆ. ಇದಕ್ಕೆ ಕಾರ್ಖಾನೆಯ ನಿಕೋಟಿನ್ ವಿಭಾಗದ ಮೇಲ್ವಿಚಾರಣೆ ನಿರ್ವಹಿಸುವ ಅಧಿಕಾರಿ ಕರ್ತವ್ಯ ಲೋಪದಿಂದ ಕಾರ್ಮಿಕನ ಸಾವಾಗಿದ್ದು, ತಪ್ಪಿಸ್ಥರ ವಿರುದ್ಧ ಕೂಡಲೇ ಎಫ್‌ಐಆರ್ ದಾಖಲಿಸಿ, ಕ್ರಮಗೊಳ್ಳಬೇಕು ಹಾಗೂ ಮೃತನ ಕುಟುಂಬಕ್ಕೆ ಸೂಕ್ತ ಪರಿಹಾರ ನೀಡಬೇಕು ಎಂದು ಪಟ್ಟು ಹಿಡಿದರು.

ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಎಸಿ ರಕ್ಷಿತ್, ನಂಜನಗೂಡು ತಹಸಿಲ್ದಾರ್ ಶಿವಕುಮಾರ್ ಹಾಗೂ ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ಸುನೀಲ್ ಕುಮಾರ್, ಪ್ರತಿಭಟನಾ ನಿರತ ರೈತ ಮುಖಂಡರು ಹಾಗೂ ಗ್ರಾಮಸ್ಥರನ್ನು ಸಮಾಧಾನಪಡಿಸಿ, ಸೂಕ್ತ ಪರಿಹಾರ ಕಲ್ಪಿಸುವ ಭರವಸೆ ನೀಡಿದರು. ಹಾಗೆಯೇ ಐಟಿಸಿ ಕಾರ್ಖಾನೆ ಮ್ಯಾನೇಜರ್ ರಮೇಶ್ ಎಂಬುವರೊಂದಿಗೆ ಚರ್ಚಿಸಿ, ಪರಿಹಾರ ಹಣವನ್ನು ಕುಟುಂಬಕ್ಕೆ ತಲುಪಿಸುವಂತೆ ತಾಕೀತು ಮಾಡಿದರಲ್ಲದೆ ಮರಣೋತ್ತರ ಪರೀಕ್ಷೆಗೆ ಅವಕಾಶ ಮಾಡಿಕೊಟ್ಟರು. ನಂತರ ಮೃತ ದೇಹವನ್ನು ವಾರಸುದಾರರಿಗೆ ಒಪ್ಪಿಸಲಾಯಿತು.

ಕ್ರಮ ಜರುಗಿಸಲಾಗುವುದು: ಈಗಾಗಲೇ ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಮರಣೋತ್ತರ ಪರೀಕ್ಷೆ ವರದಿ ಆಧರಿಸಿ, ಐಟಿಸಿ ಕಾರ್ಖಾನೆಯ ಮ್ಯಾನೇಜರ್ ಮತ್ತು ಆಡಳಿತಾಧಿಕಾರಿಗಳ ವಿರುದ್ಧ ಕ್ರಮ ಜರುಗಿಸಲಾಗುವುದು ಎಂದು ಎಸಿ ರಕ್ಷಿತ್ 'ಮೈಸೂರು ಮಿತ್ರ'ನಿಗೆ ತಿಳಿಸಿದರು. ಪ್ರತಿಭಟನೆಯಲ್ಲಿ ರೈತ ಸಂಘದ ಹೊಸಕೋಟೆ ಬಸವರಾಜ್, ಕಾರ್ಮಿಕ ಮುಖಂಡ ಚಂದ್ರಶೇಖರ್ ಮೇಟಿ ಮತ್ತಿತರರಿದ್ದರು.

ಇನ್‌ಫೋಸಿಸ್ ಬಳಿ ಬೈಕ್–ಲಾರಿ ಡಿಕ್ಕಿ: ದಂಪತಿಗೆ ತೀವ್ರ ಗಾಯ



ಮೈಸೂರು, ಜು. 19(ಆರ್‌ಕೆ)– ಲಾರಿ ಮತ್ತು ಬೈಕ್ ನಡುವೆ ಮುಖಾಮುಖಿ ಡಿಕ್ಕಿಯಾದ ಪರಿಣಾಮ ಯುವ ದಂಪತಿ ತೀವ್ರವಾಗಿ ಗಾಯಗೊಂಡಿರುವ ಘಟನೆ ಇಂದು ಬೆಳಗ್ಗೆ ಮೈಸೂರಿನ ಇನ್‌ಫೋಸಿಸ್ ಗೇಟ್ ಎದುರು ಸಂಭವಿಸಿದೆ.

ಕೂರ್ಗಳ್ಳಿ ನಿವಾಸಿಗಳಾದ ಚಂದ್ರ ಹಾಗೂ ಪತ್ನಿ ಪ್ರೇಮಾ ತೀವ್ರವಾಗಿ ಗಾಯಗೊಂಡವರಾಗಿದ್ದು, ಅವರನ್ನು ಮೈಸೂರಿನ ಡಿಆರ್‌ಎಂ ಆಸ್ಪತ್ರೆಗೆ ದಾಖಲಿಸಲಾಗಿದೆ. ದೀಪಾಂಜಲಿ ಕೇಬಲ್‌ನಲ್ಲಿ ಕೆಲಸ ಮಾಡುತ್ತಿದ್ದ ಚಂದ್ರ, ಬೈಕ್‌ನಲ್ಲಿ ಪತ್ನಿ ಪ್ರೇಮಾರನ್ನು ಕರೆದುಕೊಂಡು ಇನ್‌ಫೋಸಿಸ್‌ನ ಫುಡ್ ಕೋರ್ಟ್‌ಗೆ ಹೋಗುತ್ತಿದ್ದಾಗ ಎದುರಿನಿಂದ ಗ್ಯಾಸ್ ಸಿಲಿಂಡರ್‌ಗಳನ್ನು ತುಂಬಿಕೊಂಡು ಬರುತ್ತಿದ್ದ ಲಾರಿ ಇನ್‌ಫೋಸಿಸ್ ಗೇಟ್ ಎದುರು ಡಿಕ್ಕಿ ಹೊಡೆದಿದೆ. ಪರಿಣಾಮ ಬೈಕ್ ಚಾಲನೆ ಮಾಡುತ್ತಿದ್ದ ಚಂದ್ರ ಅವರ ತಲೆಗೆ ತೀವ್ರ ಗಾಯಗಳಾಗಿದೆ. ಹಿಂಬದಿ ಸವಾರರಾದ ಪ್ರೇಮಾ ಸಹ ಗಾಯಗೊಂಡಿದ್ದಾರೆ. ವಿಷಯ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಧಾವಿಸಿದ ವಿವಿ ಪುರಂ ಸಂಚಾರ ಠಾಣೆ ಇನ್‌ಸ್ಪೆಕ್ಟರ್ ಲವ ಹಾಗೂ ಸಿಬ್ಬಂದಿ, ತಕ್ಷಣ ತೀವ್ರ ರಕ್ತಸ್ರಾವದಿಂದ ಒದ್ದಾಡು ತ್ತಿದ್ದ ಇಬ್ಬರನ್ನೂ ಆಸ್ಪತ್ರೆಗೆ ದಾಖಲಿಸಿದರು.

ದಂಪತಿಗೆ ಐಸಿಯುನಲ್ಲಿ ಚಿಕಿತ್ಸೆ ನೀಡಲಾಗುತ್ತಿದೆಯಾದರೂ, ತಲೆಗೆ ತೀವ್ರ ಗಾಯಗಳಾಗಿರುವ ಚಂದ್ರ ಸಾವು–ಬದುಕಿನ ನಡುವೆ ಹೋರಾಡುತ್ತಿದ್ದು, ಅವರ ಸ್ಥಿತಿ ಚಿಂತಾಜನಕವಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಪತ್ನಿ ಪ್ರೇಮಾ ಚಿಕಿತ್ಸೆಗೆ ಸ್ಪಂದಿಸುತ್ತಿದ್ದು, ಪ್ರಾಣಾಪಾಯದಿಂದ ಪಾರಾಗುವರು ಎಂದು ಆಸ್ಪತ್ರೆ ವೈದ್ಯರು ತಿಳಿಸಿದ್ದಾರೆ. ಪ್ರಕರಣ ದಾಖಲಿಸಿಕೊಂಡಿರುವ ವಿವಿ ಪುರಂ ಸಂಚಾರ ಠಾಣೆ ಪೊಲೀಸರು, ಬೈಕ್ ಮತ್ತು ಲಾರಿಯನ್ನು ವಶಕ್ಕೆ ಪಡೆದಿದ್ದಾರೆ.

ಕನ್ನಡಿಗರಿಗೆ ಉದ್ಯೋಗ ಮೀಸಲಾತಿ

ಕರ್ನಾಟಕ ಸರ್ಕಾರದ ಕ್ರಮ ಖಂಡಿಸಿದ ಕಾಂಗ್ರೆಸ್ ಸಂಸದ ಶಶಿತರೂರ್



ನವದೆಹಲಿ: ಖಾಸಗಿ ವಲಯದಲ್ಲಿ ಕನ್ನಡಿಗರಿಗೆ ಉದ್ಯೋಗ ಮೀಸಲಾತಿ ಕಲ್ಪಿಸುವ ಕರ್ನಾಟಕ ಸರ್ಕಾರದ ಮಸೂದೆಗೆ ಮಾಜಿ ಕೇಂದ್ರ ಸಚಿವ ಹಾಗೂ ಕಾಂಗ್ರೆಸ್ ಸಂಸದ ಶಶಿತರೂರ್ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಕರ್ನಾಟಕ ರಾಜ್ಯದ ಖಾಸಗಿ ಉದ್ಯಮಗಳ ಉದ್ಯೋಗದಲ್ಲಿ ಕನ್ನಡಿಗರಿಗೆ ಮೀಸಲಾತಿ ನೀಡುವ ಮಸೂದೆಯನ್ನು ಮಂಡಿಸಿ ಜಾರಿ ಮಾಡಲು ಹೊರಟಿದ್ದ ರಾಜ್ಯ ಸರ್ಕಾರದ ಕ್ರಮವು ಸಂವಿಧಾನ ವಿರೋಧ ಹಾಗೂ ವಿವೇಚನಾರಹಿತ ಕ್ರಮ ಎಂದು ಕಾಂಗ್ರೆಸ್ ಸಂಸದ ಶಶಿ ತರೂರ್ ಹೇಳಿದ್ದು, ಮಾತ್ರವಲ್ಲದೇ ಘೋಷಿಸಿದ ಕ್ರಮದಿಂದ ಹಿಂದೆ ಸರಿದ ಸಿದ್ದರಾಮಯ್ಯ ಸರ್ಕಾರದ ಕ್ರಮ ಕುರಿತೂ ತರೂರ್ ಸಂತಸ ವ್ಯಕ್ತಪಡಿಸಿದ್ದಾರೆ.

ಸಂವಿಧಾನದ ಪ್ರಕಾರ ದೇಶದ ಪ್ರತಿಯೊಬ್ಬ ಪ್ರಜೆಗೂ ದೇಶದೊಳಗೆ ಸ್ವತಂತ್ರವಾಗಿ ಬದುಕುವ, ವೃತ್ತಿ ಕೈಗೊಳ್ಳುವ ಹಾಗೂ ಸಂಚರಿಸುವ ಮುಕ್ತ ಅವಕಾಶವನ್ನು ನೀಡಲಾಗಿದೆ. ಒಂದೊಮ್ಮೆ ಎಲ್ಲಾ ರಾಜ್ಯಗಳು ಇಂಥ ಕಾನೂನು ಜಾರಿಗೆ ತರಲು ಹೊರಟರೆ ಅದು ಸಂವಿಧಾನ ವಿರೋಧಿಯಾಗಲಿದೆ. ಹೀಗಾಗಿ ಕರ್ನಾಟಕದ ಮುಖ್ಯಮಂತ್ರಿಯದ್ದು ಬುದ್ಧಿವಂತಿಕೆಯ ನಿರ್ಧಾರವಲ್ಲ ಎಂದು ಹೇಳಿದ್ದಾರೆ.

ವೈದ್ಯರಿಗೆ ಸನ್ಮಾನ...



ರೋಟರಿ ಮೈಸೂರು ಉತ್ತರದಿಂದ ವೈದ್ಯರ ದಿನಾಚರಣೆ ಅಂಗವಾಗಿ ಡಾ. ಎಂ.ಎಂ. ಬಸವರಾಜು, ಡಾ. ಕೆ.ಎಸ್. ರಾಧಾಕೃಷ್ಣ ರಾಮರಾವ್ ಅವರನ್ನು ಅವರ ಸೇವಾ ಶ್ರೇಷ್ಠತೆಯನ್ನು ಪರಿಗಣಿಸಿ ಶುಕ್ರವಾರ ಗೌರವಿಸಲಾಯಿತು. ಈ ವೇಳೆ ಡಾ. ಲಕ್ಷ್ಮೀಗೌಡ, ರೊ. ಪ್ರಭಾಕರ್ ಪಿ, ರೊ. ಮಹದೇವಸ್ವಾಮಿ ಎಲ್.ಆರ್, ರೊ ಹರೀಶ್ ಟಿ.ಆರ್, ರೊ. ನಂಜಯ್ಯ ಎಂ.ಕೆ, ರೊ. ತಮ್ಮಯ್ಯ ಎಸ್.ಪಿ., ರೊ. ವೀರರಾಜೇಂದ್ರಕುಮಾರ್ ಉಪಸ್ಥಿತರಿದ್ದಾರೆ.

ಸದನದಲ್ಲಿ 'ಒಂದು ಮೊಟ್ಟೆಯ ಕಥೆ'!

ನಾನಂತೂ ಮೊಟ್ಟೆ ತಿನ್ನಲ್ಲ, ಮುಟ್ಟೋದೂ ಇಲ್ಲ: ಲಕ್ಷ್ಮೀ ಹೆಬ್ಬಾಳ್ಕರ್

ಬೆಂಗಳೂರು: ನೀವೆಲ್ಲಾ ಮೊಟ್ಟೆ ತಿನ್ನುತ್ತೀರಿ, ನಾನಂತೂ ಮೊಟ್ಟೆ ತಿನ್ನಲ್ಲ, ಮುಟ್ಟೋದೂ ಇಲ್ಲ ಎಂದು ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಹೇಳಿದರು.

ಪ್ರಶ್ನೋತ್ತರ ಕಲಾಪದ ವೇಳೆ ಅಂಗನವಾಡಿ ಮಕ್ಕಳಿಗೆ ಗುಣಮಟ್ಟದ ಮೊಟ್ಟೆ ಪೂರೈಕೆ ಮಾಡಬೇಕೆನ್ನುವ ವಿಚಾರ ಚರ್ಚೆ ನಡೆಯುತ್ತಿದ್ದ ವೇಳೆ ಹಾಸ್ಯ ಪ್ರಸಂಗವೊಂದು ನಡೆಯಿತು.

ಬಿಜೆಪಿ ಸದಸ್ಯೆ ಹೇಮಲತಾ ನಾಯಕ್, ಅಂಗನವಾಡಿಗಳಲ್ಲಿ ಆಹಾರ ಸರಿಯಿಲ್ಲ. ಕೆಟ್ಟಿರುವ ಮೊಟ್ಟೆಗಳನ್ನು ಕೊಡ್ತಿದ್ದಾರೆ. ಹಾಲು ಸರಿಯಾಗಿಲ್ಲ. ಬಾಳೆಹಣ್ಣು ಇಲ್ಲ, ಶೇಂಗಾ ಕಡಲೆ ಕೊಡ್ತಿಲ್ಲ. ಹುಳು ಬಿದ್ದ ಆಹಾರ ನೀಡುತ್ತಿದ್ದಾರೆ. ಆಹಾರ ಕಳೆಪಯಾಗಿದೆ, ಇದರ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ ಅಂತ ಪ್ರಶ್ನಿಸಿದರು. ಈ ವೇಳೆ ಅಂಗನವಾಡಿಗಳಲ್ಲಿ ತಯಾರು ಮಾಡುವ ಆಹಾರ ಪದಾರ್ಥಗಳ ಪೊಟ್ಟಣ ತೋರಿಸಲು ಮುಂದಾದರು. ಕೊನೆಗೆ ಸದನದಲ್ಲಿ ಇದೆಲ್ಲವನ್ನು ತರುವಂತಿಲ್ಲ ಅಂತ ಸಭಾಪತಿಗಳು ಸೂಚಿಸಿದರು.

ಹೇಮಲತಾ ನಾಯಕ್ ಪ್ರಶ್ನೆಗೆ ಉತ್ತರಿಸಲು ಮುಂದಾದ ಲಕ್ಷ್ಮಿ ಹೆಬ್ಬಾಳ್ಕರ್, ನೀವೆಲ್ಲಾ ಮೊಟ್ಟೆ ತಿನ್ನುತ್ತೀರಿ, ನಾನಂತೂ



ತಿನ್ನಲ್ಲ. ಮುಟ್ಟೋದು ಇಲ್ಲ ಎಂದು ಹೇಳಿದರು. ಇದಕ್ಕೆ ಕಾಲೆಳೆದ ಸಭಾಪತಿಗಳು 'ಒಮ್ಮೆ ತಿಂದು ನೋಡ್ರಿ, ಟೇಸ್ಟ್ ಗೊತ್ತಾಗುತ್ತೆ' ಅಂತ ಹಾಸ್ಯ ಚಟಾಕಿ ಹಾರಿಸಿದರು. ಕೆಲ ಕ್ಷಣ ಪರಿಷತ್ ಸದಸ್ಯರು ನಗೆಗಡಲಲ್ಲಿ ತೇಲಿದರು.

ಬಳಿಕ ಕಳಪೆ ಆಹಾರ ಪೂರೈಕೆ ಬಗ್ಗೆ ಸ್ಪಷ್ಟನೆ ನೀಡಿದ ಸಚಿವರು, ನಾವು ಸ್ಥಳೀಯವಾಗಿ ಮೊಟ್ಟೆ ಖರೀದಿ ಮಾಡುತ್ತೇವೆ. ಮಾರ್ಕೆಟ್ ನಲ್ಲಿ 8 ರೂಪಾಯಿ ಇದೆ. ಸೃಷ್ಟಿ ಯೋಜನೆ ಅಡಿ ಮೊಟ್ಟೆ ಕೊಡಲಾಗುತ್ತಿದೆ. ಮಕ್ಕಳಿಗೆ ಪೌಷ್ಟಿಕಾಂಶ ನೀಡಲು ಮೊಟ್ಟೆ ಕೊಡುತ್ತಿದ್ದೇವೆ. ಕಳೆದ 8 ವರ್ಷಗಳಿಂದ ಒಂದು ಮಗುವಿಗೆ 8 ರೂಪಾಯಿ ಮಾತ್ರ ಕೇಂದ್ರ ಸರ್ಕಾರ ಕೊಡುತ್ತಿದೆ. ಕೇಂದ್ರ ಸರ್ಕಾರ ಬೆಲೆ ಪರಿಷ್ಕರಣೆ ಮಾಡಿಲ್ಲ. ಆದರೂ ನಾವು ಗುಣಮಟ್ಟದ ಮೊಟ್ಟೆ, ಆಹಾರ ನೀಡಲು ಕ್ರಮವಹಿಸುತ್ತಿದ್ದೇವೆ. ಎಲ್ಲಾದರೂ ಇಂತಹ ಸಮಸ್ಯೆ ಆಗಿದ್ದರೆ ಕ್ರಮ ತೆಗೆದುಕೊಳ್ಳುತ್ತೇವೆ ಎಂದು ಉತ್ತರಿಸಿದರು.

ಇದೇ ವೇಳೆ ಅಂಗನವಾಡಿ ಕಟ್ಟಡಗಳ ಸುರಕ್ಷತೆ ಬಗ್ಗೆಯೂ ಕೈಗೊಂಡ ಕ್ರಮಗಳ ಬಗ್ಗೆ ವಿವರಿಸಿದರು. ರಾಜ್ಯದಲ್ಲಿ ಒಟ್ಟು 69,919 ಅಂಗನವಾಡಿ ಕೇಂದ್ರಗಳಿವೆ. ಇದರಲ್ಲಿ 47,236 ಸ್ವಂತ ಕಟ್ಟಡದಲ್ಲಿ ಇವೆ. 12,653 ಅಂಗನವಾಡಿ ಕೇಂದ್ರಗಳು ಬಾಡಿಗೆ ಕಟ್ಟಡಗಳಲ್ಲಿ ಇವೆ. 30 ವರ್ಷ ಮೇಲ್ಪಟ್ಟ ಅಂಗನವಾಡಿ ಕಟ್ಟಡ ಮತ್ತು ದುಸ್ಥಿತಿಯಲ್ಲಿರೋ ಕಟ್ಟಡಗಳ ಮಾಹಿತಿ ನೀಡುವಂತೆ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ. ಅಂಗನವಾಡಿ ಕೇಂದ್ರಗಳ ಕಲ್ಪನೆ ಪ್ರಾರಂಭವಾಗಿ 49 ವರ್ಷ ಆಗಿದೆ. ಇಂದಿರಾಗಾಂಧಿ ಅವರು ಅಂಗನ ವಾಡಿ ಕೇಂದ್ರ ಪ್ರಾರಂಭ ಮಾಡಿದ್ರು. ಈವರೆಗೂ ಯಾವುದೇ ಅನಾಹುತ ಆಗಿಲ್ಲ. 30 ವರ್ಷ ಮೇಲ್ಪಟ್ಟ ಕಟ್ಟಡಗಳನ್ನೂ ನಾನು ಶೀಘ್ರವೇ ತಪಾಸಣೆ ನಡೆಸಲು ಕ್ರಮ ವಹಿಸುತ್ತೇನೆ ಎಂದು ಭರವಸೆ ನೀಡಿದರು.

ಕೊಡಗಿನಲ್ಲಿ ಪ್ರವಾಹ, ರಸ್ತೆ ಸಂಚಾರ ಬಂದ್, ಭೂ ಕುಸಿತ

● ಜಿಲ್ಲಾದ್ಯಂತ ಮುಂದುವರೆದ ಮಳೆ ಅಬ್ಬರ ● ಸುಳುಗೋಡು, ಬಲ್ಯಮಂಡೂರ ಗ್ರಾಮದ ಕೆಲವರಿಗೆ ಆಶ್ರಯ

ಮಡಿಕೇರಿ, ಜು.19–ಕೊಡಗು ಜಿಲ್ಲಾದ್ಯಂತ ಗಾಳಿ ಸಹಿತ ಮಳೆ ಅಬ್ಬರ ಮುಂದುವರೆದಿದ್ದು, ಭಾರತೀಯ ಹವಾಮಾನ ಇಲಾಖೆ ಶನಿವಾರವೂ (ಇಂದು) ಜಿಲ್ಲೆಯಲ್ಲಿ ರೆಡ್ ಅಲರ್ಟ್ ಘೋಷಿಸಿದೆ. ಈ ನಡುವೆ ವಿವಿಧ ಭಾಗಗಳಲ್ಲಿ ಭೂ ಕುಸಿತ, ಪ್ರವಾಹ, ಮನೆ ಹಾನಿ, ರಸ್ತೆ ಸಂಚಾರ ಬಂದ್ ಆಗಿದೆ.

ಮಡಿಕೇರಿ–ಚೆಟ್ಟಳ್ಳಿ ಸಂಪರ್ಕ ರಸ್ತೆಯಲ್ಲಿ ಮರಗಳ ಸಹಿತ ಭೂ ಕುಸಿತವಾಗಿ ರಸ್ತೆ ಸಂಚಾರ ಬಂದ್ ಆಗಿತ್ತು. ಅರಣ್ಯ ಮತ್ತು ಕಂದಾಯ ಇಲಾಖೆ ಅಧಿಕಾರಿಗಳು ಸ್ಥಳಕ್ಕಾಗಮಿಸಿ ಕಾರ್ಯಾಚರಣೆ ನಡೆಸಿ ವಾಹನ ಸಂಚಾರಕ್ಕೆ ಸುಗಮಗೊಳಿಸಿದರು. ಆಲೂರು ಸಿದ್ದಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಾರೋಹಳ್ಳಿಯಲ್ಲಿ ಮಣ್ಣು ಕುಸಿದು ಕೆಲಕಾಲ ರಸ್ತೆ ಸಂಚಾರ ಬಂದ್ ಆಗಿತ್ತು. ನಂತರ ಜೆಸಿಬಿ ಸಹಾಯದಿಂದ ಮಣ್ಣನ್ನು ತೆರವುಗೊಳಿಸಲಾಯಿತು.

ಕಾವೇರಿ ನದಿ ಪಾತ್ರದ ಗ್ರಾಮಗಳಲ್ಲಿ ಭಾರಿ ಮಳೆಯಾಗುತ್ತಿದ್ದು, ನದಿಯಲ್ಲಿ ಪ್ರವಾಹ ಮುಂದುವರೆದಿದೆ. ನಾಪೋಕ್ಲುವಿನಿಂದ ಕೊಟ್ಟಮುಡಿ ಮಾರ್ಗವಾಗಿ ಮಡಿಕೇರಿಗೆ ತೆರಳುವ ಮುಖ್ಯ ರಸ್ತೆಯಲ್ಲಿ ಪ್ರವಾಹ ಆವರಿಸುತ್ತಿದ್ದು, ಯಾವುದೇ ಕ್ಷಣದಲ್ಲೂ ಈ ರಸ್ತೆ ಸಂಚಾರ ಕಡಿತಗೊಳ್ಳುವ ಎಲ್ಲಾ ಸಾಧ್ಯತೆಗಳಿವೆ. ಭಾಗಮಂಡಲ ತ್ರಿವೇಣಿ ಸಂಗಮ ಮುಳುಗಡೆಯಾದ ಸ್ಥಿತಿಯಲ್ಲಿದೆ.


ನಾಪೋಕ್ಲು ಸಂಪರ್ಕ ಮುಖ್ಯರಸ್ತೆ ನೀರಿನಲ್ಲಿ ಮುಳುಗಿರುವುದು.

ಕೊಟ್ಟಮುಡಿ ಜಂಕ್ಷನ್ ಬಳಿಯ ಕಾಫಿ ತೋಟಗಳಲ್ಲಿ ನೀರು ತುಂಬಿದ್ದು, ನಾಪೋಕ್ಲು–ಮೂರ್ನಾಡು ಮುಖ್ಯ ರಸ್ತೆಯ ಸಂಪರ್ಕ ಕಡಿತಗೊಂಡಿದೆ. ನಾಪೋಕ್ಲು–ಚೆರಿಯ ಪರಂಬು–ಕಲ್ಲುಮೊಟ್ಟೆ ಸಂಪರ್ಕ ರಸ್ತೆ ಕಳೆದ 4 ದಿನಗಳಿಂದ ಕಡಿದುಕೊಂಡಿದ್ದು, ಚೆರಿಯಪರಂಬು ಗ್ರಾಮದ ನದಿ ದಡದ ಕುಟುಂಬಗಳ ಸ್ಥಳಕ್ಕೆ ಗ್ರಾಮ ಜನಪ್ರತಿನಿಧಿಗಳು ಹಾಗೂ ಕಂದಾಯ ಅಧಿಕಾರಿಗಳು ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಪೊನ್ನಂಪೇಟೆ ತಾಲೂಕಿನ ಹಾತೂರು ಗ್ರಾಪಂ ವ್ಯಾಪ್ತಿಯ ಕುಂದ ಗ್ರಾಮದ ಬಸವೇಶ್ವರ ಬಡಾವಣೆಯ ಸೇತುವೆ ಸಂಪೂರ್ಣ ಮುಳುಗಡೆಯಾಗಿದೆ. ಇದರಿಂದ ಗ್ರಾಮಸ್ಥರಿಗೆ ಜಲದಿಗ್ಬಂಧನ ವಿಧಿಸಿದಂತಾಗಿದೆ. ತಿತಿಮತಿ ಗ್ರಾಪಂ ವ್ಯಾಪ್ತಿಯ ನೋಕ್ಯ ಗ್ರಾಮದ 11 ಕುಟುಂಬಗಳಿಗೆ ಜಿಲ್ಲಾಡಳಿತದ ವತಿಯಿಂದ ಆಹಾರ ಕಿಟ್‌ಗಳನ್ನು ತಹಸೀಲ್ದಾರ್ ಮೋಹನ್ ಕುಮಾರ್ ಹಾಗೂ ಕಂದಾಯಾಧಿಕಾರಿ ವಿತರಿಸಿದರು. ಬಾಳೆಲೆ ಗ್ರಾಪಂ ವ್ಯಾಪ್ತಿಯ ಸುಳುಗೋಡು ಕೋಟೆ ಕೊಪ್ಪ ಪೈಸಾರಿಯ 7 ಮಂದಿಯನ್ನು ಸುಳುಗೋಡು ಸರ್ಕಾರಿ ಶಾಲೆಯ ಕಾಳಜಿ ಕೇಂದ್ರಕ್ಕೆ ಸ್ಥಳಾಂತರಿಸಲಾಗಿದೆ. ಬಲ್ಯಮಂಡೂರು ಗ್ರಾಮದ 3 ಕುಟುಂಬಗಳಿಗೆ ಸರ್ಕಾರಿ ಶಾಲೆಯ ಕಾಳಜಿ ಕೇಂದ್ರದಲ್ಲಿ ಆಶ್ರಯ ನೀಡಲಾಗಿದೆ.

ಹಾರಂಗಿ ಮಟ್ಟ: 2859 ಅಡಿಗಳ ಸಾಮರ್ಥ್ಯವಿರುವ ಹಾರಂಗಿ ಜಲಾಶಯದಲ್ಲಿ ಪ್ರಸ್ತುತ (ಶುಕ್ರವಾರ) 2854.83 ಅಡಿ ನೀರು ಸಂಗ್ರಹವಾಗಿದೆ. ಜಲಾಶಯಕ್ಕೆ 23,760 ಕ್ಯುಸೆಕ್ ಒಳಹರಿವು ಹರಿದು ಬರುತ್ತಿದ್ದು, 20 ಸಾವಿರ ಕ್ಯುಸೆಕ್ ಹೊರ ಬಿಡಲಾಗಿದೆ.

ಜಿಲ್ಲಾದ್ಯಂತ ಧಾರಾಕಾರ ಮಳೆಯಾಗುತ್ತಿದ್ದು, ಶುಕ್ರವಾರ ಬೆಳಗ್ಗೆ 8.30ಕ್ಕೆ ಕೊನೆಗೊಂಡಂತೆ ಭಾಗಮಂಡಲದಲ್ಲಿ 222.2 ಮಿ.ಮೀ., ಸೋಮವಾರಪೇಟೆ ಶಾಂತಳ್ಳಿ ವ್ಯಾಪ್ತಿಯಲ್ಲಿ 183, ನಾಪೋಕ್ಲು 150.2, ಅಮ್ಮತ್ತಿ 148, ಸಂಪಾಜೆ 102, ಶನಿವಾರಸಂತೆ 90, ಹುದಿಕೇರಿ 84.6, ಕೊಡ್ಲಿಪೇಟೆ 75 ಹಾಗೂ ಸುಂಟಿಕೊಪ್ಪ ವ್ಯಾಪ್ತಿಯಲ್ಲಿ 71 ಮಿ.ಮೀ. ಮಳೆಯಾಗಿದೆ.

ಹಾನಿ ಪ್ರದೇಶಗಳಿಗೆ ಸಂಸದ ಯದುವೀರ್ ಭೇಟಿ


ಕುಶಾಲನಗರದ ಸಾಯಿ ಬಡಾವಣೆಯ ಪ್ರವಾಹ ಪೀಡಿತ ಪ್ರದೇಶಕ್ಕೆ ಸಂಸದ ಯದುವೀರ್ ಭೇಟಿ ನೀಡಿ, ಪರಿಶೀಲಿಸಿದರು.

ಕುಶಾಲನಗರ: ಮಡಿಕೇರಿ ಮತ್ತು ಕುಶಾಲನಗರ ಮಳೆ ಹಾನಿ, ಪ್ರವಾಹ ಪೀಡಿತ ಪ್ರದೇಶಗಳಿಗೆ ಶುಕ್ರವಾರ ಸಂಸದ ಯದುವೀರ್ ಕೃಷ್ಣದತ್ತಚಾಮರಾಜ ಒಡೆಯರ್ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಮಡಿಕೇರಿ ತಾಲೂಕಿನ ಮನೆ ಹಾನಿ ಸ್ಥಳಕ್ಕೆ ಭೇಟಿ ನೀಡಿದ ಸಂಸದರು, ಘಟನೆ ಕುರಿತು ಮನೆ ಮಾಲೀಕರಿಂದ ಮಾಹಿತಿ ಪಡೆದರು. ಬಳಿಕ ಕುಶಾಲನಗರದ ಸಾಯಿ ಬಡಾವಣೆಯ ಪ್ರವಾಹ ಪೀಡಿತ ಸ್ಥಳಕ್ಕೆ ಭೇಟಿ ನೀಡಿ, ವೀಕ್ಷಿಸಿದರು. ಪ್ರಸ್ತುತ ಸ್ಥಿತಿಗತಿಗಳು, ಕಾವೇರಿ ನದಿ ನೀರಿನ ಮಟ್ಟ, ಹಾರಂಗಿ ಜಲಾಶಯದಿಂದ ಹರಿಸಲಾಗುತ್ತಿರುವ ನೀರಿನ ಪ್ರಮಾಣ, ಪರಿಹಾರ ಹಾಗೂ ಮುಂಜಾಗ್ರತಾ ಕ್ರಮಗಳ ಬಗ್ಗೆ ಪುರಸಭೆ ಮತ್ತು ಕಂದಾಯ ಅಧಿಕಾರಿಗಳಿಂದ ಮಾಹಿತಿ ಪಡೆದರು.

ಇದೇ ಸಂದರ್ಭ ಸಾಯಿ ಬಡಾವಣೆಯ ನಿವಾಸಿಗಳು ಪ್ರವಾಹದಿಂದ ಉಂಟಾಗುವ ತೊಂದರೆ ಬಗ್ಗೆ ಸಂಸದರ ಗಮನ ಸೆಳೆದು, ಶಾಶ್ವತ ಪರಿಹಾರ ಕಲ್ಪಿಸುವಂತೆ ಮನವಿ ಮಾಡಿದರು. ಈ ಸಂದರ್ಭದಲ್ಲಿ ತಹಸೀಲ್ದಾರ್ ಕಿರಣ್ ಗೌರಯ್ಯ, ಪುರಸಭೆ ಮುಖ್ಯಾಧಿಕಾರಿ ಕೃಷ್ಣಪ್ರಸಾದ್, ಇಂಜಿನಿಯರ್ ರಂಗರಾಂ, ಆರೋಗ್ಯ ನಿರೀಕ್ಷಕ ಉದಯ್, ಸದಸ್ಯರಾದ ದಿನೇಶ್, ರಾಜೇಶ್, ಬಿಜೆಪಿ ಮುಖಂಡರು ಹಾಜರಿದ್ದರು.

ರೊಂಡೆಕೆರೆ ಏರಿ ಒಡೆದು ಹಾನಿ


ಗೊಂದಿಬಸವನಹಳ್ಳಿ ಗ್ರಾಮದ ರೊಂಡೆಕೆರೆ ಏರಿ ಒಡೆದು ತಗ್ಗು ಪ್ರದೇಶಗಳಿಗೆ ನೀರು ನುಗ್ಗಿರುವುದು.

ಕುಶಾಲನಗರ, ಜು.19–ತಾಲೂಕಿನ ಗೊಂದಿಬಸವನಹಳ್ಳಿ ಗ್ರಾಮದ ರೊಂಡೆಕೆರೆ ಏರಿ ಒಡೆದು ತಗ್ಗು ಪ್ರದೇಶಗಳಿಗೆ ನೀರು ನುಗ್ಗಿ ಹಲವು ಮನೆಗಳು ಜಲಾವೃತವಾಗಿವೆ.

ಹತ್ತಾರು ಎಕರೆ ವಿಸ್ತೀರ್ಣದಲ್ಲಿರುವ ಗ್ರಾಮದ ರೊಂಡೆಕೆರೆ ಸಂಪೂರ್ಣ ಭರ್ತಿಯಾಗಿತ್ತು. ಮಳೆಯ ಪ್ರಮಾಣ ತೀವ್ರಗೊಂಡ ಪರಿಣಾಮ ಏರಿ ಒಡೆದು ಕೆರೆ ದಡದ ಮಣ್ಣು ಕೊಚ್ಚಿಕೊಂಡು ಹೋಗಿದೆ.

ನೀರು ನುಗ್ಗಿ ಕಾರು ಮಾಲೀಕರು ಮತ್ತು ಚಾಲಕರು ಬಡಾವಣೆ ಸಂಪೂರ್ಣ ಜಲಾವೃತ್ತಗೊಂಡಿದ್ದು, ವಾಸದ ಮನೆಗಳಿಗೆ ಜಲದಿಗ್ಬಂದನ ವಿಧಿಸಿದೆ. ಗೃಹೋಪಯೋಗಿ ವಸ್ತುಗಳಿಗೆ ಹಾನಿಯಾಗಿದ್ದು, ನಷ್ಟ ಸಂಭವಿಸಿದೆ. ಸ್ಥಳಕ್ಕೆ ಕಂದಾಯ ಇಲಾಖೆ ಅಧಿಕಾರಿಗಳು ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಕೆರೆಯ ತಳಭಾಗದ ನೂರಾರು ಎಕರೆ ಜಮೀನು ಜಲಾವೃತಗೊಂಡಿದ್ದು, ಶುಂಠಿ, ಜೋಳ ಹಾಗೂ ನಾಟಿ ಮಾಡಲು ಸಿದ್ಧಪಡಿಸಿದ್ದ ಭತ್ತದ ಸಸಿ ಮಡಿಗಳು ನೀರಿನಲ್ಲಿ ಕೊಚ್ಚಿ ಹೋಗಿವೆ. ಜಮೀನಿನಲ್ಲಿ ಮಣ್ಣು, ಕಲ್ಲು, ಮರಳು ತುಂಬಿ ಕೊಂಡಿದ್ದು, ಮುಂದಿನ ಬೇಸಾಯ ನಡೆಸಲ್ಲಿ ಸಾಧ್ಯವಿಲ್ಲದಂತಹ ಪರಿಸ್ಥಿತಿ ಉಂಟಾಗಿದೆ.

ಮೀನು ಹಿಡಿದ ಜನರು: ಕೆರೆ ಏರಿ ಒಡೆದು ರಭಸವಾಗಿ ನುಗ್ಗಿದ ನೀರಿನ ಜೊತೆ ಮೀನುಗಳು ಹೊರ ಬಂದ ಹಿನ್ನೆಲೆಯಲ್ಲಿ ಅಕ್ಕಪಕ್ಕದ ಗ್ರಾಮದ ಜನರು ನೀರು ತುಂಬಿದ ಗದ್ದೆಗಳಲ್ಲಿ ಮೀನು ಹಿಡಿಯಲು ಪೈಪೋಟಿ ನಡೆಸಿದರು. ಪುರುಷರು, ಮಹಿಳೆಯರು ಹಾಗೂ ಮಕ್ಕಳು ಕೈಯಲ್ಲಿ ಚೀಲ ಹಿಡಿದು ಮೀನುಗಳ ಬೇಟೆಯಲ್ಲಿ ತೊಡಗಿಸಿಕೊಂಡಿದ್ದರು.

ಏರಿ ದುರಸ್ತಿ ಕ್ರಮ: ರೊಂಡೆಕೆರೆ ನೀರು ಕಡಿಮೆಯಾದ ನಂತರ ಪುರಸಭೆಯಿಂದ ಏರಿ ದುರಸ್ತಿ ಪಡಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಸ್ಥಳಕ್ಕೆ ಭೇಟಿ ನೀಡಿದ್ದ ಪುರಸಭೆ ಮುಖ್ಯಾಧಿಕಾರಿ ಕೃಷ್ಣಪ್ರಸಾದ್ ತಿಳಿಸಿದರು.

ಕುಶಾಲನಗರದಲ್ಲಿ ಬಡಾವಣೆಗಳಿಗೆ ನುಗ್ಗಿದ ನೀರು

ಕುಶಾಲನಗರ, ಜು.19–ಕಾವೇರಿ ಜಲಾನಯನ ಪ್ರದೇಶದಲ್ಲಿ ಸುರಿಯುತ್ತಿರುವ ಧಾರಾಕಾರ ಮಳೆಗೆ ನದಿಯಲ್ಲಿ ನೀರಿನ ಮಟ್ಟ ಪ್ರವಾಹ ಸ್ಥಿತಿ ಮೀರಿದೆ.

ಕಾವೇರಿ ನದಿಯಲ್ಲಿ ಎರಡು ದಿನಗಳಿಂದ ನೀರಿನ ಮಟ್ಟ ಕ್ಷಣ ಕ್ಷಣಕ್ಕೂ ಏರಿಕೆಯಾಗಿ ಅಪಾಯದ ಮಟ್ಟದಲ್ಲಿ ಹರಿಯುತ್ತಿದ್ದು, ನೀರು ತಗ್ಗು ಪ್ರದೇಶಗಳ ಕಡೆ ಹರಿಯಲು ಆರಂಭಿಸಿದೆ.

ಮತ್ತೊಂದೆಡೆ ಹಾರಂಗಿ ಜಲಾಶಯಕ್ಕೂ ನೀರಿನ ಒಳಹರಿವು ಅಧಿಕಗೊಂಡಿರುವ ಹಿನ್ನೆಲೆಯಲ್ಲಿ ಜಲಾಶಯದಿಂದ ಶುಕ್ರವಾರ ಒಟ್ಟು 20 ಸಾವಿರ ಕ್ಯುಸೆಕ್ ನೀರನ್ನು ನದಿ ಪಾತ್ರಕ್ಕೆ ಬಿಡಲಾಗಿದೆ. ಜಲಾಶಯಕ್ಕೆ ಒಳ ಹರಿವಿನಲ್ಲಿ ಮತ್ತಷ್ಟು ಏರಿಕೆ ದಾಖಲಾದರೆ ಹೊರ ಹರಿವಿನಲ್ಲೂ ಏರಿಕೆಯಾಗಲಿದೆ.

ಕಾವೇರಿ ನದಿ ದಂಡೆಯ ಕುಶಾಲನಗರದ ಸಾಯಿ, ಇಂದಿರಾ ಬಡಾವಣೆ ಸೇರಿದಂತೆ ತಗ್ಗು ಪ್ರದೇಶಗಳಿಗೆ ನೀರು ನುಗ್ಗುತ್ತಿದೆ. ಈಗಾಗಲೇ ಸಾಯಿ ಬಡಾವಣೆಯನ್ನು ನೀರು ಆವರಿಸಿದ್ದು, ಬಡಾವಣೆಯಲ್ಲಿ 1 ಅಡಿಗಳಷ್ಟು ನೀರು ತುಂಬಿದೆ. ಜೊತೆಗೆ ರಾಜ ಕಾಲುವೆಗಳ ಮೂಲಕ ಎಲ್ಲಾ ರಸ್ತೆಗಳಲ್ಲಿ ನೀರು ನುಗ್ಗುತ್ತಿದೆ.

ಸಹಜವಾಗಿಯೇ ಪ್ರವಾಹ ಪರಿಸ್ಥಿತಿಯಿಂದ ಆತಂಕಗೊಂಡಿರುವ ನಿವಾಸಿಗಳು ತಮ್ಮ ಮನೆಗಳನ್ನು ತೊರೆಯುತ್ತಿದ್ದಾರೆ. ಬಹುತೇಕ ಕುಟುಂಬಗಳು ಗೃಹೋಪಯೋಗಿ ವಸ್ತುಗಳ ಸಹಿತ ಸಾಮಗ್ರಿಗಳನ್ನು ಬೇರೆಡೆಗೆ ಸ್ಥಳಾಂತರಿಸುವ ಕಾರ್ಯದಲ್ಲಿ ನಿರತರಾಗಿದ್ದು, ಸುರಕ್ಷಿತ ಪ್ರದೇಶಕ್ಕೆ ಹೋಗಿದ್ದಾರೆ.


ಕುಶಾಲನಗರದ ಸಾಯಿ, ಇಂದಿರಾ ಬಡಾವಣೆ ಜಲಾವೃತವಾಗಿರುವುದು.

ಇಲ್ಲಿನ ಕೋಣಮಾರಮ್ಮ ದೇವಸ್ಥಾನ ಹಾಗೂ ಕೈಗಾರಿಕಾ ಬಡಾವಣೆಯ ಎರಡು ಮನೆಗಳು ಭಾಗಶಃ ಹಾನಿಯಾಗಿದ್ದು, ಯಾವುದೇ ಅನಾಹುತ ಸಂಭವಿಸಿಲ್ಲ ಎಂದು ಸಿಇಓ ಕೃಷ್ಣಪ್ರಸಾದ್ ತಿಳಿಸಿದ್ದಾರೆ. ಇದೇ ರೀತಿ ಮಳೆ ಮುಂದುವರೆದರೆ ಕುಶಾಲನಗರದ ಬಹುತೇಕ ಬಡಾವಣೆಗಳು ಜಲಾವೃತಗೊಳುವ ಸಾಧ್ಯತೆ ಇದೆ.

ಮುಂಜಾಗ್ರತಾ ಕ್ರಮ: ಕಾವೇರಿ ನದಿ ಪ್ರವಾಹದಿಂದ ಹೆಚ್ಚಿನ ಅನಾಹುತ ಸಂಭವಿಸದಂತೆ ಜಿಲ್ಲಾಧಿಕಾರಿ ಆದೇಶ ಮೇರೆಗೆ ತಹಸೀಲ್ದಾರ್ ಕಿರಣ್ ಗೌರಯ್ಯ, ಪುರಸಭೆ ಮುಖ್ಯಾಧಿಕಾರಿ ಕೃಷ್ಣಪ್ರಸಾದ್ ಪ್ರಸಾದ್ ಹಾಗೂ ಟಾಸ್ಕ್‌ಫೋರ್ಸ್ ತಂಡ ಕಾರ್ಯಪ್ರವೃತವಾಗಿದೆ.

ಹಾರಂಗಿ ನೀರಾವರಿ ಇಲಾಖೆ ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿದ್ದು, ಹೆಚ್ಚಿನ ಅನಾಹುತ ಸಂಭವಿಸದಂತೆ ಜಲಾಶಯದಿಂದ ನೀರು ಹರಿಸಲು ಕ್ರಮ ಕೈಗೊಳ್ಳಲಾಗಿದೆ.

ಪುರಸಭೆಯಿಂದ ಪಟ್ಟಣದ ಎಲ್ಲಾ ಚರಂಡಿ, ತೊಡುಗಳನ್ನು ಸ್ವಚ್ಛಗೊಳಿಸಿ ಸರಾಗವಾಗಿ ನೀರು ಹರಿಯುವಂತೆ ಕ್ರಮ ಕೈಗೊಳ್ಳಲಾಗಿದೆ.

ವೈದ್ಯರು, ಸಿಬ್ಬಂದಿ ನಿಯೋಜನೆಗೆ ಒತ್ತಾಯ


ವಿರಾಜಪೇಟೆ ಸಿಪಿಐ(ಎಂ) ಕಚೇರಿಯಲ್ಲಿ ಶಾಜಿ ರಮೇಶ್ ಮಾತನಾಡಿದರು.

ವಿರಾಜಪೇಟೆ, ಜು.19–ತಾಲೂಕು ಕೇಂದ್ರ ವಿರಾಜಪೇಟೆ ಸರ್ಕಾರಿ ಆಸ್ಪತ್ರೆಗೆ ತಜ್ಞ ವೈದ್ಯರು ಮತ್ತು ನುರಿತ ಸಿಬ್ಬಂದಿಯನ್ನು ನಿಯೋಜಿಸಬೇಕು ಎಂದು ಭಾರತ್ ಕಮ್ಯುನಿಸ್ಟ್ ಪಕ್ಷದ (ಮಾರ್ಕ್ಸ್‌ವಾದಿ) ವಿರಾಜಪೇಟೆ ತಾಲೂಕು ಕಾರ್ಯದರ್ಶಿ ಶಾಜಿ ರಮೇಶ್ ಒತ್ತಾಯಿಸಿದರು.

ಪಟ್ಟಣದ ಸಿಪಿಐ(ಎಂ) ಕಚೇರಿಯಲ್ಲಿ ನಡೆದ ಪಕ್ಷದ ಮುಖಂಡರ ಸಭೆಯಲ್ಲಿ ಮಾತನಾಡಿದ ಅವರು, ಸುಸಜ್ಜಿತ ಈ ಆಸ್ಪತ್ರೆಯ ಕಟ್ಟಡದಲ್ಲಿ 250ಕ್ಕೂ ಹೆಚ್ಚು ಒಳರೋಗಿಗಳ ಹಾಸಿಗೆಗಳಿದ್ದು, ಎಲ್ಲಾ ಸೌಕರ್ಯವಿದೆ. ಆದರೆ, ತಜ್ಞ ವೈದ್ಯರು ಮತ್ತು ನುರಿತ ಸಿಬ್ಬಂದಿಯ ಕೊರತೆಯಿಂದಾಗಿ ರೋಗಿಗಳು ಖಾಸಗಿ ಆಸ್ಪತ್ರೆಗಳಿಗೆ ಹೋಗುವ ಪರಿಸ್ಥಿತಿ ಎದುರಾಗಿದೆ. ಆರೋಗ್ಯ ಇಲಾಖೆ ಅಧಿಕಾರಿಗಳು ಮತ್ತು ಸ್ಥಳೀಯ ಜನಪ್ರತಿನಿಧಿಗಳು ವೈದ್ಯರು ಮತ್ತು ಸಿಬ್ಬಂದಿ ನಿಯೋಜಿಸಬೇಕು ಎಂದು ಆಗ್ರಹಿಸಿದರು.

ಆಸ್ಪತ್ರೆಯಲ್ಲಿ ಕಾಯಂ ಸ್ತ್ರೀರೋಗ ತಜ್ಞರು ಇಲ್ಲದಿರುವುದರಿಂದ ಗರ್ಭಿಣಿಯರು ಗೋಣಿಕೊಪ್ಪ ಹಾಗೂ ಮಡಿಕೇರಿಯ ಖಾಸಗಿ ಆಸ್ಪತ್ರೆಗಳಿಗೆ ಹೋಗುತ್ತಿದ್ದಾರೆ. ಜನರು ತಪಾಸಣೆಗಾಗಿ ಸರತಿ ಸಾಲಿನಲ್ಲಿ ಗಂಟೆಗಟ್ಟಲೆ ನಿಲ್ಲುವಂತಾಗಿದೆ. ಕೂಡಲೇ ಈ ಎಲ್ಲಾ ಸಮಸ್ಯೆಗಳನ್ನು ಬಗೆಹರಿಸದಿದ್ದರೆ ಪ್ರತಿಭಟನೆ ನಡೆಸುವುದಾಗಿ ಎಚ್ಚರಿಸಿದರು.

ಜಿಲ್ಲಾ ಸಂಘಟನೆ ಎ.ಸಿ.ಸಾಬು ಮಾತನಾಡಿ, ಆಸ್ಪತ್ರೆಯಲ್ಲಿ ಡೆಂಗ್ಯೂ ನಿಯಂತ್ರಣಕ್ಕೆ ಯಾವುದೇ ವ್ಯವಸ್ಥೆ, ಮುಂಜಾಗ್ರತ ಕ್ರಮ ಕೈಗೊಂಡಿಲ್ಲ. ಶನಿವಾರ ಮತ್ತು ಭಾನುವಾರ ವೈದ್ಯರುಗಳೇ ಇಲ್ಲದಿರುವುದರಿಂದ ತುರ್ತು ಚಿಕಿತ್ಸೆಗೆ ಬರುವ ರೋಗಿಗಳು ಪರದಾಡುವಂತಾಗಿದೆ ಎಂದರು. ಸಭೆಯಲ್ಲಿ ಜಿಲ್ಲಾ ಸಮಿತಿ ಪಿ.ಖಾಲಿದ್, ಕೆ.ಕೆ.ಹರಿದಾಸ್, ಕೆ.ರದೀಶ್, ಕೆ.ಖಾಶಿಂ ಇದ್ದರು.

ಜಿಲ್ಲೆಯಲ್ಲಿ 4 ಕಾಳಜಿ ಕೇಂದ್ರ ಸ್ಥಾಪನೆ

ಮಡಿಕೇರಿ, ಜು.19– ಕೊಡಗಿನ ಹಲವು ಕಡೆಗಳಲ್ಲಿ ಪ್ರವಾಹ ಏರ್ಪಟ್ಟಿರುವುದರಿಂದ ಜಿಲ್ಲೆಯಲ್ಲಿ ಒಟ್ಟು 4 ಕಾಳಜಿ ಕೇಂದ್ರಗಳನ್ನು ತೆರೆಯಲಾಗಿದ್ದು, 35 ಮಂದಿಯನ್ನು ಕಾಳಜಿ ಕೇಂದ್ರಗಳಿಗೆ ಸ್ಥಳಾಂತರ ಮಾಡಲಾಗಿದೆ.

ಆತಂಕಕ್ಕೆ ಒಳಗಾಗಿದ್ದ 90 ಮಂದಿಯನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸ ಲಾಗಿದೆ. ಭಾರಿ ಗಾಳಿ ಮಳೆಗೆ 3 ಮನೆಗಳು ಕುಸಿದಿದ್ದು, 9 ಮನೆಗಳಿಗೆ ಭಾಗಶಃ ಮತ್ತು 18 ಮನೆಗಳಿಗೆ ಅಲ್ಪ ಪ್ರಮಾಣದ ಹಾನಿಯಾಗಿದೆ. ಭಾಗಮಂಡಲ, ಬೇಂಗೂರು ದೋಣಿಕಡುವು, ಮೂರ್ನಾಡು–ನಾಪೋಕ್ಲು ರಸ್ತೆ, ಮಡಿಕೇರಿ–ನಾಪೋಕ್ಲು ರಸ್ತೆ, ಮಡಿಕೇರಿ–ಹಾಕತ್ತೂರು ರಸ್ತೆ, ಕರಡಿಗೋಡು ಗ್ರಾಮ, ವಿರಾಜಪೇಟೆ ಕದನೂರು ರಸ್ತೆ, ಕುಶಾಲನಗರ, ಗುಮ್ಮನಕೊಲ್ಲಿ, ಶ್ರೀಮಂಗಲದ ನಾಲ್ಕೇರಿ ಸೇತುವೆ ಪ್ರವಾಹದಲ್ಲಿ ಸಿಲುಕಿದೆ. ಜಿಲ್ಲೆಯ ವಿವಿಧೆಡೆ ಒಟ್ಟು 50 ವಿದ್ಯುತ್ ಕಂಬಗಳು ಮುರಿದು ಬಿದ್ದಿದ್ದು, ಸೆಸ್ಕ್‌ಗೆ 50 ಲಕ್ಷ ರೂ. ನಷ್ಟವಾಗಿದೆ.

1 ಜಾನುವಾರು ಮೃತಪಟ್ಟಿದೆ ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಘಟಕ ಮಾಹಿತಿ ನೀಡಿದೆ.

ನಾಳೆ ಕುವೆಂಪುನಗರದ ಕೊಡವ ನಿವಾಸಿಗಳ ಸಂಘದ ವಾರ್ಷಿಕ ಸಭೆ

ಮೈಸೂರು, ಜು.19–ಕುವೆಂಪುನಗರದ ಕೊಡವ ನಿವಾಸಿಗಳ ಸಂಘದ 23ನೇ ವಾರ್ಷಿಕ ಸಭೆ ಮತ್ತು ವಾರ್ಷಿಕೋತ್ಸವ ಜು.21ರಂದು ಬೆಳಗ್ಗೆ 10.30ಕ್ಕೆ ವಿಜಯನಗರ 1ನೇ ಹಂತದ ಕೊಡವ ಸಮಾಜದ ಫೀಲ್ಡ್ ಮಾರ್ಷಲ್ ಕಾರ್ಯಪ್ಪ ಸಭಾಂಗಣದಲ್ಲಿ ನಡೆಯಲಿದೆ.

ಸಂಘದ ಅಧ್ಯಕ್ಷ ಮಾಟೇರಿರ ಬಿ.ಮೇದಪ್ಪ ಅಧ್ಯಕ್ಷತೆಯಲ್ಲಿ ನಡೆಯುವ ಸಭೆಯಲ್ಲಿ ಶೈಕ್ಷಣಿಕ ಸಾಧನೆಯ ವಿದ್ಯಾರ್ಥಿಗಳು ಮತ್ತು ವಿವಿಧ ಕ್ಷೇತ್ರಗಳ ಸಾಧಕರನ್ನು ಸನ್ಮಾನಿಸಲಾಗುವುದು. ಬಳಿಕ ವಿವಿಧ ಆಟೋಟ ಸ್ಪರ್ಧೆಗಳನ್ನು ಏರ್ಪಡಿಸಲಾಗಿದ್ದು, ವಿಜೇತರಿಗೆ ಬಹುಮಾನ ವಿತರಿಸಲಾಗುವುದು. ಸಂಘದ ಸದಸ್ಯರು ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಸಂಘದ ಆಡಳಿತ ಮಂಡಳಿ ಮನವಿ ಮಾಡಿದೆ.

ಇಂದು ಚಾಮರಾಜೇಶ್ವರ ರಥೋತ್ಸವ


ರಥೋತ್ಸವ ಹಿನ್ನೆಲೆಯಲ್ಲಿ ಶುಕ್ರವಾರ ರಾತ್ರಿ ಚಾಮರಾಜನಗರ ಚಾಮರಾಜೇಶ್ವರ ದೇವಸ್ಥಾನಕ್ಕೆ ದೀಪಾಲಂಕಾರ ಮಾಡಲಾಯಿತು.

ಚಾಮರಾಜನಗರ, ಜು.19– ಶ್ರೀ ಚಾಮರಾಜೇಶ್ವರಸ್ವಾಮಿ ರಥೋತ್ಸವ ಶನಿವಾರ (ಇಂದು) ನಡೆಯಲಿದ್ದು, ಜಾತ್ರೆಯಲ್ಲಿ ಹೆಚ್ಚು ಧ್ವನಿ ಹೊರಡಿಸುವ ತುತ್ತೂರಿ (ಪೀಪಿ)ಗಳನ್ನು ನಿಷೇಧಿಸಲಾಗಿದೆ. ಆರೋಗ್ಯ ಇಲಾಖೆ ಭಕ್ತರು ಹಾಗೂ ಸಾರ್ವಜನಿಕರು ಆರೋಗ್ಯ ದೃಷ್ಟಿಯಿಂದ ಮುಂಜಾಗ್ರತಾ ಕ್ರಮ ಅನುಸರಿಸಬೇಕು ಎಂದು ಜಿಲ್ಲಾಧಿಕಾರಿ ಶಿಲ್ಪನಾಗ್ ತಿಳಿಸಿದ್ದಾರೆ.

ಡೆಂಗ್ಯೂ ಹಾಗೂ ಸಾಂಕ್ರಾಮಿಕ ರೋಗ ಹರಡುತ್ತಿರುವ ಹಿನ್ನೆಲೆಯಲ್ಲಿ ಜಾತ್ರೆಯಲ್ಲಿ ಶುದ್ಧ ಕುಡಿಯುವ ನೀರು, ಆಹಾರ ಹಾಗೂ ಪರಿಸರ ಮಾಲಿನ್ಯವಾಗದಂತೆ ನೋಡಿಕೊಳ್ಳಬೇಕು. ಸೊಳ್ಳೆ, ನೊಣಗಳು ಉತ್ಪತ್ತಿಯಾಗಿ ಆರೋಗ್ಯದ ಮೇಲೆ ಪರಿಣಾಮ ಬೀರುವುದರಿಂದ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು.

ಜಾತ್ರೆಯಲ್ಲಿ ಕಂಡಕಂಡಲ್ಲಿ ಉಗುಳಬಾರದು, ರಥೋತ್ಸವ ಹಿನ್ನೆಲೆಯಲ್ಲಿ ತೆರೆದಿರುವ ತಾತ್ಕಾಲಿಕ ಆಸ್ಪತ್ರೆಗಳ ಉಪಯೋಗವನ್ನು ಸಾರ್ವಜನಿಕರು ಪಡೆದುಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

ಮಹದೇಶ್ವರ ನನ್ನ ಕೈ ಬಿಡಲಿಲ್ಲ

ಮಾದಪ್ಪನ ದರ್ಶನ ಪಡೆದ ಕೇಂದ್ರ ಸಚಿವ ವಿ.ಸೋಮಣ್ಣ ಹೇಳಿಕೆ

ಹನೂರು, ಜು.19–ಕೆಲವರು ರಾಜಕೀಯವಾಗಿ ಸೋಮಣ್ಣನನ್ನು ಮುಗಿಸಿಬಿಟ್ವೆವು ಎನ್ನುತ್ತಿದ್ದರು. ಆದರೆ, ಮಲೆಮಹದೇಶ್ವರ ನನ್ನ ಕೈ ಬಿಡಲಿಲ್ಲ ಎಂದು ಕೇಂದ್ರ ಸಚಿವ ವಿ.ಸೋಮಣ್ಣ ಹೇಳಿದರು.

ತಾಲೂಕಿನ ಮಲೆಮಹದೇಶ್ವರಬೆಟ್ಟಕ್ಕೆ ಕೇಂದ್ರ ಸಚಿವರಾದ ಬಳಿಕ ಮೊದಲ ಬಾರಿಗೆ ಶುಕ್ರವಾರ ಭೇಟಿ ನೀಡಿ ತಮ್ಮ ಮನೆ ದೇವರು ಮಾದಪ್ಪನಿಗೆ ವಿಶೇಷ ಪೂಜೆ ಸಲ್ಲಿಸಿದ ನಂತರ ಮಾತನಾಡಿದ ಅವರು, ವಿಧಾನ ಸಭೆ ಚುನಾವಣೆ ಸೋಲಿನ ಬಳಿಕ ಸೋಮಣ್ಣನನ್ನು ಮುಗಿಸಿಬಿಟ್ಟರು ಎಂಬ ಮಾತುಗಳಿದ್ದವು. ಆದರೆ, ಭಗವಂತ ಮಹದೇಶ್ವರ ಹಾಗೂ ನಾನು ನಂಬಿದ ಪಕ್ಷದ ನಾಯಕರು ನನ್ನ ಕೈ ಬಿಡಲಿಲ್ಲ ಎಂದರು.

ನಾವು ನಮ್ಮ ಕೆಲಸ ಮರೆಯಬಹುದು. ಆದರೆ, ಪ್ರಕೃತಿ ಅದರ ಪಾಡಿಗೆ ಅದರ ಕೆಲಸ ಮಾಡುತಿರುತ್ತದೆ. ರಾಜ್ಯದಲ್ಲಿ ಉತ್ತಮ ಮುಂಗಾರು ಮಳೆಯಿಂದ ಸಂತಸವಾಗಿದೆ ಎಂದರು.



ಮಹದೇಶ್ವರಬೆಟ್ಟದ ತಪೋಭವನದಲ್ಲಿ ತಮ್ಮ ಅಭಿಮಾನಿ ಬಳಗದಿಂದ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ವಿ.ಸೋಮಣ್ಣ ಬಡವರಿಗೆ ಸೀರೆ ಮತ್ತು ಹೊದಿಗೆ ವಿತರಿಸಿದರು.

ಬಳಿಕ ಮಹದೇಶ್ವರಬೆಟ್ಟದ ತಪೋಭವನದಲ್ಲಿ ವಿ.ಸೋಮಣ್ಣ ಹುಟ್ಟುಹಬ್ಬದ ಅಂಗವಾಗಿ ಅವರ ಅಭಿಮಾನಿ ಬಳಗದಿಂದ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಬಡವರಿಗೆ ಸೀರೆ ಮತ್ತು ಹೊದಿಗೆ ವಿತರಿಸಲಾಯಿತು. ಮೈಸೂರಿನ ಎಸ್‌ಎಂಪಿ ಡೆವಲಪರ್ ಶಿವಪ್ರಕಾಶ್, ಉಮೇಶ್, ಮಂಗಲ ಶಿವಕುಮಾರ್, ಸಿ.ಗುರುಸ್ವಾಮಿ, ನಟರಾಜಗೌಡ, ಪುಟ್ಟಣ್ಣ ಮಾಸ್ಟರ್, ಶಾಂತರಾಜು, ಪ್ರಜೇಶ್ ಇತರರು ಇದ್ದರು.

ವಾಹನ ಡಿಕ್ಕಿ: ಪ್ರತ್ಯೇಕ ಪ್ರಕರಣ

ಎರಡು ಜಿಂಕೆ ಸಾವು

ಚಾಮರಾಜನಗರ, ಜು.19–ಪುಣಜನೂರು ವನ್ಯಜೀವಿ ವಲಯದ ಕಾರೇಪಾಳ್ಯ ಗಸ್ತಿನ ಮೂಲೆಹೊಳೆ ಹಾಗೂ ಗುಂಡುಹುಣಸೆ ಅರಣ್ಯ ಪ್ರದೇಶದ ರಾಷ್ಟ್ರೀಯ ಹೆದ್ದಾರಿಯಲ್ಲಿ ಶುಕ್ರವಾರ ಪ್ರತ್ಯೇಕವಾಗಿ ಎರಡು ವಾಹನಗಳು ಡಿಕ್ಕಿ ಹೊಡೆದ ಪರಿಣಾಮ ಎರಡು ಜಿಂಕೆಗಳು ಮೃತಪಟ್ಟಿವೆ.

ಚಾಮರಾಜನಗರ ವಿಭಾಗದ ಮೂಲೆಹೊಳೆ ಅರಣ್ಯ ಪ್ರದೇಶದ ಹೆದ್ದಾರಿಯಲ್ಲಿ ಬೆಳಗ್ಗೆ ಸುಮಾರು 7.50ರಲ್ಲಿ ಬೆಂಗಳೂರಿನ ಶ್ರೀನಗರದ ರಾಘವೇಂದ್ರ ಬ್ಲಾಕ್ ನಿವಾಸಿ ಎನ್.ವಿ.ಸುಹಾಸ್ ಕಾರಿನಲ್ಲಿ ಜಿಂಕೆಗೆ ಡಿಕ್ಕಿ ಹೊಡೆದಿದ್ದಾರೆ. ಪರಿಣಾಮ ಜಿಂಕೆ ಸ್ಥಳದಲ್ಲೇ ಮೃತಪಟ್ಟಿದೆ.

ಮತ್ತೊಂದೆಡೆ ಗುಂಡುಹುಣಸೆ ಅರಣ್ಯದ ಹೆದ್ದಾರಿಯಲ್ಲಿ ಬೆಳಗ್ಗೆ 10 ಗಂಟೆಯಲ್ಲಿ ಮಂಡ್ಯ ತಾಲೂಕಿನ ಕೊತ್ತತ್ತಿ ಹೋಬಳಿಯ ಕಬ್ಬನಹಳ್ಳಿ ಗ್ರಾಮದ ರಾಚಪ್ಪಾಜಿ ಮಾರಿತಿ ವ್ಯಾನ್‌ನಲ್ಲಿ ಜಿಂಕೆಗೆ ಡಿಕ್ಕಿ ಹೊಡೆದಿದ್ದಾರೆ. ಇದರಿಂದ ಜಿಂಕೆ ರಸ್ತೆಯಲ್ಲೇ ಮೃತಪಟ್ಟಿದೆ. ಸ್ಥಳ ಪರಿಶೀಲಿಸಿದ ಅರಣ್ಯಾಧಿಕಾರಿಗಳು ಇಬ್ಬರು ಆರೋಪಿಗಳನ್ನು ಬಂಧಿಸಿ, ನ್ಯಾಯಾಂಗ ವಶಕ್ಕೆ ಒಪ್ಪಿಸಿದ್ದಾರೆ.

ಇಬ್ಬರು ಬಂಧನ


ವಾಹನಗಳು ಡಿಕ್ಕಿ ಹೊಡೆದು ಎರಡು ಜಿಂಕೆಗಳು ಮೃತಪಟ್ಟಿರುವುದು.

ಗೋಪಾಲಸ್ವಾಮಿಬೆಟ್ಟಕ್ಕೆ ವಿಜಯಾನಂದತೀರ್ಥ ಸ್ವಾಮೀಜಿ ಭೇಟಿ

ಗುಂಡ್ಲುಪೇಟೆ, ಜು.19–ತಾಲೂಕಿನ ಹಿಮವದ್ ಗೋಪಾಲಸ್ವಾಮಿಬೆಟ್ಟಕ್ಕೆ ಶುಕ್ರವಾರ ಮೈಸೂರಿನ ಗಣಪತಿ ಸಚ್ಚಿದಾನಂದ ಆಶ್ರಮದ ಕಿರಿಯಶ್ರೀ ದತ್ತ ವಿಜಯಾನಂದತೀರ್ಥ ಸ್ವಾಮೀಜಿ ಮತ್ತು ಎಸ್‌ಜಿಎಸ್ ವೇದ ಶಾಲೆಯ ನೂರಾರು ವಿದ್ಯಾರ್ಥಿಗಳು ಭೇಟಿ ನೀಡಿ, ಶ್ರೀ ವೇಣುಗೋಪಾಲಸ್ವಾಮಿ ದರ್ಶನ ಪಡೆದರು.

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸ್ವಾಮೀಜಿ, ದೇಶ ಸುಭಿಕ್ಷವಾಗಿರಲೆಂದು ಪ್ರಾರ್ಥಿಸಲಾಗಿದೆ. ಸ್ವಾಮಿಯ ದರ್ಶನ ಪಡೆದು ಸಂತೋಷವಾಯಿತು. ಈ ಪುಣ್ಯ ಸ್ಥಳ ಭೂಮಿಯ ಮೇಲಿನ ಸ್ವರ್ಗದಂತಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಹಿಮವದ್ ಗೋಪಾಲಸ್ವಾಮಿ ಬೆಟ್ಟದ ಪ್ರಧಾನ ಅರ್ಚಕ ಗೋಪಾಲಕೃಷ್ಣ ಭಟ್ಟರು, ವೀರಶೈವ ಮುಖಂಡರಾದ ಕೇಬಲ್ ಮಹೇಶ್, ಗೌರಿಶಂಕರಸ್ವಾಮಿ ಮತ್ತಿತರರು ಇದ್ದರು.


ಹಿಮವದ್ ಗೋಪಾಲಸ್ವಾಮಿಬೆಟ್ಟಕ್ಕೆ ಮೈಸೂರಿನ ಗಣಪತಿ ಸಚ್ಚಿದಾನಂದ ಆಶ್ರಮದ ಕಿರಿಯಶ್ರೀ ಭೇಟಿ ನೀಡಿ, ದೇವರ ದರ್ಶನ ಪಡೆದರು.

ಬಾಲ್ಯವಿವಾಹ ತಡೆಗೆ ಎಲ್ಲರ ಸಹಕಾರ ಅಗತ್ಯ

ಚಾಮರಾಜನಗರ, ಜು.19–ಬಾಲ್ಯವಿವಾಹದಿಂದ ದೈಹಿಕ, ಮಾನಸಿಕ ಹಾಗೂ ಬೌದ್ಧಿಕವಾಗಿ ಶೋಷಣೆಗೆ ಒಳಗಾಗುವ ಹೆಣ್ಣು ಮಕ್ಕಳ ಭವಿಷ್ಯ ಕುಂಠಿತಗೊಳ್ಳಲಿದ್ದು, ಇದನ್ನು ತಡೆಯಲು ಎಲ್ಲರ ಸಹಕಾರ ಅಗತ್ಯವಾಗಿದೆ ಎಂದು ಜಿಲ್ಲಾ ವಕೀಲರ ಸಂಘದ ನಿಕಟ ಪೂರ್ವ ಅಧ್ಯಕ್ಷ ಉಮ್ಮತ್ತೂರು ಇಂದುಶೇಖರ್ ಹೇಳಿದರು.

ತಾಲೂಕಿನ ಅಮಚವಾಡಿ ಗ್ರಾಮದ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಆಯೋಜಿಸಿದ್ದ ಕಾನೂನು ಅರಿವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಬಾಲ್ಯದಲ್ಲೇ ಮದುವೆ ಮಾಡುವುದು ಬಾಲ್ಯವಿವಾಹ ನಿಷೇಧ ಕಾಯ್ದೆ ಪ್ರಕಾರ ಅಪರಾಧ. ಇದರಿಂದ ಮಕ್ಕಳ ಹಕ್ಕುಗಳಿಗೆ ಧಕ್ಕೆಯಾಗುವ ಜೊತೆಗೆ ಅವರ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗಲಿದೆ ಎಂದು ತಿಳಿಸಿದರು.

ವಿದ್ಯಾರ್ಥಿಗಳ ಮೇಲೆ ಇತ್ತೀಚಿನ ದಿನಗಳಲ್ಲಿ ಲೈಂಗಿಕ ದೌರ್ಜನ್ಯ ಪ್ರಕರಣಗಳು ಹೆಚ್ಚಾಗುತ್ತಿದ್ದು, ವಿದ್ಯಾರ್ಥಿಗಳು ಜಾಗೃತರಾಗಿ ಸಮಾಜದ ಇತರರಿಗೂ ದೌರ್ಜನ್ಯ ಪ್ರಕರಣಗಳ ಬಗ್ಗೆ ಅರಿವು ಮೂಡಿಸಬೇಕು ಎಂದರು.

ಜಿಲ್ಲಾ ಬಾಲ ನ್ಯಾಯ ಮಂಡಳಿ ಸದಸ್ಯ ಟಿ.ಜೆ.ಸುರೇಶ್ ಮಾತನಾಡಿ, ವಿದ್ಯಾರ್ಥಿಗಳು ಹದಿಹರೆಯದ ವಯಸ್ಸಿನಲ್ಲಿ ಜಾಗೃತರಾಗಿ ಹೆಜ್ಜೆ ಇಡಬೇಕು. ಕೆಟ್ಟ ಆಲೋಚನೆಯಿಂದ ದೂರವಿದ್ದು, ಒಳ್ಳೆಯದರ ಕಡೆ ಗಮನ ಹರಿಸಿ ಉತ್ತಮ ಪುಸ್ತಕಗಳನ್ನು ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.


ಅಮಚವಾಡಿ ಗ್ರಾಮದ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಆಯೋಜಿಸಿದ್ದ ಕಾನೂನು ಅರಿವು ಕಾರ್ಯಕ್ರಮವನ್ನು ಉಮ್ಮತ್ತೂರು ಇಂದುಶೇಖರ್ ಉದ್ಘಾಟಿಸಿದರು.

ಕಾಲೇಜಿನ ಉಪನ್ಯಾಸಕ ಸುರೇಶ್ ಎನ್. ಋಗ್ವೇದಿ, ವಕೀಲೆ ವಿದ್ಯಾಲತಾ ಮಾತನಾಡಿದರು. ಪ್ರಭಾರ ಪ್ರಾಂಶುಪಾಲ ಆರ್. ಮೂರ್ತಿ, ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಸಹಾಯಕ ಗ್ರಂಥಪಾಲಕ ಶಿವಕುಮಾರ್, ಉಪನ್ಯಾಸಕರಾದ ಪಿ.ಶಿವಸ್ವಾಮಿ, ಆರ್.ಬಸವಣ್ಣ, ಬಿ.ಎನ್.ರಮೇಶ್, ಸುರೇಶ್ ಯುವ ಸ್ಪಂದನ ಕೇಂದ್ರದ ಪರಿವರ್ತಕ ಗುರುರಾಜ್, ಇತರರಿದ್ದರು.

ಮುಡಾ ಸ್ವಚ್ಛಗೊಳಿಸಲು ಇಂದು ಪೊರಕೆ ಚಳುವಳಿ

ಮೈಸೂರು, ಜು.19(ಎಂಕೆ)– ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರವನ್ನು ಅಸ್ಥಿರಗೊಳಿಸಲು ಹೊರಟಿರುವ ಬಿಜೆಪಿ ಮತ್ತು ಜೆಡಿಎಸ್ ಹುನ್ನಾರ ಖಂಡಿಸಿ ಹಾಗೂ ಮುಡಾವನ್ನು ಸ್ವಚ್ಛಗೊಳಿಸಲು ಆಗ್ರಹಿಸಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ಹಾಗೂ ಅಹಿಂದ ಸಂಘಟನೆಗಳ ಸಂಯುಕ್ತಾಶ್ರಯದಲ್ಲಿ ನಾಳೆ(ಜು.20) ಬೆಳಗ್ಗೆ 11.30ಕ್ಕೆ ಪೊರಕೆ ಚಳುವಳಿ ಹಮ್ಮಿಕೊಳ್ಳಾಗಿದೆ.

ಮುಡಾ ಎದುರು ಚಳುವಳಿ ನಡೆಯಲಿದ್ದು, ಸಾಹಿತಿಗಳು, ಚಿಂತಕರು, ಪ್ರಗತಿಪರ ಹೋರಾಟಗಾರರು, ದಲಿತ ಹಾಗೂ ಅಲ್ಪ ಸಂಖ್ಯಾತ ಸಮುದಾಯಗಳ ಮುಖಂಡರು ಭಾಗವಹಿಸಲಿದ್ದಾರೆ ಎಂದು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ರಾಜ್ಯಾಧ್ಯಕ್ಷ ಕೆ.ಎಸ್.ಶಿವರಾಮು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೂರನೇ ಪುಟದಿಂದ

ಮೈಸೂರು–ಊಟಿ ಹೆದ್ದಾರಿ ಬಂದ್

ಮೇದರಕೇರಿ, ಹಳ್ಳದಕೇರಿ ಬಡಾವಣೆ, ಶಾಲಾ ಕಟ್ಟಡಕ್ಕೆ ನೀರು ನುಗ್ಗಿದೆ. ಮತ್ತೊಂದೆಡೆ ಸುತ್ತೂರು ಬಳಿ ಕಪಿಲಾ ನದಿಗೆ ಅಡ್ಡಲಾಗಿ ನಿರ್ಮಿಸಿರುವ ಸೇತುವೆ, ಹೊಮ್ಮರಗಳ್ಳಿ ಸಮೀಪದ ಹರದನಹಳ್ಳಿ ಸೇತುವೆ ಮುಳುಗಡೆಯಾಗಿರುವುದರಿಂದ ಆ ಮಾರ್ಗದಲ್ಲಿ ವಾಹನ ಸಂಚಾರ ಸ್ಥಗಿತಗೊಂಡಿದೆ. ಮಳೆ ಜಾಸ್ತಿಯಾಗಿ ನದಿ ತುಂಬಿ ಹರಿಯುತ್ತಿರುವ ಕಾರಣ ಜಿಲ್ಲಾಡಳಿತ ಹಾಗೂ ನಂಜನಗೂಡು ತಾಲೂಕು ಆಡಳಿತದ ಅಧಿಕಾರಿಗಳು ನದಿ ದಂಡೆಯಲ್ಲಿರುವ ಜನ–ಜಾನುವಾರುಗಳನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಿ, ಮೂಲ ಸೌಕರ್ಯಗಳನ್ನು ಒದಗಿಸುತ್ತಿದ್ದಾರೆ. ತಹಸೀಲ್ದಾರ್, ತಾಲೂಕು ಪಂಚಾಯ್ತಿ ಕಾರ್ಯನಿರ್ವಹಣಾಧಿಕಾರಿಗಳು, ಗ್ರಾಮ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಲೆಕ್ಕಿಗರು, ಕಂದಾಯ ನಿರೀಕ್ಷಕರು, ಪೊಲೀಸ್ ಅಧಿಕಾರಿಗಳು ಪ್ರವಾಹ ಪೀಡಿತ ಸ್ಥಳಗಳಲ್ಲಿ ಜನರ ಸುರಕ್ಷತೆಗಾಗಿ ಕ್ರಮ ವಹಿಸುತ್ತಿದ್ದಾರೆ.

ಇಂದು ಬೆಳಗ್ಗೆ ಜಿಲ್ಲಾಧಿಕಾರಿ ಜಿ. ಲಕ್ಷ್ಮೀಕಾಂತರೆಡ್ಡಿ ಅಧೀನಾಧಿಕಾರಿಗಳೊಂದಿಗೆ ಪ್ರವಾಹ ಪೀಡಿತ ಸ್ಥಳಗಳಿಗೆ ಭೇಟಿ ನೀಡಿ ಕೈಗೊಂಡಿರುವ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಖುದ್ದು ಪರಿಶೀಲನೆ ನಡೆಸಿ ಎಚ್ಚರಿಕೆ ವಹಿಸುವಂತೆ ಸೂಚಿಸಿದರು.

25 ಸಾವಿರ ಕ್ಯುಸೆಕ್ ನೀರು ಬಿಡುಗಡೆ

ನದಿಗೆ ಬಿಡಲಾಗುವುದು ಎಂದು ಹೇಳಿದ್ದಾರೆ. ಜಲಾಶಯಕ್ಕೆ ಒಳ ಹರಿವಿನ ಪ್ರಮಾಣ ಹೆಚ್ಚಾಗುತ್ತಿರುವ ಕಾರಣ ಜಲಾಶಯದಿಂದ ನದಿಗೆ ಬಿಡುವ ನೀರಿನ ಪ್ರಮಾಣ ಕೂಡ ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ಇದೆ ಎಂದು ಎಚ್ಚರಿಸಿದ್ದಾರೆ. ಅಲ್ಲದೇ ಕಾವೇರಿ ನದಿ ತಗ್ಗು ಪ್ರದೇಶದಲ್ಲಿ, ನದಿ ಪಾತ್ರದ ಎರಡು ದಂಡೆಯಲ್ಲಿರುವ ಜನರು ಆಸ್ತಿ ಪಾಸ್ತಿ ಹಾಗೂ ಜಾನುವಾರು ರಕ್ಷಣೆಗೆ ಎಚ್ಚರಿಕೆ ವಹಿಸುವಂತೆ ಸೂಚಿಸಿದ್ದಾರೆ. ನದಿಗೆ ಹೆಚ್ಚಿನ ನೀರು ಬಿಡುತ್ತಿರುವ ಹಿನ್ನೆಲೆಯಲ್ಲಿ ಜನರು ಸುರಕ್ಷಿತ ಸ್ಥಳಗಳಿಗೆ ಹೋಗುವಂತೆಯೂ ಸಲಹೆ ನೀಡಿದ್ದಾರೆ.

ಹಗರಣಗಳ ತನಿಖೆ

ತೀವ್ರ ಪ್ರತಿಭಟನೆ ನಡುವೆಯೂ ಸಿದ್ಧಪಡಿಸಿದ ಹೇಳಿಕೆಯನ್ನು ಓದಿದ್ದಲ್ಲದೆ, ಇವೆಲ್ಲವೂ ದಾಖಲೆಗೆ ಸೇರಬೇಕೆಂದು ಸಭಾಧ್ಯಕ್ಷರಲ್ಲಿ ಮನವಿ ಮಾಡಿಕೊಂಡರು. ಮುಂದುವರೆದು ಮಾತನಾಡಿದ ಮುಖ್ಯಮಂತ್ರಿಗಳು, ತಿಂದವರು ತಿಂದುಕೊಂಡು ಹೋಗಲಿ ಎಂದು ಬಿಡುವುದಕ್ಕೆ ನಮ್ಮದು ಯಡಿಯೂರಪ್ಪ, ಬೊಮ್ಮಾಯಿ ಸರ್ಕಾರವಲ್ಲ ಅಥವಾ ಮೋದಿ ಸರ್ಕಾರವಲ್ಲ. ಯಾರೇ ತಪ್ಪೆಸಗಿದ್ದರೂ ಅವರನ್ನು ಬಿಡುವ ಪ್ರಶ್ನೆಯೇ ಇಲ್ಲ.

ವಾಲ್ಮೀಕಿ ನಿಗಮದಲ್ಲಿ ನಡೆದಿರುವ ಹಗರಣಕ್ಕೆ ಸಂಬಂಧಿಸಿದಂತೆ ಈಗಾಗಲೇ ತನಿಖೆ ನಡೆಸುತ್ತಿದ್ದು, ಒಂದಷ್ಟು ಹಣವನ್ನು ವಶಪಡಿಸಿಕೊಳ್ಳಲಾಗಿದೆ, ಇದರಲ್ಲಿ ಭಾಗಿಯಾದ ಅಧಿಕಾರಿಗಳನ್ನು ಬಂಧಿಸಿದ್ದಾರೆ, ನಂತರ ನಾವು ಅವರನ್ನು ಅಮಾನತು ಮಾಡಿದ್ದೇವೆ. ಆದರೆ, ಬಿಜೆಪಿ ಆಡಳಿತದಲ್ಲಿ ಇಂತಹ ಕಳ್ಳರನ್ನು ಮಟ್ಟ ಹಾಕಿದ್ದರೆ ಅಥವಾ ಮೋದಿ ಸರ್ಕಾರ ಖದೀಮ ಬ್ಯಾಂಕ್ ಮ್ಯಾನೇಜರ್‌ಗಳ ವಿರುದ್ಧ ಕ್ರಮ ಕೈಗೊಂಡಿದ್ದರೆ ಇಂದು ದೇಶದಲ್ಲಿ ಇಂತಹ ಪ್ರಕರಣಗಳು ನಡೆಯುತ್ತಿರಲಿಲ್ಲ.

ಬ್ಯಾಂಕ್‌ಗಳಲ್ಲಿ ಫ್ರಾಡ್: ರಾಜ್ಯದಲ್ಲಿ ಕಳೆದ ಐದಾರು ವರ್ಷಗಳಲ್ಲಿ ಅನೇಕ ಬ್ಯಾಂಕ್‌ಗಳಲ್ಲಿ ಫ್ರಾಡ್‌ಗಳು ನಡೆದಿವೆ. ಇದಕ್ಕೆ ಕಡಿವಾಣ ಹಾಕಲು ಕೇಂದ್ರ ಕಠಿಣ ನಿಲುವುಗಳನ್ನೇ ತೆಗೆದುಕೊಂಡಿಲ್ಲ ಎಂದು ದೂರಿದರು. ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಹಿಂದೆಯೂ ಹಗರಣಗಳಾಗಿವೆ. ಅವುಗಳನ್ನೂ ನಾವು ಹೊರ ತರುತ್ತೇವೆ.

ಬಿಜೆಪಿ ಆಡಳಿತದಲ್ಲಿ ಇದ್ದಾಗ ಎಷ್ಟು ಹಣ ವಸೂಲಿ ಮಾಡಿದ್ದೀರಿ ಎಂದು ಪ್ರಶ್ನಿಸಿದ ಮುಖ್ಯಮಂತ್ರಿ ಅವರು, ಖದೀಮರನ್ನು ಜೈಲಿಗೆ ಹಾಕದೆ, ಎಲ್ಲರನ್ನೂ ರಕ್ಷಿಸಿದ್ದರಿಂದಲೇ ಈ ಪ್ರಕರಣಗಳು ಮರುಕಳಿಸುತ್ತಿವೆ. ಚುನಾವಣಾ ಸಂದರ್ಭದಲ್ಲಿ ಇಷ್ಟು ದೊಡ್ಡ ಪ್ರಮಾಣದ ವ್ಯವಹಾರಗಳು ನಡೆಯುವಾಗ ಆದಾಯ ತೆರಿಗೆ ಇಲಾಖೆಯವರು, ಬ್ಯಾಂಕಿನವರನ್ನು ಏಕೆ ಪ್ರಶ್ನೆ ಮಾಡಲಿಲ್ಲ. ಆ ಸಿಬ್ಬಂದಿಗಳು ನಿಗಮದ ಅಧಿಕಾರಿಗಳ ಜೊತೆ ಕೈಜೋಡಿಸಿ ಈ ಅವ್ಯವಹಾರ ನಡೆಸಿದ್ದಾರೆ. ಯಾವುದೇ ಸಂದರ್ಭದಲ್ಲೂ ಕಳ್ಳರು ಏಕಾಏಕಿ ಹುಟ್ಟುವುದಿಲ್ಲ, ಅವರು ನುರಿತವರು ಹಾಗೂ ಪರಿಣಿತರಾಗಬೇಕಾದರೆ ಅವರಿಗೆ ಹಿಂದೆ ಬಹಳ ಇಮ್ಯೂನಿಟಿ ದೊರೆತಿರುತ್ತದೆ. ಹಾಗಾಗಿ ಕಳ್ಳರನ್ನು ಬೆಳೆಸಿದವರು ನೀವೇ. ಈ ವಿಷಯದಲ್ಲಿ ಆರೋಪಿಗಳಾಗಿರುವ, ಈಗ ಅಮಾನತುಗೊಂಡು ಬಂಧನಕ್ಕೊಳಗಾಗಿರುವ ನಿಗಮದ ಹಿಂದಿನ ವ್ಯವಸ್ಥಾಪಕ ನಿರ್ದೇಶಕ ಜೆ.ಜೆ.ಪದ್ಮನಾಭ ಹಿಂದೆ ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ ಲೂಟಿ ಮಾಡಿದ್ದರು. ಆಗ ನೀವು ಅವರನ್ನು ರಕ್ಷಣೆ ಮಾಡಿದ್ದೀರಿ. ಇಂದು ದೊಡ್ಡ ಪ್ರಮಾಣದಲ್ಲಿ ಲೂಟಿ ಮಾಡಿದ್ದಾರೆ ಎಂದರು.

ಬಿಜೆಪಿಗರು ಭ್ರಷ್ಟಾಚಾರದ ಪಿತಾಮಹರು

ನಿಗಮದ ಅಕ್ರಮದ ಬಗ್ಗೆ ಗೂಳಿಹಟ್ಟಿ ಶೇಖರ್ ಆರೋಪಗಳ ಕುರಿತು ಅಂದು ಬಿಜೆಪಿ ಏಕೆ ತನಿಖೆ ನಡೆಸಲಿಲ್ಲ ಎಂದು ಪ್ರಶ್ನಿಸಿದರು. ಭ್ರಷ್ಟಾಚಾರ ಹಗರಣಗಳ ತನಿಖೆ ಸಂದರ್ಭದಲ್ಲಿ ವಿಧಾನಸಭೆಯಲ್ಲಿ ಆ ವಿಚಾರದ ಮೇಲೆ ಚರ್ಚೆಗೆ ಅವಕಾಶವಿಲ್ಲ, ಆದರೆ ಪ್ರಜಾಪ್ರಭುತ್ವ ಮೌಲ್ಯಗಳಿಗೆ ಬೆಲೆಕೊಟ್ಟು ಸದನದಲ್ಲಿ ಚರ್ಚೆಗೆ ಅವಕಾಶ ಮಾಡಿಕೊಡಲಾಗಿದೆ, ಅಕ್ರಮ ಎಸಗಿದ್ದರೆ ಯಾವುದೇ ಅಧಿಕಾರಿ, ಮಂತ್ರಿ, ಶಾಸಕ, ಯಾರೇ ಆಗಿರಲಿ ರಕ್ಷಿಸುವ ಉದ್ದೇಶ ನಮಗಿಲ್ಲ ಎಂದರು. ವಾಲ್ಮೀಕಿ ನಿಗಮದ 89 ಕೋಟಿ ರೂ. ತೆಲಂಗಾಣಕ್ಕೆ ಅಕ್ರಮ ವರ್ಗಾವಣೆ ಆದ ಹಗರಣದ ತನಿಖೆಗೆ ಎಸ್‌ಐಟಿ ರಚನೆ ಮಾಡಲಾಗಿದೆ, ತನಿಖಾ ತಂಡ ಸುಮಾರು 36 ಕೋಟಿ ರೂ.ಗಳಷ್ಟು ವಶಪಡಿಸಿಕೊಂಡಿದೆ. ಬ್ಯಾಂಕ್ ಅಧಿಕಾರಿ ಒಂದೇ ದಿನದಲ್ಲಿ ಕೋಟ್ಯಾಂತರ ರೂ. ಸಾಲ ಮಂಜೂರು ಮಾಡಿದ್ದು, ಈ ಪ್ರಕರಣದ ಹಿನ್ನೆಲೆಯಲ್ಲಿ ಕೇಂದ್ರ ಹಣಕಾಸು ಸಚಿವರನ್ನು ಹೊಣೆಗಾರರನ್ನಾಗಿ ಮಾಡಲು ಆಗುತ್ತದೆಯೇ? ಪ್ರತಿಪಕ್ಷಗಳು ಉತ್ತರ ಕೊಡಬೇಕು ಎಂದರು.

ಕಾರ್ಯಕರ್ತರಿಗೆ ಸರಕಾರದಿಂದ ಕಿರುಕುಳ

ದುರುದ್ದೇಶದಿಂದ ಕಾಂಗ್ರೆಸ್ಸಿಗರು ಆರ್‌ಟಿಐ ಕಾರ್ಯಕರ್ತರ ವಿರುದ್ಧ ಪೊಲೀಸರಿಗೆ ದೂರು ನೀಡಿದ್ದಾರೆ. ಕುಂಬಳಕಾಯಿ ಕಳ್ಳ ಎಂದರೆ ಹೆಗಲು ಮುಟ್ಟಿ ನೋಡಿಕೊಂಡ ಎಂಬಂತಿದೆ ಈ ನಾಟಕ ಎಂದು ಕುಮಾರಸ್ವಾಮಿ ಟೀಕಾ ಪ್ರಹಾರ ನಡೆಸಿದ್ದಾರೆ. ಪೊಲೀಸ್ ಬಲ ಬಳಸಿ ಸತ್ಯದ ಕತ್ತು ಹಿಚುಕಲು ಸಾಧ್ಯವೇ ಇಲ್ಲ. ಹಾದಿಬೀದಿಯಲ್ಲಿ ಜನರ ಕೈಗೆ ಸಿಕ್ಕಿರುವ ದಾಖಲೆಗಳೇ ಮುಡಾ ಹಗರಣದ ಅಸಲಿ ಕೈ ಯಾವುದು ಎಂಬುದನ್ನು ಸ್ಪಷ್ಟವಾಗಿ ಹೇಳುತ್ತಿವೆ. ಹಾಗಿದ್ದ ಮೇಲೆ ಸತ್ಯವನ್ನು ಹೆಕ್ಕಿ ತೆಗೆದ ಆರ್‌ಟಿಐ ಕಾರ್ಯಕರ್ತರ ಮೇಲೆ ರಾಜ್ಯ ಕಾಂಗ್ರೆಸ್ ಪಕ್ಷ ಸೇಡಿನ ರಾಜಕಾರಣ ಮಾಡುತ್ತಿದೆ ಎಂದು ಎಂದು ಅವರು ದೂರಿದ್ದಾರೆ. ಪೊಲೀಸರಿಗೆ ಕಾಂಗ್ರೆಸ್ ದೂರು ನೀಡಿರುವ ಪ್ರಸಂಗ ಹೇಗಿದೆ ಎಂದರೆ, ಬದಲಿ ನಿವೇಶನದ ಫಲಾನುಭವಿಗಳು ಪರೋಕ್ಷವಾಗಿ ಸತ್ಯ ಒಪ್ಪಿಕೊಂಡಂತಿದೆ. ಅಷ್ಟೇ ಅಲ್ಲ ಆರ್‌ಟಿಐ ಕಾರ್ಯಕರ್ತರ ಟಾರ್ಗೆಟ್ ಮಾಡಿದಷ್ಟು ಮುಡಾದ ಮೂಲೆ ಮೂಲೆಗಳಲ್ಲಿ ಮುಗ್ಗುತ್ತಿರುವ ಸತ್ಯಗಳು ಮತ್ತಷ್ಟು ಉಗ್ರವಾಗಿ ಹೂಂಕರಿಸುತ್ತವೆ. ಇಂತಹ ವ್ಯರ್ಥ ಕೆಲಸ ಬಿಟ್ಟು ಮರ್ಯಾದೆಯಿಂದ ಸತ್ಯವನ್ನು ಎದುರಿಸುವುದು ಸಿಎಂ ಆದವರಿಗೆ ಶೋಭೆ ತರುತ್ತದೆ ಎಂದು ಕುಮಾರಸ್ವಾಮಿ ಟಾಂಗ್ ನೀಡಿದ್ದಾರೆ.

ವಾಲ್ಮೀಕಿ ನಿಗಮದಲ್ಲಿ ಅಕ್ರಮ ಆಗಿದೆ

ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ ರಾಷ್ಟ್ರೀಕೃತ ಬ್ಯಾಂಕ್ ಆಗಿದ್ದು, ಕೇಂದ್ರ ಹಣಕಾಸು ಇಲಾಖೆ ಅಧೀನಕ್ಕೆ ಬರುತ್ತದೆ. ಬ್ಯಾಂಕ್ ಅಧಿಕಾರಿಗಳು ಇದರಲ್ಲಿ ಶಾಮೀಲಾಗಿರುವ ಕುರಿತು ಆತ್ಮಹತ್ಯೆ ನೋಟ್‌ನಲ್ಲಿ ಪ್ರಸ್ತಾಪಿಸಲಾಗಿದೆ. ಈಗಾಗಲೇ ಪರಿಶಿಷ್ಟ ಕಲ್ಯಾಣ ಸಚಿವರಾಗಿದ್ದ ನಾಗೇಂದ್ರ ಅವರು ಸ್ವಯಂಪ್ರೇರಿತವಾಗಿ ತಮ್ಮ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ ಎಂದರು. ಬಿಜೆಪಿ ಆಡಳಿತ ಅವಧಿಯಲ್ಲಿ ಭೋವಿ ಅಭಿವೃದ್ಧಿ ನಿಗಮದ ಹಗರಣವಾದಾಗ ಅವರ ಪಕ್ಷದವರೇ ಆದ ಗೂಳಿಹಟ್ಟಿ ಶೇಖರ್ ಅವರು ಪತ್ರಿಕಾಗೋಷ್ಠಿ ನಡೆಸಿ, ಮಾಹಿತಿ ನೀಡಿದ್ದರು. ಆಗ ಯಾರು ರಾಜೀನಾಮೆ ನೀಡಿದ್ದರು? ಎಪಿಎಂಸಿಯಲ್ಲಿ ಆವರ್ತನಿಧಿ ಲೂಟಿ ಮಾಡಿದಾಗ, ದೇವರಾಜ ಅರಸ್ ಟ್ರಕ್ ಟರ್ಮಿನಲ್ ಹಗರಣದಲ್ಲಿ 47.10 ಕೋಟಿ ರೂ. ಅವ್ಯವಹಾರವಾದಾಗ, ಅಂದಿನ ಮುಖ್ಯಮಂತ್ರಿಗಳಾಗಿದ್ದ ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ ರಾಜೀನಾಮೆ ನೀಡಿದರೇ? ಈ ಪ್ರಕರಣಗಳಲ್ಲಿ ಇ.ಡಿ. ಯಾಕೆ ಸ್ವಯಂ ಪ್ರೇರಿತವಾಗಿ ಕೈಗೆತ್ತಿಕೊಂಡಿಲ್ಲ ಎಂದು ಪ್ರಶ್ನಿಸಿದರು. ಎಲ್ಲಾ ಅಭಿವೃದ್ಧಿ ನಿಗಮಗಳ ಹಣವನ್ನು ಕಡ್ಡಾಯವಾಗಿ ರಾಜ್ಯ ಖಜಾನೆಯಲ್ಲಿ ಜಮಾ ಮಾಡಲು ಈಗಾಗಲೇ ಸೂಚನೆ ನೀಡಲಾಗಿದೆ. ಹಣಕಾಸು ನಿರ್ವಹಣೆಯಲ್ಲಿ ಪಾರದರ್ಶಕತೆಯನ್ನು ತರಲು ಹಲವು ಮಾರ್ಗಸೂಚಿಗಳನ್ನು ಹಣಕಾಸು ಇಲಾಖೆ ಜಾರಿಗೊಳಿಸಿದೆ ಎಂದು ಮುಖ್ಯಮಂತ್ರಿಗಳು ಹೇಳಿದರು.

ಮೈಸೂರು ಮಿತ್ರ

ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

–ಜಾಹೀರಾತು ವ್ಯವಸ್ಥಾಪಕರು

ಉಕ್ಕಿ ಹರಿಯುತ್ತಿರುವ ಕಪಿಲೆ: ಶ್ರೀಕಂಠೇಶ್ವರನಿಗೆ ಜಲಕಂಠಕ

100ಕ್ಕೂ ಹೆಚ್ಚು ಮನೆಗಳು ಜಲಾವೃತ, ಮುಳುಗಡೆ ಭೀತಿಯಲ್ಲಿ ಹಲವಾರು ಗ್ರಾಮಗಳು



ನಂಜನಗೂಡು, ಜು.19– ಕೇರಳದ ವೈನಾಡಿನಲ್ಲಿ ಅಧಿಕ ಮಳೆಯಾಗುತ್ತಿರುವ ಕಾರಣ ಕಬಿನಿ ಜಲಾಶಯ ಭರ್ತಿಗೊಂಡು ಕಪಿಲಾ ನದಿಗೆ 80 ಸಾವಿರಕ್ಕಿಂತಲೂ ಹೆಚ್ಚಿನ ಪ್ರಮಾಣದ ಕ್ಯುಸೆಕ್ ನೀರು ಹರಿಯುತ್ತಿರುವ ಕಾರಣ ಜನಜೀವನ ಅಸ್ತವ್ಯಸ್ತಗೊಂಡಿದ್ದು, ನಂಜನಗೂಡು ಶ್ರೀಕಂಠೇಶ್ವರನಿಗೆ ಜಲಕಂಠಕ ಎದುರಾಗಿದೆ.

ಶ್ರೀಕಂಠೇಶ್ವರನಿಗೂ ಜಲಕಂಟಕ: ಕಪಿಲೆ ಉಕ್ಕಿ ಹರಿಯುತ್ತಿರುವ ಕಾರಣ ಸ್ನಾನಘಟ್ಟ, ಮುಡಿಕಟ್ಟೆ, ಹದಿನಾರು ಕಾಲು ಮಂಟಪ ಸಂಪೂರ್ಣ ಮುಳುಗಡೆಯಾಗಿದೆ. ಗುಂಡ್ಲು ನದಿಯ ಹರಿವಿನ ಪ್ರಮಾಣದಲ್ಲೂ ಏರಿಕೆ ಕಂಡಿದೆ. ಇದರಿಂದ ಶ್ರೀಕಂಠೇಶ್ವರ ದೇವಾಲಯದ ವಾಹನ ನಿಲುಗಡೆ ಪ್ರದೇಶ, ಡಾರ್ಮೆಟರಿ, ದಾಸೋಹ ಭವನದ ಸುತ್ತಲೂ ನೀರು ತುಂಬಿಕೊಂಡಿದೆ. ಅಲ್ಲದೆ ಭಕ್ತಿ ಮಾರ್ಗದಲ್ಲಿರುವ ಶಿವನ ವಿಗ್ರಹದ ಸುತ್ತಲೂ ನೀರು ತುಂಬಿಕೊಂಡು ದ್ವೀಪದಂತಾಗಿದೆ. ಮುಡಿಕಟ್ಟೆಯ ಮಹಡಿ ಮೇಲೆ ಶಾಮಿಯಾನ ಹಾಕಿ ಮುಡಿ ಸೇವೆಯನ್ನು ಮಾಡಲಾಗುತ್ತಿದೆ. ಸ್ನಾನಘಟ್ಟಕ್ಕೆ ಬ್ಯಾರಿಕೇಡ್ ಹಾಕಿ ಪೊಲೀಸರನ್ನು ನಿಯೋಜಿರುವ ಕಾರಣ ಭಕ್ತರು ಪುಣ್ಯಸ್ನಾನ ಮಾಡಲು ಸಾಧ್ಯವಾಗದೆ. ದಾಸೋಹ ಭವನದ ಬಳಿಯಿರುವ ಕೊಳಾಯಿ ನೀರಿನಲ್ಲೇ ಸ್ನಾನ ಮಾಡಿ ದೇವರ ದರ್ಶನ ಪಡೆಯುತ್ತಿದ್ದಾರೆ. ನದಿಯ ಕಡೆಗೆ ತೆರಳದಂತೆ ಧ್ವನಿವರ್ಧಕದ ಮೂಲಕವೂ ಜಾಗೃತಿ ಮೂಡಿಸಲಾಗುತ್ತಿದೆ.

ಹೆದ್ದಾರಿ ಬಂದ್: ತಾಲೂಕಿನ ಮಲ್ಲನಮೂಲೆ ಬಳಿ ರಾಷ್ಟ್ರೀಯ ಹೆದ್ದಾರಿಯಲ್ಲಿ 3 ಅಡಿಗೂ ಹೆಚ್ಚಿನ ನೀರು ತುಂಬಿಕೊಂಡ ಪರಿಣಾಮ 766ರ ಊಟಿ–ಮೈಸೂರು ಹೆದ್ದಾರಿ ಬಂದ್ ಆಗಿದೆ. ಇದರಿಂದ ವಾಹನ ಸವಾರಿಗೆ ತೊಂದರೆಯುಂಟಾಗಿದ್ದು, ಮೈಸೂರಿನಿಂದ ಬರುವ ವಾಹನಗಳು ಕಡಕೋಳ ಕೈಗಾರಿಕಾ ಪ್ರದೇಶ ಅಥವಾ ತಾಂಡವಪುರ ಮಾರ್ಗವಾಗಿ ಕೆಂಪಿಸಿದ್ದನ ಹುಂಡಿ, ಹೆಜ್ಜಿಗೆ ಸೇತುವೆ ಮೂಲಕ ನಂಜನಗೂಡಿಗೆ ತಲುಪುತ್ತಿವೆ. ನಂಜನಗೂಡು ಕಡೆಯಿಂದ ಹೋಗುವ ವಾಹನಗಳು ಗೊದ್ದನಪುರ ಸೇತುವೆ ಮೂಲಕ ದೂರ ಮಾರ್ಗವಾಗಿ ಮೈಸೂರು ತಲುಪುವಂತಾಗಿದೆ

ಶಾಲಾ–ಕಾಲೇಜಿಗೆ ರಜೆ

ತಾಲೂಕಿನಾದ್ಯಂತ ಹೆಚ್ಚಿನ ಮಳೆಯುಂಟಾಗಿರುವುದಲ್ಲದೆ ಕಪಿಲೆ ಪ್ರವಾಹದಿಂದ ತಗ್ಗು ಪ್ರದೇಶಗಳಿಗೆ ನೀರು ನುಗ್ಗಿರುವ ಕಾರಣದಿಂದಾಗಿ ತಾಲೂಕಿನಾದ್ಯಂತ ಎಲ್ಲಾ ಶಾಲಾ ಕಾಲೇಜುಗಳಿಗೆ ತಹಸೀಲ್ದಾರ್ ಶಿವಕುಮಾರ್ ಕಾಸ್ನೂರು ನಾಳೆ (ಶನಿವಾರ)ಯೂ ರಜೆ ಘೋಷಣೆ ಮಾಡಿದ್ದಾರೆ.



ರಸ್ತೆಗಳಲ್ಲಿ ನೀರು ನಿಂತು ಸಂಚಾರಕ್ಕೆ ತೊಂದರೆಯಾಗುತ್ತಿರುವುದು.

ಚಾಮುಂಡೇಶ್ವರಿ ದೇವಾಲಯ, ಧಾರ್ಮಿಕ ಕೇಂದ್ರಗಳು ಮುಳುಗಡೆ

ಚಾಮುಂಡೇಶ್ವರಿ ದೇವಾಲಯ ಮುಳುಗಡೆ ರಸ್ತೆಯಲ್ಲೇ ದೀಪ ಹಚ್ಚಿದ ಭಕ್ತರು: ಕಪಿಲಾ ನದಿಯ ತೀರದಲ್ಲಿರುವ ಚಾಮುಂಡೇಶ್ವರಿ ದೇವಾಲಯ ನೀರಿನಲ್ಲಿ ಮುಳುಗಡೆಯಾಗಿರುವ ಕಾರಣ ದೇವಾಲಯವನ್ನೂ ಬಂದ್ ಮಾಡಲಾಗಿದೆ. 2ನೇ ಆಷಾಢ ಶುಕ್ರವಾರದ ಅಂಗವಾಗಿ ದೇವಾಲಯಕ್ಕೆ ಬಂದ ಭಕ್ತರು ದೇವರ ದರ್ಶನವಿಲ್ಲದೆ ನಿರಾಸೆಯಿಂದ ಹಿಂತಿರುಗುವ ದೃಶ್ಯ ಸಾಮಾನ್ಯವಾಗಿತ್ತು. ಅಲ್ಲದೆ ಕೆಲ ಮಹಿಳೆಯರು ಗೌರಿಘಟ್ಟದ ಬೀದಿಯಲ್ಲಿರುವ ರಾಣಪ್ಪನ ಛತ್ರದ ಮುಂಭಾಗದ ರಸ್ತೆಯಲ್ಲಿ ನಿಂಬೆಹಣ್ಣಿನ ದೀಪ ಹಚ್ಚಿ ಪೂಜೆ ಮಾಡಿದರು.

ಧಾರ್ಮಿಕ ಕೇಂದ್ರಗಳು ನೀರಿನಲ್ಲಿ ಮುಳುಗಡೆ: ಕಪಿಲೆ ಅಪಾಯದ ಮಟ್ಟ ಮೀರಿ ಹರಿಯುತ್ತಿರುವ ಕಾರಣ ಹೆಜ್ಜಿಗೆ ಸೇತುವೆ ಬಳಿ ಚಾಮರಾಜನಗರ ಬೈಪಾಸ್ ರಸ್ತೆಯ ಮೇಗೂ ನೀರು ಚಾಚಿಕೊಂಡಿದೆ. ತಾಲೂಕಿನ ಮಲ್ಲನಮೂಲೆಯ ಬಸವೇಶ್ವರ ದೇವಾಲಯ, ಮಲ್ಲನಮೂಲೆಮಠ, ಕಾಶಿ ವಿಶ್ವಾಥ ದೇವಾಲಯ (ಲಿಂಗಾಭಟ್ಟರ ಗುಡಿ) ಅಯ್ಯಪ್ಪಸ್ವಾಮಿ ದೇವಾಲಯ, ಸತ್ಯನಾರಾಯಣ ಸ್ವಾಮಿ ದೇವಾಲಯ, ಪರಶುರಾಮ ದೇವಾಲಯಗಳು, ರಾಘವೇಂದ್ರ ಮಠದ ಪಂಚಬೃಂದಾವನ ಸಂಪೂರ್ಣವಾಗಿ ನೀರಿನಲ್ಲಿ ಮುಳುಗಡೆಯಾಗಿವೆ. ತಾಲೂಕಿನ ಮಹದೇವತಾತ ಗದ್ದುಗೆಯವರೆಗೂ ಕೂಡ ನೀರು ಚಾಚಿಕೊಂಡಿದೆ.

ಮುಳುಗಡೆ ಭೀತಿಯಲ್ಲಿ ಹಲವಾರು ಬಡಾವಣೆಗಳು: ಪ್ರಸ್ತುತ ಕಬಿನಿ ಜಲಾಶಯದಿಂದ 70 ಸಾವಿರ ಕ್ಯುಸೆಕ್, ನುಗು ಜಲಾಶಯದಿಂದ 10 ಸಾವಿರ ಕ್ಯುಸೆಕ್ ನೀರು ಸೇರಿದಂತೆ 80 ಸಾವಿರ ಕ್ಯುಸೆಕ್ ಹರಿಯುತ್ತಿದ್ದು ರಾತ್ರಿ ಹೆಚ್ಚುವರಿಯಾಗಿ 15 ಸಾವಿರ ಕ್ಯುಸೆಕ್ ನೀರನ್ನು ಬಿಡುವ ಸಂಭವವಿರುವುದರಿಂದ ನದಿಯ ನೀರಿನ ಪ್ರಮಾಣದಲ್ಲಿ ಏರಿಕೆಯಾಗುವ ಸಂಭವವಿದೆ. ಇದರಿಂದ ನಗರದ ಗೌರಿಘಟ್ಟದ ಬೀದಿ, ಕುರುಬಗೇರಿ, ಚಾಮಲಾಪುರ ಬೀದಿ, ಮೇದರ ಬೀದಿಯ ಬಡಾವಣೆ, ಸರಸ್ವತಿ ಕಾಲೋನಿ, ರಾಜಾಜಿಕಾಲೋನಿ, ಒಕ್ಕಲಗೇರಿ ಸೇರಿದಂತೆ ತಗ್ಗು ಪ್ರದೇಶದ ಬಡಾವಣೆಗಳು ಜಲಾವೃತಗೊಳ್ಳುವ ಆತಂಕದಲ್ಲಿದ್ದಾರೆ. ಹಾಗೂ ನದಿಯ ಹಂಚಿನಲ್ಲಿರುವ ಎಲ್ಲಾ ಜನಾಂಗದ ಸ್ಮಶಾನಗಳೂ ಕೂಡ ನೀರಿನಲ್ಲಿ ಸಂಪೂರ್ಣ ಮುಳುಗಡೆಗೊಂಡಿರುವ ಕಾರಣ ಶವಸಂಸ್ಕಾರಕ್ಕೂ ಪರದಾಡುವಂತಾಗಿದೆ. ಜೊತೆಗೆ ದೇಬೂರು, ಗೂಳೂರು, ಹುಲ್ಲಹಳ್ಳಿ ನೀರೆತ್ತುವ ಕೇಂದ್ರಗಳಿಗೆ ನೀರು ತುಂಬಿಕೊಂಡಿರುವ ಪರಿಣಾಮ ಎಲ್ಲೆಡೆ ಕುಡಿಯುವ ನೀರಿಗೆ ತೊಂದರೆಯಾಗಿದೆ.

ಸುಮಾರು 100ಕ್ಕೂ ಹೆಚ್ಚಿನ ಮನೆಗಳು ಜಲಾವೃತ



ನಗರದ ತೋಪಿನ ಬೀದಿಯಲ್ಲಿ 77 ಮನೆಗಳು, ಹಳ್ಳದಕೇರಿಯಲ್ಲಿ 4 ಮನೆಗಳು, ದೇವಾಲಯದ ಮುಂಭಾಗದ ಬೀದಿ 7 ಮನೆಗಳಿಗೆ ನೀರು ನುಗ್ಗಿ ಜಲಾವೃತಗೊಂಡಿದೆ. ತೋಪಿನ ಬೀದಿಯ ಸುಮಾರು 162 ಮಂದಿಗೆ ನಗರದ ಸೀತಾರಾಮ ಕಲ್ಯಾಣ ಮಂಟಪದಲ್ಲಿ, ದೇವಾಲಯ ಮುಂಭಾಗದ ಬೀದಿಯ ಸುಮಾರು 20ಕ್ಕೂ ಹೆಚ್ಚು ಮಂದಿ ಗಿರಿಜಾ ಕಲ್ಯಾಣ ಮಂಟಪದಲ್ಲಿ ತೆರೆಯಲಾಗಿರುವ ಕಾಳಜಿ ಕೇಂದ್ರದಲ್ಲಿ ಆಶ್ರಯ ಪಡೆದಿದ್ದಾರೆ.

ತಾಲೂಕಿನ ಹೆಜ್ಜಿಗೆ ಗ್ರಾಮದಲ್ಲೂ ಕೂಡ 5 ಮನೆಗಳಿಗೆ ನೀರು ತುಂಬಿಕೊಂಡಿದ್ದು ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ತೆರೆಯಲಾಗಿರುವ ಕಾಳಜಿ ಕೇಂದ್ರದಲ್ಲಿ 20 ಜನ ಆಶ್ರಯ ಪಡೆದಿದ್ದಾರೆ. ತಾಲೂಕಿನ ಬೊಕ್ಕಹಳ್ಳಿ ಗ್ರಾಮದಲ್ಲಿ ಅಂಬೇಡ್ಕರ್ ಭವನದವರೆಗೂ ನೀರು ತುಂಬಿಕೊಂಡಿರುವ ಕಾರಣ ಸುಮಾರು 50ಕ್ಕೂ ಹೆಚ್ಚಿನ ಮನೆಗಳಿಗೆ ನೀರು ತುಂಬಿಕೊಂಡಿದ್ದು 160 ಮಂದಿ ಬೊಕ್ಕಹಳ್ಳಿಯ ಪ್ರಾಥಮಿಕ ಶಾಲೆಯ ಕಾಳಜಿ ಕೇಂದ್ರದಲ್ಲಿ ಆಶ್ರಯ ಪಡೆದಿದ್ದು ಕೆಲವರು ಸಂಬಂಧಿಕರ ಮನೆಯಲ್ಲಿ ಆಶ್ರಯ ಪಡೆದುಕೊಂಡಿದ್ದಾರೆ. ತಾಲೂಕಿನ ಹುಲ್ಲಹಳ್ಳಿಯಲ್ಲೂ ಕಾಳಜಿ ಕೇಂದ್ರವನ್ನು ತೆರೆಯಲಾಗಿದ್ದು 20ಕ್ಕೂ ಹೆಚ್ಚಿನ ಮಂದಿ ಆಶ್ರಯ ಪಡೆದಿದ್ದಾರೆ.



ಬಡಾವಣೆಗಳಿಗೆ ನೀರು ನುಗ್ಗಿರುವುದು.

ವೀರಶೈವ ಮಹಾಸಭಾ ಚುನಾವಣೆ; ಭರ್ಜರಿ ಪ್ರಚಾರ

ತಿ.ನರಸೀಪುರ, ಜು.19– ವೀರಶೈವ–ಲಿಂಗಾಯತ ಮಹಾಸಭಾದ ಏಳಿಗೆಗಾಗಿ ಶ್ರಮಿಸುವ ತುಡಿತ ಹೊಂದಿರುವ ನನಗೆ ಚುನಾವಣೆಯಲ್ಲಿ ಆಶೀರ್ವಾದ ಮಾಡುವ ಮೂಲಕ ಮತ್ತಷ್ಟು ಹೆಚ್ಚಿನ ಸೇವೆ ಮಾಡಲು ಅವಕಾಶ ಕಲ್ಪಿಸಿಕೊಡುವಂತೆ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ತಿ.ನರಸೀಪುರ ತಾಲೂಕು ಘಟಕಕ್ಕೆ ಅಧ್ಯಕ್ಷ ಸ್ಥಾನದ ಆಯ್ಕೆ ಬಯಸಿ ಸ್ಪರ್ಧಿಸಿರುವ ಕೃಷಿ ಪತ್ತಿನ ಸಹಕಾರ ಸಂಘದ ಮಾಜಿ ಅಧ್ಯಕ್ಷರೂ ಆಗಿರುವ ಬಿ.ವೀರಭದ್ರಪ್ಪ ಮನವಿ ಮಾಡಿದರು.

ಭಾನುವಾರ (ಜು.21) ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಕಾರ್ಯಕಾರಿ ಸಮಿತಿಗೆ ಚುನಾವಣೆ ನಡೆಯಲಿರುವ ಹಿನ್ನೆಲೆಯಲ್ಲಿ ತಾಲೂಕಿನ ಡಣಾಯಕನಪುರ, ಕಿರಗಸೂರು ಹಾಗೂ ಬಿಲಿಗೆರೆಹುಂಡಿ ಗ್ರಾಮದಲ್ಲಿ ನಿರ್ದೇಶಕರ ಸ್ಥಾನಕ್ಕೆ ಸ್ಪರ್ಧಿಸಿರುವ 7 ಮಂದಿ ಸ್ಪರ್ಧಿಗಳು ಹಾಗೂ ಸಮಾಜದ ಮುಖಂಡರೊಡಗೂಡಿ ಬಿರುಸಿನ ಮತಯಾಚನೆ ಮಾಡಿ ಅವರು ಮಾತನಾಡಿದರು.

ಗ್ರಾಮ ಪಂಚಾಯಿತಿ ಸದಸ್ಯ ಕಿರಗಸೂರು ಬಿ ಮಹಾದೇವಸ್ವಾಮಿ ಮಾತನಾಡಿ, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಸಂಘಟನೆಯನ್ನು ಮತ್ತಷ್ಟು ಶಕ್ತಿಶಾಲಿಯಾಗಿ ಕಟ್ಟುವ ಉದ್ದೇಶದೊಂದಿಗೆ ಹೆಳವರಹುಂಡಿ ಸಿದ್ದಪ್ಪನವರ ನೇತೃತ್ವದಲ್ಲಿ ಸ್ಪರ್ಧೆಗಿಳಿದಿರುವ ಬಿ.ವೀರಭದ್ರಪ್ಪ ಮತ್ತು ತಂಡಕ್ಕೆ ಜಯಗಳಿಸಿ ಸಮುದಾಯದ ಸರ್ವತೋಮುಖ ಅಭಿವೃದ್ಧಿಯ ದೃಷ್ಟಿಯಿಂದ ಈ ಚುನಾವಣೆಯಲ್ಲಿ ಒಂದು ಸಮಾನ ಮನಸ್ಕರ ತಂಡವನ್ನು ಕಟ್ಟಿಕೊಂಡು ಚುನಾವಣೆಯನ್ನು ಎದುರಿಸುತ್ತಿರುವ ತಂಡಕ್ಕೆ ಒಳ್ಳೆಯದಾಗಬೇಕೆಂಬ ಮತ್ತು ಸಮಾಜದ ಏಳಿಗೆ ನಮ್ಮ ತಂಡವನ್ನು ಬೆಂಬಲಿಸಿ ಎಂದು ಮನವಿ ಮಾಡಿದರು.

ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಹೆಳವರ ಹುಂಡಿ ಸಿದ್ದಪ್ಪ, ನಿರ್ದೇಶಕ ಸ್ಥಾನದ ಅಭ್ಯರ್ಥಿಗಳಾದ ಕಿರಗಸೂರು ಬಿ.ಮಹದೇವಸ್ವಾಮಿ, ಬೆನಕನಹಳ್ಳಿ ಚೆನ್ನಮಲ್ಲಿಕಾರ್ಜುನಸ್ವಾಮಿ (ಕಾರ್ ಮಲ್ಲಪ್ಪ), ನಿವೃತ್ತ ಮುಖ್ಯೋಪಾಧ್ಯಾಯ ಪುಟ್ಟಬುದ್ಧಿ, ಟಿ.ಸಿ.ಮಲ್ಲೇಶ್, ಹಲವಾರ ಮಹದೇವಸ್ವಾಮಿ, ಕೆ.ವಿ.ಶಿವಶಂಕರ್, ವೀರಪ್ಪ ಒಡೆಯರಹುಂಡಿ ಎಂ.ಸಂತೋಷ್, ಡೈರಿ ಅಧ್ಯಕ್ಷ ಡಿ.ಎಲ್.ಮಹದೇವಪ್ಪ, ಕಸಬಾ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಷ ಅಧ್ಯಕ್ಷ ಮಲ್ಲಣ್ಣ, ವಿದ್ಯೋದಯ ಪದವಿ ಪೂರ್ವ ಕಾಲೇಜಿನ ನಿರ್ದೇಶಕ ಸೋಮಣ್ಣ, ಸಿದ್ದೇಶ್(ಗೊಂಬೆ), ರಾಜಶೇಖರ್, ರಾಜಬುದ್ಧಿ, ನಂಜಪ್ಪ, ಸಿದ್ದಲಿಂಗಪ್ಪ, ಸಿದ್ದಪ್ಪ, ಉಕ್ಕಲಗೆರೆ ಗ್ರಾಪಂ ಮಾಜಿ ಸದಸ್ಯ ಪ್ರಭುಸ್ವಾಮಿ ಸೇರಿದಂತೆ ಮತ್ತಿತರರು ಮತಯಾಚನೆ ವೇಳೆ ಹಾಜರಿದ್ದರು.



ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ತಿ.ನರಸೀಪುರ ಘಟಕದ ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಿರುವ ಆಲಗೂಡು ಪಿಎಸಿಸಿ ಮಾಜಿ ಅಧ್ಯಕ್ಷ ಬಿ.ವೀರಭದ್ರಪ್ಪ ಸಮಾಜದ ಮುಖಂಡರು ಹಾಗೂ ನಿರ್ದೇಶಕ ಸ್ಥಾನದ ಅಭ್ಯರ್ಥಿಗೊಂದಿಗೆ ತಾಲೂಕಿನ ವಿವಿಧ ಗ್ರಾಮದಲ್ಲಿ ಮತಯಾಚಿಸಿದರು.

ಮಳೆ ಹಾನಿ ಪ್ರದೇಶಕ್ಕೆ ಮಾಜಿ ಶಾಸಕ ಹರ್ಷವರ್ಧನ್ ಭೇಟಿ

ತಗ್ಗು ಪ್ರದೇಶಕ್ಕೆ ನುಗ್ಗಿದ ನೀರು: ತಡೆಗೋಡೆ ನಿರ್ಮಿಸಲು ಆಗ್ರಹ

ನಂಜನಗೂಡು, ಜು.19– ಪ್ರತೀ ವರ್ಷ ಮಳೆಗಾಲದಲ್ಲಿ ನಂಜನಗೂಡಿನ ತಗ್ಗು ಪ್ರದೇಶದ ಜನರು ಕಪಿಲಾ ನದಿ ಪ್ರವಾಹಕ್ಕೆ ಸಿಲುಕಿ ಸಂಕಷ್ಟ ಪಡುತ್ತಿದ್ದಾರೆ. ಜನರಿಗಾಗುತ್ತಿರುವ ಅನಾನುಕೂಲ ತಪ್ಪಿಸಲು ಕಪಿಲಾ ನದಿ ತೀರದಲ್ಲಿ ತಡೆಗೋಡೆ ನಿರ್ಮಾಣಕ್ಕೆ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರು ಕ್ರಮಕ್ಕೆ ಮುಂದಾಗಲಿ ಎಂದು ಮಾಜಿ ಶಾಸಕ ಬಿ.ಹರ್ಷವರ್ಧನ್ ಒತ್ತಾಯಿಸಿದರು.

ಅವರು ಶುಕ್ರವಾರ ನಂಜನಗೂಡು ನಗರದ ಪ್ರವಾಹ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದರು. ನದಿ ಪ್ರವಾಹದ ನೀರಿನೊಂದಿಗೆ ಚರಂಡಿಗಳ ಕಲುಷಿತ ತ್ಯಾಜ್ಯ ಯುಕ್ತ ತ್ಯಾಜ್ಯದ ನೀರು ತಗ್ಗು ಪ್ರದೇಶದ ಬಡಾವಣೆಗಳಲ್ಲಿನ ಮನೆಗಳಿಗೆ ನುಗ್ಗಿರುವುದರಿಂದ ಸಾಂಕ್ರಾಮಿಕ ರೋಗ ಹರಡುವ ಭೀತಿಯಿದ್ದು ಜನರ ಆರೋಗ್ಯ ರಕ್ಷಣೆಗೆ ತಾಲೂಕು ಆಡಳಿತದ ಅಧಿಕಾರಿಗಳು ಅಗತ್ಯ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು ಜೊತೆಗೆ ಕಾಳಜಿ ಕೇಂದ್ರದಲ್ಲಿ ವಾಸ್ತವ್ಯ ಪಡೆದಿರುವ ಜನರ ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು ಎಂದು ಅವರು ಹೇಳಿದರು.

ಬಳಿಕ ಅವರು ನಗರದ ಬಜಾರ್ ರಸ್ತೆಯಲ್ಲಿ ತಾಲೂಕು ಆಡಳಿತದಿಂದ ತೆರೆದಿರುವ ಕಾಳಜಿ ಕೇಂದ್ರಕ್ಕೆ ಭೇಟಿ ನೀಡಿ ಸಂತ್ರಸ್ತ ಕುಟುಂಬಗಳ ಸದಸ್ಯರೊಡನೆ ಸಮಾಲೋಚಿಸಿದರು. ಈ ಸಂದರ್ಭ ತಹಸೀಲ್ದಾರ್ ಶಿವಕುಮಾರ್ ಕಾಸ್ನೂರು, ನಗರಸಭೆ ಮಾಜಿ ಅಧ್ಯಕ್ಷ ಮಹದೇವಸ್ವಾಮಿ, ಸದಸ್ಯ ಮಹದೇವಪ್ರಸಾದ್, ಬಿಜೆಪಿ ಹಿಂದುಳಿದ ವರ್ಗಗಳ ಜಿಲ್ಲಾಧ್ಯಕ್ಷ ಬಾಲಚಂದ್ರು, ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಸಿ.ಚಿಕ್ಕರಂಗನಾಯಕ ಮತ್ತಿತರರು ಉಪಸ್ಥಿತರಿದ್ದರು.



ನಂಜನಗೂಡು ನಗರದ ಪ್ರವಾಹ ಪೀಡಿತ ತೋಪಿನ ಬೀದಿಗೆ ಮಾಜಿ ಶಾಸಕ ಬಿ.ಹರ್ಷವರ್ಧನ್ ಭೇಟಿ ನೀಡಿ ಸಂತ್ರಸ್ತರೊಡನೆ ಸಮಾಲೋಚನೆ ನಡೆಸಿದರು.

ಪಿ.ಪಟ್ಟಣ ತಾಲೂಕಿನಲ್ಲಿ ಮಳೆಯಿಂದ 20ಕ್ಕೂ ಹೆಚ್ಚು ಮನೆಗಳು ಕುಸಿತ



ಕೊಣಸೂರು ಗ್ರಾಮದ ತಮ್ಮಯ್ಯಪ್ಪ ವೃದ್ಧ ದಂಪತಿಗಳ ಮನೆ ಭಾರಿ ಮಳೆಯಿಂದಾಗಿ ಸಂಪೂರ್ಣ ಕುಸಿದಿರುವುದು.

ಬೆಟ್ಟದಪುರ, ಜು.19– ಪಿರಿಯಾಪಟ್ಟಣ ತಾಲೂಕಿನಲ್ಲಿ ಕಳೆದ ನಾಲ್ಕು ದಿನಗಳಿಂದ ಎಡೆಬಿಡದೆ ಸುರಿಯುತ್ತಿರುವ ಮಳೆಯಿಂದಾಗಿ ಸುಮಾರು 20ಕ್ಕೂ ಹೆಚ್ಚು ಮನೆಗಳು ಕುಸಿದು ಬಿದ್ದಿವೆ.

ಬೆಟ್ಟದಪುರ ಸಮೀಪದ ಕೊಣಸೂರು ಗ್ರಾಮದ ತಮ್ಮಯ್ಯಪ್ಪ ಎಂಬ ವೃದ್ಧ ದಂಪತಿಗಳ ಮನೆ ಭಾರಿ ಮಳೆಯಿಂದಾಗಿ ಸಂಪೂರ್ಣ ಕುಸಿದು ಬಿದ್ದಿದ್ದು, ವೃದ್ಧ ದಂಪತಿಗಳು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಇವರು ವಾಸಿಸಲು ಮನೆ ಇಲ್ಲದೆ ಕಂಗಾಲಾಗಿದ್ದಾರೆ.

ಇದೇ ರೀತಿ ಬೆಟ್ಟದ ತುಂಗಾ, ಚಪ್ಪರದಹಳ್ಳಿ, ಬೆಟ್ಟದಪುರ, ಹರದೂರು, ಗೊರಹಳ್ಳಿ ಸೇರಿದಂತೆ ತಾಲೂಕಿನ ಇನ್ನು ಹಲವಾರು ಗ್ರಾಮಗಳಲ್ಲಿ ಮನೆಗಳು ಬಿದ್ದಿದ್ದು, ತಾವೂ ಸೇರಿದಂತೆ ಕಂದಾಯ ನಿರೀಕ್ಷಕ ಅಜ್ಮಲ್ ಶರೀಫ್ ಹಾಗೂ ಗ್ರಾಮ ಲೆಕ್ಕಾಧಿಕಾರಿಗಳು ಪ್ರತಿ ಗ್ರಾಮಕ್ಕೂ ಭೇಟಿ ನೀಡಿ, ಮಳೆಯಿಂದ ಹಾನಿಯಾದ ಸಾರ್ವಜನಿಕರಿಗೆ ಸರ್ಕಾರಕ್ಕೆ ವರದಿ ನೀಡಿ ಭಾರಿ ಮಳೆಯಿಂದ ನೊಂದ ಜನರಿಗೆ ಸಹಾಯ ಮಾಡಲು ಎಲ್ಲಾ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಬೆಟ್ಟದ ಪುರ ಉಪತಹಶೀಲ್ದಾರ್ ಶಶಿಧರ್ ತಿಳಿಸಿದ್ದಾರೆ.

ಕಾವೇರಿ ನದಿಯ ದಂಡೆ ಗ್ರಾಮಗಳಾದ ಆವರ್ತಿ, ದಿಂಡುಗಾಡು, ಮುತ್ತಿನ ಮುಳ್ಳುಸೋಗೆ, ದೊಡ್ಡ ಕಂಬರಹಳ್ಳಿ, ಶಾನುಭೋಗನಹಳ್ಳಿ, ಸೂಳೇಕೋಟೆ, ಕಣಗಾಲ್ ಗ್ರಾಮಗಳಲ್ಲಿ ಕಾವೇರಿ ನದಿ ಅಪಾಯ ಮಟ್ಟ ಮೀರಿ ಹರಿಯುತ್ತಿದ್ದು, ರೈತರ ಬೆಳೆಗಳ ಹಾನಿಯಾಗುತ್ತಿದೆ. ಅಧಿಕಾರಿಗಳಿಗೆ ಕೂಡಲೇ ಸಮೀಕ್ಷೆ ನಡೆಸಿ ಪರಿಹಾರ ನೀಡಬೇಕೆಂದು ಕಣಗಾಲ್ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಕೆ.ಮಹದೇವ್, ಹನುಮಂತು, ಮಾಜಿ ಉಪಾಧ್ಯಕ್ಷ ಕುಮಾರ್ ಶೆಟ್ಟಿ, ಶ್ರೀನಿವಾಸ್, ಪುಟ್ಟರಾಜ ಒತ್ತಾಯಿಸಿದ್ದಾರೆ.

ಹೆಡತಲೆ ಸರ್ಕಾರಿ ಪ್ರೌಢಶಾಲೆಗೆ ಸಂಸದ ಯದುವೀರ್ ಭೇಟಿ



ಸೈಬರ್ ಹೈಜಿನ್ ಕಾರ್ಯಕ್ರಮದಲ್ಲಿ ಸಂಸದ ಯದುವೀರ್ ಮಾತನಾಡಿದರು.

ಹೆಡತಲೆ, ಜು.19– ನಂಜನಗೂಡು ತಾಲೂಕಿನ ಹೆಡತಲೆ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಯುವ ಅನ್ಸ್ಟಾಪಬಲ್ ಸಂಸ್ಥೆ ವತಿಯಿಂದ ರಾಷ್ಟ್ರ ಮಟ್ಟದಲ್ಲಿ ಆಯೋಜಿಸಲಾಗುತ್ತಿರುವ ಸೈಬರ್ ಹೈಜಿನ್ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತುಲಾಗಿತ್ತು.

ಕಾರ್ಯಕ್ರಮದ ಉದ್ಘಾಟನೆಯನ್ನು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ನೆರವೇರಿಸಿದರು. ಯದುವೀರ್ ಅವರನ್ನು ಶಾಲಾ ವಿದ್ಯಾರ್ಥಿಗಳು ಆರತಿ ಮಾಡಿ ಸ್ವಾಗತಿಸಿದರು. ನಂತರ ಯದುವೀರ್ ಮಕ್ಕಳೊಂದಿಗೆ ಸಂವಾದ ನಡೆಸಿ, ರಾಜಮನೆತನದ ಆಳ್ವಿಕೆಯ ಪರಿಚಯವನ್ನು ಮಕ್ಕಳೊಂದಿಗೆ ಹಂಚಿಕೊಂಡರು.

ಕಾರ್ಯಕ್ರಮದಲ್ಲಿ ಯುವ ಅನ್ಸ್ಟಾಪಬಲ್ ಸಂಸ್ಥೆಯ ನಿರ್ದೇಶಕಿ ರಿಷಿ ಕುಮಾರ್, ಐಇಇ ಸಂಸ್ಥೆಯ ಹಿರಿಯ ನಿರ್ದೇಶಕ ಶ್ರೀಕಾಂತ್ ಚಂದ್ರಶೇಖರನ್, ಶಾಲೆಯ ಮುಖ್ಯ ಶಿಕ್ಷಕ ಬೆಳ್ಳೆಗೌಡ, ಕಾರ್ಯಕ್ರಮದ ಸಂಚಾಲಕರಾದ ಶಿಕ್ಷಕ ಶ್ರೀಹರ್ಷ, ಗ್ರಾಮ ಪಂಚಾಯಿತಿ ಅಧ್ಯಕ್ಷ ವೈಬೇಂದ್ರಪ್ಪ, ಎಸ್‌ಟಿಎಂಸಿ ಅಧ್ಯಕ್ಷ ಮಹೇಶ್, ಶಿಕ್ಷಕರಾದ ಬಾಲಚಂದ್ರ ಭಟ್, ಸುಕನ್ಯ, ರೇಣುಕಾ ಇನ್ನಿತರರು ಹಾಜರಿದ್ದರು.

ಗೋಡೆ ಕುಸಿದು ಮಹಿಳೆ ಸಾವು




ಮಳೆಯಿಂದ ಗೋಡೆ ಕುಸಿದಿರುವುದು. ಬಲಚಿತ್ರದಲ್ಲಿ ಮೃತ ಹೇಮಲತಾ.

ಬೆಟ್ಟದಪುರ, ಜು.19– ಮಳೆಯಿಂದ ಗೋಡೆ ಕುಸಿದು ಮಹಿಳೆಯೊಬ್ಬರು ಸಾವನ್ನಪ್ಪಿರುವ ಘಟನೆ ಪಿರಿಯಾಪಟ್ಟಣ ತಾಲೂಕಿನ ಕಗ್ಗುಂಡಿ ಗ್ರಾಮದಲ್ಲಿ ಇಂದು ಬೆಳಗ್ಗೆ ಸಂಭವಿಸಿದೆ.

ಗ್ರಾಮದ ವಾಸಿ ಶಿವರಾಜ್ ಅವರ ಪತ್ನಿ ಹೇಮಲತಾ (22) ಎಂಬುವರೇ ಸಾವನ್ನಪ್ಪಿದವರಾಗಿದ್ದು, ತನ್ನ ಒಂದೂವರೆ ವರ್ಷದ ಮಗುವನ್ನು ಬಹಿರ್ದೆಸೆಗೆ ಕರೆದೊಯ್ದ ಸಂದರ್ಭದಲ್ಲಿ ಗೋಡೆ ಕುಸಿದು ಹೇಮಲತಾ ಸಾವನ್ನಪ್ಪಿದ್ದರೆ, ಮಗು ಪ್ರಾಣಾಪಾಯದಿಂದ ಪಾರಾಗಿದೆ.

ಸ್ಥಳಕ್ಕೆ ಪಿರಿಯಾಪಟ್ಟಣ ಪೊಲೀಸರು ಭೇಟಿ ನೀಡಿ, ದೂರು ದಾಖಲಿಸಿಕೊಂಡು ಹಾಗೂ ಕಂದಾಯ ಇಲಾಖೆಯ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಹೇಮಲತಾ ಅವರ ಶವವನ್ನು ಪಿರಿಯಾಪಟ್ಟಣ ಸಾರ್ವಜನಿಕರ ಆಸ್ಪತ್ರೆಗೆ ಸಾಗಿಸಿ, ಮರಣೋತ್ತರ ಪರೀಕ್ಷೆ ನಡೆಸಿ ವಾಸುದಾರರಿಗೆ ನೀಡಲಾಯಿತು. ಈ ಸಂದರ್ಭದಲ್ಲಿ ಗ್ರಾಮದ ಮುಖಂಡ ರಾಜು ಅವರು ಮಾತನಾಡಿ, ತಾಲೂಕಿನಲ್ಲಿ ಹಲವಾರು ಹಳೆಯ ಮನೆಗಳು ಶೀತಲ ವ್ಯವಸ್ಥೆ ತಲುಪಿದ್ದು ಅವುಗಳನ್ನು ಕಂದಾಯ ಇಲಾಖೆ ಅಧಿಕಾರಿಗಳು ಪರಿಶೀಲಿಸಿ ಅವರಿಗೆ ಪುನರ್ವಸತಿ ಕಲ್ಪಿಸುವ ವ್ಯವಸ್ಥೆ ಮಾಡಬೇಕು ಆದುದರಿಂದ ಹಲವಾರು ಜನರ ಪ್ರಾಣಗಳು ಉಳಿಯುತ್ತವೆ ಇಲಾಖೆ ಅಧಿಕಾರಿಗಳು ಎಚ್ಚೆತ್ತು ಎಲ್ಲಾ ಗ್ರಾಮಗಳ ಹಳೆಯ ಮನೆಗಳ ಸಮೀಕ್ಷೆ ಮಾಡಿ ಮಳೆಗಾಲ ಸಂದರ್ಭದಲ್ಲಿ ಅವರಿಗೆ ವಸತಿ ಕಲ್ಪಿಸಬೇಕೆಂದು ರಾಜು ಆಗ್ರಹಿಸಿದರು.



ಪಿರಿಯಾಪಟ್ಟಣ ತಾಲೂಕಿನ ಕಗ್ಗುಂಡಿ ಗ್ರಾಮದಲ್ಲಿ ಮಹಿಳೆಯೊಬ್ಬಳು ತಂಬಾಕು ಬ್ಯಾರೆನ್ ಗೋಡೆ ಕುಸಿದು ಸ್ಥಳದಲ್ಲೇ ಮೃತಪಟ್ಟ ಸ್ಥಳಕ್ಕೆ ಮೈಸೂರು–ಕೊಡಗು ಸಂಸದ ಯದುವೀರ್ ಭೇಟಿ ನೀಡಿ, ಮೃತ ಮಹಿಳೆಯ ಕುಟುಂಬಕ್ಕೆ ಸಾಂತ್ವನ ಹೇಳಿದರು.

ಅಂಗನವಾಡಿ ಕಾರ್ಯಕರ್ತೆಯರ ಮನೆ ಮೇಲೆ ಆನೆ ದಾಳಿ



ಹೆಚ್.ಡಿ.ಕೋಟೆ ನೆಟ್ಕಲ್ ಹುಂಡಿ ಹಾಡಿಯ ಅಂಗನವಾಡಿ ಕಾರ್ಯಕರ್ತೆ ಸೀತೆ ಮತ್ತು ಮಾದೇವಿ ಎಂಬುವರ ಮನೆಯ ಮೇಲೆ ಒಂಟಿ ಸಲಗ ದಾಳಿ ಮಾಡಿ ಹಾನಿ ಮಾಡಿದೆ.

ಹೆಚ್.ಡಿ.ಕೋಟೆ, ಜು.19– ತಾಲೂಕು ಅಂತರಸಂತೆ ಹೋಬಳಿ ಡಿಬಿ ಕುಪ್ಪೆ ಗ್ರಾಮ ಪಂಚಾಯಿತಿಗೆ ಸೇರಿದ ನೆಟ್ಕಲ್ ಗುಂಡಿ ಹಾಡಿಯ ಅಂಗನವಾಡಿ ಕಾರ್ಯಕರ್ತೆ ಸೀತೆ ಮತ್ತು ಮಾದೇವಿ ಅವರುಗಳ ಮನೆಯ ಮೇಲೆ ಒಂಟಿ ಸಲಗ ದಾಳಿ ಮಾಡಿ ಹಾನಿ ಮಾಡಿದೆ.

ಒಂಟಿ ಸಲಗ ಮನೆ ಮುಂದೆ ದಿಢೀರ್ ಪ್ರತ್ಯಕ್ಷವಾಗಿ ಅಟ್ಟಿಸಿಕೊಂಡು ಬಂದಿದೆ. ಮಾದೇವಿ ಕೂಡಲೇ ಮನೆಯೊಳಕ್ಕೆ ಓಡಿ ಹೋಗಿದ್ದಾರೆ. ಅವರ ಹಿಂದೆಯೇ ಬಂದ ಒಂಟಿ ಸಲಗ ಮನೆಯ ಮುಂಭಾಗ ಮತ್ತು ಸುತ್ತಲೂ ತನ್ನ ಸೊಂಡಿಲಿನಿಂದ ಎಳೆದಾಡಿ ಮೇಲ್ಛಾವಣಿಯ ಹೆಂಚು ಮತ್ತು ಹೊರಗಿನ ಗೋಡೆಗಳನ್ನು ಕೆಡವಿ ಹಾಕಿದೆ. ಸಾಲದೆಂಬಂತೆ ಪಕ್ಕದ ಸೀತಾ ಎಂಬ ಅಂಗನವಾಡಿ ಕಾರ್ಯಕರ್ತೆ ಮನೆಗೂ ಹಾನಿ ಮಾಡಿದೆ.

ಅಧಿಕಾರಿಗಳು ಭೇಟಿ ನೀಡಿ ಪರಿಹಾರ ಕೊಡಿಸಿ ಕೊಡುವ ಭರವಸೆ ನೀಡಿದ್ದಾರೆ. ಸ್ಥಳಕ್ಕೆ ಗ್ರಾಮ ಪಂಚಾಯಿತಿ ಅಧ್ಯಕ್ಷ ಸುಬ್ರಮಣಿ, ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿ ಮಹೇಶ್ ಕಚೇರಿ ಅಧ್ಯಕ್ಷ ನಾಗರಾಜ್, ಡಿಆರ್‌ಎಫ್ ರಾಮೇಗೌಡ ಇನ್ನು ಮುಂತಾದವರು ಹಾಜರಿದ್ದರು.

ವಿಷಾನಿಲ ಸೇವಿಸಿ ಕಾರ್ಮಿಕ ಸಾವು



ನಂಜನಗೂಡು, ಜು.19– ತಾಲೂಕಿನ ತಾಂಡವಪುರ ಕೈಗಾರಿಕಾ ಪ್ರದೇಶದಲ್ಲಿರುವ ಐಟಿಸಿ ಕಾರ್ಖಾನೆಯ ನಿಕೋಟಿನ್ ತಯಾರಿಕಾ ಘಟಕದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಕಾರ್ಮಿಕ ನೋರ್ವ ವಿಷಾನಿಲ ಸೇವಿಸಿ ಸಾವನ್ನಪ್ಪಿರುವ ಘಟನೆ ಜರುಗಿದೆ.

ತಾಲೂಕಿನ ತೊರೆಮಾವು ಗ್ರಾಮದ ದೊರೆಸ್ವಾಮಿ ಅವರ ಪುತ್ರ ಅಭಿಷೇಕ್(21) ಮೃತ ದುರ್ದೈವಿ. ಕಳೆದ ಎರಡು ವರ್ಷಗಳಿಂದ ಐಟಿಸಿ ಕಾರ್ಖಾನೆಯಲ್ಲಿ ನಿಕೋಟಿನ್ ತಯಾರಿಕಾ ಘಟಕದಲ್ಲಿ ಕೆಲಸ ನಿರ್ವಹಿಸುತ್ತಿದ್ದ ಅಭಿಷೇಕ್ ಶುಕ್ರವಾರ ಎರಡನೇ ಪಾಳಿಯಲ್ಲಿ ಕೆಲಸ ನಿರ್ವಹಿಸುತ್ತಿದ್ದ ವೇಳೆ ಅಪಾಯಕಾರಿ ವಿಷಾನಿಲದ ಹಬೆ ಸೇವಿಸಿ ಅಸ್ವಸ್ಥನಾಗಿ ಬಿದ್ದಿದ್ದಾನೆ. ಕೂಡಲೇ ಆತನನ್ನು ನಗರದ ಕೃಷ್ಣ ಆಸ್ಪತ್ರೆಗೆ ಚಿಕಿತ್ಸೆಗೆಂದು ದಾಖಲು ಮಾಡಿದರೂ ಕೂಡ ಚಿಕಿತ್ಸೆ ಫಲಕಾರಿಯಾಗಿದೆ ಅಭಿಷೇಕ್ ಸಾವನಪ್ಪಿದ್ದಾನೆ.

ಅಪಾಯಕಾರಿ ನಿಕೋಟಿನ್ ತಯಾರಿಕಾ ಘಟಕದಲ್ಲಿ ಸೂಕ್ಷ್ಮ ಸುರಕ್ಷತಾ ಪರಿಕರ ಮತ್ತು ವಿಧಾನಗಳನ್ನು ಅನುಸರಿಸದೇ ಇರುವುದು, ಹಾಗೂ ನಿರ್ವಹಣಾ ಮಂಡಳಿಯ ಅಜಾಗರೂಕತೆ ಮತ್ತು ನಿರ್ಲಕ್ಷತೆಯಿಂದ ನನ್ನ ಮಗ ಸಾವನಪ್ಪಿದ್ದಾನೆ. ನನ್ನ ಮಗನ ಸಾವಿಗೆ ಕಾರ್ಖಾನೆಯ ವ್ಯವಸ್ಥಾಪಕರು ಮತ್ತು ಆಡಳಿತ ಮಂಡಳಿಯವರೇ ನೇರ ಹೊಣೆಗಾರರಾಗಿದ್ದು. ಅವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಎಂದು ಮೃತ ಕಾರ್ಮಿಕ ಅಭಿಷೇಕ್ ತಂದೆ ದೊರೆಸ್ವಾಮಿ ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಸ್ಥಳಕ್ಕೆ ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆಯ ಪಿಎಸ್‌ಐ ರಾಮಕುಮಾರ್, ಸಿಬ್ಬಂದಿಗಳಾದ ಯೋಗೀಶ್ ಮತ್ತು ರಮೇಶ್ ರವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಶವವನ್ನು ಮೈಸೂರಿನ ಕೆಆರ್ ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆಗೆ ಒಳಪಡಿಸಿ ವಾರಸುದಾರರಿಗೆ ಹಸ್ತಾಂತರಿಸಿದರು.

ಮುತ್ತುಮಾರಮ್ಮ ಸನ್ನಿಧಿಯಲ್ಲಿ ಆಷಾಢ ಶುಕ್ರವಾರದ ಪೂಜೆ

ಹುಣಸೂರು, ಜು.19– ನಗರದ ಮುತ್ತುಮಾರಮ್ಮನ ಸನ್ನಿಧಿಯಲ್ಲಿ ಪ್ರತಿವರ್ಷದಂತೆ ಈ ಬಾರಿಯು ಎರಡನೇ ಆಷಾಢ ಶುಕ್ರವಾರದ ಪೂಜಾ ಕೈಂಕರ್ಯ ವಿಜೃಂಭಣೆಯಿಂದ ನಡೆಯಿತು. ಮುಂಜಾನೆ 6 ರಿಂದಲೇ ಸಾವಿರಾರು ಮಹಿಳಾ ಭಕ್ತರು ನಿಂಬೆಹಣ್ಣಿನ ತುಪ್ಪದ ದೀಪ ಹಚ್ಚಿದರು. ಸಂಜೆ ತಾಯಿ ಚಾಮುಂಡಿ ಉತ್ಸವ ಮೂರ್ತಿಯ ಮೆರವಣಿಗೆ ನಡೆಯಿತು.

ಸರೋಜಮ್ಮ ನಿಧನ



ತಿ.ನರಸೀಪುರ, ಜು.19– ತಾಲೂಕಿನ ಕಿರಗಸೂರು ಗ್ರಾಮದ ಸರೋಜಮ್ಮ (64) ಅವರು ಇಂದು ನಿಧನರಾದರು. ಮೃತರು ರಾಜ್ಯ ಕಬ್ಬು ಬೆಳೆಗಾರರ ಸಂಘದ ಜಿಲ್ಲಾ ಕಾರ್ಯಾಧ್ಯಕ್ಷ ಕಿರಗಸೂರು ಶಂಕರ್ ಸೇರಿದಂತೆ ಐವರು ಪುತ್ರರನ್ನು ಅಗಲಿದ್ದು, ಅಂತ್ಯಕ್ರಿಯೆಯು ಸ್ವಗ್ರಾಮದಲ್ಲಿ ಶನಿವಾರ ಬೆಳಗ್ಗೆ 10 ಗಂಟೆಗೆ ನೆರವೇರಲಿದೆ ಎಂದು ಕುಟುಂಬ ಮೂಲಗಳು ತಿಳಿಸಿವೆ. ರಾಜ್ಯ ಕಬ್ಬು ಬೆಳೆಗಾರ ಸಂಘದ ಅಧ್ಯಕ್ಷ ಕುರುಬೂರು ಶಾಂತಕುಮಾರ್, ಕಾರ್ಯದರ್ಶಿ ಅತ್ತಳ್ಳಿ ದೇವರಾಜು, ವಿಚಾರವಾದಿ ಕೆ.ಎನ್.ಪ್ರಭುಸ್ವಾಮಿ, ಗ್ರಾಪಂ ಮಾಜಿ ಅಧ್ಯಕ್ಷ ಜ್ಯೋತಿ ಕಾಂತರಾಜು, ತಾಪಂ ಮಾಜಿ ಅಧ್ಯಕ್ಷ ಎಂ.ರಮೇಶ್ ಅಂತಿಮ ದರ್ಶನ ಪಡೆದರು.

ನುರಿತ ಪ್ರಾಧ್ಯಾಪಕರ ಸಂಖ್ಯೆ ಇಳಿಮುಖ; ಶಿಕ್ಷಣದ ಗುಣಮಟ್ಟ ಕುಸಿತ

• ಕುಲಪತಿ ಪ್ರೊ.ಲೋಕನಾಥ್ ಆತಂಕ • ಭೂಗೋಳಶಾಸ್ತ್ರ ಪ್ರಾಧ್ಯಾಪಕ ಪ್ರೊ. ನಾಗರಾಜ್ ನಿವೃತ್ತಿ; ದಂಪತಿಗೆ ಅಭಿನಂದನೆ

ಮೈಸೂರು, ಜು.19(ಬಿಎಲ್‌ಯು)– ವಿಶ್ವ ವಿದ್ಯಾನಿಲಯಗಳಲ್ಲಿ ನುರಿತ ಪ್ರಾಧ್ಯಾಪಕರ ಸಂಖ್ಯೆ ಕಡಿಮೆಯಾದರೆ ಶಿಕ್ಷಣದ ಗುಣಮಟ್ಟ ಕೂಡ ಕಡಿಮೆಯಾಗಲಿದೆ ಎಂದು ಮೈಸೂರು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ ಎನ್.ಕೆ ಲೋಕನಾಥ್ ಆತಂಕ ವ್ಯಕ್ತಪಡಿಸಿದರು.



ಮೈಸೂರಿನ ಮಾನಸ ಗಂಗೋತ್ರಿಯ ವಿಜ್ಞಾನ ಭವನದಲ್ಲಿ ಶುಕ್ರವಾರ ನಡೆದ ಸಮಾರಂಭದಲ್ಲಿ ಈ ತಿಂಗಳಾಂತ್ಯದಲ್ಲಿ ನಿವೃತ್ತಿ ಹೊಂದುತ್ತಿರುವ ಪ್ರಾಧ್ಯಾಪಕ ಪ್ರೊ.ಹೆಚ್.ನಾಗರಾಜ್ ಹಾಗೂ ಅವರ ಪತ್ನಿ ದೇವಿಕಾ ಅವರನ್ನು ಅಭಿನಂದಿಸಲಾಯಿತು.

ಮೈಸೂರಿನ ಮಾನಸ ಗಂಗೋತ್ರಿಯ ವಿಜ್ಞಾನ ಭವನದಲ್ಲಿ ಇಂದು ಮೈಸೂರು ವಿಶ್ವವಿದ್ಯಾನಿಲಯದ ಭೂಗೋಳ ಶಾಸ್ತ್ರ ಅಧ್ಯಯನ ವಿಭಾಗ ಹಾಗೂ ಹಿರಿಯ ವಿದ್ಯಾರ್ಥಿಗಳ ಸಂಘ ಮತ್ತು ಸಂಶೋಧನಾ ವಿದ್ಯಾರ್ಥಿಗಳು ಪ್ರೊ.ಹೆಚ್. ನಾಗರಾಜ್ ಅವರಿಗೆ ಆಯೋಜಿಸಿದ್ದ ಅಭಿನಂದನಾ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಮೈಸೂರು ವಿಶ್ವ ವಿದ್ಯಾನಿಲಯದಲ್ಲಿ ದಿನ ಕಳೆದಂತೆ ಪ್ರಾಧ್ಯಾಪಕರ ಸಂಖ್ಯೆ ಕಡಿಮೆಯಾಗುತ್ತಿದೆ ಎಂದರು.

ಅದರಲ್ಲೂ ಮೈಸೂರು ವಿಶ್ವವಿದ್ಯಾನಿಲಯದಲ್ಲಿ ನುರಿತ ಪ್ರಾಧ್ಯಾಪಕರ ಸಂಖ್ಯೆ ದಿನೇ ದಿನೇ ಕಡಿಮೆಯಾಗುತ್ತಿದೆ. ಇದರಿಂದ ವಿಶ್ವವಿದ್ಯಾನಿಲಯದ ಶಿಕ್ಷಣದ ಗುಣಮಟ್ಟ ಕುಸಿಯುತ್ತಿದೆ ಎಂದರು.


ನಿವೃತ್ತಿಯು ಪ್ರಾಧ್ಯಾಪಕರ ಸಂಖ್ಯೆ ಕಡಿಮೆಯಾಗಲು ಪ್ರಮುಖ ಕಾರಣವಾಗಿದೆ. ಆದರೆ ನಿವೃತ್ತಿ ಎಂಬುವುದು ನಂಬರ್ ಗೇಮ್ ಇದ್ದಂತೆ, ನಿವೃತ್ತಿ ವಯಸ್ಸು ಬಂದ ಸಂದರ್ಭದಲ್ಲಿ ಅದನ್ನು ಅನಿವಾರ್ಯವಾಗಿ ಒಪ್ಪಿಕೊಳ್ಳಬೇಕು ಎಂದು ಪ್ರೊ.ಲೋಕನಾಥ್ ಅಭಿಪ್ರಾಯಪಟ್ಟರು.

ಮೈಸೂರು ವಿವಿ ಭೂಗೋಳಶಾಸ್ತ್ರ ವಿಭಾಗದ ಪ್ರೊ.ನಾಗರಾಜ್ ಅವರು ಧಾರವಾಡದಲ್ಲಿ ಪರೀಕ್ಷಾಂಗ ಕುಲಸಚಿವರಾಗಿದ್ದಾಗ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದ್ದರು. ಧಾರವಾಡಕ್ಕೆ ಹೋದ ಸಂದರ್ಭದಲ್ಲಿ ಅಲ್ಲಿ ಪರೀಕ್ಷಾ ಕಾರ್ಯಗಳು ಮಂದಗತಿಯಲ್ಲಿತ್ತು. ಅದನ್ನೆಲ್ಲಾ ತ್ವರಿತಗತಿಯಲ್ಲಿ ಪೂರ್ಣಗೊಳಿಸಿದರು ಎಂದರು.

ಒಟ್ಟಾರೆ ಪ್ರೊ.ನಾಗರಾಜ್ ಅವರ ಶಿಕ್ಷಣ ಕ್ಷೇತ್ರದ ಸೇವಾ ಕಾರ್ಯ ಇತರರಿಗೆ ಮಾದರಿಯಾಗಿದ್ದು, ಅವರಲ್ಲಿರುವ ಒಳ್ಳೆಯ ಗುಣಗಳನ್ನು ವಿದ್ಯಾರ್ಥಿಗಳು ಮೈಗೂಡಿಸಿಕೊಳ್ಳಬೇಕು ಎಂದು ಪ್ರೊ.ಲೋಕನಾಥ್ ಸಲಹೆ ನೀಡಿದರು.

ಈ ತಿಂಗಳಾಂತ್ಯಕ್ಕೆ ನಿವೃತ್ತಿ ಹೊಂದುತ್ತಿರುವ ಪ್ರೊ.ಹೆಚ್.ನಾಗರಾಜ್ ಹಾಗೂ ದೇವಿಕಾ ದಂಪತಿಯನ್ನು ಇದೇ ವೇಳೆ ಅಭಿನಂದಿಸಲಾಯಿತು. ಚಿತ್ರದುರ್ಗದ ಅಖಿಲ ಭಾರತ ಶ್ರೀ ಕೃಷ್ಣಯಾದವ ಸಂಸ್ಥಾನದ ಜಗದ್ಗುರ ಶ್ರೀ ಕೃಷ್ಣಯಾದವನಾನಂದ ಸ್ವಾಮೀಜಿ ಸಾನಿಧ್ಯ ವಹಿಸಿದ್ದ ಸಮಾರಂಭದಲ್ಲಿ ಬೆಂಗಳೂರು ಉತ್ತರ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ನಿರಂಜನ ವಾನಳ್ಳಿ, ಪ್ರವಾಸೋದ್ಯಮ ಇಲಾಖೆಯ ಜಂಟಿ ನಿರ್ದೇಶಕಿ ಸವಿತಾ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಶೃಂಗೇರಿ ಶಾರದೆ ಸನ್ನಿಧಿಯಲ್ಲಿ ವಸ್ತ್ರ ಸಂಹಿತೆ



ಚಿಕ್ಕಮಗಳೂರು, ಜುಲೈ 19: ಶೃಂಗೇರಿ ಶಾರದಾಂಬೆ ದೇವಾಲಯಕ್ಕೆ ಆಗಮಿಸುವ ಭಕ್ತರಿಗೆ ವಸ್ತ್ರಸಂಹಿತೆ ಜಾರಿ ಮಾಡಲಾಗಿದೆ. ಇದೇ ಆಗಸ್ಟ್ 15ರಿಂದ ಶ್ರೀ ಶಾರದಮ್ಮನವರ ದರ್ಶನಕ್ಕೆ ಹಾಗೂ ಗುರುಗಳ ದರ್ಶನಕ್ಕೆ ಆಗಮಿಸುವ ಭಕ್ತಾದಿಗಳು ಕಡ್ಡಾಯವಾಗಿ ಭಾರತೀಯ ಸಂಪ್ರದಾಯಿಕ ಉಡುಗೆಯಲ್ಲಿ ಬರುವಂತೆ ಸೂಚಿಸಿ ಶೃಂಗೇರಿ ಶ್ರೀ ಶಾರದಾ ಪೀಠದ ಆಡಳಿತಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಇದೆ ಮೊದಲ ಬಾರಿಗೆ ಶೃಂಗೇರಿ ಶಾರದಾ ಮಠದಿಂದ ವಸ್ತ್ರ ಸಂಹಿತೆ ಜಾರಿ ಮಾಡಿದೆ.

ಇದೇ ಆಗಸ್ಟ್ 15ರಿಂದ ಅಮ್ಮನ ದರ್ಶನಕ್ಕೆ ಆಗಮಿಸುವವರು ಭಾರತೀಯ ಸಾಂಪ್ರದಾಯಕ ಉಡುಗೆಯಲ್ಲೇ ಬರಬೇಕು. ಒಂದು ವೇಳೆ ಭಾರತೀಯ ಸಾಂಪ್ರದಾಯಕವಲ್ಲದ ಉಡುಗೆಯನ್ನು ತೊಟ್ಟು ಬಂದವರಿಗೆ ಶ್ರೀ ಶಾರದಾಂಬೆ ದೇವಸ್ಥಾನದ ಅರ್ಧ ಮಂಟಪದ ಒಳಗೆ ಪ್ರವೇಶವಿರುವುದಿಲ್ಲ. ಅಂತಹವರು ಹೊರಗಿನ ಪ್ರಕಾರದಿಂದಲೇ ದೇವರ ದರ್ಶನವನ್ನು ಪಡೆಯಬೇಕಾಗುತ್ತದೆ.

ಪುರುಷರಾದಲ್ಲಿ ಧೋತಿ ಶಲ್ಯ, ಉತ್ತರೀಯ ಹಾಗೂ ಮಹಿಳೆಯರು ಸೀರೆ, ರವಿಕೆ, ಸಲ್ವಾರ್, ದುಪಟ್ಟ ಅಥವಾ ಲಂಗ ದಾವಣಿಗಳಂತ ಸಾಂಪ್ರದಾಯಿಕ ಉಡುಗೆಗಳನ್ನು ಧರಿಸಿ ದೇವರ ದರ್ಶನ ಮಾಡಬಹುದು ಎಂದು ಶೃಂಗೇರಿ ಶಾರದಾ ಪೀಠ ತನ್ನ ಪ್ರಕಟಣೆಯಲ್ಲಿ ತಿಳಿಸಿದೆ.

ಇನ್ನು ಶ್ರೀಮಠದ ಗುರುನಿವಾಸದಲ್ಲಿ ಪಾದಪೂಜೆ, ಭಿಕ್ಷಾವಂದನೆ ಹಾಗೂ ಗುರು ದರ್ಶನ ಸಂದರ್ಭದಲ್ಲಿ ಈ ಹಿಂದಿನಿಂದಲೂ ಈ ನಿಯಮ ಜಾರಿಯಲ್ಲಿದ್ದು, ಆಗಸ್ಟ್ 15 ರಿಂದ ಶ್ರೀ ಮಠದಲ್ಲಿ ಭಕ್ತರು ಕಟ್ಟುನಿಟ್ಟಾಗಿ ಪಾಲಿಸಲು ಆದೇಶ ಹೊರಡಿಸಲಾಗಿದೆ.

ವಸ್ತ್ರಸಂಹಿತೆ ಆದೇಶಕ್ಕೆ ವ್ಯಾಪಕ ಬೆಂಬಲ: ಇನ್ನು ಶೃಂಗೇರಿ ಮಠದ ಈ ವಸ್ತ್ರಸಂಹಿತೆ ಜಾರಿ ಆದೇಶದಿಂದ ಸಾಮಾಜಿಕ ಜಾಲತಾಣಗಳಲ್ಲಿ ಭಕ್ತರು ವ್ಯಾಪಕ ಬೆಂಬಲ ವ್ಯಕ್ತಪಡಿಸಿದ್ದಾರೆ. ಅರ್ಧಂಬರ್ಧ ಬಟ್ಟೆ ತೊಟ್ಟು ಕೆಲವು ಬುದ್ಧಿಹೀನರು ಪಿಕ್ನಿಕ್ ಸ್ಪಾಟ್‌ನಂತೆ ದೇವಾಲಯಗಳನ್ನು ಪ್ರವೇಶಿಸುತ್ತಾರೆ. ಇಂತಹ ನಿಯಮಗಳಿಂದ ಅದಕ್ಕೆ ಕಡಿವಾಣ ಹಾಕಬಹುದು ಎಂದು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ನೈಸ್ ರಸ್ತೆಯಲ್ಲಿ ನಿಯಂತ್ರಣ ತಪ್ಪಿ ಉರುಳಿ ಬಿದ್ದ ವಾಹನ; 16 ಮೇಕೆ ಸಾವು

ಬೆಂಗಳೂರು, ಜು.19– ನೈಸ್ ರಸ್ತೆಯಲ್ಲಿ ಗುರುವಾರ ಸಂಭವಿಸಿದ ಅಪಘಾತದಲ್ಲಿ 16 ಮೇಕೆಗಳು ಸಾವನ್ನಪ್ಪಿವೆ.

ನೈಸ್ ರಸ್ತೆ ಗ್ರಾಯತ್ರಿ ಕ್ರಾಸ್ ಬಳಿ ಬೊಲೆರೊ ವಾಹನವೊಂದು ನಿಯಂತ್ರಣ ತಪ್ಪಿ ರಸ್ತೆಬದಿಗೆ ಉರುಳಿ ಬಿದ್ದ ಪರಿಣಾಮ ವಾಹನದಲ್ಲಿದ್ದ 16 ಮೇಕೆಗಳು ಸ್ಥಳದಲ್ಲೇ ಮೃತಪಟ್ಟಿವೆ.

ಶಿವಾನಂದ ಎಂಬುವವರು ವಿಜಯಪುರದಿಂದ ತಮಿಳುನಾಡಿನ ಸೇಲಂಗೆ 40 ಮೇಕೆಗಳನ್ನು ಬೊಲೆರೊ ವಾಹನದಲ್ಲಿ ಕೊಂಡೊಯ್ಯುತ್ತಿದ್ದರು. ನೈಸ್ ರಸ್ತೆಯ ತಿರುವಿನಲ್ಲಿ ವಾಹನ ಉರುಳಿ ಬಿದ್ದಿದೆ. ಪರಿಣಾಮ 16 ಮೇಕೆಗಳು ಸ್ಥಳದಲ್ಲಿಯೇ ಸಾವನ್ನಪ್ಪಿವೆ. 22 ಮೇಕೆಗಳು ಬದುಕುಳಿದಿದ್ದು, ಚಾಲಕ ಅಪಾಯದಿಂದ ಪಾರಾಗಿದ್ದಾರೆ. ನಿಗದಿಗಿಂತ ಹೆಚ್ಚಿನ ಭಾರ ತುಂಬಿದ್ದರಿಂದ ವಾಹನ ಉರುಳಿ ಬಿದ್ದಿದೆ ಎನ್ನಲಾಗಿದೆ. ಈ ಸಂಬಂಧ ಚಾಲಕ ವಿರುದ್ಧ ಎಫ್‌ಐಆರ್ ದಾಖಲು ಮಾಡಿಕೊಳ್ಳಲಾಗಿದೆ ಎಂದು ಸಂಚಾರ ಪೊಲೀಸರು ತಿಳಿಸಿದ್ದಾರೆ.

2ನೇ ಆಷಾಢ ಶುಕ್ರವಾರದ ಪೂಜೆ



ಮೈಸೂರಿನ ಹಿನಕಲ್ ಗ್ರಾಮದ ಬಸವರಾಜ ಸರ್ಕಲ್‌ನಲ್ಲಿ ಆಷಾಢ ಮಾಸದ 2ನೇ ಶುಕ್ರವಾರದ ಪ್ರಯುಕ್ತ ಶ್ರೀ ಚಾಮುಂಡೇಶ್ವರಿ ಮಾತೆಯ ಪೂಜಾ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು. ಪೂಜಾ ಕಾರ್ಯಕ್ರಮದಲ್ಲಿ ಬಿಜೆಪಿ ಮುಖಂಡರಾದ ಕವೀಶ್ ಗೌಡ, ಶ್ರೀನಿವಾಸ್, ಹಿನಕಲ್ ಗಣೇಶ್, ಮರಿಸ್ವಾಮಿ ನಾಯಕ, ಶಾಲಿನಿ ಕುಮಾರ್, ನಾರಾಯಣ್, ಪ್ರಭು ಇತರರು ಪಾಲ್ಗೊಂಡಿದ್ದರು.

ಸಿದ್ದರಾಮಯ್ಯ ಕುಟುಂಬದ ವಿರುದ್ಧ ಅಪಪ್ರಚಾರ

ಆರ್‌ಟಿಐ ಕಾರ್ಯಕರ್ತರ ವಿರುದ್ಧ ಕಾಂಗ್ರೆಸ್‌ನಿಂದ ಪೊಲೀಸ್ ಆಯುಕ್ತರಿಗೆ ದೂರು



ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಅವರ ಕುಟುಂಬದ ವಿರುದ್ಧ ಅಪಪ್ರಚಾರ ಮಾಡುತ್ತಿರುವ ಆರ್‌ಟಿಐ ಕಾರ್ಯಕರ್ತರ ವಿರುದ್ಧ ಕ್ರಮ ಕೈಗೊಳ್ಳುವಂತೆ ನಗರ ಮತ್ತು ಜಿಲ್ಲಾ ಕಾಂಗ್ರೆಸ್ ನಿಯೋಗದ ವತಿಯಿಂದ ನಗರ ಪೊಲೀಸ್ ಆಯುಕ್ತರಿಗೆ ದೂರು ಸಲ್ಲಿಸಲಾಯಿತು.

ಮೈಸೂರು, ಜು.19(ಎಂಕೆ)– ಬಿಜೆಪಿ ಮತ್ತು ಜೆಡಿಎಸ್ ಮುಖಂಡರೊಂದಿಗೆ ಸೇರಿ ಸುಳ್ಳು ದಾಖಲೆಗಳನ್ನು ಸೃಷ್ಟಿಸಿಕೊಂಡು ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಅವರ ಕುಟುಂಬದ ವಿರುದ್ಧ ಅಪಪ್ರಚಾರ ಮಾಡುತ್ತಿರುವ ಆರ್‌ಟಿಐ ಕಾರ್ಯಕರ್ತರಾದ ಗಂಗರಾಜು ಮತ್ತು ಸ್ನೇಹಮಯಿ ಕೃಷ್ಣ ಎಂಬುವರನ್ನು ಕೂಡಲೇ ಬಂಧಿಸಿ, ಕಾನೂನು ಕ್ರಮ ಜರುಗಿಸುವಂತೆ ಮೈಸೂರು ನಗರ ಮತ್ತು ಜಿಲ್ಲಾ ಕಾಂಗ್ರೆಸ್ ನಿಯೋಗದ ವತಿಯಿಂದ ನಗರ ಪೊಲೀಸ್ ಆಯುಕ್ತರಿಗೆ ಶುಕ್ರವಾರ ದೂರು ಸಲ್ಲಿಸಲಾಯಿತು.

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದಲ್ಲಿ ನಡೆದಿದೆ ಎನ್ನಲಾದ ಹಗರಣದ ಬಗ್ಗೆ ಈಗಾಗಲೇ ನಿವೃತ್ತ ನ್ಯಾಯಮೂರ್ತಿ ನೇತೃತ್ವದ ವಿಚಾರಣಾ ಆಯೋಗಕ್ಕೆ ವಹಿಸಲಾಗಿದೆ ಮುಖ್ಯಮಂತ್ರಿ ಸಿದ್ದರಾಮಯ್ಯರ ಶ್ರೀಮತಿ ಪಾರ್ವತಿ ಅವರ 3 ಎಕರೆ 16 ಗುಂಟೆ ಜಾಗವನ್ನು ಪಡೆದಿರುವ ಮುಡಾ, 50:50ರ ಅನುಪಾತದಲ್ಲಿ ಜಮೀನಿಗೆ ಪರ್ಯಾಯವಾಗಿ ನಿವೇಶನಗಳನ್ನು ಹಂಚಿಕೆ ಮಾಡಿದೆ. ಆದರೆ ಇದರ ಬಗ್ಗೆ ಸುಳ್ಳು ದಾಖಲೆಗಳನ್ನು ಸೃಷ್ಟಿ ಮಾಡಿಕೊಂಡಿರುವ ಆರ್‌ಟಿಐ ಕಾರ್ಯಕರ್ತರಾದ ಗಂಗರಾಜು ಮತ್ತು ಸ್ನೇಹಮಯಿ ಕೃಷ್ಣ, ಕಳೆದ 30 ದಿನಗಳಿಂದ ಮಾಧ್ಯಮಗಳು ಹಾಗೂ ಸಾಮಾಜಿಕ ಜಾಲತಾಣಗಳ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ಅಪಪ್ರಚಾರ ನಡೆಸುತ್ತಿದ್ದಾರೆ.

ದೊಡ್ಡ ಹಗರಣವನ್ನೇ ಮಾಡಿದ್ದಾರೆಂದು ಅಪಪ್ರಚಾರ ಮಾಡುತ್ತಿದ್ದಾರೆ. ಇವರ ಬಳಿ ದಾಖಲೆಗಳಿದ್ದರೆ ಅವುಗಳನ್ನು ಆಯೋಗಕ್ಕೆ ನೀಡಬೇಕು. ಅದನ್ನು ಬಿಟ್ಟು ಮುಖ್ಯಮಂತ್ರಿಗಳ ಘನತೆಗೆ ಧಕ್ಕೆ ತರುವುದರೊಂದಿಗೆ ಅವರ ಕುಟುಂಬವನ್ನು ನಿಂದಿಸುತ್ತಿದ್ದಾರೆ ಸುಳ್ಳಿಗೆ ಪುಷ್ಟಿ ನೀಡುತ್ತಿದ್ದಾರೆ ಆದ್ದರಿಂದ ಈ ಇಬ್ಬರೂ ಆರ್‌ಟಿಐ ಕಾರ್ಯಕರ್ತರನ್ನು ಕೂಡಲೇ ಬಂಧಿಸಬೇಕು ಎಂದು ಆಗ್ರಹಿಸಿದರು.

ರೋಲ್‌ಕಾಲ್ ಗಿರಾಕಿಗಳು: ಕೆಪಿಸಿಸಿ ವಕ್ತಾರ ಲಕ್ಷ್ಮಣ ಮಾತನಾಡಿ, ಆರ್‌ಟಿಐ ಕಾರ್ಯಕರ್ತರಾದ ಗಂಗರಾಜು ಮತ್ತು ಸ್ನೇಹಮಯಿ ಕೃಷ್ಣ ಬಿಜೆಪಿ ಮತ್ತು ಜೆಡಿಎಸ್ ಏಜೆಂಟ್‌ಗಳಾಗಿದ್ದು ರೋಲ್‌ಕಾಲ್ ಗಿರಾಕಿ ಗಳಾಗಿದ್ದಾರೆ. ಅವರ ವರ್ತನೆ ಇದೇ ರೀತಿ ಮುಂದುವರೆದರೆ ಕಾಂಗ್ರೆಸ್ ಕಾರ್ಯ ಕರ್ತರು ಪ್ರತಿಭಟಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ವ್ಯವಸ್ಥೆಯ ವಿರುದ್ಧವೇ ಪ್ರತಿಭಟನೆ: ಮೈಸೂರು ಜಿಲ್ಲಾ ಗ್ರಾಮಾಂತರ ಸಮಿತಿ ಅಧ್ಯಕ್ಷ ಡಾ.ಬಿ.ಜೆ.ವಿಜಯ್‌ಕುಮಾರ್ ಮಾತನಾಡಿ, ಸುಮಾರು 7 ವರ್ಷದ ಹಿಂದೆ ಮುಖ್ಯಮಂತ್ರಿಗಳು ಮನೆ ಕಟ್ಟುವಾಗ ಇದೇ ಅಪಪ್ರಚಾರ ಮಾಡಿ ಕೋರ್ಟ್‌ಗೂ ಹೋಗಿದ್ದರು. ಆದರೆ ಅಂದು ನ್ಯಾಯಾಧೀಶರು ಛೀಮಾರಿ ಹಾಕಿ, ಅರ್ಜಿ ವಜಾ ಮಾಡಿದ್ದರು. ಇಬ್ಬರು ಆರ್‌ಟಿಐ ಕಾರ್ಯಕರ್ತರ ಮೇಲೆ ಆರೇಳು ಕೇಸ್‌ಗಳಿದ್ದು, ಪೊಲೀಸರು ಗಮನಿಸಬೇಕು. ಪೊಲೀಸರು ಕ್ರಮಕೈಗೊಳ್ಳದಿದ್ದರೆ ವ್ಯವಸ್ಥೆಯ ವಿರುದ್ಧ ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದರು.

ಸಾಲ ವಸೂಲಾತಿ ಏಜೆಂಟರಿಂದ ಮನೆಗೆ ಬೀಗ; ರೈಲಿಗೆ ತಲೆಕೊಟ್ಟು ಟೆಕ್ಕಿ ಆತ್ಮಹತ್ಯೆ



ಗೌರಿಶಂಕರ್ ಶರ್ಮಾ

ಬೆಂಗಳೂರು, ಜು.19– ಸಾಲ ವಸೂಲಾತಿ ಏಜೆಂಟರು ಮತ್ತು ಪ್ರಮುಖ ಬ್ಯಾಂಕ್‌ನ ಅಧಿಕಾರಿಗಳ ಕಿರುಕುಳದಿಂದ ಬೇಸತ್ತು 40 ವರ್ಷದ ನಿರುದ್ಯೋಗಿ ಟೆಕ್ಕಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಆನೇಕಲ್‌ನಲ್ಲಿ ನಡೆದಿದೆ.

ಆನೇಕಲ್ ರೈಲು ನಿಲ್ದಾಣದ ಬಳಿ ಇರುವ ಗೌರಿಶಂಕರ್ ಶರ್ಮಾ ಅವರ ಅಪಾರ್ಟ್‌ಮೆಂಟ್‌ಗೆ ನುಗ್ಗಿದ ಸಾಲ ವಸೂಲಾತಿ ಏಜೆಂಟರು 18 ತಿಂಗಳಿಂದ ಕಂತುಗಳನ್ನು ಪಾವತಿಸದ ಕಾರಣ ಅವರನ್ನು ಮನೆಯಿಂದ ಹೊರಗೆ ಹಾಕಿ ಅವಮಾನ ಮಾಡಿದ್ದಾರೆ ಎಂದು ಅವರ ಸೋದರ ಮಾವ ಬಿಹಾರದ ಉದ್ಯಮಿ ರಾಜೀವ್ ರಾಜನ್ ದೂರಿನಲ್ಲಿ ತಿಳಿಸಿದ್ದಾರೆ.

ಗೌರಿಶಂಕರ್ ಶರ್ಮಾ ಸಾವಿಗೆ ಬ್ಯಾಂಕ್ ಅಧಿಕಾರಿಗಳೇ ಕಾರಣ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. ಶರ್ಮಾ ಶುಕ್ರವಾರ (ಜುಲೈ 12) ಮೃತಪಟ್ಟಿದ್ದೂ, ಗುರುವಾರ (ಜುಲೈ 18) ಘಟನೆ ಬೆಳಕಿಗೆ ಬಂದಿದೆ. ಅವರ ಪತ್ನಿ, ಖಾಸಗಿ ಶಾಲೆಯೊಂದರಲ್ಲಿ ಶಿಕ್ಷಕಿಯಾಗಿದ್ದಾರೆ. ಪತ್ನಿ ಸೇರಿದಂತೆ ಅವರ ಕುಟುಂಬದಲ್ಲಿ ಯಾರಿಗೂ ಅವರ ಹಣ ಕಾಸಿನ ಸಮಸ್ಯೆಗಳ ಬಗ್ಗೆ ತಿಳಿದಿರಲಿಲ್ಲ ಬಿಹಾರ ಮೂಲದ ಶರ್ಮಾ ಅವರು 12 ವರ್ಷಗಳಿಂದ ಬೆಂಗಳೂರಿನ ಸೀಮೆನ್ಸ್ ಟೆಕ್ನಾಲಜೀಸ್‌ನಲ್ಲಿ ಹಿರಿಯ ಹುದ್ದೆಯಲ್ಲಿ ಉದ್ಯೋಗಿಯಾಗಿದ್ದರು. ಅವರು 2019 ರಲ್ಲಿ ಕೋವಿಡ್ ಸಾಂಕ್ರಾಮಿಕ ರೋಗದ ವೇಳೆ ಇತರ ಕೆಲವರೊಂದಿಗೆ ವಜಾಗೊಳಿಸಲ್ಪಟ್ಟರು, ಅದಾದ ನಂತರ ಅವರು ಉದ್ಯೋಗ ಹುಡುಕಲು ಹೆಣಗಾಡುತ್ತಿದ್ದರು. ಆನೇಕಲ್–ಚಂದಾಪುರ ರಸ್ತೆಯಲ್ಲಿರುವ ಬೃಹತ್ ವಸತಿ ಸಂಕೀರ್ಣದಲ್ಲಿ ತಮ್ಮ ಕುಟುಂಬದೊಂದಿಗೆ ವಾಸಿಸುತ್ತಿದ್ದರು.

ಮನೆಗೆ ಬೀಗ ಹಾಕಿರುವ ಬಗ್ಗೆ ತಿಳಿದ ನಂತರ, ನಾನು ಬಿಹಾರದಿಂದ ಬೆಳಗಿನ ಜಾವ 3 ಗಂಟೆಗೆ ವಿಮಾನದಲ್ಲಿ ಬೆಂಗಳೂರಿಗೆ ಬಂದು, ಕಳೆದ 1.5 ವರ್ಷ ಗಳಿಂದ ಪಾವತಿಸಬೇಕಾದ 3.24 ಲಕ್ಷ ರೂ. ಕಂತು ಮೊತ್ತವನ್ನು ಪಾವತಿಸಿದೆ. ಮೊತ್ತ ಪಾವತಿಸಿ ಸೋಮವಾರ ಬ್ಯಾಂಕ್‌ನಿಂದ ಅವರ ಮನೆಯ ಕೀ ಸಂಗ್ರಹಿಸಿದ್ದೆ ನಾನು ಬ್ಯಾಂಕ್‌ನಿಂದ ಹೊರಡಲಿರು ವಾಗಲೇ, ಆತನನ್ನು ಗುರುತಿಸುವಂತೆ ಹೇಳಿ ಆತನ ದೇಹದ ಚಿತ್ರದೊಂದಿಗೆ ಪೊಲೀಸರಿಂದ ವಾಟ್ಸಪ್ ಸಂದೇಶ ಬಂದಿತ್ತು. ಕೊನೆಗೆ ನಾನು ಬ್ಯಾಂಕ್‌ನಿಂದ ಮನೆಯ ಕೀಲಿಕೈಯನ್ನು ಪಡೆದುಕೊಂಡಿದ್ದೇನೆ, ಆದರೆ ಮಾಲೀಕರು ಜೀವನ ಅಂತ್ಯಗೊಳಿಸಿದ್ದಾರೆ ಎಂದು ಸಂಬಂಧಿ ರಾಜೀವ್ ತಿಳಿಸಿದ್ದಾರೆ. ಬ್ಯಾಂಕ್ ಅಧಿಕಾರಿಗಳು ಶರ್ಮಾ ಅವರನ್ನು ಮನೆಯಿಂದ ಹೊರ ಹಾಕಿದಾಗ ಅವರ ಪತ್ನಿ ಶಾಲೆಯಲ್ಲಿದ್ದರು. ಅವರ 16 ವರ್ಷದ ಮಗ ಮತ್ತು 12 ವರ್ಷದ ಮಗಳು ಶಾಲೆಗೆ ಹೋಗಿದ್ದರು. ಶರ್ಮಾ, ತಮ್ಮ ವ್ಯಾಲೆಟ್ ಅಥವಾ ಆಧಾರ್ ಕಾರ್ಡ್, ಇನ್ನಾವುದನ್ನು ತೆಗೆದುಕೊಳ್ಳಲು ಸಹ ಅನುಮತಿಸಲಿಲ್ಲ ಎಂದು ನೆರೆಹೊರೆಯವರು ತಿಳಿಸಿದ್ದಾರೆ.

ವಿವಿಧ ಬೇಡಿಕೆ ಈಡೇರಿಸಲು ಆಗ್ರಹಿಸಿ ಮೈಸೂರಲ್ಲಿ ರೈತರ ಪ್ರತಿಭಟನೆ

ರೈತರ ಆತ್ಮಹತ್ಯೆ ತಡೆಗೆ ಸಮಿತಿ ರಚನೆಗೆ ಒತ್ತಾಯ



ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘದ ಕಾರ್ಯಕರ್ತರು ಮೈಸೂರಿನ ಸಿದ್ಧಾರ್ಥನಗರದಲ್ಲಿರುವ ನೂತನ ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ನಡೆಸಿದರು.

ಮೈಸೂರು, ಜು.19(ಎಂಟಿವೈ)– ರಾಜ್ಯದಲ್ಲಿ ರೈತರ ಆತ್ಮಹತ್ಯೆ ಪ್ರಕರಣ ತಡೆಗಟ್ಟುವುದರೊಂದಿಗೆ ರೈತರ ಹಿತ ಕಾಯಲು ಕಾರ್ಯಕ್ರಮ ರೂಪಿಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘದ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಮೈಸೂರಿನ ಸಿದ್ಧಾರ್ಥನಗರದಲ್ಲಿರುವ ನೂತನ ಜಿಲ್ಲಾಧಿಕಾರಿಗಳ ಕಚೇರಿ ಬಳಿ ಪ್ರತಿಭಟನೆ ನಡೆಸಿದ ರೈತ ಸಂಘಟನೆಯ ಕಾರ್ಯಕರ್ತರು ರಾಜ್ಯ ಸರ್ಕಾರ ರೈತ ವಿರೋಧಿ ನೀತಿ ಅನುಸರಿಸುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕಾಂಗ್ರೆಸ್ ಸರ್ಕಾರದ ಒಂದು ವರ್ಷದ ಆಡಳಿತದಲ್ಲಿ ಪರಿಶಿಷ್ಟ ವರ್ಗಕ್ಕೆ ಮೀಸಲಿಟ್ಟ 187 ಕೋಟಿ ರೂ ಹಣ ದುರುಪಯೋಗ ಆರೋಪಕ್ಕೆ ಒಳಗಾಗಿದೆ ಭೂ ಮಾಫಿಯಾಗಳ ಅಕ್ರಮಗಳು ನಿರಂತರ ವಾಗಿ ಸಾಗುತ್ತಲೇ ಇವೆ. 2023ರ ಏಪ್ರಿಲ್ ತಿಂಗಳಿಂದ 2024ರ ಜೂನ್ ತಿಂಗಳವರೆಗೆ ರಾಜ್ಯದಲ್ಲಿ 1182 ರೈತರು ಆತ್ಮಹತ್ಯೆಗೆ ಶರಣಾಗಿದ್ದಾರೆ. ಯುವ ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಿರುವುದು ಆತಂಕಕ್ಕೀಡು ಮಾಡಿದೆ. ಆತ್ಮಹತ್ಯೆ ತಡೆಗೆ ರೈತರನ್ನು ಒಳಗೊಂಡ ಸಮಿತಿಯನ್ನು ರಚಿಸಬೇಕು ಎಂದು ಆಗ್ರಹಿಸಿದರು.

ರೈತರು ಕೃಷಿ ಪಂಪ್‌ಸೆಟ್‌ಗೆ ವಿದ್ಯುತ್ ಸಂಪರ್ಕ ಪಡೆಯಲು ಸ್ವತಃ ರೈತರೇ ವೆಚ್ಚವನ್ನು ಭರಿಸಬೇಕೆಂಬ ತೀರ್ಮಾನವನ್ನು ವಾಪಸ್ ಪಡೆಯಬೇಕು. ರಾಜ್ಯ ಸರ್ಕಾರವೇ ಕೃಷಿ ಉತ್ಪನ್ನಗಳಿಗೆ ಎಂಎಸ್‌ಪಿ ದರ ನಿಗದಿ ಮಾಡಿ, ಖರೀದಿಸಬೇಕು. ಬ್ಯಾಂಕುಗಳು ಸಾಲ ಬಾಕಿ ವಸೂಲಿಗಾಗಿ ರೈತರಿಗೆ ಕಿರುಕುಳ ನೀಡುತ್ತಿರುವುದನ್ನು ತಪ್ಪಿಸಬೇಕು. ಎಲ್ಲಾ ಬೆಳೆಗಳಿಗೆ ಪ್ರಧಾನ ಮಂತ್ರಿ ಫಸಲು ಭೀಮಾ ಯೋಜನೆಯನ್ನು ವಿಸ್ತರಿಸಿ ಗ್ರಾಮ ಮಟ್ಟದಲ್ಲಿ ಬೆಳೆ ಹಾನಿ ನಿರ್ಧರಿಸಬೇಕು. ವಿಮಾ ಕಂಪನಿಗಳು ಉಳಿಸಿಕೊಂಡಿರುವ ಬಾಕಿಯನ್ನು ಕೂಡಲೇ ವಿತರಿಸಬೇಕು. ಫಸಲು ಪಹಣಿ ದುರಸ್ತಿ, ಪಕ್ಕಾಪೋಡು ಹದ್ದುಬಸ್ತು ಶುಲ್ಕ ದುಬಾರಿಯಾಗಿದ್ದು, ಅದನ್ನು ಇಳಿಸಬೇಕು. ಖರೀದಿ ಕೇಂದ್ರದಿಂದ ಖರೀದಿಸಲಾದ ಉತ್ಪನ್ನಗಳಿಗೆ ಕೂಡಲೇ ಹಣ ಕೊಡಬೇಕು. ಬರ ಪರಿಹಾರ, ವಿಮಾ ಪರಿಹಾರದ ಹಣವನ್ನು ಸಾಲಕ್ಕೆ ಜಮಾ ಮಾಡದಂತೆ ಬ್ಯಾಂಕ್‌ಗಳಿಗೆ ಸೂಚನೆ ನೀಡಬೇಕು ಎಂದು ಒತ್ತಾಯಿಸಿದರು.

ಅರಣ್ಯ ಭೂಮಿ ಸಾಗುವಳಿ ಮಾಡುತ್ತಿರುವ ರೈತರಿಗೆ ಅರಣ್ಯ ಇಲಾಖೆಯ ಕಿರುಕುಳ ತಪ್ಪಿಸಿ ಎಲ್ಲಾ ರೈತರಿಗೂ ಪಟ್ಟಾ ನೀಡಬೇಕು. ಕಾಡು ಪ್ರಾಣಿಗಳಿಂದ ಬೆಳೆ ನಷ್ಟಕ್ಕೆ ವೈಜ್ಞಾನಿಕ ನಷ್ಟ ನಿಗದಿಪಡಿಸಬೇಕು. ರೈತರ ಜಮೀನಿನಲ್ಲಿ ಸಾಗುವಾನಿ ಮರ ಕಡಿದು ಸಾಗಾಣಿಕೆ ಪ್ರಕ್ರಿಯೆಯನ್ನು ಸರಳಗೊಳಿಸಬೇಕು. ಕಬ್ಬು ಬೆಳೆಗಾರರಿಗೆ ಕಾರ್ಖಾನೆಗಳು ಟನ್‌ವೊಂದಕ್ಕೆ 150 ರೂ. ಪಾವತಿಸಬೇಕೆಂದು ಹಿಂದಿನ ಸರ್ಕಾರ ತೀರ್ಮಾನಿಸಿದ್ದು, ತಾಂತ್ರಿಕ ತೊಂದರೆಗಳನ್ನು ನಿವಾರಿಸಿ ರೈತರ ಖಾತೆಗೆ ಹಣ ಜಮೆ ಮಾಡಬೇಕು. ಎಸ್‌ಎಪಿ ಘೋಷಿಸಬೇಕು ಎಂದು ಆಗ್ರಹಿಸಿದರು.

ಭೂ ಸುಧಾರಣಾ ತಿದ್ದುಪಡಿ ಕಾಯಿದೆ, ಗೋ ಹತ್ಯೆ ನಿಷೇಧ ಕಾಯಿದೆಯನ್ನು ಕೂಡಲೇ ಹಿಂಪಡೆಯಬೇಕು. ಕೆಆರ್‌ಎಸ್ ಬಳಿ ಟ್ರಯಲ್ ಬ್ಲಾಸ್ಟ್ ಮಾಡಬಾರದು. ಜಲಾಶಯದ ಸುತ್ತಮುತ್ತ ಗಣಿಗಾರಿಕೆ ನಿಷೇಧಿಸಬೇಕು. ಮುಡಾ ಹಗರಣದಲ್ಲಿ ಯಾರೇ ಭಾಗಿಯಾಗಿದ್ದರೂ ಅವರ ವಿರುದ್ಧ ಮುಲಾಜಿಲ್ಲದೆ ಕ್ರಮ ಕೈಗೊಳ್ಳಬೇಕು. ಕಾವೇರಿ ಜಲಾಶಯದಲ್ಲಿ ನೀರಿನ ಶೇಖರಣೆ ಕಡಿಮೆ ಇರುವುದರಿಂದ ತಮಿಳುನಾಡಿಗೆ ನೀರು ಹರಿಸಬಾರದು. ಮೈಸೂರು ತಾಲೂಕು ಕೋಚನಹಳ್ಳಿ ರೈತರಿಗೆ ಮೋಸ ಮಾಡಿರುವ ಭೂ ಮಾಫಿಯ ಕುಳಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದ್ದಾರೆ.

ಪ್ರತಿಭಟನೆಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯಾಧ್ಯಕ್ಷ ಬಡಗಲಪುರ ನಾಗೇಂದ್ರ ರಾಜ್ಯ ಮಹಿಳಾ ಪ್ರಧಾನ ಕಾರ್ಯದರ್ಶಿ ನೇತ್ರಾವತಿ, ಜಿಲ್ಲಾಧ್ಯಕ್ಷ ಹೊಸೂರು ಕುಮಾರ್, ಪ್ರಧಾನ ಕಾರ್ಯದರ್ಶಿ ಹೊಸಕೋಟೆ ಬಸವರಾಜ್, ಪ್ರಸನ್ನ ಎನ್.ಗೌಡ, ಪಿ.ಮರಂಕಯ್ಯ ಸೇರಿದಂತೆ ಇನ್ನಿತರರು ಪಾಲ್ಗೊಂಡಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಇಂಡಿಯನ್ 2 (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಮಹಾರಾಜ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಕಿಲ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ನಾಟ್‌ಔಟ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಕಲ್ಕಿ (ಕ)	4 ಪ್ರದರ್ಶನಗಳು
ರಾಜಕಮಲ್	
ಟ್ವಿಸ್ಟರ್ (ಇಂ)	4 ಪ್ರದರ್ಶನಗಳು
ಸಂಗಂ	
ಹೆಜ್ಜಾರು (ಕ)	2 ಪ್ರದರ್ಶನಗಳು
ಇಂಡಿಯನ್ 2 (ತ)	2 ಪ್ರದರ್ಶನಗಳು
ಲಿಡೋ	
ಶಾಸ್ತ್ರಿ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಇಂಡಿಯನ್ 2 (ತ)	4 ಪ್ರದರ್ಶನಗಳು
ಪ್ರಭಾ	
ನಾಟ್‌ಔಟ್ (ಕ)	2 ಪ್ರದರ್ಶನಗಳು
ಹಿರಣ್ಯ (ಕ)	2 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10.10ಕ್ಕೆ, ಮ.1ಕ್ಕೆ, ಆಕ್ಸಿಡೆಂಡ್ ಆರ್ ಕಾನ್ಸ್‌ಪಿರೆಸಿ ಗೋದ್ರಾ (ಹಿಂ): ಮ.3.45ಕ್ಕೆ, ಸಂ.4.35ಕ್ಕೆ, ಕಲ್ಕಿ 2898 ಎಡಿ (ಕ): ಸಂ.6.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.10ಕ್ಕೆ.
ಸ್ಕ್ರೀನ್ 2	ಟ್ವಿಸ್ಟರ್ಸ್ (ಇಂ): ಬೆ.10.30ಕ್ಕೆ, ಹೆಜ್ಜಾರು (ಕ): ಮ.1.10ಕ್ಕೆ, ಕಲ್ಕಿ 2898 ಎಡಿ(3ಡಿ) (ತೆ): ಮ.3.40ಕ್ಕೆ, ಆಕ್ಸಿಡೆಂಡ್ ಆರ್ ಕಾನ್ಸ್‌ಪಿರೆಸಿ ಗೋದ್ರಾ (ಹಿಂ): ರಾ.7.05ಕ್ಕೆ, ಕಲ್ಕಿ 2898 ಎಡಿ(3ಡಿ) (ಹಿಂ): ರಾ.10.05ಕ್ಕೆ.
ಸ್ಕ್ರೀನ್ 3	ನಾಟ್‌ಔಟ್ 2024 (ಕ): ಬೆ.10.15ಕ್ಕೆ, ಕಲ್ಕಿ 2898 ಎಡಿ (ಕ): ಮ.1ಕ್ಕೆ, ಬ್ಯಾಡ್ ನ್ಯೂಸ್ (ಹಿಂ): ಸಂ.4.30ಕ್ಕೆ, ಟ್ವಿಸ್ಟರ್ಸ್ (ಇಂ): ರಾ.7.25ಕ್ಕೆ, ರಾ.10ಕ್ಕೆ.
ಸ್ಕ್ರೀನ್ 4	ಇನ್‌ಸೈಡ್ ಔಟ್ 2 (3ಡಿ) (ಇಂ): ಬೆ.10.55ಕ್ಕೆ, ಬ್ಯಾಕ್ ಬೆಂಚರ್ಸ್ (ಕ): ಮ.1ಕ್ಕೆ, ಇಂಡಿಯನ್ 2 (ತ): ಮ.3.30ಕ್ಕೆ, ಬ್ಯಾಡ್ ನ್ಯೂಸ್ (ಹಿಂ): ರಾ.7ಕ್ಕೆ, ರಾ.9.55ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಕಲ್ಕಿ 2898 ಎಡಿ (ಕ): ಬೆ.10.30ಕ್ಕೆ, ಸಂ.6ಕ್ಕೆ, ಲವ್ ಲಿ (ಕ): ಮ.1.55ಕ್ಕೆ.
ಸ್ಕ್ರೀನ್ 2	ಇಂಡಿಯನ್ 2 (ತ): ಮ.1ಕ್ಕೆ, ಸಂ.4.25ಕ್ಕೆ, ರಾ.7.50ಕ್ಕೆ.
ಸ್ಕ್ರೀನ್ 3	ಕಲ್ಕಿ 2898 ಎಡಿ (3ಡಿ)(ತೆ): ಬೆ.11.10ಕ್ಕೆ, ಮ.2.40ಕ್ಕೆ, ಇಂಡಿಯನ್ 2 (ತ): ಸಂ.6.05ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 4	ಇಂಡಿಯನ್ 2 (ತ): ಬೆ.10ಕ್ಕೆ, ಕಲ್ಕಿ 2898 ಎಡಿ (ಕ): ಮ.1.25ಕ್ಕೆ, ರಾ.7.45ಕ್ಕೆ, ಖಾಲಿ ಕುಡುಕರು (ಕ): ಸಂ.4.50ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್,
2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಇಂಜಿನಿಯರಿಂಗ್‌ನಲ್ಲಿ ಮೈಸೂರು ವಿದ್ಯಾರ್ಥಿನಿ ಸಾಧನೆ

ರಾಜ್ಯಕ್ಕೆ ಎರಡನೇ ಸ್ಥಾನ ಪಡೆದ ವಿದ್ಯಾರ್ಥಿನಿಗೆ ಸಂಸ್ಥೆಯಲ್ಲೇ ಉದ್ಯೋಗ

ಮೈಸೂರು, ಜು.19(ಜಿಎ)–ಮೈಸೂರಿನ ತಾಂಡವಪುರದ ಮಹಾರಾಜ ತಾಂತ್ರಿಕ ಮಹಾವಿದ್ಯಾಲಯದ ಸಿವಿಲ್ ಎಂಜಿನಿಯರಿಂಗ್ ವಿಭಾಗದ ವಿದ್ಯಾರ್ಥಿನಿ ಎಸ್. ರೇಖಾ ಅವರು ವಿಟಿಯು ನಡೆಸಿದ ಪರೀಕ್ಷೆಯಲ್ಲಿ ರಾಜ್ಯಕ್ಕೇ ಎರಡನೇ ಸ್ಥಾನ ಪಡೆಯುವ ಮೂಲಕ ಶಿಕ್ಷಣ ಸಂಸ್ಥೆಗೆ ಹಿರಿಮೆ ತಂದಿದ್ದಾರೆ ಎಂದು ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಕಾಲೇಜಿನ ಮಾಧ್ಯಮ ವಿಭಾಗ ಮುಖ್ಯಸ್ಥ ಪ್ರೊ. ಮೊಹಮ್ಮದ್ ಸಲಾಮತ್ ತಿಳಿಸಿದರು.


ಎಸ್. ರೇಖಾ ಅಂತಿಮ ವರ್ಷದ ವಿದ್ಯಾರ್ಥಿನಿಯಾಗಿದ್ದು, 9.39 ಸಿಜಿಪಿಎ ಅಂಕ ಗಳಿಸಿದ್ದಾರೆ. ನಗರದ ಆರ್. ಶ್ರೀನಿವಾಸ ಮೂರ್ತಿ ಹಾಗೂ ಸಾಕಮ್ಮ ದಂಪತಿ ಪುತ್ರಿ ಹೀಗಾಗಿ ಶಿಕ್ಷಣ ಸಂಸ್ಥೆ ತನ್ನಲ್ಲಿಯೇ ಈಕೆಗೆ ಉದ್ಯೋಗಾವಕಾಶ ನೀಡಲು ಮುಂದೆ ಬಂದಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ವಿದ್ಯಾರ್ಥಿನಿ ಎಸ್.ರೇಖಾ, ಡಾ.ಎಚ್.ಕೆ.ಚೇತನ್, ಡಾ.ನಾಗೇಂದ್ರ ಪ್ರಸಾದ್, ಅಕ್ಷಯ್ ಉಪಸ್ಥಿತರಿದ್ದರು.

ಪಿಎಚ್.ಡಿ ಪದವಿ



ಮೈಸೂರು: ಡಾ.ರಮಿತ್ ರಾಮು ಅವರ ಮಾರ್ಗದರ್ಶನದಲ್ಲಿ ಎಸ್.ಸುಜಯ್ ಅವರು ಸಂಶೋಧನೆ ನಡೆಸಿ ಸಾದರ ಪಡಿಸಿದ ಎಲುಸಿಡೇಷನ್ ಆಫ್ ಪ್ರೊಬಯೋಟಿಕ್ ಅಂಡ್ ಪೋಸ್ಟ್ ಬಯೋ ಟಿಕ್ ಮಹಾಪ್ರಬಂಧವನ್ನು ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ಕೆಆರ್‌ಎಸ್ ನೀರಿನ ಮಟ್ಟ



ಗರಿಷ್ಠ ಮಟ್ಟ	124.80 ಅಡಿ
ಶುಕ್ರವಾರ	118.10 ಅಡಿ
ಒಳಹರಿವು	46165 ಕ್ಯೂಸೆಕ್
ಹೊರಹರಿವು	2732 ಕ್ಯೂಸೆಕ್

ಕಬಿನಿ ನೀರಿನ ಮಟ್ಟ



ಗರಿಷ್ಠ ಮಟ್ಟ	2284 ಅಡಿ
ಶುಕ್ರವಾರ	2280.41 ಅಡಿ
ಒಳಹರಿವು	46064 ಕ್ಯೂಸೆಕ್
ಹೊರಹರಿವು	40000 ಕ್ಯೂಸೆಕ್

ಹಾರಂಗಿ ನೀರಿನ ಮಟ್ಟ



ಗರಿಷ್ಠ ಮಟ್ಟ	2859 ಅಡಿ
ಶುಕ್ರವಾರ	2854.83 ಅಡಿ
ಒಳಹರಿವು	23760 ಕ್ಯೂಸೆಕ್
ಹೊರಹರಿವು	20000 ಕ್ಯೂಸೆಕ್

ಹಸಿರು ನಮ್ಮ ಉಸಿರು

ಮೈಸೂರು ಮಿತ್ರ
ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

1ನೇ ವರ್ಷದ ಪುಣ್ಯಸ್ಮರಣೆ



ನೀವು ನಮ್ಮನ್ನಗಲಿ ಇಂದಿಗೆ ಒಂದು ವರ್ಷ ಕಳೆದರೂ ನಿಮ್ಮ ನೆನಪು ನಮ್ಮ ಮನದಲ್ಲಿದೆ
ದುಃಖತಪ್ತರು: ನಂಜಪ್ಪ ನಾಗರತ್ನ ಮತ್ತು ಕುಟುಂಬ ವರ್ಗ, ಬೇವಿನ ಮರದ ಹಟ್ಟಿ, ಹೂವಿನ ಬೀದಿ, ಮೂಗೂರು ತಿ.ನರಸೀಪುರ ತಾ||
ಯಜಮಾನ್ ಶ್ರೀ ಮಹದೇವನಾಯ್ಕ
ನಿಧನ: 20.07.2023

2ನೇ ವರ್ಷದ ಸವಿನೆನಪು



ದುಃಖತಪ್ತರು:
ಸೊಸೆ ಮತ್ತು ಮೊಮ್ಮಕ್ಕಳು
ಎಂ.ಮಹದೇವಸ್ವಾಮಿ, ಸಿಟಿ ಕೋ ಬ್ಯಾಂಕ್, ಮೈಸೂರು. ಕೆಂಪರಾಜು ಕಾಂಗ್ರೆಸ್ ಮುಖಂಡರು ಶಿವಕುಮಾರ್ (ಡಿಸಿಸಿ ಸದಸ್ಯರು) ಸಿದ್ದರಾಜು, ಎಂ.ಮಹೇಶ್, ಜಿಲ್ಲಾ ಕಾರ್ಯದರ್ಶಿ ಗ್ರಾಮಾಂತರ ಕಾಂಗ್ರೆಸ್ ಸಮಿತಿ ಮೈಸೂರು, ಗೋಪಾಲಪುರ
ಶ್ರೀಮತಿ ಲೇಟ್ ಪುಟ್ಟಸಿದ್ದಮ್ಮ
ಲೇ ವಿ.ವಿ.ಮಾದಯ್ಯರವರ ಧರ್ಮಪತ್ನಿ
KSIC ನಿವೃತ್ತ ರೇಷ್ಮೆ ಇಲಾಖೆ, ಗೋಪಾಲಪುರ, ಟಿ.ನರಸೀಪುರ, 1ನೇ ವಾರ್ಡ್, ವರುಣಾ ಕ್ಷೇತ್ರ

6ನೇ ವರ್ಷದ ಪುಣ್ಯಸ್ಮರಣೆ



ದಿ|| ಡಿ.ರಾಮಣ್ಣನವರು (ರಾಮು)
ನೀವು ನಮ್ಮನ್ನಗಲಿ ಇಂದಿಗೆ 6 ವರ್ಷ ಕಳೆದರೂ ಸದಾ ನಿಮ್ಮ ನೆನಪಿನಲ್ಲಿರುವ
ದುಃಖತಪ್ತರು: ಪತ್ನಿ-ಚಂದ್ರಮ್ಮ, ಮಕ್ಕಳು, ಸೊಸೆಯಂದಿರು ಮತ್ತು ಅಳಿಯಂದಿರು, ದೇವರಾಜ ಮೊಹಲ್ಲಾ, ಮೈಸೂರು

6ನೇ ವರ್ಷದ ಪುಣ್ಯಸ್ಮರಣೆ



ಪಿ.ಶಿವರುದ್ರಪ್ಪ
(ಮಾ|| ಮಂಜುಳ ಧ್ವನಿ ಮತ್ತು ಬೆಳಕು, ಫರ್ನಿಚರ್ಸ್)
ನೀವು ನಮ್ಮನ್ನಗಲಿ ಇಂದಿಗೆ 6 ವರ್ಷ ಕಳೆದರೂ ಸದಾ ನಿಮ್ಮ ನೆನಪಿನಲ್ಲಿರುವ
ದುಃಖತಪ್ತರು: ಮಂಜುಳ ಧ್ವನಿ ಮತ್ತು ಬೆಳಕು, 100 ಅಡಿ ರಸ್ತೆ, ನೇತಾಜಿ ಸರ್ಕಲ್, ದಟ್ಟಗಳ್ಳಿ ಹಾಗೂ ಕುಟುಂಬವರ್ಗದವರು.

